ಸಂಪುಟ: 05 ಸಂಚಿಕೆ: 57 ಪುಟಗಳು: 08 ಭಾನುವಾರ 11 ಮೇ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ಯಶಸ್ಸಿನ ವ್ಯಾಖ್ಯಾನವು ಸಾಕಷ್ಟು ಪ್ರಬಲವಾಗಿದ್ದರೆ, ವೈಫಲ್ಯವು ಎಂದಿಗೂ ನನ್ನನ್ನು ಹಿಂದಿಕ್ಕುವುದಿಲ್ಲ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ● ಭಾರತ- ಪಾಕ್ ನಡುವೆ ಕದನ ವಿರಾಮ ಟ್ರಂಪ್ ಮಧ್ಯಸ್ಥಿಕೆ ● ತಕ್ಷಣದಿಂದಲೇ ಅನ್ವಯಿಸುವಂತೆ ಭಾರತ - ಪಾಕಿಸ್ತಾನದ ನಡುವೆ ಕದನ ವಿರಾಮ ಘೋಷಣೆ ● ಅಮೆರಿಕ ಅಧ್ಯಕ್ಷ ಮಾತುಕತೆ ● ಭಾರತ- ಪಾಕ್ ನಡುವೆ ಕದನ ವಿರಾಮ : ದೃಢಪಡಿಸಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ



# ಕದನ ವಿರಾಮ ಆರಾಮ


### 48 ಗಂಟೆಗಳ ಸಂಧಾನ ಮಾತುಕತೆ

**1** ಭಾರತ ಪಾಕಿಸ್ತಾನ ನಡುವೆ ಕಳೆದ 4 ದಿನಗಳಿಂದ ನಡೆಯುತ್ತಿದ್ದ ಅಘೋಷಿತ ಯುದ್ಧ.

**2** ಭಾರತ ಮತ್ತು ಪಾಕಿಸ್ತಾನ ಪರಸ್ಪರ ಒಪ್ಪಿಗೆ ಮೇರೆಗೆ ಶನಿವಾರ ಮಧ್ಯಾಹ್ನ 5 ರಿಂದ ಕದನ ವಿರಾಮ.

**3** ಸೋಮವಾರ ಎರಡೂ ದೇಶಗಳ ನಡುವೆ ಮಾತುಕತೆ ಎಂದ ಭಾರತ ಸರ್ಕಾರ

• **ಉದಯವಾಹಿನಿ, ನವದೆಹಲಿ**



ಜಮ್ಮು- ಕಾಶ್ಮೀರದ ಪಹಲ್ಗಾಮ್ ಹತ್ಯಾಕಾಂಡಕ್ಕೆ ಪ್ರತೀಕಾರವಾಗಿ ಭಾರತ ನಡೆಸಿದ ದಾಳಿಗೆ ತತ್ತರಿಸಿದ ಪಾಕಿಸ್ತಾನ ಕದನ ವಿರಾಮ ಯಾಚಿಸಿದೆ. ಇದನ್ನು ಭಾರತವೂ ಒಪ್ಪಿಕೊಂಡಿದ್ದು, ಕಳೆದ 4 ದಿನಗಳಿಂದ ನಡೆಯುತ್ತಿದ್ದ ಸಂಘರ್ಷ ತಕ್ಷಣದಿಂದಲೇ ನಿಂತಿದೆ.

ಸಂಘರ್ಷಕ್ಕೆ ಕದನ ವಿರಾಮ ನೀಡಿದ್ದಾಗಿ ಭಾರತ ಮತ್ತು ಪಾಕಿಸ್ತಾನ ಘೋಷಿಸಿವೆ. ಇದಕ್ಕೂ ಮೊದಲು, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಉಭಯ ರಾಷ್ಟ್ರಗಳ ನಡುವೆ ಮಾತುಕತೆ ನಡೆಸಲಾಗಿತ್ತು. ಎರಡೂ ರಾಷ್ಟ್ರಗಳು ಬುದ್ಧಿವಂತಿಕೆ ಪ್ರದರ್ಶಿಸಿ ಸಂಘರ್ಷಕ್ಕೆ ಅಂತ್ಯ ಹಾಡಿವೆ ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಘೋಷಿಸಿದ್ದರು.

ಕದನ ವಿರಾಮಕ್ಕೆ ವಿಶ್ವಸಂಸ್ಥೆ ಸೇರಿದಂತೆ ಹಲವು ರಾಷ್ಟ್ರಗಳು ಮೆಚ್ಚುಗೆ ವ್ಯಕ್ತಪಡಿಸಿವೆ. ಜಮ್ಮು- ಕಾಶ್ಮೀರದ ಮುಖ್ಯಮಂತ್ರಿ ಓಮರ್ ಅಬ್ದುಲ್ಲಾ ಅವರು ಕೂಡ ಸಂಘರ್ಷಕ್ಕೆ ವಿರಾಮ ಬಿದ್ದಿದ್ದನ್ನು ಸ್ವಾಗತಿಸಿದ್ದಾರೆ.

### ಪಾಕ್‌ನಿಂದಲೂ ಪ್ರತಿಕ್ರಿಯೆ

ಪಾಕಿಸ್ತಾನ ಉಪ ಪ್ರಧಾನ ಮಂತ್ರಿ ಮತ್ತು ವಿದೇಶಾಂಗ ಸಚಿವ ಇಶಾಕ್ ದಾರ್ ತಕ್ಷಣದಿಂದ ಜಾರಿಗೆ ಬರುವಂತೆ ಕದನ ವಿರಾಮ ಘೋಷಿಸಲಾಗಿದೆ ಎಂದು ದೃಢಪಡಿಸಿದ್ದಾರೆ. ಪಾಕಿಸ್ತಾನ ಮತ್ತು ಭಾರತ ತಕ್ಷಣದಿಂದ ಜಾರಿಗೆ ಬರುವಂತೆ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ. ಪಾಕಿಸ್ತಾನವು ತನ್ನ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಗೆ ಧಕ್ಕೆಯಾಗದಂತೆ ಈ ಪ್ರದೇಶದಲ್ಲಿ ಶಾಂತಿ ಮತ್ತು ಸುರಕ್ಷತೆಗಾಗಿ ಯಾವಾಗಲೂ ಶ್ರಮಿಸಿದೆ ಎಂದು ದಾರ್ ಎಕ್ಸ್ ಪೋಸ್ಟ್‌ನಲ್ಲಿ ಹೇಳಿದ್ದಾರೆ.

**ಟ್ರಂಪ್ ಟ್ವೀಟ್:** ತಕ್ಷಣದಿಂದಲೇ ಜಾರಿಗೆ ಬರುವಂತೆ ಭಾರತ ಮತ್ತು ಪಾಕಿಸ್ತಾನ ಕದನ ವಿರಾಮ ಘೋಷಣೆಗೆ ಒಪ್ಪಿಕೊಂಡಿವೆ ಎಂದು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಅಮೆರಿಕವು ಉಭಯ ರಾಷ್ಟ್ರಗಳ ನಡುವೆ ಮಧ್ಯಸ್ಥಿಕೆ ವಹಿಸಿ, ಸತತ ಮಾತುಕತೆ ನಡೆಸಿದ ಬಳಿಕ ಎರಡೂ ರಾಷ್ಟ್ರಗಳು ಕದನ ವಿರಾಮಕ್ಕೆ ಸಮ್ಮತಿಸಿವೆ ಎಂದು ಅವರು ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ.

**ಪಾಕ್‌ಗೆ ಎಚ್ಚರಿಕೆ ಕೊಟ್ಟಿದ್ದ ಭಾರತ:** ಪದೇ ಪದೇ ಕಾಲು ಕೆದರಿ ಖ್ಯಾತೆ ತೆಗೆಯುತ್ತಿದ್ದ ಪಾಕಿಸ್ತಾನಕ್ಕೆ ಭಾರತ ನೇರ ನೇರ ಎಚ್ಚರಿಕೆಯ ಸಂದೇಶವನ್ನು ರವಾನಿಸಿತ್ತು. ಭವಿಷ್ಯದಲ್ಲಿ ನಡೆಯುವ ಯಾವುದೇ ಭಯೋತ್ಪಾದಕ ಕೃತ್ಯವನ್ನು ದೇಶದ ವಿರುದ್ಧದ ಯುದ್ಧ ಕೃತ್ಯವೆಂದು ಪರಿಗಣಿಸಲಾಗುವುದು ಮತ್ತು ಅದಕ್ಕೆ ತಕ್ಕಂತೆ ಪ್ರತಿಕ್ರಿಯಿಸಲಾಗುವುದು ಎಂದು ಭಾರತ ಹೇಳಿದೆ. ಪಾಕಿಸ್ತಾನ ಎರಡು ದಿನಗಳ ಕಾಲ ಡ್ರೋನ್ ಮತ್ತು ಕ್ಷಿಪಣಿ ದಾಳಿಗೆ ಪ್ರಯತ್ನಿಸಿದ ನಂತರ ಭಾರತ ಸರ್ಕಾರ ಈ ಹೇಳಿಕೆ ನೀಡಿದ್ದು, ಪಾಕಿಸ್ತಾನದ ಡ್ರೋನ್ ದಾಳಿಯನ್ನು ಪ್ರಚೋದನಕಾರಿ ಕೃತ್ಯ ಎಂದು ವಿದೇಶಾಂಗ ಇಲಾಖೆ ಟೀಕಿಸಿದೆ. ಈ , ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಸರ್ಕಾರವು ಭಯೋತ್ಪಾದಕ ಕೃತ್ಯಗಳಿಗೆ ಅಂತ್ಯವಾಡಲು ಬಯಸಿದೆ. ಉಗ್ರ ಸಂಘಟನೆಗಳಿಗೆ ಬೆಂಬಲ ನೀಡಿ, ಭಾರತವನ್ನು ಕಾಡುತ್ತಿರುವ ನೆರೆಯ ರಾಷ್ಟ್ರಕ್ಕೆ ಭಾರತ ಬಲವಾದ ಸಂದೇಶ ರವಾನಿಸಿದೆ.

### ಮೇ 12 ಕ್ಕೆ ಮಾತುಕತೆ

ಎರಡು ಕಡೆಯಿಂದಲೂ ಕೆಲವು ಸೂಚನೆಗಳನ್ನು ನೀಡಲಾಗಿದ್ದು, ಉಭಯ ಸೇನಾ ಮಹಾ ನಿರ್ದೇಶಕರು ಈ ಬಗ್ಗೆ ಮೇ 12ರಂದು ಮಧ್ಯಾಹ್ನ 12ಕ್ಕೆ ಮಾತುಕತೆ ನಡೆಸಲಿದ್ದಾರೆ ಎಂದು ವಿದೇಶಾಂಗ ಇಲಾಖೆ ಕಾರ್ಯದರ್ಶಿ ತಿಳಿಸಿದ್ದಾರೆ. ಭಾರತ ಮತ್ತು ಪಾಕಿಸ್ತಾನದ ನಡುವೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಪ್ ಮಾತುಕತೆ ಮಾಡಿದ್ದಾರೆ. ಎರಡು ದೇಶಗಳು ಒಪ್ಪಿ ಕದನ ವಿರಾಮಕ್ಕೆ ಮುಂದಾಗಿವೆ. ಸಮಯೋಚಿತ ನಿರ್ಧಾರಕ್ಕೆ ಎರಡೂ ದೇಶಗಳಿಗೂ ಶುಭಾಶಯಗಳು ಎಂದು ಸ್ವತಃ ಟ್ರಂಪ್ ಟ್ವೀಟ್ ಮೂಲಕ ಮಾಹಿತಿ ನೀಡಿದ್ದಾರೆ.

### ಕದನ ವಿರಾಮ ಬಗ್ಗೆ ವಿದೇಶಾಂಗ ಸಚಿವ ಟ್ವೀಟ್

ವಿದೇಶಾಂಗ ಸಚಿವ ಜೈ ಶಂಕರ್ ಈ ಬಗ್ಗೆ ಟ್ವೀಟ್ ಮಾಡಿದ್ದು, ಭಾರತ ಮತ್ತು ಪಾಕಿಸ್ತಾನ ಶನಿವಾರದಿಂದ ಗುಂಡಿನ ದಾಳಿ ಮತ್ತು ಮಿಲಿಟರಿ ಕಾರ್ಯಾಚರಣೆಯನ್ನು ನಿಲ್ಲಿಸುವ ಬಗ್ಗೆ ಒಪ್ಪಂದ ಮಾಡಿಕೊಂಡಿವೆ. ಭಾರತವು ಭಯೋತ್ಪಾದನೆಯ ವಿರುದ್ಧ ದೃಢ ಮತ್ತು ರಾಜಿಯಾಗದ ನಿಲುವನ್ನು ನಿರಂತರವಾಗಿ ಕಾಯ್ದುಕೊಂಡಿದೆ ಎಂದು ಹೇಳಿದ್ದಾರೆ.


### ಕದನ ವಿರಾಮ ದೃಢಪಡಿಸಿದ ಭಾರತ

ಕದನ ವಿರಾಮವನ್ನು ಭಾರತ ಕೂಡಾ ಖಚಿತಪಡಿಸಿದೆ. ಈ ಬಗ್ಗೆ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಚುಟುಕು ಸುದ್ದಿಗೋಷ್ಠಿ ನಡೆಸಿ ಕದನ ವಿರಾಮಕ್ಕೆ ಭಾರತ ಒಪ್ಪಿಗೆ ನೀಡಿದೆ ಎಂದು ತಿಳಿಸಿದರು. ಪಾಕ್ ಈ ಬಗ್ಗೆ ಮೊದಲು ಪ್ರಸ್ತಾಪ ಮಾಡಿತ್ತು. ಇದನ್ನು ನಾವು ಒಪ್ಪಿದ್ದೇವೆ. ಶನಿವಾರ ಸಂಜೆ 5 ಗಂಟೆಯಿಂದಲೇ ಅನ್ವಯಿಸುವಂತೆ ಕದನ ವಿರಾಮ ಜಾರಿಗೆ ಬಂದಿದೆ ಎಂದು ತಿಳಿಸಿದ್ದಾರೆ.

### ನಾಲ್ಕು ದಿನ ದಾಳಿ ಪ್ರತಿ ದಾಳಿ

ಜಮ್ಮು ಕಾಶ್ಮೀರದ ಪಹಲ್ಗಾಮ್‌ನ ದಾಳಿಯ ಪ್ರತಿಕಾರವಾಗಿ ಭಾರತ ಸೇನೆಯು ಮಂಗಳವಾರ ಮಧ್ಯರಾತ್ರಿ ಆಪರೇಷನ್ ಸಿಂಧೂರ ಕಾರ್ಯಾಚರಣೆ ಕೈಗೊಂಡಿತ್ತು. ಆ ಬಳಿಕ ಪಾಕಿಸ್ತಾನವು ಗುರುವಾರ ಜಮ್ಮು ಸೇರಿದಂತೆ ಭಾರತದ 15 ನಗರಗಳ ಸೇನಾನೆಲೆಗಳ ಮೇಲೆ ಕ್ಷಿಪಣಿ ದಾಳಿ ಮಾಡಿತ್ತು. ಅದೇ ದಿನ ಸಂಜೆ ಜಮ್ಮು ಸೇರಿದಂತೆ ವಿವಿಧ ಗಡಿ ರಾಜ್ಯಗಳ ಮೇಲೆ ಮತ್ತೆ ಕ್ಷಿಪಣಿ ದಾಳಿ ನಡೆಸಿತ್ತು. ದಾಳಿಯನ್ನು ಭಾರತ ಸೇನೆಯು ತಡೆಗಟ್ಟಿತ್ತು. ಹೆಚ್ಚಿನ ಹಾನಿಯಾಗದಂತೆ ಕ್ರಮವಹಿಸಿ ಪಾಕಿಸ್ತಾನ ದಾಳಿಗೆ ಪ್ರತಿಯಾಗಿ ಮಾತ್ರ ದಾಳಿ ಮಾಡಿತ್ತು. ಶುಕ್ರವಾರವೂ ಭಾರತದ 26 ಕಡೆ ಪಾಕಿಸ್ತಾನ ಸೇನೆ ದಾಳಿ ಮಾಡಿ ಭಾರತವನ್ನು ಮತ್ತಷ್ಟು ಕೆರಳಿಸಿತ್ತು. ಶನಿವಾರ ಅಮೆರಿಕ ಮಧ್ಯ ಪ್ರವೇಶ ಮಾಡಿದ್ದು ಸದ್ಯ ಎರಡು ದೇಶಗಳು ಕದನ ವಿರಾಮಕ್ಕೆ ಮುಂದಾಗಿವೆ.

### ಜೈ ಶಂಕರ್ ಸ್ಪಷ್ಟನೆ



ಭಾರತ ಮತ್ತು ಪಾಕಿಸ್ತಾನ ಇಂದು ಗುಂಡಿನ ದಾಳಿ ಮತ್ತು ಮಿಲಿಟರಿ ಕಾರ್ಯಾಚರಣೆಯನ್ನು ನಿಲ್ಲಿಸುವ ಬಗ್ಗೆ ಒಪ್ಪಂದ ಮಾಡಿಕೊಂಡಿವೆ ಎಂದು ವಿದೇಶಾಂಗ ಸಚಿವ ಎಸ್.ಜೈಶಂಕರ್ ಸ್ಪಷ್ಟಪಡಿಸಿದ್ದಾರೆ.ಈ ಕುರಿತು ಎಕ್ಸ್ ನಲ್ಲಿ ಸಚಿವ ಮಾಹಿತಿ ಹಂಚಿಕೊಂಡಿದ್ದಾರೆ. 'ಭಾರತವು ಭಯೋತ್ಪಾದನೆಯ ಎಲ್ಲಾ ರೂಪಗಳು ಮತ್ತು ಅಭಿವ್ಯಕ್ತಿಗಳ ವಿರುದ್ಧ ದೃಢ ಮತ್ತು ರಾಜಿಯಾಗದ ನಿಲುವನ್ನು ಹೊಂದಿದೆ. ಅದು ಹಾಗೆಯೇ ಮುಂದುವರಿಯುತ್ತದೆ ಎಂದು ತಿಳಿಸಿದ್ದಾರೆ.

## ಬಿಎಸ್‌ಎಫ್ ಯೋಧ ಸಾವು 7 ಸೈನಿಕರಿಗೆ ಗಾಯ



**ಶ್ರೀನಗರ:** ಪಾಕಿಸ್ತಾನ ನಂಬಿಸಿ ಬೆನ್ನ ಹಿಂದೆ ಚೂರಿ ಹಾಕುವ ಬುದ್ಧಿಯನ್ನು ಮತ್ತೆ ಪ್ರದರ್ಶಿಸಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬಳಿ ಬೇಡಿಕೊಂಡು ಭಾರತವನ್ನು ಕದನವಿರಾಮಕ್ಕೆ ಒಪ್ಪಿಸಿದ್ದ ಪಾಕಿಸ್ತಾನ ಭಾರತ ಕದನವಿರಾಮಕ್ಕೆ ಒಪ್ಪಿಕೊಂಡು ಸಂಜೆ 5 ಗಂಟೆಯಿಂದಲೇ ಗಡಿಯಲ್ಲಿ ಸಹಜಸ್ಥಿತಿ ನಿರ್ಮಾಣ ಮಾಡುವುದಾಗಿ ಘೋಷಿಸಿದೆ. ಕೂಡಲೆ ಕಂತ್ರಿಯಂತೆ ಭಾರತದೊಳಗೆ ನುಗ್ಗಿ ಡ್ರೋನ್ ಹಾಗೂ ಶೆಲ್ ದಾಳಿ ನಡೆಸಿದೆ. ನಂಬಿಸಿ ಕುತ್ತಿಗೆ ಕೊಯ್ಯಲು ಪ್ರಯತ್ನಿಸಿದ ಪಾಕಿಸ್ತಾನದ ಡ್ರೋನ್ ದಾಳಿಯನ್ನು ತಡೆಯಲು ಭಾರತ ಸೇನೆ ಪ್ರಯತ್ನಿಸಿದೆ. ಆದರೆ, ಜಮ್ಮುವಿನ ಆರ್‌ಎಸ್ ಪುರದಲ್ಲಿ ನಡೆದ ಶೆಲ್ ದಾಳಿಯಲ್ಲಿ ಬಿಎಸ್‌ಎಫ್ ಎಸ್ಐ ಎಂಡಿ ಇಮ್ತಿಯಾಜ್ ಪ್ರಾಣ ಕಳೆದುಕೊಂಡಿದ್ದಾರೆ, ಇನ್ನೂ 7 ಸೈನಿಕರಿಗೆ ಗಾಯಗಳಾಗಿವೆ. ಅನಿರೀಕ್ಷಿತವಾಗಿ ಪಾಕಿಸ್ತಾನ ಈ ದಾಳಿ ನಡೆಸಿದ್ದರಿಂದ ಭಾರತ ಎಚ್ಚೆತ್ತುಕೊಳ್ಳುವಷ್ಟರಲ್ಲಿ ಕೆಲವೆಡೆ ದಾಳಿಗಳು ನಡೆದಿವೆ. ಈ ಮೂಲಕ ಪಾಕಿಸ್ತಾನ ಯಾವುದೇ ಕಾರಣಕ್ಕೂ ನಂಬಿಕೆಗೆ ಅರ್ಹವಾದ ದೇಶವಲ್ಲ ಎಂಬುದನ್ನು ಆ ದೇಶವೇ ಸಾಬೀತುಪಡಿಸಿಕೊಂಡಿದೆ.

## ಪಾಕಿಸ್ತಾನಕ್ಕೆ ಭಾರತ ತಿರುಗೇಟು ಪೇಶಾವರಕ್ಕೆ ನುಗ್ಗಿ ಪ್ರತಿದಾಳಿ



**ಶ್ರೀನಗರ:** ಸಂಜೆಯಿಂದ ಭಾರತ ಮತ್ತು ಪಾಕಿಸ್ತಾನದ ನಡುವೆ ಕದನ ವಿರಾಮ ಘೋಷಿಸಲಾಗಿತ್ತು. ಆದರೆ, ಆ ಒಪ್ಪಂದವನ್ನು ಒಂದು ದಿನವೂ ಉಳಿಸಿಕೊಳ್ಳಲು ಯೋಗ್ಯತೆಯಿಲ್ಲದ ಪಾಕಿಸ್ತಾನ ರಾತ್ರಿಯೇ ಜಮ್ಮುವಿನಲ್ಲಿ ಡ್ರೋನ್ ಮತ್ತು ಶೆಲ್ ದಾಳಿ ನಡೆಸಿತ್ತು. ಇದರಿಂದ ಮತ್ತೆ ಪ್ರತೀಕಾರಕ್ಕೆ ಮುಂದಾಗಿರುವ ಭಾರತ ಪಾಕಿಸ್ತಾನದ ಪೇಶಾವರದಲ್ಲಿ ಡ್ರೋನ್ ದಾಳಿ ನಡೆಸಿದೆ. ಪಾಕಿಸ್ತಾನ ಕದನ ವಿರಾಮ ಉಲ್ಲಂಘಿಸುತ್ತಿದ್ದಂತೆ ಭಾರತ ಪ್ರತಿದಾಳಿ ನಡೆಸಿದ್ದು, ಪೇಶಾವರದಲ್ಲಿ ಜೋರಾಗಿ ಸ್ಫೋಟಗಳು ಕೇಳಿಬಂದಿವೆ.

ರಾತ್ರಿ ಶ್ರೀನಗರದಲ್ಲಿ ಸಂಪೂರ್ಣ ಕತ್ತಲೆಯಾದ ನಡುವೆ ಭಾರತದ ವಾಯು ರಕ್ಷಣಾ ಪಡೆಗಳು ಪಾಕಿಸ್ತಾನಿ ಡ್ರೋನ್‌ಗಳನ್ನು ತಡೆಹಿಡಿಯುತ್ತಿದ್ದಂತೆ ಕೆಂಪು ಗೆರೆಗಳು ಕಾಣಿಸಿಕೊಂಡವು ಮತ್ತು ಸ್ಫೋಟಗಳು ಕೇಳಿಬಂದವು. ಶ್ರೀನಗರದಲ್ಲಿ 40-50 ಪಾಕಿಸ್ತಾನಿ ಡ್ರೋನ್‌ಗಳು ಕಂಡುಬಂದಿವೆ ಎಂದು ವರದಿಗಳು ಸೂಚಿಸಿವೆ.

ಗಡಿಯಲ್ಲಿನ ಉದ್ವಿಗ್ನತೆಯನ್ನು ಕಡಿಮೆ ಮಾಡಲು ಭಾರತ ಮತ್ತು ಪಾಕಿಸ್ತಾನ ಕದನವಿರಾಮ ಒಪ್ಪಂದಕ್ಕೆ ಬಂದ ಕೆಲವೇ ಗಂಟೆಗಳ ನಂತರ, ಗುಜರಾತ್‌ನ ಕಚ್ ಗಡಿಯಲ್ಲಿರುವ ಹರಾಮಿ ನಲಾ ಮತ್ತು ಖಾವ್ಡಾ ಪ್ರದೇಶಗಳ ಬಳಿ ಪಾಕಿಸ್ತಾನಿ ಡ್ರೋನ್‌ಗಳು ಕಂಡುಬಂದವು. ಇದಲ್ಲದೆ, ಶ್ರೀನಗರದಲ್ಲಿ ಜೋರಾಗಿ ಸ್ಫೋಟಗಳು ಕೇಳಿಬಂದವು. ಕಚ್‌ನಲ್ಲಿ 8 ಡ್ರೋನ್‌ಗಳು ಪತ್ತೆಯಾಗಿದ್ದು, ಅವುಗಳಲ್ಲಿ ಭಾರತೀಯ ವಾಯು ರಕ್ಷಣಾ ವ್ಯವಸ್ಥೆಯು 3 ಡ್ರೋನ್‌ಗಳನ್ನು ಹೊಡೆದುರುಳಿಸಿದೆ.

## ಕದನ ವಿರಾಮ ಉಲ್ಲಂಘಿಸಿದ ಪಾಕ್

**ಶ್ರೀನಗರ:** ಭಾರತ ಪಾಕ್ ನಡುವೆ ಕದನ ವಿರಾಮವಾದ ಕೆಲವೇ ಗಂಟೆಗಳಲ್ಲಿ ಪಾಕಿಸ್ಥಾನದಿಂದ ಕದನ ವಿರಾಮದ ಉಲ್ಲಂಘನೆ ಆಗಿದೆ ಎಂದು ವರದಿಯಾಗಿದೆ. ಕಾಶ್ಮೀರದ ಹಲವು ಪ್ರದೇಶಗಳಲ್ಲಿ ಶನಿವಾರ ಸಂಜೆಯ ವೇಳೆ ಪಾಕಿಸ್ಥಾನ ಡೋನ್ ದಾಳಿ ನಡೆಸಿದೆ ಎಂದು ವರದಿಯಾಗಿದೆ. ಜಮ್ಮುವಿನ ಪಲನ್‌ವಾಲ್ಲಾ ಸೆಕ್ಟರ್‌ನ ಗಡಿ ನಿಯಂತ್ರಣ ರೇಖೆಯಲ್ಲಿ (ಎಲ್‌ಸಿ) ಪಾಕಿಸ್ಥಾನ ಕದನ ವಿರಾಮವನ್ನು ಉಲ್ಲಂಘಿಸಿದೆ. ಜಮ್ಮು ಮತ್ತು ಅನ್ನೂರ್ ಸೇರಿದಂತೆ ಜಮ್ಮು ಮತ್ತು ಕಾಶ್ಮೀರದ ಹಲವಾರು ನಗರಗಳಲ್ಲಿ ಡೋನ್ ದಾಳಿ ನಡೆದಿದೆ ಎಂದು ಸುದ್ದಿ ವರದಿಗಳು ತಿಳಿಸಿವೆ.


ಅಷ್ನೂರ್, ರಾಜರಿ, ಆರ್‌ಎಸ್ ಪುರ, ಉದಮ್‌ಪುರ್ ವಲಯಗಳಲ್ಲಿನ ಅಂತಾರಾಷ್ಟ್ರೀಯ ಗಡಿಯಲ್ಲಿ ಪಾಕಿಸ್ಥಾನ ಶೆಲ್ ದಾಳಿ ನಡೆಸಿದೆ ಎನ್ನಲಾಗಿದೆ. ವರದಿಗಳ ಪ್ರಕಾರ 11 ಸ್ಥಳಗಳಲ್ಲಿ ಪಾಕ್ ಡೋನ್ ದಾಳಿ ನಡೆದಿದೆ. ಬಾರಾಮುಲ್ಲಾದಲ್ಲಿ ಭಾರೀ



ಪ್ರಮಾಣದಲ್ಲಿ ಸ್ಫೋಟಗಳು ಸಂಭವಿಸಿರುವುದು ವರದಿಯಾಗಿವೆ. ಶ್ರೀನಗರ ಮಾತ್ರವಲ್ಲದೆ ಗುಜರಾತ್‌ನ ಕಚ್, ರಾಜಸ್ಥಾನದ ಕೆಲ ಪ್ರದೇಶಗಳಲ್ಲಿ ಪಾಕ್ ಡೋನ್ ದಾಳಿ ನಡೆಸಿರುವ ಬಗ್ಗೆ ವರದಿಯಾಗಿದೆ. ಪಾಕಿಸ್ತಾನದ ಹಲವು ಡೋನ್ ಗಳನ್ನು ಭಾರತೀಯ ಸೇನೆ ಹೊಡೆದುರುಳಿಸಿದೆ.

ರಾಜಸ್ಥಾನದ ಪೋಬ್ರಾನ್ ಮತ್ತು ಕಾಶ್ಮೀರದ ಬಾರಾಮುಲ್ಲಾದಲ್ಲಿ ಡೋನ್ ನ್ನು ಹೊಡೆದುರುಳಿಸಲಾಗಿದೆ. ಪಾಕ್ ಹುಚ್ಚುತನಕ್ಕೆ ತಕ್ಕ ಪ್ರತ್ಯುತ್ತರ ನೀಡುವಂತೆ ಸರ್ಕಾರ ಸೇನೆಗೆ (ಬಿಎಸ್‌ಎಫ್) ಸೂಚನೆ ನೀಡಿದೆ.

### ಕಾಶ್ಮೀರ ಸಿಎಂ ಒಮರ್ ಟ್ವೀಟ್



ಪಾಕಿಸ್ಥಾನದಿಂದ ಕದನ ವಿರಾಮ ಉಲ್ಲಂಘನೆ ಆದ ಕುರಿತು ಜಮ್ಮು - ಕಾಶ್ಮೀರ ಸಿಎಂ ಒಮರ್ ಅಬ್ದುಲ್ಲಾ ಟ್ವಿಟ್ ಮಾಡಿ, ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕದನ ವಿರಾಮಕ್ಕೆ ಏನಾಯಿತು ಶ್ರೀನಗರದಾದ್ಯಂತ ಸ್ಫೋಟಗಳ ಸದ್ದು ಕೇಳಿಬಂತು ಎಂದು ಟ್ವಿಟ್ ಮಾಡಿದ್ದಾರೆ.

## ಸಾಲ ಸರಿಯಾಗಿ ತೀರಿಸುತ್ತಿರೋದು ಕರಾವಳಿ ಜನ

• **ಉದಯವಾಹಿನಿ, ಮಂಗಳೂರು**

ರಾಜ್ಯದಲ್ಲಿ ಅತಿ ಹೆಚ್ಚು ಶಿಸ್ತಿನಿಂದ ಬ್ಯಾಂಕು, ಸಹಕಾರಿ ಸಂಘಗಳಲ್ಲಿ ಸಾಲಗಳು ಮರುಪಾವತಿ ಮಾಡುತ್ತಿದ್ದಾರೆ, ಅದು ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಮಾತ್ರ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹಾಡಿ ಹೊಗಳಿದ್ದಾರೆ.



ಕರಾವಳಿಗೆ ಕೊಟ್ಟ ಮಾತುಗಳನ್ನ ನಾವೂ ಉಳಿಸಿಕೊಂಡು ಬರುತ್ತಿದ್ದೇವೆ. ಈ ಜಿಲ್ಲೆ ಬಗ್ಗೆ ಅಪಾರ ವಿಶ್ವಾಸ, ನಂಬಿಕೆ ಇಟ್ಟುಕೊಂಡಿದ್ದೇನೆ. ಇಲ್ಲಿನ ಜನ ಹೆಚ್ಚು ಬುದ್ಧಿವಂತರು, ವಿದ್ಯಾವಂತರು. ಅತಿಹೆಚ್ಚು ವಿದ್ಯಾವಂತರನ್ನು ಕೊಟ್ಟ ಜಿಲ್ಲೆ ಇದು. ದೇಶದಲ್ಲಿ ಅತಿ ಹೆಚ್ಚು ಬ್ಯಾಂಕುಗಳನ್ನು ಕೊಟ್ಟ ಪುಣ್ಯಭೂಮಿ ಇದು. ಈ ಪರಂಪರೆಯನ್ನು ನೀವು ಉಳಿಸಿಕೊಳ್ಳಬೇಕು ಎಂದು ತಿಳಿಸಿದರು. ಕರಾವಳಿ ಭಾಗದ ಜನ ಪ್ರತಿಭಾವಂತರು, ಬುದ್ಧಿವಂತರು. ಇವರು ಇಲ್ಲೇ ಉದ್ಯೋಗ ಮಾಡುವ ವಾತಾವರಣ ನಿರ್ಮಿಸಬೇಕು. ಇಲ್ಲಿ ಮತ್ತೆ ಶಾಂತಿ ನೆಲೆಸಬೇಕು. ಜನರಲ್ಲಿ ಸಹೋದರತ್ವ ಭಾವನೆ ಮೂಡಿಸಬೇಕು. ಅಭಿವೃದ್ಧಿ ಕೆಲಸಗಳ ಮೂಲಕ ಕರಾವಳಿ ಪ್ರದೇಶದಲ್ಲಿ ಮತ್ತೆ ಇತಿಹಾಸ ಸೃಷ್ಟಿಸೋಣ ಎಂದು ಡಿಸಿಎಂ ಡಿಕೆ ಶಿವಕುಮಾರ್ ಅವರು ತಿಳಿಸಿದರು. ಇಪ್ಪತ್ತೈದು ವರ್ಷದ ಹಿಂದೆ ಎಸ್ ಎಂ.ಕೃಷ್ಣ ಅವರ ಸಂಪುಟದಲ್ಲಿ ಸಹಕಾರ ಮಂತ್ರಿಯಾಗಿದ್ದ ವೇಳೆ ಈ ಕಾರ್ಯಕ್ರಮದ ಜ್ಯೋತಿ ಬೆಳಗಿಸಿದ್ದೆ. ಅಂದು ಹಚ್ಚಿದ ಹಣತೆ ಲಕ್ಷಾಂತರ ಮಹಿಳೆಯರ ಬಾಳಿನಲ್ಲಿ ಬೆಳಕು ತಂದಿದೆ, ಇನ್ನೂ ಉರಿಯುತ್ತಲೇ ಇದೆ. ಶುಭಂ ಕರೋತಿ ಕಲ್ಯಾಣಂ ಆರೋಗ್ಯಂ ಧನಸಂಪದಂ, ಜ್ಞಾನ ಶಕ್ತಿ ಸ್ವರೂಪಸ್ಯ ದೀಪ ಜ್ಯೋತಿ ಪ್ರಕಾಶಿತಂ' ಎಂಬಂತೆ ಎಲ್ಲರಿಗೂ ಮಂಗಳವಾಗಲಿ, ಶುಭವಾಗಲಿ, ಆರೋಗ್ಯವಂತರಾಗಲಿ, ಐಶ್ವರ್ಯವಂತರಾಗಲಿ, ನೆಮ್ಮದಿಯಿಂದ ಬದುಕಲಿ ಎಂದು ಈ ಜ್ಯೋತಿಯನ್ನು ಮತ್ತೆ ನಾವೆಲ್ಲ ಬೆಳಗಿದ್ದೇವೆ'' ಎಂದು ಹೇಳಿದರು.

## ಭಾರಿ ಪ್ರಮಾಣದ ನಗದು ಹೊಂದುವುದು ಅಪರಾಧವಲ್ಲ

• **ಉದಯವಾಹಿನಿ, ಬೆಂಗಳೂರು**



ಅಧಿಕೃತ ದಾಖಲೆಗಳಿಲ್ಲದೆ ಭಾರಿ ಪ್ರಮಾಣದ ನಗದು ಹೊಂದಿದ್ದರೆ ಅದು ಕರ್ನಾಟಕ ಪೊಲೀಸ್ ಕಾಯಿದೆಯ ಸೆಕ್ಷನ್ 98 ರ ಪ್ರಕಾರ ಅಪರಾಧವಾಗುವುದಿಲ್ಲ ಎಂದು ಕರ್ನಾಟಕ ಹೈಕೋರ್ಟ್ ಮಹತ್ವದ ಆದೇಶ ಕೊಟ್ಟಿದೆ. ಕಳೆದ ಲೋಕಸಭಾ ಚುನಾವಣೆ ವೇಳೆ ಚೆಕ್‌ಪೋಸ್ಟ್‌ನಲ್ಲಿ 8.38 ಲಕ್ಷ ರೂ. ನಗದು ಪತ್ತೆಯಾದ ಸಂಬಂಧ ಆಂಧ್ರ ಮೂಲದ ಆರ್ ಅಮರನಾಥ್ ವಿರುದ್ಧ ದಾಖಲಿಸಿಕೊಂಡಿದ್ದ ಪ್ರಕರಣ ರದ್ದು ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಆಲಿಸಿದ ನ್ಯಾ. ಹೇಮಂತ್ ಚಂದನ ಗೌಡರ್ ಅವರಿದ್ದ ಏಕಸದಸ್ಯ ಪೀಠ ಈ ಆದೇಶ ನೀಡಿದೆ. '' ಅಪರಾಧವನ್ನು ಸಾಬೀತುಪಡಿಸಬೇಕಾದರೆ, ಆ ನಗದನ್ನು ಕಳವು ಮಾಡಿರುವುದು, ಇಲ್ಲವೇ ವಂಚನೆ ಎಸಗುವ ಮೂಲಕ ಗಳಿಸಲಾಗಿದೆ ಎಂಬುದನ್ನು ರುಜುವಾತುಪಡಿಸಬೇಕಾಗುತ್ತದೆ '' ಎಂದು ಕರ್ನಾಟಕ ಹೈಕೋರ್ಟ್‌ನ ನ್ಯಾಯಪೀಠ ಹೇಳಿದೆ. '' ಆದರೂ ಈ ಪ್ರಕರಣದಲ್ಲಿ ಅಪರಾಧ ದಂಡ ಸಂಹಿತೆಯ ಸೆಕ್ಷನ್ 155 (2) ರಡಿಯಲ್ಲಿ ಅಗತ್ಯ ಆದೇಶವನ್ನು ಪಡೆಯದೆ ಪೊಲೀಸರು ತನಿಖೆ ನಡೆಸಿದ್ದಾರೆ. ಶಾಸನಬದ್ಧ ಅವಶ್ಯಕತೆಗಳನ್ನು ಪಾಲಿಸದಿರುವುದು ತನಿಖೆಯನ್ನು ಹಾಗೂ ಆರೋಪಿಗೆ ಅಪರಾಧಗಳ ಬಗ್ಗೆ ಅರಿವು ಮೂಡಿಸುವುದನ್ನು ಕಾನೂನು ಬದ್ಧವಾಗಿ ಅಸಮರ್ಥನೀಯ ಮತ್ತು ದುರ್ಬಲಗೊಳಿಸುತ್ತದೆ '' ಎಂದು ನ್ಯಾಯಾಲಯ ಹೇಳಿದೆ.

## ಸುಳ್ಳು ಸುದ್ದಿ ಹರಡಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ

### ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ವಿಡಿಯೋ ಸಂವಾದ ನಡೆಸಿ ಮಾಹಿತಿ

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಸುಳ್ಳು ಸುದ್ದಿಗಳಿಗೆ ಕಡ್ಡಾಯವಾಗಿ ಕಡಿವಾಣ ಹಾಕಬೇಕು. ಅನಿವಾರ್ಯವಾದರೆ ಸುಳ್ಳು ಸುದ್ದಿ ಹರಡಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿಎಂದು ಅಧಿಕಾರಿಗಳಿಗೆ ಸಿ.ಎಂ ಸಿದ್ದರಾಮಯ್ಯ ಸ್ಪಷ್ಟ ಸೂಚನೆ ನೀಡಿದ್ದಾರೆ.

ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಗೂ ನಾಗರೀಕರ ರಕ್ಷಣಾ ಕಾರ್ಯಚಟುವಟಿಕೆಗಳ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದ ಹಿರಿಯ ಪೋಲಿಸ್ ಅಧಿಕಾರಿಗಳು , ಎಲ್ಲಾ ಮಹಾನಗರಗಳ ಆಯುಕ್ತರು, ಜಿಲ್ಲಾಧಿಕಾರಿಗಳು , ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ವಿಡಿಯೋ ಸಂವಾದ ನಡೆಸಿ ಮಾಹಿತಿ ಪಡೆದುಕೊಂಡರು. ಇದೇ ಸಂದರ್ಭದಲ್ಲಿ ಕೆಲವೊಂದು ಸೂಚನೆಗಳನ್ನು ಅಧಿಕಾರಿಗಳಿಗೆ ನೀಡಿದರು.

ಭಾರತ ಮತ್ತು ಪಾಕಿಸ್ತಾನದ ನಡುವೆ ಸಂಘರ್ಷದ ವಾತಾವರಣ ಹಿನ್ನೆಲೆಯಲ್ಲಿ ಕಾನೂನು ಸುವ್ಯವಸ್ಥೆಯೊಂದಿಗೆ ಕಟ್ಟುನಿಟ್ಟಿನ ಭದ್ರತಾ ಕ್ರಮಗಳನ್ನು ಕೈಗೊಳ್ಳಲು ಈಗಾಗಲೇ ಸೂಚನೆ ನೀಡಲಾಗಿದೆ.



**ಅಧಿಕಾರಿಗಳಿಗೆ ಕೆಲವೊಂದು ಸೂಚನೆ**

ಯಾವುದೇ ಪರಿಸ್ಥಿತಿಯನ್ನು ಎದುರಿಸಲು ಸನ್ನದ್ಧರಾಗಿರಬೇಕು. ಈ ಕುರಿತು ರಾಜ್ಯ ಮಟ್ಟದಲ್ಲಿ ಹಾಗೂ ಜಿಲ್ಲಾ ಮಟ್ಟದಲ್ಲಿ ಮಾರ್ಗಸೂಚಿಯನ್ನು ಸಿದ್ಧಪಡಿಸಬೇಕು.

ರಾಷ್ಟ್ರೀಯ ಪ್ರಮುಖ ಸ್ಥಳಗಳಲ್ಲಿ ಹೆಚ್ಚಿನ ಭದ್ರತೆಯನ್ನು ಕಾಪಾಡಲು ಸೂಚನೆ. ಮಾಧ್ಯಮಗಳು ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿಯನ್ನು ಹರಡುವುದನ್ನು ತಪ್ಪಿಸಲು ಕಟ್ಟೆಚ್ಚರ ವಹಿಸಬೇಕು. ಸಾಮಾಜಿಕ ಜಾಲತಾಣಗಳ ಮೇಲೆ ನಿರಂತರ ನಿಗಾ ವಹಿಸಬೇಕು. ವದಂತಿ ಹರಡುವವರ ವಿರುದ್ಧ ಕ್ರಮ ಕೈಗೊಳ್ಳಬೇಕು.ಸುಳ್ಳು ಸುದ್ದಿ ಹರಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಫ್ಯಾಕ್ಟ್ ಚೆಕ್ ನಿರಂತರವಾಗಿ ಮಾಡಬೇಕು. ಸುಳ್ಳು ಸುದ್ದಿ ಬಗ್ಗೆ ಮೂಲದಲ್ಲೇ ಅಧಿಕೃತ ಸ್ಪಷ್ಟೀಕರಣ ನೀಡಬೇಕು. ಎಲ್ಲಾ ಜಿಲ್ಲೆಗಳಲ್ಲಿ ಪೌರ ರಕ್ಷಣಾ ವ್ಯವಸ್ಥೆಗೆ ಸ್ವಯಂಸೇವಕರನ್ನು ನೇಮಕ ಮಾಡುವ ಕಾರ್ಯ ಆರಂಭಿಸಬೇಕು. ಆನ್‌ಲೈನ್‌ನಲ್ಲಿ ಹೆಸರು ನೋಂದಾಯಿಸಲು ವ್ಯವಸ್ಥೆ ಕಲ್ಪಿಸಬೇಕು.ಕರಾವಳಿಯಲ್ಲಿ ಭದ್ರತೆಯನ್ನು ಬಿಗಿಗೊಳಿಸಬೇಕು. ಎಲ್ಲಾ ಪ್ರಮುಖ ಸ್ಥಳಗಳಲ್ಲಿ ನಿರಂತರ ಗಸ್ತು ವ್ಯವಸ್ಥೆ ಮಾಡಬೇಕು.


### ಕಟ್ಟೆಚ್ಚರ ವಹಿಸಬೇಕು

- ಮಾಧ್ಯಮಗಳು ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿಯನ್ನು ಹರಡುವುದನ್ನು ತಪ್ಪಿಸಲು ಕಟ್ಟೆಚ್ಚರ ವಹಿಸಬೇಕು.
- ರಾಜ್ಯದ ಕಾನೂನು ಸುವ್ಯವಸ್ಥೆಗಿಂತ ಯಾವುದೂ ದೊಡ್ಡದಲ್ಲ: ರಾಜ್ಯದ ಜನರ ರಕ್ಷಣೆಗೆ ಮೊದಲ ಆದ್ಯತೆ ನೀಡಿ.
- ಪ್ರಮುಖ ಸ್ಥಳಗಳಲ್ಲಿ ಮಾಕ್ ಡ್ರಿಲ್ ಮಾಡಲು ಸೂಚನೆ ನೀಡಿದ ಸಿಎಂ ಸಿದ್ದರಾಮಯ್ಯ.
- ಅಕ್ರಮ ದಾಸ್ತಾನು ಮತ್ತು ಕಾಳಸಂತೆಯ ಮೇಲೆ ನಿರಂತರ ನಿಗಾವಹಿಸಿ, ಅನಗತ್ಯವಾಗಿ ಸಾಮಾಗ್ರಿಗಳ ಬೆಲೆ ಹೆಚ್ಚು ಮಾಡುವ ಪ್ರಯತ್ನಗಳನ್ನು ತಡೆಯಬೇಕು.

- ಗುಪ್ತಚರ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಬೇಕು. ಸಾರ್ವಜನಿಕ ಸೇವೆ ಒದಗಿಸುವ ತಾಣಗಳಲ್ಲಿ ಹೆಚ್ಚಿನ ಸುರಕ್ಷತೆಯನ್ನು ಖಾತ್ರಿಪಡಿಸಬೇಕು.
- ಅಕ್ರಮ ದಾಸ್ತಾನು ಮತ್ತು ಕಾಳಸಂತೆಯ ಮೇಲೆ ನಿರಂತರ ನಿಗಾವಹಿಸಿ, ಅನಗತ್ಯವಾಗಿ ಸಾಮಾಗ್ರಿಗಳ ಬೆಲೆ ಹೆಚ್ಚು ಮಾಡುವ ಪ್ರಯತ್ನಗಳನ್ನು ತಡೆಯಬೇಕು.
- ಅಗ್ನಿಶಾಮಕ ದಳದ ಕೇಂದ್ರಗಳು ದಿನದ 24ಗಂಟೆ ಸನ್ನದ್ಧ ಸ್ಥಿತಿಯಲ್ಲಿರಬೇಕು. ಎಲ್ಲಾ ಜಿಲ್ಲೆಗಳಲ್ಲಿ ಸಹಾಯ ಕೇಂದ್ರಗಳನ್ನು ತೆರೆದು, ಸಹಾಯವಾಣಿ ಆರಂಭಿಸಬೇಕು. ಪೌರ ರಕ್ಷಣಾ ವ್ಯವಸ್ಥೆಯನ್ನು ಬಲಪಡಿಸಿ, ಅವರಿಗೆ ಸೂಕ್ತ ತರಬೇತಿಯನ್ನು ಒದಗಿಸಬೇಕು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,868/Gram24ct ₹9,045/Gram22ct | ಬೆಳ್ಳಿ: ₹99.00/Gram

# ಕಪಿಲ ಗೀತೆ ಧಾರ್ಮಿಕ ಪ್ರವಚನ



• ಉದಯವಾಹಿನಿ, ಬೆಂಗಳೂರು

ಭೀಮನಕಟ್ಟೆ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಮೇ 11 ರಿಂದ 20ರ ವರೆಗೆ ಪ್ರತಿದಿನ ಸಂಜೆ 6-15ಕ್ಕೆ ವಿದ್ವಾನ್ ಬಿ. ಚಂದ್ರಶೇಖರ ಆಚಾರ್ಯ ಅವರಿಂದ ಕಪಿಲ ಗೀತೆ ವಿಷಯವಾಗಿ ಧಾರ್ಮಿಕ ಪ್ರವಚನ ಏರ್ಪಡಿಸಿದೆ. ಸ್ಥಳ : ಶ್ರೀ ಭೀಮನಕಟ್ಟೆ ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ದೊಡ್ಡಬೊಮ್ಮಸಂದ್ರ, ವಿದ್ಯಾರಣ್ಯಪುರ, ಬೆಂಗಳೂರು

# ರಾಜ್ಯದಲ್ಲಿ ಮುಂದಿನ 5 ದಿನ ಮಳೆ ಸಾಧ್ಯತೆ: ಹವಾಮಾನ ಇಲಾಖೆ

• ಉದಯವಾಹಿನಿ, ಬೆಂಗಳೂರು

ಪೂರ್ವ ಮುಂಗಾರುಮಳೆ ಚೇತರಿಕೆ ಕಂಡಿದ್ದು, ರಾಜ್ಯದಲ್ಲಿ ಮುಂದಿನ 5 ದಿನಗಳ ಕಾಲ ಚದುರಿದಂತೆ ಅಲ್ಲಲ್ಲಿ ಮಳೆಯಾಗುವ ಮುನ್ಸೂಚನೆಗಳಿವೆ. ಗುಡುಗು, ಮಿಂಚಿನಿಂದ ಕೂಡಿದ ಹಗುರದಿಂದ ಸಾಧಾರಣ ಮಳೆ ಕರಾವಳಿ ಭಾಗದ ಜಿಲ್ಲೆಗಳಲ್ಲಿ ಒಂದೆರೆಡು ಕಡೆ ಆಗುವ ಸಾಧ್ಯತೆಗಳಿವೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ರಾಜ್ಯದ ಒಳನಾಡಿನಲ್ಲಿ ಟ್ರಫ್ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ಬಹುತೇಕ ಕಡೆಗಳಲ್ಲಿ ಮಳೆಯಾಗುವ ಮುನ್ಸೂಚನೆಗಳಿವೆ. ಉತ್ತರ ಒಳನಾಡಿನ ಒಂದೆರೆಡು ಕಡೆ ಗುಡುಗು, ಮಿಂಚಿನಿಂದ ಕೂಡಿದ ಮಳೆಯ ಜೊತೆಗೆ ಗಂಟೆಗೆ 40 ರಿಂದ 50 ಕಿ.ಮೀ. ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆಗಳಿವೆ. ಗದಗ, ಬಾಗಲಕೋಟೆ, ವಿಜಯಪುರ, ಕಲಬುರಗಿ, ಕೊಪ್ಪಳ ಹಾಗೂ ರಾಯಚೂರು ಜಿಲ್ಲೆಗಳ ಕೆಲವೆಡೆ ಮಳೆಯಾಗುವ ಸಾಧ್ಯತೆಗಳಿವೆ. ಕಲ್ಯಾಣ ಕರ್ನಾಟಕದ ಬೀದರ್ ಸೇರಿದಂತೆ ಕೆಲವೆಡೆ ಒಣಹವೆ ಮುಂದುವರೆಯಲಿದೆ. ದಕ್ಷಿಣ ಒಳನಾಡಿನ ಹಲವೆಡೆ ಗುಡುಗು, ಮಿಂಚಿನಿಂದ ಕೂಡಿದ ಹಾಗೂ ಗಂಟೆಗೆ ಸುಮಾರು 50 ಕಿ.ಮೀ. ವೇಗದ ಬಿರುಗಾಳಿ ಸಹಿತ ಮಳೆಯಾಗುವ ಮುನ್ಸೂಚನೆಗಳಿವೆ. ಕೊಡಗು, ಹಾಸನ, ಮೈಸೂರು, ರಾಮನಗರ, ಮಂಡ್ಯ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳ ಕೆಲವೆಡೆ ಸಂಜೆ ಹಾಗೂ ರಾತ್ರಿ ವೇಳೆ ಮಳೆಯಾಗುವ ಸಾಧ್ಯತೆಗಳಿವೆ.

# ಸಿಇಟಿ ದಾಖಲೆ ಪರಿಶೀಲನೆ : ಜಮ್ಮು ಮತ್ತು ಕಾಶ್ಮೀರದ ವಿದ್ಯಾರ್ಥಿಗಳಿಗೆ ವಿಶೇಷ ಅವಕಾಶ

• ಉದಯವಾಹಿನಿ, ಬೆಂಗಳೂರು

ಭಾರತ- ಪಾಕಿಸ್ತಾನ ಗಡಿ ಭಾಗದಲ್ಲಿನ ಸೇನಾ ಉದ್ವಿಗ್ನತೆಯಿಂದ ಜಮ್ಮು ಮತ್ತು ಕಾಶ್ಮೀರದ ವಿದ್ಯಾರ್ಥಿಗಳಿಗೆ ಯುಜಿಸಿಇಟಿ-25 ಪ್ರವೇಶ ಸಲುವಾಗಿ ನಡೆಸುವ ಮೂಲ ದಾಖಲೆಗಳ ಪರಿಶೀಲನೆಗೆ ಮತ್ತೊಮ್ಮೆ ಅವಕಾಶ ನೀಡಲಾಗುವುದು. ಈ ವಿಷಯದಲ್ಲಿ ಆತಂಕ ಬೇಡ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ಹೇಳಿದ್ದಾರೆ. ಪ್ರಸಕ್ತ ಸಾಲಿನ ಸಿಇಟಿ ಸಲುವಾಗಿ ಜಮ್ಮು ಮತ್ತು ಕಾಶ್ಮೀರದ ಒಟ್ಟು 204 ಮಂದಿ ಪರೀಕ್ಷೆ ಬರೆದಿದ್ದು, ಅವರಲ್ಲಿ ಇದುವರೆಗೂ ಕೇವಲ 52 ಮಂದಿ ಮಾತ್ರ ದಾಖಲೆ ಪರಿಶೀಲನೆ ಮಾಡಿಸಿಕೊಂಡಿದ್ದಾರೆ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಗಡಿ ಭಾಗದಲ್ಲಿ ಉದ್ವಿಗ್ನ ಪರಿಸ್ಥಿತಿಯ ಅರಿವು ಇರುವ ಕಾರಣಕ್ಕೆ ಅವರಿಗೆ ಮತ್ತೊಂದು ಅವಕಾಶ ನೀಡಲಾಗುವುದು. ಒಂದು ವೇಳೆ 10-15 ದಿನಗಳ ನಂತರವೂ ಪರಿಸ್ಥಿತಿ ಸುಧಾರಿಸದೇ ಇದ್ದರೆ ವಿಡಿಯೋ ಸಂವಾದದ ಮೂಲಕವೇ ದಾಖಲೆಗಳ ಪರಿಶೀಲನೆ ಮಾಡಲಾಗುವುದು. ಒಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಅನಾನುಕೂಲ ಆಗದಂತೆ ನೋಡಿಕೊಳ್ಳಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಈ ಕುರಿತು ಈ ಎಲ್ಲಾ ಅಭ್ಯರ್ಥಿಗಳಿಗೆ ಪ್ರತ್ಯೇಕ ಸಂದೇಶ ಕಳುಹಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ಜಿಎಸ್‌ಟಿ ಅಧಿಕಾರಿ ಬಳಿ 6 ಲಕ್ಷ ಸುಲಿಗೆ: 3 ಪೇದೆಗಳ ಬಂಧನ

• ಉದಯವಾಹಿನಿ, ಬೆಂಗಳೂರು

ಅಪರಾಧ ಕೃತ್ಯಗಳಲ್ಲಿ ಪೊಲೀಸರ ಬಂಧನ ಮುಂದುವರೆದಿದ್ದು, ಈಗ ಮತ್ತೊಂದು ಸುಲಿಗೆ ಪ್ರಕರಣದಲ್ಲಿ ಚಿಕ್ಕಜಾಲ ಠಾಣೆಯ ಮೂವರು ಕಾನ್ಸ್‌ಸ್ಟೇಬಲ್‌ಗಳು ಮತ್ತು ಪತ್ರಕರ್ತ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹ ಸೇರಿದ್ದಾರೆ. ಚಿಕ್ಕಜಾಲ ಠಾಣೆ ಹೆಡ್ ಕಾನ್ಸ್‌ಸ್ಟೇಬಲ್ ವಿಜಯ್‌ಕುಮಾರ್, ಕಾನ್ಸ್‌ಸ್ಟೇಬಲ್‌ಗಳಾದ ಸಂತೋಷ್, ಮಂಜುನಾಥ್ ಹಾಗೂ ಚಿಕ್ಕಜಾಲದ ಯೂಟ್ಯೂಬರ್ ಪ್ರವೀಣ್ ಬಂಧಿತರಾಗಿದ್ದು, ಕೆಲ ದಿನಗಳ ಹಿಂದೆ ಜಿಎಸ್‌ಟಿ ಬಿಲ್ ಖರೀದಿಗೆ ಬಂದಿದ್ದ ಲೆಕ್ಕಪರಿಶೋಧಕ ನಾಗರಾಜು ಬಂಡಾರು ಅವರನ್ನು ಬೆದರಿಸಿ ?6 ಲಕ್ಷವನ್ನು ಆರೋಪಿಗಳು ಸುಲಿಗೆ ಮಾಡಿದ್ದರೆಂದು ದೂರಲಾಗಿದೆ.

ಇತ್ತೀಚಿಗೆ ದೇವನಹಳ್ಳಿಯ ಔಷಧಿ ವ್ಯಾಪಾರಿ ತಬ್ರೇಜ್ ಅವರಿಗೆ ಕಡಿಮೆ ಬೆಲೆಗೆ ಚಿನ್ನ ಕೊಡಿಸುವುದಾಗಿ ನಂಬಿಸಿ ರೂ.12 ಲಕ್ಷ ವಂಚಿಸಿದ್ದ ಪ್ರಕರಣದಲ್ಲಿ ಆರ್.ಟಿ.ನಗರ ಠಾಣೆಯ ಮೂವರು ಕಾನ್ಸ್‌ಟೇಬಲ್ ಬಂಧಿತರಾಗಿದ್ದರು. ಈ ಕೃತ್ಯ ಮರೆಯುವ ಮುನ್ನವೇ ಈಗ ಮುದ್ದೆ ಮುರಿಯಲು ಚಿಕ್ಕಜಾಲ ಮೂವರು ಪರಪ್ಪನ ಅಗ್ರಹಾರ ಸೆಂಟ್ರಲ್ ಜೈಲ್ ಸೇರಿದ್ದಾರೆ. ಅಪರಾಧ ಪತ್ತೆ ಹಚ್ಚಬೇಕಾದ ಖಾಕಿಧಾರಿಗಳ ಈ ಕಳ್ಳಾಟದ ವಿರುದ್ಧ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಟೀಕೆಗಳು ವ್ಯಕ್ತವಾಗಿವೆ.

# ರಾಜ್ಯದಲ್ಲಿ ಗೇಲ್‌ನಿಂದ ರೂ. 5000 ಕೋಟಿ ಹೂಡಿಕೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ 1,000 ಮೆಗಾವಾಟ್ ಸಾಮರ್ಥ್ಯದ ನವೀಕರಿಸಬಹುದಾದ ಇಂಧನ ಉತ್ಪಾದನಾ ಘಟಕವನ್ನು, ರೂ.5,000 ಕೋಟಿ ವೆಚ್ಚದಲ್ಲಿ ಸ್ಥಾಪಿಸಲು ಭಾರತೀಯ ಅನಿಲ ಪ್ರಾಧಿಕಾರ (ಗ್ಯಾಸ್ ಅಥಾರಿಟಿ ಆಫ್ ಇಂಡಿಯಾ ಲಿಮಿಟೆಡ್ -ಗೇಲ್) ರಾಜ್ಯ ಸರ್ಕಾರ ಒಪ್ಪಂದ ಮಾಡಿಕೊಂಡಿವೆ. ವಿಧಾನಸೌಧದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ, ಇಂಧನ ಸಚಿವ ಕೆ.ಜೆ.ಜಾರ್ಜ್, ಕ್ರೆಡೆಲ್ ಅಧ್ಯಕ್ಷ ಟಿ.ಡಿ.ರಾಜೇಗೌಡ ಸಮ್ಮುಖದಲ್ಲಿ ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್ ಹಾಗೂ ಗೇಲ್ ಕಾರ್ಯ ಕಾರಿ ನಿರ್ದೇಶಕ ಪರಿವೇಶ್ ಛುಗ್ ಸಿಂಗ್ ಒಪ್ಪಂದ ಪತ್ರಕ್ಕೆ ಸಹಿ ಹಾಕಿದರು. ಯೋಜನೆ ಅನುಷ್ಠಾನಕ್ಕೆ ಅಗತ್ಯವಿರುವ ಭೂಮಿಯನ್ನು, ರೈತರಿಂದ ನೇರವಾಗಿ ಭೋಗ್ಯಕ್ಕೆ ಗೇಲ್ ಪಡೆದುಕೊಳ್ಳಬಹುದು. ಇಲ್ಲವೇ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ನಿಗಮದ ಮೂಲಕ ಅಗತ್ಯ ಜಮೀನನ್ನು ಒದಗಿಸಲಾಗುವುದು. ಇತರೆ ಸವಲತ್ತು ಗಳನ್ನೂ ತ್ವರಿತವಾಗಿ ಒದಗಿಸಲಾಗುವುದು ಎಂದರು.

ನವೀಕರಿಸಬಹುದಾದ ಮತ್ತು ಮರುಬಳಕೆ ಇಂಧನ ಕ್ಷೇತ್ರದ ಹೂಡಿಕೆಯಲ್ಲಿ ರಾಜ್ಯವು ಅಗ್ರಸ್ಥಾನದಲ್ಲಿ ಇರುವಂತೆ ನೋಡಿಕೊಳ್ಳಲು ನಾವು ಬದ್ಧರಾಗಿದ್ದೇವೆ. ಇದು ರಾಜ್ಯದ ಕೈಗಾರಿಕಾ ಬೆಳವಣಿಗೆಗೆ ನಿರ್ಣಾಯಕವಾಗಿದೆ. ಇಲ್ಲಿನ ಕಾರ್ಯಪರಿಸರ, ಕೌಶಲಪೂರ್ಣ ಮಾನವ ಸಂಪನ್ಮೂಲವು ಪರಿಸರ ಸ್ನೇಹಿ ಇಂಧನ ಕ್ಷೇತ್ರದ ಹೂಡಿಕೆಗೆ ಕರ್ನಾಟಕವನ್ನು ಪ್ರಶಸ್ತ ತಾಣವಾಗಿಸಿವೆ' ಎಂದರು. 'ಈ ಒಪ್ಪಂದವು ಭಾರತದ ಪರಿಸರಸ್ನೇಹಿ ಇಂಧನ ವಲಯದ ಸಾಧನೆಗೆ ಬಲ ತುಂಬಲಿದೆ. ರಾಜ್ಯದಲ್ಲೂ ಈ ವಲಯದಲ್ಲಿ ಹೂಡಿಕೆಗೆ ವಿಪುಲ ಅವಕಾಶಗಳಿವೆ. ಪಾವಗಡದ ಸೋಲಾರ್ ಪಾರ್ಕ್‌ನಲ್ಲಿ ವಾರ್ಷಿಕ 2,500 ಮೆಗಾವಾಟ್ ವಿದ್ಯುತ್ ಉತ್ಪಾದಿಸಲಾಗುತ್ತಿದೆ. ಯೋಜನೆ ವಿಸ್ತರಿಸುವುದಾದರೆ, ಅಲ್ಲಿ ರೈತರು ಜಮೀನು ಬಿಟ್ಟುಕೊಡಲು ಮುಂದೆ ಬಂದಿದ್ದಾರೆ. 10,000 ಎಕರೆಗಳಷ್ಟು ಜಮೀನು ದೊರೆತರೆ ಅಲ್ಲಿ ಯೋಜನೆ ವಿಸ್ತರಿಸಲಾಗುವುದು' ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದರು. ಕೈಗಾರಿಕಾ ಇಲಾಖೆ ಆಯುಕ್ತ ಗುಂಜನ್ ಕೃಷ್ಣ ಗೇಲ್ ಕಾರ್ಯ ನಿರ್ವಾಹಕ ನಿರ್ದೇಶಕ (ಮಾರುಕಟ್ಟೆ) ಸುಮಿತ್ ಕಿಶೋರ್, ಕ್ರೆಡೆಲ್ ವ್ಯವಸ್ಥಾಪಕ ನಿರ್ದೇಶಕ ರುದ್ರಪ್ಪಯ್ಯ ಅವರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

# ಬೆಂಗಳೂರಿನಲ್ಲಿ 4 ನೇ ರೈಲ್ವೆ ಟರ್ಮಿನಲ್ ನಿರ್ಮಾಣ

## ರೈಲ್ವೆ ಅಂತಿಮ ಸ್ಥಳ ಸಮೀಕ್ಷೆಗೆ ಅನುಮೋದನೆ, 2ನೇ ಆಧುನಿಕ ಟರ್ಮಿನಲ್ ಇದಾಗಲಿದೆ

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿ ನಾಲ್ಕನೇ ರೈಲ್ವೆ ಟರ್ಮಿನಲ್ ನಿರ್ಮಿಸುವ ಪ್ರಸ್ತಾವನೆಗೆ ಚಾಲನೆ ದೊರೆತಿದ್ದು, ಈ ಮಹತ್ವಾಕಾಂಕ್ಷೆಯ ಯೋಜನೆಗಾಗಿ ರೈಲ್ವೆ ಅಂತಿಮ ಸ್ಥಳ ಸಮೀಕ್ಷೆಗೆ ಅನುಮೋದನೆ ನೀಡಿದೆ. ಅಂದಾಜು 1.35 ಕೋಟಿ ರೂ. ವೆಚ್ಚದ ಈ ಸಮೀಕ್ಷೆಯು ಟರ್ಮಿನಲ್‌ನ ನಿಖರವಾದ ಸ್ಥಳವನ್ನು ಅಂತಿಮಗೊಳಿಸುತ್ತದೆ.

ತಾತ್ಕಾಲಿಕವಾಗಿ ದೇವನಹಳ್ಳಿ ನಿಲ್ದಾಣದ ಬಳಿ ಅಥವಾ ಯಲಹಂಕ-ದೇವನಹಳ್ಳಿ- ಚಿಕ್ಕಬಳ್ಳಾಪುರ ಕಾರಿಡಾರ್‌ನ ಸುತ್ತಮುತ್ತ ಎಲ್ಲಿಯೇ ಆಗಬಹುದು ಎಂದು ನೈಋತ್ಯ ರೈಲ್ವೆ ತಿಳಿಸಿದೆ. ಬೆಂಗಳೂರಿನ ರೈಲ್ವೆ ಜನದಟ್ಟಣೆ ಕಡಿಮೆ ಮಾಡುವುದು ಮತ್ತು ಹೆಚ್ಚುತ್ತಿರುವ ಪ್ರಯಾಣಿಕರ ಸೇವೆಗಳ ಬೇಡಿಕೆಯನ್ನು ಪೂರೈಸುವ ನಿಟ್ಟಿನಲ್ಲಿ ಈ ಟರ್ಮಿನಲ್ ಯೋಜನೆ ಮಾಡಲಾಗುತ್ತಿದೆ ಎಂದು ನೈಋತ್ಯ ರೈಲ್ವೆ ತಿಳಿಸಿದೆ.

ಬೆಂಗಳೂರಿನ ಎರಡನೇ ಆಧುನಿಕ ಟರ್ಮಿನಲ್

ಇದು ಬೆಂಗಳೂರಿನ ಎರಡನೇ ಆಧುನಿಕ ಟರ್ಮಿನಲ್ ಆಗಲಿದೆ. ಮೊದಲನೆಯದು -ಎಸ್ ಎಂವಿಟಿ ಬೆಂಗಳೂರು ಈಗಾಗಲೇ ಕಾರ್ಯನಿರ್ವಹಿಸುತ್ತಿದೆ. ಪೂರ್ವ ಮತ್ತು




ಈಶಾನ್ಯ ಭಾರತಕ್ಕೆ ಹೋಗುವ ಸುಮಾರು 50 ರೈಲುಗಳನ್ನು ಈ ಟರ್ಮಿನಲ್ ನಿರ್ವಹಿಸುತ್ತದೆ. ಬೆಂಗಳೂರು ನಗರದ ಮೂರು ಪ್ರಮುಖ ರೈಲ್ವೆ ಟರ್ಮಿನಲ್‌ಗಳು- ಕೆಎಸ್‌ಆರ್ ಬೆಂಗಳೂರು, ಯಶವಂತ ಪುರ ಮತ್ತು ಎಸ್ ಎಂವಿಟಿ ಬೆಂಗಳೂರಿನಲ್ಲಿ ಪ್ರತಿದಿನ 140 ಮೂಲ ಮತ್ತು 142 ಪಾಸ್-ಥ್ರೂ ರೈಲುಗಳು ಸಂಚರಿಸುತ್ತವೆ.

2024-25ರಲ್ಲಿ 212.06 ಮಿಲಿಯನ್ ರೈಲ್ವೆ ಪ್ರಯಾಣಿಕರು ಇಲ್ಲಿ ಪ್ರಯಾಣಿಸಿದ್ದಾರೆ. ಅದರಲ್ಲಿ 103.72 ಮಿಲಿಯನ್ ಸ್ಥಳೀಯ ಪ್ರಯಾಣಿಕರು ಸೇರಿದ್ದಾರೆ. ಮುಂದಿನ ದಿನಗಳಲ್ಲಿ ನಗರದಿಂದ ಒಟ್ಟು 210 ರೈಲುಗಳು ಹೊರಡುವ ನಿರೀಕ್ಷೆಯಿದೆ. ಹೊಸ ಟರ್ಮಿನಲ್‌ನಿಂದ

**ಬೆಂಗಳೂರಿನ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಅಶುತೋಷ್ ಕೆ ಸಿಂಗ್, ಹೊಸ ಟರ್ಮಿನಲ್‌ನ ವಿಧಾನಗಳನ್ನು ಇನ್ನೂ ರೂಪಿಸಲಾಗುತ್ತಿದೆ ಎಂದು ಹೇಳಿದರು. ಇದು ಬೃಹತ್ ಟರ್ಮಿನಲ್ ಆಗಲಿದೆ. ಯೋಜನೆಗಾಗಿ ಭೂ ಸಮೀಕ್ಷೆ ನಡೆಸಲು ನೈಋತ್ಯ ರೈಲ್ವೆಯ ನಿರ್ಮಾಣ ವಿಭಾಗವು ಸಲಹೆಗಾರರನ್ನು ನೇಮಿಸಿಕೊಂಡಿದೆ. ವೆಚ್ಚ ಸೇರಿದಂತೆ ಇತರ ವಿವರಗಳನ್ನು ಸಹ ರೂಪಿಸಲಾಗುತ್ತಿದೆ ಎಂದರು.**

**ದೇವನಹಳ್ಳಿ ಸರ್ವೆಗೆ ಅನುಮೋದನೆ**

ಪ್ರಯಾಣಿಕರಿಗೆ ದೊಡ್ಡ ಅನುಕೂಲವಾಗಲಿದೆ.

ಬೆಂಗಳೂರಿನ ರೈಲ್ವೆಯು ಸಾಕಷ್ಟು ಅಡಚಣೆಗಳನ್ನು ಎದುರಿಸುತ್ತಿದೆ. ಸಂಪೂರ್ಣವಾಗಿ ಬಳಸಲಾದ ಪಿಟ್ ಲೈನ್‌ಗಳು, ಕಿಕ್ಕಿರಿದ ಪ್ಲಾಟ್‌ಫಾರ್ಮ್‌ಗಳು, ಆಗಾಗ್ಗೆ ರೈಲು ವಿಳಂಬಗಳು, ಸಾಕಷ್ಟು ಸ್ಟೇಬಿಲಿಂಗ್ ಲೈನ್‌ಗಳಿಲ್ಲದ ಕಾರಣ ಅಡಚಣೆಗಳಾಗುತ್ತಿವೆ.

# ಬೆಳ್ಳಂದೂರು ಕೆರೆ ಅಭಿವೃದ್ಧಿಗೆ ರೂ. 79.67 ಕೋಟಿ: ಸಂಪುಟ ಅಸ್ತು

• ಉದಯವಾಹಿನಿ, ಬೆಂಗಳೂರು

ಬೆಳ್ಳಂದೂರು ಕೆರೆಯ ಅಭಿವೃದ್ಧಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಹೆಚ್ಚುವರಿಯಾಗಿ ಅಗತ್ಯ ಇರುವ 79.67 ಕೋಟಿಯ ಪೈಕಿ ಶೇಕಡ 25ರಷ್ಟು ಮೊತ್ತವನ್ನು ಬಿಡಿಎ ಕೆರೆ ಪುನಶ್ಚೇತನ ಶುಲ್ಕ ಒಳಗೊಂಡಂತೆ ಇತರ ಸ್ವಂತ ಆರ್ಥಿಕ ಸಂಪನ್ಮೂಲಗಳಿಂದ ಭರಿಸಲು ಸೂಚಿಸಿ, ಶೇ 75ರಷ್ಟು ಅನುದಾನವನ್ನು ಸರ್ಕಾರದಿಂದ ಮಂಜೂರು ಮಾಡಲು ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ. ಬೆಳ್ಳಂದೂರು ಕೆರೆಯ ಸಮಗ್ರ ಅಭಿವೃದ್ಧಿಗೆ ಹೆಚ್ಚುವರಿ ಹಣ ಅಗತ್ಯ ಇದ್ದರೆ ಪ್ರತ್ಯೇಕವಾಗಿ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಬೇಕು ಎಂದು ರಾಷ್ಟ್ರೀಯ ಹಸಿರು ನ್ಯಾಯ ಮಂಡಳಿ ಸೂಚಿಸಿತ್ತು.

ಬೆಳ್ಳಂದೂರು ಕೆರೆಯ ಪುನಶ್ಚೇತನ ಮತ್ತು ಅಭಿವೃದ್ಧಿ ಕಾಮಗಾರಿಗೆ 79.67 ಕೋಟಿ ಹೆಚ್ಚುವರಿ ಅನುದಾನ ಅಗತ್ಯವಿದೆ ಎಂದು ನಗರಾಭಿವೃದ್ಧಿ ಇಲಾಖೆಯು ಪ್ರಸ್ತಾವ ಸಲ್ಲಿಸಿತ್ತು ಎಂದು ಸಚಿವ ಸಂಪುಟ ಸಭೆಯ ಬಳಿಕ ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ಬೆಂಗಳೂರು ನಗರದ ವೃಷಭಾವತಿ ವ್ಯಾಲಿಯಿಂದ ದ್ವಿತೀಯ ಹಂತದಲ್ಲಿ ಸಂಸ್ಕರಿಸಿದ 308 ಎಂಎಲ್‌ಡಿ ನೀರಿನಿಂದ 259 ಕೆರೆಗಳನ್ನು ತುಂಬಿಸುವ ಮೂಲ ಯೋಜನೆಯ ಪೈಕಿ, ಲಿಫ್ಟ್-4 ಗೋಪಾಲಪುರ ಕೆರೆಯಿಂದ ನೆಲಮಂಗಲ ಮತ್ತು ದೊಡ್ಡಬಳ್ಳಾಪುರ ತಾಲ್ಲೂಕಿನ 41 ಕೆರೆಗಳಿಗೆ ನೀರು ತುಂಬಿಸುವ ರೂ. 280 ಕೋಟಿ (ವಿಶ್ವಬ್ಯಾಂಕ್ ಠೇವಣಿ ಕೊಡುಗೆ 250 ಕೋಟಿ, ರಾಜ್ಯ ಸರ್ಕಾರದ ರೂ.30 ಕೋಟಿ) ಅಂದಾಜು ಮೊತ್ತದ ಯೋಜನೆಗೂ ಸಭೆ ಅನುಮೋದನೆ ನೀಡಿದೆ' ಎಂದು ಅವರು ತಿಳಿಸಿದರು.

# ಅಸ್ತಿತ್ವ ಕಳೆದುಕೊಳ್ಳಲಿರುವ ಬಿಬಿಎಂಪಿ: ಮೇ 15ರಿಂದ ಗ್ರೇಟರ್ ಬೆಂಗಳೂರು ಜಾರಿ

• ಉದಯವಾಹಿನಿ, ಬೆಂಗಳೂರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಮೇ 15ರಿಂದ ಅಸ್ತಿತ್ವ ಕಳೆದುಕೊಳ್ಳಲಿದ್ದು, 'ಗ್ರೇಟರ್ ಬೆಂಗಳೂರು ಪ್ರದೇಶ' ಎಂದು ಬದಲಾಗಲಿದೆ. ಮೇ 15 ರಂದು ಅಧಿಸೂಚನೆ ಹೊರಡಿಸಲು ಸಚಿವ ಸಂಪುಟ ಅನುಮೋದನೆ ನೀಡಿದ್ದರಿಂದ, ಅದು ಈಗ ಗ್ರೇಟರ್ ಬೆಂಗಳೂರು ಪ್ರಾಧಿಕಾರವಾಗಲಿದೆ.




ಅಸ್ತಿತ್ವದಲ್ಲಿರುವ ಪ್ರದೇಶವನ್ನು ಮೂರು ಅಥವಾ ಹೆಚ್ಚಿನ ನಿಗಮಗಳಾಗಿ ವಿಭಜಿಸುವುದು ಮತ್ತು ವಾರ್ಡ್‌ಗಳ ಡಿಲಿಮಿಟೇಶನ್ ಮತ್ತು ಮೀಸಲಾತಿ ಸೇರಿದಂತೆ ಮುಂದಿನ ದಿನಗಳಲ್ಲಿ ನಿರ್ಧರಿಸಲಾಗುವುದು. ಇದರರ್ಥ ಬಿಬಿಎಂಪಿಗೆ ಚುನಾವಣೆಗಳು ಶೀಘ್ರದಲ್ಲೇ ನಡೆಯುವುದಿಲ್ಲ ಎಂದು ಹೇಳಲಾಗುತ್ತಿದೆ. ಹಿರಿಯ ಐಎಎಸ್ ಅಧಿಕಾರಿ ಮಹೇಶ್ವರ ರಾವ್ ಅವರನ್ನು ಬಿಬಿಎಂಪಿಯ ಮುಖ್ಯ ಆಯುಕ್ತರನ್ನಾಗಿ ಇತ್ತೀಚೆಗೆ ನೇಮಿಸಿರುವುದು ನಿಗಮವನ್ನು ವಿಭಜಿಸುವ ಯೋಜನೆಯ ಭಾಗವಾಗಿದೆ ಎಂದು ಸರ್ಕಾರಿ ಮೂಲಗಳು ತಿಳಿಸಿವೆ. ಸರ್ಕಾರ ಈಗ ಸಮಿತಿಯನ್ನು ರಚಿಸಲಿದೆ, ಇದು ವಾರ್ಡ್‌ಗಳ ಡಿಲಿಮಿಟೇಶನ್ ಬಗ್ಗೆ ಅಧ್ಯಯನ ಮಾಡುತ್ತದೆ

ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ 2024 ಜಾರಿಯಾದ ಮೇಲೆ ಮುಖ್ಯಮಂತ್ರಿಯವರ ನೇತೃತ್ವದ 'ಗ್ರೇಟರ್ ಬೆಂಗಳೂರು ಪ್ರಾಧಿಕಾರ' (ಜಿಬಿಎ) 120 ದಿನಗಳಲ್ಲಿ ರಚನೆಯಾಗಬೇಕು. ಪ್ರಾಧಿಕಾರದಲ್ಲಿ ಬೆಂಗಳೂರು ಅಭಿವೃದ್ಧಿ ಸಚಿವರು ಉಪಾಧ್ಯಕ್ಷರಾಗಿರುತ್ತಾರೆ. ಗ್ರೇಟರ್ ಬೆಂಗಳೂರು ವ್ಯಾಪ್ತಿಯ ಶಾಸಕರು ಸಚಿವರು, ನಗರಾಭಿವೃದ್ಧಿ ಸಚಿವರು, ಪಾಲಿಕೆಗಳ ಮೇಯರ್‌ಗಳು, ಬಿಡಿಎ ಆಯುಕ್ತ, ಬೆಂಗಳೂರು ಜಲಮಂಡಳಿ ಅಧ್ಯಕ್ಷ,

**ಬಿಬಿಎಂಪಿಯನ್ನು ಜಿಬಿಎ ಎಂದು ಅಧಿಸೂಚಿಸುವವರೆಗೂ ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ 2024 ಜಾರಿಗೆ ಬರಲು ಸಾಧ್ಯವಿಲ್ಲ. ಈ ಕಾಯ್ದೆ ಅನುಷ್ಠಾನಕ್ಕೆ ತರಲು ಹಾಗೂ ಗ್ರೇಟರ್ ಬೆಂಗಳೂರು ಪ್ರದೇಶವನ್ನು ವಿಸ್ತರಿಸಲು ಅಧಿಸೂಚನೆ ಹೊರಡಿಸಲು ಸಚಿವ ಸಂಪುಟ ಸಭೆಯಲ್ಲಿ ಶುಕ್ರವಾರ ಅನುಮೋದನೆ ದೊರೆತಿದೆ ಎಂದು ಕಾನೂನು ಸಚಿವ ಎಚ್.ಕೆ. ಪಾಟೀಲ್ ಅವರು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.**

ಬಿಎಂಟಿಸಿ, ವ್ಯವಸ್ಥಾಪಕ ನಿರ್ದೇಶಕ, ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕ, ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರು ಸದಸ್ಯರಾಗಿರುತ್ತಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಸದಸ್ಯ ಕಾರ್ಯದರ್ಶಿಯಾಗಿರುತ್ತಾರೆ. 2007 ರಲ್ಲಿ ಬಿಬಿಎಂಪಿ ರಚಿಸಲಾಯಿತು ಮತ್ತು 2010 ರಲ್ಲಿ ಸ್ಥಳೀಯ ಚುನಾವಣೆಗಳು ನಡೆದವು. ಅದರ ನಂತರ ಬಿಬಿಎಂಪಿ ಕೌನ್ಸಿಲ್‌ನ ಎರಡು ಅವಧಿಗಳು ಮಾತ್ರ ನಡೆದಿವೆ. ಸೆಪ್ಟೆಂಬರ್ 2020 ರಿಂದ ಯಾವುದೇ ಚುನಾವಣೆಗಳು ನಡೆದಿಲ್ಲ ಮತ್ತು ರಾಜ್ಯದ ರಾಜಧಾನಿಯನ್ನು ಸರ್ಕಾರದಿಂದ ನೇಮಕಗೊಂಡ ಮುಖ್ಯ ಆಯುಕ್ತರು ಮತ್ತು ಬಿಬಿಎಂಪಿ ಆಡಳಿತಾಧಿಕಾರಿಗಳು ನಿರ್ವಹಿಸುತ್ತಿದ್ದಾರೆ. ಹೊಸದಾಗಿ ರಚಿಸಲಾದ ನಿಗಮಗಳು ಕಟ್ಟಡಗಳು ಮತ್ತು ನಿವೇಶನಗಳ ಮೇಲೆ ತೆರಿಗೆ ಮತ್ತು ಸೇವಾ ಶುಲ್ಕ, ಮನರಂಜನಾ ತೆರಿಗೆ, ಜಾಹೀರಾತು ಶುಲ್ಕ, ವೃತ್ತಿಗಳು ಮತ್ತು ವ್ಯಾಪಾರಗಳ ಮೇಲಿನ ತೆರಿಗೆ ಮತ್ತು ಘನತ್ಯಾಜ್ಯ ನಿರ್ವಹಣೆ, ಮೂಲಸೌಕರ್ಯ, ನಗರ ಭೂ ಸಾರಿಗೆ ಮತ್ತು ಇತರವುಗಳ ಮೇಲಿನ ಸೆಸ್‌ಗಳನ್ನು ವಿಧಿಸುವ ಅಧಿಕಾರವನ್ನು ಹೊಂದಿರುತ್ತವೆ.

# ಪೋರ್ಟ್ ಧ್ವಂಸ ಮಾಡಿದ್ದೇವೆ: ಮತ್ತೆ ಪಾಕ್ ಫುಲ್ ಟ್ರೋಲ್

• ಉದಯವಾಹಿನಿ, ಬೆಂಗಳೂರು

ಭಾರತ ಪಾಕಿಸ್ತಾನದ ಮಧ್ಯೆ ದಾಳಿ ಆರಂಭವಾದ ಬಳಿಕ ಸಾಮಾಜಿಕ ಜಾಲತಾಣದಲ್ಲಿ ವಿಪರೀತ ಸುಳ್ಳು ಸುದ್ದಿಗಳು ಹರಿದಾಡಲು ಆರಂಭವಾಗಿದೆ. ಅದರಲ್ಲೂ ಪಾಕ್‌ನ ಒಬ್ಬಾತ ಬೆಂಗಳೂರಿನ ಬಂದರನ್ನು ಪಾಕಿಸ್ತಾನ ಧ್ವಂಸ ಮಾಡಿದೆ ಎಂದು ಸಾಮಾಜಿಕ ಜಾಲತಾಣ ದಲ್ಲಿ ಬರೆದುಕೊಂಡಿದ್ದಾನೆ.

**Bangalore Port destroyed By Pakistan Navy** ಎಂದು ಬರೆದು ಪಾಕ್ ರಾಷ್ಟ್ರಧ್ವಜ ಚಿಹ್ನೆಯನ್ನು ಹಾಕಿ ಟೈಪಿಸಿದ್ದಾನೆ. ಈ ಪೋಸ್ಟ್‌ನ ಸ್ಕ್ರೀನ್ ಶಾಟ್ ಈಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ.

ಇನ್ನೊಬ್ಬ ಪಾಟ್ನಾದ ಬಂದರನ್ನು ಪಾಕಿಸ್ತಾನ ನೌಕಾ ಸೇನೆ ಧ್ವಂಸ ಮಾಡಿದೆ ಎಂದು ಪೋಸ್ಟ್ ಮಾಡಿದ್ದಾನೆ. ಸಾಮಾಜಿಕ ಜಾಲತಾಣದಲ್ಲಿ ಈ ಸ್ಕ್ರೀನ್ ಶಾಟ್‌ಗೆ ಬಗೆ ಬಗೆಯ ಕಮೆಂಟ್‌ಗಳು ಬರುತ್ತಿದೆ.




ಪೋರ್ಕಿಸ್ತಾನಕ್ಕೆ ಮಾತ್ರ ಗೋಚರಿಸುವ ಬೆಂಗಳೂರಿನ ಅದೃಶ್ಯದ ಬಂದರನ್ನು ಅಭಿವೃದ್ಧಿಪಡಿಸಿದ್ದಕ್ಕಾಗಿ ನಮ್ಮ ವಿಜ್ಞಾನಿಗಳಿಗೆ ಧನ್ಯವಾದಗಳು ಎಂದು ಒಬ್ಬರು ಬರೆದು ಕೊಂಡಿದ್ದಾರೆ. ಅರೆರೆ ಬೆಂಗಳೂರಿನಲ್ಲಿ ಬಂದರು ಇದ್ಯಾ ನಮ್ಮಿಂದ ಯಾಕೆ ಪೋರ್ಟ್ ಅನ್ನು ಮರೆಮಾಚಲಾಯ್ತು ಅಂತಾ ಲೇವಡಿ ಮಾಡಿ ಕಮೆಂಟ್ ಮಾಡುತ್ತಿದ್ದಾರೆ. ಕಳೆದ ರಾತ್ರಿ ಪಾಕಿಸ್ತಾನವು ಉಧಂಪುರ, ಪಠಾಣ್‌ಕೋಟ್ ಮತ್ತು ಬಟಿಂಡಾದಲ್ಲಿನ ಭಾರತೀಯ ವಾಯುನೆಲೆಗಳು ಮತ್ತು ಇತರ 23 ಭಾರತೀಯ ನಗರಗಳ ಮೇಲೆ ಇಂದು ದಾಳಿ ಮಾಡಿತ್ತು. ಕ್ಷಿಪಣಿ, ಡ್ರೋನ್ ದಾಳಿಗಳನ್ನು ಭಾರತ ತಟಸ್ಥಗೊಳಿಸಿತ್ತು. ಪಾಕ್ ಸೇನೆ ಭಾರತದ ನಾಗರಿಕರು, ಆಸ್ಪತ್ರೆ, ಶಾಲೆಗಳನ್ನು ಗುರಿಯಾಗಿಸಿ ದಾಳಿ ನಡೆಸುತ್ತಿವೆ.

ಪ್ರಯಾಣಿಕ ವಿಮಾನವನ್ನು ಗುರಾಣಿಯನ್ನಾಗಿ ಬಳಸಿಕೊಳ್ಳುತ್ತಿದೆ. ಪಾಕಿಸ್ತಾನ ಶೆಲ್ ದಾಳಿ ನಡೆಸಿ ಅಮಾಯಕರನ್ನ ಗುರಿ ಮಾಡುತ್ತಿದೆ. ಈ ಹಿನ್ನೆಲೆಯಲ್ಲಿ ಗಡಿ ಜಿಲ್ಲೆಗಳಾದ ಜಮ್ಮು ಮತ್ತು ಕಾಶ್ಮೀರ, ಪಂಜಾಬ್, ರಾಜಸ್ಥಾನ, ಹರಿಯಾಣ ಹಾಗೂ ಹಿಮಾಚಲ ಪ್ರದೇಶದಲ್ಲಿ ಗಡಿ ಭಾಗದಲ್ಲಿ ತುರ್ತು ಪರಿಸ್ಥಿತಿ ಹೇರಲಾಗಿದೆ. ಜಮ್ಮು-ಕಾಶ್ಮೀರದಲ್ಲಿ ಬೆಳಗ್ಗಿನವರೆಗೂ ಬ್ಲ್ಯಾಕ್‌ಔಟ್ ಘೋಷಿಸಲಾಗಿತ್ತು. ಷಭಾರತ ನಡೆಸಿದ ವಾಯುದಾಳಿಯಲ್ಲಿ ಸಿಯಾಲ್‌ಕೋಟ್, ಪಸ್ರೂರ್ ರಾಡಾರ್ ಸೈಟ್, ರಹೀಮ್ ಯಾರ್ ಖಾನ್, ಮುರಿದ್, ರಫೀಕ್, ಚುನಿಯನ್, ಚಕ್ಲಾಲಾ, ಸುಕ್ಕೂರ್ ಮೊದಲಾದ ಪಾಕಿಸ್ತಾನ ವಾಯುನೆಲೆಗಳನ್ನು ಧ್ವಂಸಗೊಳಿಸಿದೆ. ಜೊತೆಗೆ ಭಾರತದ ಮೇಲೆ ಪದೇ ಪದೇ ದಾಳಿಗೆ ಯತ್ನಿಸುತ್ತಿದ್ದ ಡ್ರೋನ್ ಲಾಂಚ್‌ಪ್ಯಾಡನ್ನೇ ಉಡೀಸ್ ಮಾಡಿದೆ.

# ಭಯೋತ್ಪಾದನೆ ವಿರುದ್ಧ ಯೋಧರು ಹೋರಾಡುತ್ತಿರುವಾಗ ನನ್ನ ಜನ್ಮದಿನಾಚರಣೆ ಬೇಡ

• ಉದಯವಾಹಿನಿ, ಬೆಂಗಳೂರು

ಭಯೋತ್ಪಾದನೆ ವಿರುದ್ಧ ನಮ್ಮ ಯೋಧರು ಪ್ರಾಣ ಪಣಕ್ಕಿಟ್ಟು ಹೋರಾಡುತ್ತಿರುವ ಈ ಸೂಕ್ಷ್ಮ ಸಂದರ್ಭದಲ್ಲಿ ಮೇ 15 ರಂದು ಯಾರೂ ನನ್ನ ಜನ್ಮ ದಿನಾಚರಣೆ ಮಾಡುವುದು ಬೇಡ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮನವಿ ಮಾಡಿದ್ದಾರೆ.

ನನ್ನ ಜನ್ಮದಿನದ ಹೆಸರಿನಲ್ಲಿ ಯಾರೊಬ್ಬರೂ ಸಂಭ್ರಮಾಚರಣೆ ಮಾಡಬಾರದು. ಅಂದು ನಾನು ಊರಿನಲ್ಲಿ ಇರುವುದಿಲ್ಲ. ಅಂದು ನನ್ನನ್ನು ಭೇಟಿ ಮಾಡಲು ಯಾರೂ ನನ್ನ ನಿವಾಸ, ಕಚೇರಿಗೆ ಬರುವುದು ಬೇಡ. ಯಾರೂ ಅನ್ಯತಾ ಭಾವಿಸಬಾರದು.



ಪರಿಸ್ಥಿತಿಯನ್ನು ಅರ್ಥ ಮಾಡಿಕೊಂಡು ಸಹಕರಿಸಬೇಕು ಎಂದು ಡಿ ಕೆ ಶಿವಕುಮಾರ್ ಅವರು ಮಾಧ್ಯಮ ಹೇಳಿಕೆಯಲ್ಲಿ ವಿನಂತಿ ಮಾಡಿದ್ದಾರೆ. ಜನ್ಮದಿನದ ಶುಭ ಕೋರುವ ಫ್ಲೆಕ್ಸ್, ಬ್ಯಾನರ್‌ಗಳನ್ನು ಹಾಕುವುದಾಗಲಿ, ಜಾಹೀರಾತುಗಳನ್ನು ನೀಡುವುದಾಗಲಿ ಮಾಡಬಾರದು ಎಂದು ಅಭಿಮಾನಿಗಳು, ಪಕ್ಷದ ನಾಯಕರು ಹಾಗೂ ಕಾರ್ಯಕರ್ತರಲ್ಲಿ ಮನವಿ ಮಾಡಿದ್ದಾರೆ. ದೇಶದ ಐಕ್ಯತೆ, ಸಾರ್ವಭೌಮತೆ ರಕ್ಷಣೆಗೆ ನಾವು ಯೋಧರ ಜತೆ ನಿಲ್ಲಬೇಕು. ಅವರು ಸುರಕ್ಷಿತವಾಗಿ ಈ ಹೋರಾಟವನ್ನು ಗೆದ್ದು ಬರಲಿ ಎಂದು ದೇವರಲ್ಲಿ ಪ್ರಾರ್ಥಿಸೋಣ ಎಂದು ತಿಳಿಸಿದ್ದಾರೆ.

# ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ವೈದ್ಯರ ನಿವೃತ್ತಿ ವಯಸ್ಸು ಏರಿಕೆ

• ಉದಯವಾಹಿನಿ, ಬೆಂಗಳೂರು

ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ವೈದ್ಯರ ನಿವೃತ್ತಿ ವಯಸ್ಸನ್ನು 60 ವರ್ಷದಿಂದ 65 ವರ್ಷಕ್ಕೆ ಹೆಚ್ಚಿಸಲು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಕಾನೂನು ಸಚಿವ ಹೆಚ್.ಕೆ.ಪಾಟೀಲ್ ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಸಚಿವ ಸಂಪುಟ ಸಭೆ ನಡೆಯಿತು.

ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಸಚಿವ ಹೆಚ್.ಕೆ.ಪಾಟೀಲ್, 1,500 ಕೋಟಿ ವೆಚ್ಚದ ಸರಗೂರಿನಿಂದ ಹೊಸಪುರಕ್ಕೆ ಬ್ರಿಡ್ಜ್ ನಿರ್ಮಾಣ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಅಂದಾಜು 90 ಕೋಟಿ ರೂ. ವೆಚ್ಚದ ಸತ್ತೇಗಾಲ ಕುಡಿವ ನೀರಿನ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಇದರಿಂದ ರಾಮನಗರ, ಮಾಗಡಿ, ಕುಣಿಗಲ್ ತಾಲ್ಲೂಕುಗಳಿಗೆ ಕುಡಿಯುವ ನೀರು ಪೂರೈಸಲಾಗುತ್ತದೆ ಎಂದರು.



ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆ ನಡೆಸುವ ಬಗ್ಗೆ ಚರ್ಚೆಯಾಗಿದೆ. ಸಮೀಕ್ಷೆ ನಡೆಸುವಂತೆ ಸಚಿವರು ಅಭಿಪ್ರಾಯ ನೀಡಿದ್ದಾರೆ. ಮುಂದಿನ ವಾರ ಸಂಪುಟ ಸಭೆಯಲ್ಲಿ ಚರ್ಚೆ ನಡೆಸಲು ನಿರ್ಧರಿಸಲಾಗಿದೆ ಎಂದು ಹೇಳಿದರು. ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ ನಂತರ ಭಾರತ-ಪಾಕಿಸ್ತಾನ ನಡುವೆ ಪರಿಸ್ಥಿತಿ ಉದ್ವಿಗ್ನಗೊಂಡ ಹಿನ್ನೆಲೆಯಲ್ಲಿ ಶನಿವಾರ (ಮೇ.10) ಸಂಜೆ 4 ಗಂಟೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಿಲ್ಲಾಧಿಕಾರಿಗಳು, ಎಸ್‌ಪಿಗಳು, ಪೊಲೀಸ್ ಆಯುಕ್ತರ ಜೊತೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಲಿದ್ದಾರೆ ಎಂದು ತಿಳಿಸಿದರು.

ಮೇ 20ರಂದು ಆಯೋಜಿಸಿದ್ದ ರಾಜ್ಯ ಸರ್ಕಾರದ ಎರಡು ವರ್ಷಗಳ ಸಾಧನಾ ಸಮಾವೇಶ ಮುಂದೂಡಲಾಗಿದೆ ಎಂದು ಮಾಹಿತಿ ನೀಡಿದರು.

# ಶಾಲೆಗಳ ಪುನರ್ ಆರಂಭಕ್ಕೆ ಸಜ್ಜಾಗದ ಶಿಕ್ಷಣ ಇಲಾಖೆ




• ಉದಯವಾಹಿನಿ, ಬೆಂಗಳೂರು

26 ನೇ ಸಾಲಿನ ಶೈಕ್ಷಣಿಕ ವರ್ಷ ಆರಂಭಕ್ಕೆ ದಿನಗಣನೆ ಆರಂಭವಾಗಿದ್ದು, ಮಕ್ಕಳು ಕೂಡ ಮತ್ತೆ ಶಾಲೆಗಳತ್ತ ಮುಖ ಮಾಡಲು ಸಜ್ಜಾಗುತ್ತಿದ್ದಾರೆ. ಆದರೆ ಶಾಲಾ ಶಿಕ್ಷಣ ಇಲಾಖೆ ಮಾತ್ರ ಶಾಲೆಗಳ ಪುನರ್ ಆರಂಭಕ್ಕೆ ಅಗತ್ಯ ಸಿದ್ಧತೆ ಮಾಡಿಕೊಂಡಂತೆ ಕಾಣುತ್ತಿಲ್ಲ. ಸರ್ಕಾರಿ ಶಾಲೆಗಳಲ್ಲಿ ಖಾಯಂ ಶಿಕ್ಷಕರ ಕೊರತೆ ಈಗಾಗಲೇ ಇದ್ದು, ಅತಿಥಿ ಶಿಕ್ಷಕರನ್ನು ನೇಮಕ ಮಾಡಲು ಸಹ ಮುಂದಾಗಿಲ್ಲ. ಇದು ಪೋಷಕರ ಆಕ್ರೋಶಕ್ಕೆ ಕಾರಣವಾಗಿದೆ.

ಇತ್ತೀಚೆಗಷ್ಟೇ ಬಿಡುಗಡೆಯಾದ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಒಟ್ಟಾರೆ ಶೇ 66 ರಷ್ಟು ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದು, ನಿರೀಕ್ಷಿತ ಮಟ್ಟ ತಲುಪಿಲ್ಲ. ಇನ್ನು ಮುಂದಿನ ಶೈಕ್ಷಣಿಕ ವರ್ಷ ಮೇ 29 ರಿಂದ ಆರಂಭವಾಗಲಿದ್ದು, ಮಕ್ಕಳು ಕೂಡ ಶಾಲೆಗಳತ್ತ ಮುಖ ಮಾಡಲು ಸಜ್ಜಾಗುತ್ತಿದ್ದಾರೆ. ಆದರೆ ಈ ಬಾರಿಯೂ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಎದುರಾಗಿದ್ದು, ಮಕ್ಕಳ ವಿದ್ಯಾಭ್ಯಾಸದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ. ಖಾಯಂ ಶಿಕ್ಷಕರ ಕೊರತೆ ಈಗಾಗಲೇ ಇದ್ದು, ಅತಿಥಿ ಉಪನ್ಯಾಸಕರ ನೇಮಕಕ್ಕೆ ಸಹ ಶಿಕ್ಷಣ ಇಲಾಖೆ ಅಗತ್ಯ ಕ್ರಮ ಇನ್ನೂ ಕೈಗೊಂಡಿಲ್ಲ. ಈ ವಿಚಾರವಾಗಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಕಳವಳ ವ್ಯಕ್ತಪಡಿಸಿದ್ದು, ಸರ್ಕಾರಿ ಶಾಲೆಗಳಲ್ಲಿ 50 ಸಾವಿರಕ್ಕೂ ಹೆಚ್ಚು ಶಿಕ್ಷಕರ ಕೊರತೆ ಇದ್ದು, ಇದನ್ನು ನೀಗಿಸುವಂತೆ ಮನವಿ ಮಾಡಿದೆ.

**ಶಾಲೆಗಳಲ್ಲಿ ಖಾಯಂ ಶಿಕ್ಷಕರ ಕೊರತೆ**

**ಕರ್ನಾಟಕ ಎಸ್‌ಎಸ್‌ಎಲ್‌ಸಿ ಶೇ. 62.14 ಫಲಿತಾಂಶ:** ಇನ್ನು ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಬಗ್ಗೆ ಪೋಷಕರ ವಲಯದಲ್ಲಿ ತೀವ್ರ ಆತಂಕ ಎದುರಾಗಿದೆ. ಶಾಲೆಗಳಲ್ಲಿ ಖಾಯಂ ಶಿಕ್ಷಕರ ಕೊರತೆ ನೀಗಿಸುವಲ್ಲಿ ಶಿಕ್ಷಣ ಇಲಾಖೆ ನಿರ್ಲಕ್ಷ್ಯ ವಹಿಸಿದ್ದು, ಇದು ಸರ್ಕಾರಿ ಶಾಲಾ ಮಕ್ಕಳ ಓದಿನ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ ಅಂತ ಹೇಳಿದ್ದಾರೆ.

ಈ ಬಗ್ಗೆ ಮಾತನಾಡಿರುವ ಪೋಷಕರ ಹೋರಾಟ ಸಮಿತಿ ಅಧ್ಯಕ್ಷ ಯೋಗಾನಂದ, ಅತಿಥಿ ಶಿಕ್ಷಕರ ನೇಮಕವು ಕೂಡ ಅವೈಜ್ಞಾನಿಕವಾಗಿದೆ, ನುರಿತ ಶಿಕ್ಷಕರ ನೇಮಕದಿಂದ ಮಾತ್ರ ಸರ್ಕಾರಿ ಶಾಲೆಗಳಲ್ಲಿ ಸುಧಾರಣೆ ಆಗಲಿದೆ ಅಂತ ಹೇಳಿದ್ದಾರೆ.

# ಸಹಜ ಸ್ಥಿತಿ ಮರಳುವವರೆಗೆ ಪೊಲೀಸರಿಗೆ ರಜೆ ನೀಡಲ್ಲ; ಪರಂ

## ರಾಜ್ಯದ ಎಲ್ಲಾ ಸ್ಥಳಗಳಲ್ಲು ನಾವು ತೀವ್ರ ಕಟ್ಟೆಚ್ಚರ ವಹಿಸಿದ್ದೇವೆ ಎಂದು ಪರಮೇಶ್ವರ ಹೇಳಿಕೆ

• ಉದಯವಾಹಿನಿ, ಬೆಂಗಳೂರು

ಭಾರತ ಮತ್ತು ಪಾಕಿಸ್ತಾನ ಉದ್ವಿಗ್ನತೆ ಹೆಚ್ಚಳವಾಗಿದ್ದು, ದೇಶದಲ್ಲಿನ ಸದ್ಯದ ಪರಿಸ್ಥಿತಿ ಸಹಜ ಸ್ಥಿತಿಗೆ ಮರಳುವವರೆಗೆ ಪೊಲೀಸರಿಗೆ ರಜೆ ನೀಡುವುದಿಲ್ಲ ಎಂದು ಗೃಹ ಸಚಿವ ಜಿ ಪರಮೇಶ್ವರ ಶನಿವಾರ ತಿಳಿಸಿದ್ದಾರೆ. ಸಿದ್ಧತೆಯನ್ನು ಪರಿಶೀಲಿಸಲು ಮುಖ್ಯಮಂತ್ರಿ ಸಂಜೆ ವಿಶೇಷ ಸಭೆ ನಡೆಸಲಿದ್ದಾರೆ. ಈ ಸಮಯದಲ್ಲಿ ಪೊಲೀಸರ ಯಾವುದೇ ರಜೆಯನ್ನು ನಾವು ಅನುಮೋದಿಸುವುದಿಲ್ಲ. ಏಕೆಂದರೆ, ಸಾಮಾನ್ಯ ಸ್ಥಿತಿ ಯಾವಾಗ ಮರಳುತ್ತದೆ ಎಂಬುದು ನಮಗೆ ತಿಳಿದಿಲ್ಲ. ಸಾಮಾನ್ಯ ಸ್ಥಿತಿ ಯಾವಾಗ ಮರಳುತ್ತದೆ ಎಂದು ಕೇಂದ್ರವು ನಮಗೆ ತಿಳಿಸುತ್ತದೆ. ಅಲ್ಲಿಯವರೆಗೆ ನಾವು ಜಾಗರೂಕರಾಗಿರಬೇಕು ಎಂದು ಇಲ್ಲಿ ಸುದ್ದಿಗಾರರಿಗೆ ತಿಳಿಸಿದರು.

ರಾಜ್ಯ ಸರ್ಕಾರವು ಎಲ್ಲೆಡೆ, ವಿಶೇಷವಾಗಿ ಕರಾವಳಿ ಪ್ರದೇಶದಲ್ಲಿ ಪರಿಣಾಮಕಾರಿಯಾಗಿ ಕೆಲಸ ಮಾಡಬೇಕಿದೆ. ಯುದ್ಧದ ಸಮಯದಲ್ಲಿ ನಮ್ಮ ಹಿಂದಿನ ಅನುಭವದಿಂದ ಕಲಿತಿದ್ದೇವೆ.




ಹೀಗಾಗಿ, ಕರಾವಳಿ ಪ್ರದೇಶಗಳಲ್ಲಿ ಭದ್ರತೆ ಬಲವಾಗಿರಬೇಕು. ಉತ್ತರ ಕನ್ನಡದಿಂದ ದಕ್ಷಿಣ ಕನ್ನಡದವರೆಗೆ ನಾವು ಸಂಪೂರ್ಣ

**ಸೂಕ್ಷ್ಮ ಸ್ಥಳಗಳಲ್ಲಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಭದ್ರತೆಯನ್ನು ಬಿಗಿಗೊಳಿಸಿದ್ದೇವೆ. ಅನುಮಾನಾಸ್ಪದ ಚಟುವಟಿಕೆಗಳು ನಡೆಯಬಹುದಾದ ಕೆಲವು ಸ್ಥಳಗಳನ್ನು ಸಹ ನಾವು ಗುರುತಿಸಿದ್ದೇವೆ. ರಾಜ್ಯದ ಎಲ್ಲಾ ಸ್ಥಳಗಳಲ್ಲು ನಾವು ತೀವ್ರ ಕಟ್ಟೆಚ್ಚರ ವಹಿಸಿದ್ದೇವೆ' ಎಂದು ಪರಮೇಶ್ವರ ಹೇಳಿದರು.**

ಕರಾವಳಿ ರೇಖೆಯ ಉದ್ದಕ್ಕೂ ಜಾಗರೂಕರಾಗಿರಬೇಕು' ಎಂದು ಸಚಿವರು ವಿವರಿಸಿದರು. ಕರಾವಳಿ ಪ್ರದೇಶದಲ್ಲಿ ಪೊಲೀಸ್, ಬಂದರುಗಳಿಂದ ನಿಯೋಜಿಸಲಾಗಿರುವ ಭದ್ರತೆ, ಭಾರತೀಯ ನೌಕಾಪಡೆ ಸೇರಿದಂತೆ ಮೂರು ಹಂತದ ಭದ್ರತೆಯನ್ನು ಒದಗಿಸಲಾಗಿದೆ. ಯಾವುದೇ ಪರಿಸ್ಥಿತಿಯನ್ನು ಎದುರಿಸಲು ರಾಜ್ಯ ಸರ್ಕಾರ ಕೈಗೊಂಡಿರುವ ಸಿದ್ಧತೆಯನ್ನು ಪರಿಶೀಲಿಸಲು ಸಿದ್ದರಾಮಯ್ಯ ಅವರು ಗೃಹ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ ಎಂದು ಅವರು ಹೇಳಿದರು. ದೇಶದಲ್ಲಿ ಯುದ್ಧದಂತಹ ಪರಿಸ್ಥಿತಿ ಉಂಟಾದಾಗ ಉಂಟಾಗಬಹುದಾದ ಯಾವುದೇ ಬಿಕ್ಕಟ್ಟನ್ನು ಎದುರಿಸಲು ಅಗತ್ಯ ವಸ್ತುಗಳು ಮತ್ತು ಇತರ ಎಲ್ಲಾ ಸಲಕರಣೆಗಳ ಲಭ್ಯತೆಯನ್ನು ಮುಖ್ಯಮಂತ್ರಿ ಪರಿಶೀಲಿಸಲಿದ್ದಾರೆ. ಆಹಾರ ಧಾನ್ಯಗಳು, ಅಗತ್ಯ ವಸ್ತುಗಳು, ನೀರು, ಆಸ್ಪತ್ರೆಗಳು, ಔಷಧಿಗಳ ಲಭ್ಯತೆಯನ್ನು ಖಚಿತ ಪಡಿಸಿಕೊಳ್ಳುವಂತಹ ಎಲ್ಲಾ ಅಗತ್ಯ ವ್ಯವಸ್ಥೆಗಳನ್ನು ಮಾಡಬೇಕಾಗಿದೆ. ಇದು ಕೇವಲ ಸಿದ್ಧತೆಯಾಗಿದೆ ಎಂದು ಪರಮೇಶ್ವರ ಹೇಳಿದರು.

ಸಭೆಯಲ್ಲಿ ಮುಖ್ಯಮಂತ್ರಿಗಳು ಹಿಂದಿನ ದಿನ ಕೇಂದ್ರ ಸರ್ಕಾರದಿಂದ ಬಂದಿರಬಹುದಾದ ಯಾವುದೇ ಇತ್ತೀಚಿನ ಸಲಹೆಯ ಬಗ್ಗೆಯೂ ಚರ್ಚಿಸುತ್ತಾರೆ. ಕೇಂದ್ರವು ಎಲ್ಲಾ ರಾಜ್ಯ ಸರ್ಕಾರಗಳಿಗೆ ಮಾರ್ಗಸೂಚಿಗಳನ್ನು ನೀಡಿದೆ. ಅದರಂತೆ ಕರ್ನಾಟಕ ಸರ್ಕಾರ ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಅವರು ಹೇಳಿದರು.

## ಪಾಕ್ ಆಕ್ರಮಿತ ಕಾಶ್ಮೀರ ಭಾರತಕ್ಕೆ ಸೇರಲಿ: ನಂಜಾವಧೂತ ಸ್ವಾಮೀಜಿ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಶಿರಾ**

ಪಾಕ್ ಆಕ್ರಮಿತ ಕಾಶ್ಮೀರ ಮತ್ತೆ ಭಾರತಕ್ಕೆ ಸೇರುವ ಮೂಲಕ ನಮ್ಮ ದೇಶದ ಭೂಪಟ ವಿಸ್ತಾರವಾಗಬೇಕು ಎಂದು ಸ್ಫಟಿಕಪುರಿ ಸಂಸ್ಥಾನ ಮಠದ ಪೀಠಾಧ್ಯಕ್ಷ ನಂಜಾವ ಧೂತ ಸ್ವಾಮೀಜಿ ಹೇಳಿದರು. ತಾಲ್ಲೂಕಿನ ದೊಡ್ಡಬಾಣಗೆರೆ ಗ್ರಾಮದಲ್ಲಿ ನಡೆದ ವೀರ ಆಂಜನೇಯ, ಶಿವ ಪಾರ್ವತಿ, ಮಹಾಗಣಪತಿ ಹಾಗೂ ನಾಗದೇವತಾ ಪ್ರತಿಷ್ಠಾಪನಾ ಮಹೋತ್ಸವದಲ್ಲಿ ಮಾತನಾಡಿದರು. ಗಡಿಯಲ್ಲಿ ಸೈನಿಕರು ಉತ್ತಮವಾಗಿ ಕೆಲಸ ಮಾಡುತ್ತಿದ್ದಾರೆ. ಇಂತಹ ಕಠಿಣ ಸಮಯದಲ್ಲಿ ಪ್ರಧಾನಿ ನೇತೃತ್ವದ ಕೇಂದ್ರ ಸರ್ಕಾರ ಕೈಗೊಂಡಿರುವ ಎಲ್ಲಾ ನಿರ್ಧಾರಗಳಿಗೂ ಪಕ್ಷಾತೀತವಾಗಿ ಕೈಜೋಡಿಸುವ ಮೂಲಕ ದೇಶದ ಸಾರ್ವಭೌಮತೆ ಎತ್ತಿಹಿಡಿದ್ದಾರೆ ಎಂದರು. ಮದಲೂರು ಕೆರೆ ತುಂಬಿದ ನಂತರ ದೊಡ್ಡಬಾಣಗೆರೆ ಕೆರೆಗೆ ಹೇಮಾವತಿ ನೀರು ಹರಿಸುವ ಬೇಡಿಕೆ ಇಟ್ಟಿದ್ದೇವೆ, ಭದ್ರಾ, ಹಾಗೂ ಹೇಮಾವತಿ ಎರಡು ನೀರು ಬರಲಿ ಎಂದರು. ಶಾಸಕ ಟಿ.ಬಿ.ಜಯಚಂದ್ರ ಮಾತನಾಡಿ, ಭದ್ರಾ ನೀರು ತರುವಾಗ ಪ್ರಕೃತಿ ಮತ್ತು ಜನರನ್ನು ಉಳಿಸಲು ಅನೇಕ ತಂತ್ರಗಳನ್ನು ಮಾಡಲಾಗುತ್ತಿದೆ. ದೊಡ್ಡಬಾಣಗೆರೆ ಕೆರೆಗೆ ಭದ್ರಾ ಮೇಲ್ದಂಡೆ ಮತ್ತು ಎತ್ತಿನಹೊಳೆ ನೀರನ್ನು ಕೊಡಲಾಗುವುದು ಎಂದರು. ವಿಧಾನ ಪರಿಷತ್ ಸದಸ್ಯ ಚಿದಾನಂದ ಎಂ.ಗೌಡ ಮಾತನಾಡಿ, ನಾಲ್ಕು ದೇವರ ಸಂಗಮದಲ್ಲಿ ಕೆರೆಯ ದಡದಲ್ಲಿ ದೇವಾಲಯ ನಿರ್ಮಾಣವಾಗಿದೆ. ಇದು ಗ್ರಾಮ ಏಳಿಗೆಗೆ ಉತ್ತಮ ಸಂದೇಶ ಸಾರುವಂತಿದೆ ಎಂದರು.

ಚಾಮುಂಡೇಶ್ವರಿ, ತ್ರಿಪುರಸುಂದರಮ್ಮಣ್ಣಿ ದೇಗುಲದ 50 ಕೋಟಿ ರೂ. ಬೆಲೆಬಾಳುವ 14 ಎಕರೆ ಜಾಗ ವಶ

## ಮೊದಲ ಹಂತದ ಕಾರ್ಯಾಚರಣೆ, ಆಸ್ತಿ ಪರಿಶೀಲನೆ

• **ಉದಯವಾಹಿನಿ, ಮೈಸೂರು**

ದೇವಾಲಯದ ಹೆಸರಿನಲ್ಲಿರುವ ಆಸ್ತಿಗಳ ಸಂರಕ್ಷಣೆಗೆ ಮುಂದಾಗಿರುವ ಚಾಮುಂಡೇಶ್ವರಿ ಅಭಿವೃದ್ಧಿ ಪ್ರಾಧಿಕಾರ, ಕಳೆದ 6 ತಿಂಗಳಿಂದ ನಡೆಸಿದ ಕಾರ್ಯಾಚರಣೆ ಫಲವಾಗಿ ಚಾಮುಂಡೇಶ್ವರಿ ದೇವಿ, ತ್ರಿಪುರಸುಂದರಮ್ಮಣ್ಣಿ ಹೆಸರಿನಲ್ಲಿದ್ದ ಅಂದಾಜು 50 ಕೋಟಿ ರೂ. ಬೆಲೆಬಾಳುವ 14 ಎಕರೆ ಜಾಗವನ್ನು ವಶಕ್ಕೆ ಪಡೆಯುವಲ್ಲಿ ಯಶಸ್ವಿಯಾಗಿದೆ.

ಮುಜರಾಯಿ ಇಲಾಖೆ ದೇವಾಲಯಗಳ ವ್ಯಾಪ್ತಿಗೆ ಬರುವ ಆಸ್ತಿಗಳನ್ನು ಸಂರಕ್ಷಿಸುವಂತೆ ಆದೇಶ ಹೊರಡಿಸಿದೆ. ಅದರಂತೆ ಕಾರ್ಯೋನ್ಮುಖವಾಗಿರುವ ಮೈಸೂರಿನ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ತನ್ನ ವ್ಯಾಪ್ತಿಗೆ ಬರುವ 24 ದೇಗುಲಗಳ ಹೆಸರಿನಲ್ಲಿರುವ ಆಸ್ತಿಗಳ ಪರಿಶೀಲನೆಗೆ ಮುಂದಾಗಿದೆ. ಮೊದಲ ಹಂತದಲ್ಲಿ ಚಾಮುಂಡೇಶ್ವರಿ ದೇವಾಲಯ, ಜ್ವಾಲಾಮುಖಿ ತ್ರಿಪುರಸುಂದರಮ್ಮಣ್ಣಿ ದೇವಸ್ಥಾನದ ವ್ಯಾಪ್ತಿಗೆ ಸೇರಿದ ಒಟ್ಟು 14 ಎಕರೆ ಒತ್ತುವರಿ ಭೂಮಿಯನ್ನು ವಶಪಡಿಸಿಕೊಳ್ಳಲಾಗಿದೆ. ಇದರಿಂದ ಅಂದಾಜು 50 ಕೋಟಿ ರೂ. ಆಸ್ತಿಯನ್ನು ಉಳಿಸಿದಂತಾಗಿದೆ' ಎಂದು ಪ್ರಾಧಿಕಾರದ ಕಾರ್ಯದರ್ಶಿ ಎಂ.ಜೆ. ರೂಪ ವಿಜಯ ಕರ್ನಾಟಕಕ್ಕೆ ತಿಳಿಸಿದರು.

**ಅನಧಿಕೃತ ಶೆಡ್‌ಗಳ ತೆರವು**

**ಚಾಮುಂಡೇಶ್ವರಿ ಹೆಸರಿನ 6.6 ಎಕರೆ ವಶ:** ಮೈಸೂರು ತಾಲ್ಲೂಕು ವರುಣ ಹೋಬಳಿ ಹಡಜನ ಗ್ರಾಮದ ಚಿಕ್ಕೇಗೌಡನ ಹುಂಡಿಯಲ್ಲಿ ಸರ್ವೆ ನಂ. 81/4 ಮತ್ತು 81/5 ರಲ್ಲಿ 6 ಎಕರೆ 6 ಗುಂಟೆ ಜಾಗ ಚಾಮುಂಡೇಶ್ವರಿ ದೇವಾಲಯದ ಹೆಸರಿನಲ್ಲಿರುವುದು ರೆವಿನ್ಯೂ ಇಲಾಖೆಯಿಂದ ಪಡೆದ ದಾಖಲೆಗಳ ಪ್ರಕಾರ ಖಾತ್ರಿ ಪಡಿಸಿಕೊಳ್ಳಲಾಯಿತು. ಅದರ ಆಧಾರದಲ್ಲಿ ಕೆಲವರು ಅನಧಿಕೃತವಾಗಿ ಶೆಡ್‌ಗಳನ್ನು ನಿರ್ಮಿಸಿಕೊಂಡಿರುವುದನ್ನು ತೆರವುಗೊಳಿಸಲಾಗಿದೆ.

**ತ್ರಿಪುರಸುಂದರಮ್ಮಣ್ಣಿಯ 4.34 ಎಕರೆ ವಶ:** ವರುಣ ಹೋಬಳಿ ಸರಕಾರಿ ಉತ್ತನಹಳ್ಳಿಯ ಸರ್ವೆ ನಂ. 163ರಲ್ಲಿ4.34 ಎಕರೆ ಜ್ವಾಲಾಮುಖಿ ತ್ರಿಪುರಸುಂದರಮ್ಮಣ್ಣಿ ದೇವಸ್ಥಾನದ ಹೆಸರಿನಲ್ಲಿದೆ.




**ಚಾಮುಂಡೇಶ್ವರಿ ಅಭಿವೃದ್ಧಿ ಪ್ರಾಧಿಕಾರದ ಹೆಸರಿನಲ್ಲಿರುವ 14 ದೇವಾಲಯಗಳ ಆಸ್ತಿಗಳ ಪರಿಶೀಲನೆ ಆರಂಭಿಸಲಾಗಿದ್ದು, ಮೊದಲ ಹಂತದಲ್ಲಿ ಚಾಮುಂಡೇಶ್ವರಿ, ಉತ್ತನಹಳ್ಳಿ ತ್ರಿಪುರಸುಂದರಮ್ಮಣ್ಣಿ ಹೆಸರಿನ 14 ಎಕರೆ ಜಾಗ ವಶಕ್ಕೆ ಪಡೆದಿದ್ದೇವೆ. ಕಾರ್ಯಾಚರಣೆ ಮುಂದುವರಿಯಲಿದೆ**
**-ಎಂ.ಜೆ.ರೂಪ, ಕಾರ್ಯದರ್ಶಿ, ಚಾಮುಂಡೇಶ್ವರಿ ಅಭಿವೃದ್ಧಿ ಪ್ರಾಧಿಕಾರ**

**ಬೆಟ್ಟದಲ್ಲಿ 3.17 ಎಕರೆ ಜಾಗ ತೆರವು**

**ಚಾಮುಂಡಿ ಬೆಟ್ಟದ ಮೇಲ್ಭಾಗದ ಮೈಸೂರು ತಾಲ್ಲೂಕು ಚಾಮುಂಡಿಬೆಟ್ಟ ಗ್ರಾಮ, ಕಸಬಾ ಹೋಬಳಿ ಸರ್ವೆ ನಂಬರ್ 27ರಲ್ಲಿಒಟ್ಟು 5.06 ಎಕರೆ ಸರಕಾರಿ ಗೋಮಾಳವಿದೆ ಎಂದು ಗುರುತಿಸಲಾಗಿದೆ. ಇದರಲ್ಲಿ 1.24 ಎಕರೆ ಜಾಗವನ್ನು ದೇವಾಲಯದ ಮೂಲ ಸೌಕರ್ಯಕ್ಕಾಗಿ ಮಂಜೂರು ಮಾಡಿದೆ. ಇದರಲ್ಲಿದಾಸೋಹ ಭವನ, ಕಲ್ಯಾಣ ಮಂಟಪ, ಅತಿಥಿಗೃಹ ನಿರ್ಮಿಸಲಾಗಿದೆ. ಗೆಸ್ಟ್ ಹೌಸ್, ಗೋಶಾಲೆ ಕಟ್ಟಲಾಗಿದೆ.**

ಕೆಲವು ಸ್ಥಳೀಯರು ಈ ಜಾಗದಲ್ಲಿಕೃಷಿ ಮಾಡುತ್ತಿದ್ದು, ಇದನ್ನು ವಶಕ್ಕೆ ಪಡೆಯಲಾಗಿದೆ. ಇದಲ್ಲದೆ ಉತ್ತನಹಳ್ಳಿ ಸರ್ವೆ ನಂ. 197/1 ರಲ್ಲಿರುವ ಎಕರೆ ಇದ್ದು, ಇದನ್ನು ತೆರವುಗೊಳಿಸಲಾಗುತ್ತಿದೆ. ಇದಲ್ಲದೇ ಹಡಜನ ಗ್ರಾಮದಲ್ಲಿ1.16 ಎಕರೆ ಜಾಗವಿರುವುದು ತಿಳಿದುಬಂದಿದ್ದು ದಾಖಲೆಗಳನ್ನು ಪರಿಶೀಲಿಸಿ ವಶಕ್ಕೆ ಪಡೆಯಲಾಗುತ್ತಿದೆ.

ಇನ್ನುಳಿದ 3.17 ಎಕರೆ ಜಾಗವನ್ನೂ ತೆರವುಗೊಳಿಸಲಾಗಿದೆ. ಇದನ್ನು ದೇವಸ್ಥಾನದ ಮೂಲ ಸೌಕರ್ಯಕ್ಕೆ ನೀಡುವಂತೆ ಜಿಲ್ಲಾಡಳಿತಕ್ಕೆ ಮನವಿ ಮಾಡಲಾಗಿದೆ. ಈ ಜಾಗದ 5 ಗುಂಟೆ ಪ್ರದೇಶದಲ್ಲಿಆಸ್ಪತ್ರೆ ನಿರ್ಮಿಸಲಾಗುತ್ತಿದೆ. ಉಳಿದುದನ್ನು ಸಾರ್ವಜನಿಕ ಉದ್ದೇಶಕ್ಕೆ ಬಳಕೆಗೆ ಪಡೆಯಲಾಗುತ್ತಿದೆ.

**ಸಾರ್ವಜನಿಕ ಉದ್ದೇಶಕ್ಕೆ ಬಳಕೆ**

## ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ತಣಿಯದ ಆಕ್ರೋಶ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿನ ಕಾಂಗ್ರೆಸ್ ಪಕ್ಷದಲ್ಲಿನ ಬೇಗುದಿ, ಶಾಸಕ ಪ್ರದೀಪ್ ಈಶ್ವರ್ ಮೇಲಿನ ಅಸಮಾಧಾನ, ಪಕ್ಷದಲ್ಲಿನ ಗುಂಪುಗಾರಿಕೆ ಮತ್ತೊಮ್ಮೆ ಸ್ಫೋಟವಾಗಿದೆ. ಚಿಕ್ಕಬಳ್ಳಾಪುರ ಹೊರ ವಲಯದ ಚದುಲಪುರ ಕ್ರಾಸ್‌ನ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ಐಎಸಿಸಿ ಪ್ರಧಾನ ಕಾರ್ಯದರ್ಶಿ ಅಭಿ ಷೇಕ್‌ದತ್ ಅವರು ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆ ಹಿನ್ನೆಲೆಯಲ್ಲಿ ಜಿಲ್ಲೆಯ ಐದೂ ವಿಧಾನಸಭಾ ಕ್ಷೇತ್ರಗಳ ಕಾಂಗ್ರೆಸ್ ಮುಖಂಡರ ಸಭೆ ನಡೆಸಿದರು.

ಮಧ್ಯಾಹ್ನದಿಂದ ಸಭೆ ಆರಂಭವಾಯಿತು. ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಸಭೆಯು ಕೊನೆಯಲ್ಲಿ ನಡೆಯಿತು. ಈ ಸಭೆಯಲ್ಲಿ ಚಿಕ್ಕಬಳ್ಳಾಪುರ ಕಾಂಗ್ರೆಸ್‌ನಲ್ಲಿನ ಜಗಳ ಮತ್ತೊಮ್ಮೆ ಬೀದಿಗೆ ಬಂದಿತು. ಖುದ್ದು ವರಿಷ್ಠ ನಾಯಕರ ಮುಂದೆಯೇ ಪಕ್ಷದಲ್ಲಿನ ಅಸಮಾಧಾನ, ಬಣ ಜಗಳ ಬಯಲಾಯಿತು.

ಡಾ.ಕೆ.ಸುಧಾಕರ್ ಅವರನ್ನು ಎದುರು ಹಾಕಿಕೊಂಡು ಪಕ್ಷ ಕಟ್ಟಿದ್ದೇವೆ. ಆದರೆ ಶಾಸಕರು ನಮ್ಮ ಕರೆ ಸ್ವೀಕರಿಸುವುದಿಲ್ಲ. ನಮ್ಮನ್ನು ದೂರವಿಟ್ಟಿದ್ದಾರೆ. ಗೆಲುವಿಗೆ ಶ್ರಮಿಸಿದವರನ್ನೇ ದೂರವಿಟ್ಟಿದ್ದಾರೆ. ಬಿಜೆಪಿ ಮತ್ತು ಜೆಡಿಎಸ್‌ನಿಂದ ಬಂದ ವರಿಗೆ ಮನ್ನಣೆ ನೀಡುತ್ತಿದ್ದಾರೆ. ಪಕ್ಷದ ಕಾರ್ಯಕರ್ತರು ನಿರಾಸೆ ಹೊಂದಿದ್ದಾರೆ. ಈಗಲೇ ಎಚ್ಚೆತ್ತು ಸರಿಪಡಿಸದಿದ್ದರೆ ಚಿಕ್ಕ ಬಳ್ಳಾಪುರದಲ್ಲಿ ಕಾಂಗ್ರೆಸ್ ನಾಶವಾಗುತ್ತದೆ ಎಂದು ಮುಖಂಡರು ಆರೋಪಿಸಿದರು.



ಈ ಬೆಳವಣಿಗೆಗಳ ನಡುವೆ ಪ್ರದೀಪ್ ಈಶ್ವರ್ ಪರವಾಗಿ ಮಾತನಾಡಲು ಮುಂದಾದ ಮಂಡಿಕಲ್, ಮಂಚೇನಹಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ನಾಗಭೂಷಣ್ ಅವರ ಮೇಲೆ ಪ್ರಮುಖ ಕಾಂಗ್ರೆಸ್ ಮುಖಂಡರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಪರಿಸ್ಥಿತಿ ಕೈ ಮಿಸಲಾಯಿಸುವ ಹಂತಕ್ಕೂ ತಲುಪಿತ್ತು. ಜೊತೆ ಮಾತನಾಡಿದ ಸಭೆಯಲ್ಲಿ ಪಾಲ್ಗೊಂಡಿದ್ದ ಕೆಲವು ಮುಖಂಡರು ನಾಗಭೂಷಣ್ ಅವರ ಮೇಲೆ ಹಲ್ಲೆಯೂ ನಡೆದಿದೆ ಎಂದು ತಿಳಿಸಿದರು. ಖುದ್ದು ನಾಗಭೂಷಣ್, ಹಲ್ಲೆ ನಡೆದಿಲ್ಲ. ಜೋರು ಜೋರಾಗಿ ಮಾತುಗಳು ಆದವು ಎಂದು ಸ್ಪಷ್ಟಪಡಿಸಿದ್ದಾರೆ. ಪ್ರದೀಪ್ ಈಶ್ವರ್‌ಗೆ ಟಿಕೆಟ್ ನೀಡಿ ಎಂದಿದ್ದ, ಅವರ ಚುನಾವಣೆಯಲ್ಲಿ ಸಕ್ರಿಯವಾಗಿ ಕೆಲಸ ಮಾಡಿದ್ದ ಕಾಂಗ್ರೆಸ್‌ನ ಪ್ರಮುಖ ಮುಖಂಡರೇ ಇಂದು ಶಾಸಕರ ವಿರುದ್ಧ ಇದ್ದಾರೆ.

ಇದು ಜಿಲ್ಲೆಯ ಕಾಂಗ್ರೆಸ್‌ನ ಎಲ್ಲರಿಗೂ ತಿಳಿದ ವಿಚಾರ. ಈ ಗುಂಪಿನಲ್ಲಿ ಜಿಲ್ಲಾ ಕಾಂಗ್ರೆಸ್ ಮಾಜಿ ಅಧ್ಯಕ್ಷರು, ಜಿ.ಪಂ ಮಾಜಿ ಸದಸ್ಯರು, ನಗರಸಭೆ ಸದಸ್ಯರು ಹೀಗೆ ದೊಡ್ಡ ಸಂಖ್ಯೆಯಲ್ಲಿಯೇ ಇದ್ದಾರೆ. ಚಿಕ್ಕಬಳ್ಳಾಪುರ ಕ್ಷೇತ್ರದಲ್ಲಿ ದಶಕಗಳಿಂದ ಕಾಂಗ್ರೆಸ್ ನಾಯಕರಾಗಿ ಗುರುತಿಸಿಕೊಂಡಿದ್ದಾರೆ. ಪ್ರದೀಪ್ ಈಶ್ವರ್ ಗೆಲುವಿನ ನಂತರ ಕಾಂಗ್ರೆಸ್ ಚಿಕ್ಕಬಳ್ಳಾಪುರದಲ್ಲಿ ಎರಡು ಬಣಗಳಾಗಿವೆ.

**ಈಗಾಗಲೇ ಪಿಎಲ್‌ಡಿ ಬ್ಯಾಂಕ್, ನಗರಸಭೆ ಮತ್ತು ಟಿಎಪಿಸಿಎಂಎಸ್ ಚುನಾವಣೆಯಲ್ಲಿ ಸೋಲು ಅನುಭವಿಸಿದ್ದೇವೆ. ಸಂಘಟನೆ ಇಲ್ಲದಿದ್ದರೆ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆಯಲ್ಲಿ ಗೆಲುವು ಸಾಧಿಸುವುದಾದರೂ ಹೇಗೆ ಎಂದರು.**

ಶಾಸಕರು ತಮಗೆ ಸ್ಪಂದಿಸುತ್ತಿಲ್ಲ. ಬಹಿರಂಗವಾಗಿಯೇ ನಮಗೆ ಮುಖಂಡರ ಅಗತ್ಯವಿಲ್ಲ ಎಂದೇ ಹೇಳುತ್ತಿದ್ದಾರೆ. ಗ್ರಾಮಗಳಿಗೆ ಭೇಟಿ ನೀಡಿದಾಗಲೂ ಸ್ಥಳೀಯ ಮುಖಂಡರಿಗೆ ತಿಳಿಸುವುದಿಲ್ಲ. ಚಿಕ್ಕಬಳ್ಳಾಪುರ ಕ್ಷೇತ್ರದಲ್ಲಿ ಕಾಂಗ್ರೆಸ್ ಸ್ಥಿತಿ ಕಷ್ಟವಾಗುತ್ತಿದೆ.

ಸಂಘಟನೆಯೂ ಇಲ್ಲ. ಪಕ್ಷದ ಕಾರ್ಯಕ್ರಮಗಳಲ್ಲಿಯೂ ಶಾಸಕರು ಪಾಲ್ಗೊಳ್ಳುವುದಿಲ್ಲ ಎಂದು ಅಭಿಷೇಕ್ ದತ್ ಬಳಿ ಮುಖಂಡರು ಅಸಮಾಧಾನ ವ್ಯಕ್ತಪಡಿಸಿದರು.

## ಹಕ್ಕಿಗಾಗಿ ಕಾರ್ಮಿಕರು ಸಂಘಟಿತರಾಗಿ: ಎಸ್‌ಐ ಶ್ರೀನಿವಾಸ್


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಶಿಡ್ಲಘಟ್ಟ**

ಕಾರ್ಮಿಕರು ತಮ್ಮ ಹಕ್ಕುಗಳನ್ನು ಪಡೆಯಲು ಸಂಘಟಿತರಾಗಬೇಕು. ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ, ಅವರನ್ನು ಸಮಾಜದಲ್ಲಿ ಸಾಧಕರನ್ನಾಗಿ ಮಾಡಬೇಕೆಂದು ಪೊಲೀಸ್ ಇನ್‌ಸ್ಪೆಕ್ಟರ್ ಎಂ. ಶ್ರೀನಿವಾಸ್ ಹೇಳಿದರು. ಸರ್ಕಾರಿ ರೇಷ್ಮೆಗೂಡು ಮಾರುಕಟ್ಟೆ, ಸರ್ಕಾರಿ ನೌಕರರು ಮತ್ತು ಜೆಸಿಐ ಅಲ್ಯೂಮಿನಿ ಕ್ಲಬ್ ವಿಜಯಪುರ ಸಹಯೋಗದಲ್ಲಿ ಶಿಡ್ಲಘಟ್ಟ ಸರ್ಕಾರಿ ರೇಷ್ಮೆಗೂಡು ಮಾರುಕಟ್ಟೆಯಲ್ಲಿ ಆಯೋಜಿಸಿದ್ದ ಕಾರ್ಮಿಕರ ದಿನಾಚರಣೆಯಲ್ಲಿ ಮಾತನಾಡಿದರು. ಕಾರ್ಮಿಕರು, ರೈತರು, ಸೈನಿಕರು ದೇಶದ ಬೆನ್ನೆಲುಬು ಇವರನ್ನು ನಿರ್ಲಕ್ಷಿಸಿದರೆ ದೇಶದ ಅಭಿವೃದ್ಧಿಗೆ ವಿಘ್ನ ಆಗಲಿದೆ ಎಂದರು. ವಿಜಯಪುರ ಜೆಸಿಐ ಕ್ಲಬ್ ಉಪಾಧ್ಯಕ್ಷ ದಿನ್ನೂರು ವೆಂಕಟೇಶ್, ರೇಷ್ಮೆಗೂಡು ಮಾರುಕಟ್ಟೆ ಉಪನಿರ್ದೇಶಕ ಉಮೇಶ್ ಗೌಡ, ರೇಷ್ಮೆ ಇಲಾಖೆಯ ಸಹಾಯಕ ನಿರ್ದೇಶಕ ತ್ಯಾಗರಾಜ್ ಮಾತನಾಡಿದರು. ಕಾರ್ಮಿಕರ ದಿನಾಚರಣೆಗೆ ಹಮಾಲಿ ಕಾರ್ಮಿಕರನ್ನು ಸನ್ಮಾನಿಸಲಾಯಿತು.


**ಸಂಕಷ್ಟದಲ್ಲಿ ರೇಷ್ಮೆ ಉದ್ಯಮ ರೇಷ್ಮೆ ಉದ್ಯಮವು ಸಂಕಷ್ಟಕ್ಕೆ ಸಿಲುಕಿದೆ. ಕಾರ್ಮಿಕರ ಕೊರತೆ ಇದೆ. ಆದರೆ ರೈತರು ಹೆಚ್ಚು ಪ್ರಮಾಣದಲ್ಲಿ ರೇಷ್ಮೆ ಉತ್ಪಾದಿಸಿದರೆ ಉದ್ಯಮವನ್ನು ಉತ್ತಮವಾಗಿ ರೂಪಿಸಬಹುದು. ಆದರೆ ಯುವ ಸಮೂಹವು ಈ ಉದ್ಯಮದಿಂದ ಹಿಂದೆ ಹೋಗುತ್ತಿರುವುದರಿಂದ ಉತ್ಪಾದನೆ ಕುಂಠಿತವಾಗಿದೆ**
**- ಉಮೇಶ್ ಗೌಡ, ರೇಷ್ಮೆಗೂಡು ಮಾರುಕಟ್ಟೆ ಉಪನಿರ್ದೇಶಕ**

## ಭಾರತ ಶಕ್ತಿಶಾಲಿಯಾಗಿದೆ; ಹೆದರುವ ಅಗತ್ಯವಿಲ್ಲ: ಡಿ.ಕೆ.ಸುರೇಶ್

• **ಉದಯವಾಹಿನಿ, ಕುಣಿಗಲ್**

ಭಾರತ ಶಕ್ತಿಶಾಲಿಯಾಗಿದೆ. ಯಾರು ಹೆದರುವ ಅಗತ್ಯವಿಲ್ಲ, ಪಾಕಿಸ್ತಾನದ ವಿರುದ್ಧ ಕೇಂದ್ರ ಸರ್ಕಾರ, ಸೈನ್ಯ ತೆಗೆದುಕೊಳ್ಳುವ ನಿರ್ಧಾರಗಳನ್ನು ಕಾಂಗ್ರೆಸ್ ಸೇರಿದಂತೆ ಭಾರತೀಯರೆಲ್ಲರೂ ಬೆಂಬಲಿಸಬೇಕಿದೆ ಎಂದು ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಮಾಜಿ ಸಂಸದ ಡಿ.ಕೆ.ಸುರೇಶ್ ಹೇಳಿದರು. ಪಟ್ಟಣದ ಜಿಕೆಬಿಎಂಎಸ್ ಮೈದಾನದಲ್ಲಿ ಶನಿವಾರ ತಾಲ್ಲೂಕು ಕಾಂಗ್ರೆಸ್ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ತ್ರಿರಂಗಾ ಮತ್ತು ಯುವ ಕಾಂಗ್ರೆಸ್ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಮಾತನಾಡಿದರು.

ಅಂದು ಉಕ್ಕಿನ ಮಹಿಳೆ ಇಂದಿರಾಗಾಂಧಿ ಪಾಕಿ ಸ್ತಾನಕ್ಕೆ ತಕ್ಕ ಪಾಠಕಲಿಸಿದ್ದರು. ಶನಿವಾರ ಮತ್ತೊಮ್ಮೆ ನರೇಂದ್ರ ಮೋದಿ ಪಾಠ ಕಲಿಸುತ್ತಿದ್ದಾರೆ. ಭಾರತೀಯ ರೆಲ್ಲೂ ಬೆಂಬಲಿಸಲೇಬೇಕಿದೆ ಎಂದರು. ಗ್ರಾಮೀಣ ಪ್ರದೇಶದ ಯುವಶಕ್ತಿಗೆ ಅವಕಾಶ ನೀಡುವ ಉದ್ದೇಶದಿಂದ ಯುವ ಕಾಂಗ್ರೆಸ್ ಪದಾಧಿಕಾರಿಗಳು ಪಕ್ಷದ ಆಂತರಿಕ ಚುನಾವಣೆ ಮೂಲಕ ಆಯ್ಕೆಯಾಗಿದ್ದು, ಹಿರಿಯ ಕಾಂಗ್ರೆಸ್ ಮುಖಂಡರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪಕ್ಷ ಸಂಘಟನೆ ಮೂಲಕ ಜನರ ಸಮಸ್ಯೆಗೆ ಸ್ಪಂದಿಸಲು ಸಲಹೆ ನೀಡಿದರು.


ಉದಯವಾಹಿನಿ ಚಿತ್ರ

**ಅಭಿವೃದ್ಧಿಗೆ ಬದ್ಧ:** ಲೋಕಸಭಾ ಚುನಾವಣೆಯಲ್ಲಿ ಸೋತ್ತಿದ್ದರೂ, ತಾಲ್ಲೂಕಿನ ಅಭಿವೃದ್ಧಿಗೆ ಬದ್ಧ. ತಾಲ್ಲೂಕಿನ ನೀರಾವರಿ ಸಮಸ್ಯೆಗೆ ಶಾಶ್ವತ ಪರಿಹಾರವಾದ ಲಿಂಕ್ ಕೆನಾಲ್ ಯೋಜನೆ ಬಗ್ಗೆ ಜೆಡಿಎಸ್, ಬಿಜೆಪಿ ಮುಖಂಡರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ ಎಂದು ಡಿಕೆ ಸುರೇಶ್ ಹೇಳಿದರು. ತಾಲ್ಲೂಕಿಗೆ ಹೇಮಾವತಿ ನೀರಿನ ವಿಚಾರದಲ್ಲಿ 25 ವರ್ಷಗಳಿಂದ ಅನ್ಯಾಯವಾಗಿದೆ. ಸರಿಪಡಿಸಲು ಲಿಂಕ್ ಕೆನಾಲ್ ಯೋಜನೆ ಅನುಷ್ಠಾನವಾಗುತ್ತಿರುವ ಸಮಯದಲ್ಲಿ ಮಾಗಡಿಗೆ ನೀರು ತೆಗೆದುಕೊಂಡು ಹೋಗಲು ಲಿಂಕ್ ಕೆನಾಲ್ ಮಾಡುತ್ತಿದ್ದಾರೆ ಎಂದು ಆರೋಪ ಮಾಡುತ್ತಿದ್ದಾರೆ. ರಾಜಕೀಯ ಉದ್ದೇಶದಿಂದ ಮಾಗಡಿಗೆ ನೀರು ತೆಗೆದುಕೊಂಡು ಹೋಗಿ ರಾಜಕೀಯ ಮಾಡುವುದಿಲ್ಲ. ಮಾಗಡಿಗೆ ಎತ್ತಿನಹೊಳೆ ಯೋಜನೆ ಮೂಲಕ ನೀರು ತೆಗೆದುಕೊಂಡು ಹೋಗುವ ಬಗ್ಗೆ ಕಾರ್ಯಕ್ರಮ ರೂಪಿತವಾಗುತ್ತಿದೆ. ಕುಣಿಗಲ್ ಪಾಲಿನ 4 ಟಿಎಂಸಿ ನೀರನ್ನು ಪಡೆದುಕೊಳ್ಳಲು ಮಾತ್ರ ಹೋರಾಟ. ಜಿಲ್ಲೆ ಇತರೆ ತಾಲ್ಲೂಕಿನವರು ಕುಣಿಗಲ್ ತಾಲ್ಲೂಕಿಗೆ ಬರುವ ನೀರನ್ನು ಸುಲಭವಾಗಿ ಪಡೆಯುತ್ತಿದ್ದಾರೆ. ಇದರಿಂದಾಗಿ ಕುಣಿಗಲ್ ತಾಲ್ಲೂಕಿಗೆ ಅನ್ಯಾಯವಾಗಿದೆ. ನೇರವಾಗಿ ನೀರನ್ನು ಪಡೆದುಕೊಳ್ಳುವ ಉದ್ದೇಶದಿಂದ ಲಿಂಕ್ ಕೆನಾಲ್‌ಗಾಗಿ ಜಿಲ್ಲೆಯ ಶಾಸಕರೊಂದಿಗೆ ಚರ್ಚಿಸಿರುವುದಾಗಿ ತಿಳಿಸಿದರು. ಕೊತ್ತಗೆರೆ ಹೋಬಳಿಗೆ 30 ಕೋಟಿ ವೆಚ್ಚದಲ್ಲಿ ಏತನೀರಾವರಿ ಯೋಜನೆ ಮೂಲಕ ನೀರನ್ನು ಹರಿಸಲು ಸಿದ್ಧತೆ ನಡೆಯುತ್ತಿದೆ ಎಂದರು.

**ಶಾಸಕ ಡಾ.ರಂಗನಾಥ್, ಯುವ ಕಾಂಗ್ರೆಸ್ ಪದಾಧಿಕಾರಿಗಳು ಸದಸ್ಯರು ಪಕ್ಷದ ಆಸ್ತಿಯಾಗಿದ್ದು, ಅಧಿಕಾರದ ದರ್ಬಾರ್ ಮಾಡದೆ ಸೇವಾ ಮನೋಭಾವದಿಂದ, ಮಾನವೀಯ ಮೌಲ್ಯ ಅಳವಡಿಸಿಕೊಂಡು ಕಾರ್ಯನಿರ್ವಹಿಸಲು ಮನವಿ ಮಾಡಿದರು. ಯುವ ಕಾಂಗ್ರೆಸ್ ನಿಕಟಪೂರ್ವ ಅಧ್ಯಕ್ಷ ಲೋಹಿತ್, ನೂತನ ಅಧ್ಯಕ್ಷ ಸಂತೋಷ್ ಅವರಿಗೆ ಅಧಿಕಾರ ಹಸ್ತಾಂತರಿಸಿದರು.**

## ದತ್ತಾಂಶ ಸಂಗ್ರಹ ಸಮೀಕ್ಷೆ ಚುರುಕುಗೊಳಿಸಿ: ಡಿಸಿ ಸೂಚನೆ

• **ಉದಯವಾಹಿನಿ, ಮಂಡ್ಯ**

ಪರಿಶಿಷ್ಟ ಜಾತಿ ಒಳಮೀಸಲಾತಿ ವರ್ಗೀಕರಣ ಕುರಿತು ನ್ಯಾಯಮೂರ್ತಿ ಎಚ್.ಎನ್. ನಾಗಮೋಹನದಾಸ್ ಏಕಸದಸ್ಯ ವಿಚಾರಣಾ ಆಯೋಗದ ನಿರ್ದೇಶನದಂತೆ ದತ್ತಾಂಶ ಶೇಖರಿಸುವ ಸಮೀಕ್ಷೆಯು ಜಿಲ್ಲೆಯಲ್ಲಿ ಮೇ 5ರಿಂದ ಪ್ರಾರಂಭವಾಗಿದ್ದು, ಶೇ 26ರಷ್ಟು ಮಾತ್ರ ಸಾಧನೆ ಯಾಗಿರುತ್ತದೆ. ಸಮೀಕ್ಷೆಯನ್ನು ಚುರುಕು ಗೊಳಿಸುವಂತೆ ಜಿಲ್ಲಾಧಿಕಾರಿ ಕುಮಾರ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶನಿವಾರ ನಡೆದ ಪರಿಶಿಷ್ಟ ಜಾತಿ ಮುಖಂಡರು, ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದರು. ಜಿಲ್ಲೆಯ ಎಲ್ಲಾ ಮನೆಗಳಿಗೂ ಭೇಟಿ ನೀಡಿ ಸಮೀಕ್ಷೆ ನಡೆಸಿ. ಯಾವುದೇ ಕಾರಣಕ್ಕೂ ಪರಿಶಿಷ್ಟ ಜಾತಿ ಕುಟುಂಬದವರು ಜಾತಿ ಗಣತಿ ಸಮೀಕ್ಷೆಯಿಂದ ಯಾರೂ ವಂಚಿತರಾಗದಂತೆ ಸಮೀಕ್ಷೆ ನಡೆಸಿ ಎಂದರು. 2011ರ ಜನಗಣತಿಯ ಪ್ರಕಾರ ಜಿಲ್ಲೆಯಲ್ಲಿ 61,423 ಪರಿಶಿಷ್ಟ ಜಾತಿಯ ಮನೆಗಳಿದ್ದು, 15,973 ಮನೆಗಳಿಗೆ ಮಾತ್ರ ಭೇಟಿ ನೀಡಿ ಸಮೀಕ್ಷೆ ನಡೆಸಲಾಗಿದೆ. ಪ್ರತಿ ದಿನ ಆಯಾ ತಾಲ್ಲೂಕಿನ ತಹಶೀಲ್ದಾರ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಪ್ರಗತಿ ಕುರಿತು ಪರಿಶೀಲನೆ ನಡೆಸಿ ಶೇ 100ರಷ್ಟು ಸಾಧನೆ ಹಾಗೂ ಆಯಾ ದಿನ ನಿಗದಿಪಡಿಸಿರುವ ಗುರಿ ಸಾಧಿಸಬೇಕು ಎಂದು ನಿರ್ದೇಶನ ನೀಡಬೇಕು ಎಂದರು.


ಉದಯವಾಹಿನಿ ಚಿತ್ರ

ಸಮೀಕ್ಷೆಗೆ 1889 ಗಣತಿದಾರರನ್ನು ನೇಮಕ ಮಾಡಲಾಗಿದೆ. ಸಮೀಕ್ಷೆ ನಡೆಸುವ ಸಂದರ್ಭದಲ್ಲಿ ತಹಶೀಲ್ದಾರ್, ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿ, ಕ್ಷೇತ್ರ ಶಿಕ್ಷಣಾಧಿಕಾರಿ, ನೋಡಲ್ ಅಧಿಕಾರಿ, ಗಣತಿದಾರರು ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳದಲ್ಲಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಪ್ರತಿದಿನದ ಸಮೀಕ್ಷೆಯ ವಿವರಗಳನ್ನು ಖುದ್ದಾಗಿ ಜಿಲ್ಲಾಡಳಿತಕ್ಕೆ ನೀಡಬೇಕು. ಮುಂದಿನ ಮೂರು ದಿನಗಳಲ್ಲಿ ಜಿಲ್ಲೆಯಲ್ಲಿರುವ ಎಲ್ಲಾ ಪರಿಶಿಷ್ಟ ಜಾತಿ ಅವರ ಮನೆಗಳಿಗೆ ಭೇಟಿ ನೀಡಿ ಸಮೀಕ್ಷೆಯನ್ನು ನಡೆಸಬೇಕು ಎಂದು ಗಡುವು ನೀಡಿದರು.

**ದತ್ತಾಂಶ ಸಂಗ್ರಹ**

**ಶೇ 26ರಷ್ಟು ಮಾತ್ರ ಸಾಧನೆ ಸಮೀಕ್ಷೆಯ ವಿವರಗಳನ್ನು ಜಿಲ್ಲಾಡಳಿತ ನೀಡಿ ಜಾತಿ ಸಮೀಕ್ಷೆಯಿಂದ ವಂಚಿತರಾಗದಂತೆ ನೋಡಿಕೊಳ್ಳಿ**

## ಮುಂಗಾರಿಗೆ ಈಗಿನಿಂದಲೇ ಇರಲಿ ಸಿದ್ಧತೆ

• **ಉದಯವಾಹಿನಿ, ಮಡಿಕೇರಿ**

ಕೊಡಗು ಜಿಲ್ಲೆಯಲ್ಲಿ ಜೂನ್ ತಿಂಗಳಲ್ಲಿ ಮುಂಗಾರು ಆರಂಭವಾಗುವ ಸಾಧ್ಯತೆ ಇದ್ದು, ವ್ಯಾಪಕ ಮಳೆಯಿಂದ ಸಂಭವಿಸಬಹುದಾದ ಅನಾಹುತವನ್ನು ತಡೆಯುವ ನಿಟ್ಟಿನಲ್ಲಿ ಅಗತ್ಯ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ಸೂಚಿಸಿದರು.

ಇಲ್ಲಿನ ಕೊಡಗು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮುಂಗಾರು ಮಳೆಗೆ ಸಂಬಂಧಿಸಿದಂತೆ ನೋಡಲ್ ಅಧಿಕಾರಿಗಳು, ಎಂಜಿನಿಯರ್‌ಗಳು ಈಗಿನಿಂದಲೇ ಅಗತ್ಯ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಲು ಸಿದ್ಧತೆ ನಡೆಸಬೇಕು ಎಂದು ಅವರು ನಿರ್ದೇಶನ ನೀಡಿದರು. ಮುಂಗಾರು ಸಂದರ್ಭದಲ್ಲಿ ಯಾವುದೇ ಬಗೆಯ ಪ್ರಾಣ ಹಾನಿ, ಜಾನುವಾರು ಹಾನಿಯಾಗದಂತೆ ಎಚ್ಚರ ವಹಿಸಬೇಕು ಎಂದರು. ಈಗಾಗಲೇ ನೋಡಲ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಅವರು ತಮ್ಮ ತಮ್ಮ ವ್ಯಾಪ್ತಿಯಲ್ಲಿ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡು ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚಿನ ನಿಗಾ ವಹಿಸಬೇಕು ಎಂದು ಹೇಳಿದರು.

ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಜನರ ಸುರಕ್ಷತೆ ಕಾಪಾಡಬೇಕು. ಅದಕ್ಕಾಗಿ ಅಗ್ನಿಶಾಮಕ ಸಿಬ್ಬಂದಿಗಳು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ಎನ್‌ಡಿಆರ್‌ಎಫ್ ತಂಡದ ಜೊತೆ ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು ಎಂದು ಅವರು ತಿಳಿಸಿದರು. ಆರೋಗ್ಯ, ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿಗಳು ಔಷಧಗಳನ್ನು ದಾಸ್ತಾನು ಮಾಡಿ ಕೊಂಡು ಮುಂಗಾರು ವೇಳೆ ಸಾಂಕ್ರಾಮಿಕ ರೋಗಗಳು ಉಲ್ಬಣಗೊಳ್ಳದಂತೆ ಎಚ್ಚರ ವಹಿಸಬೇಕು. ಮಳೆಗಾಲದಲ್ಲಿ ಹರಡುವ ಕಾಯಿಲೆಗಳ ಕುರಿತು ಹೆಚ್ಚಿನ ಜಾಗೃತಿ ಮೂಡಿಸಬೇಕು ಎಂದು ಹೇಳಿದರು. ಪೊಲೀಸ್, ಕಂದಾಯ, ಪಂಚಾಯತ್ ರಾಜ್, ಲೋಕೋಪಯೋಗಿ, ಅಗ್ನಿಶಾಮಕ ಹೀಗೆ ವಿವಿಧ ಇಲಾಖೆ ಅಧಿಕಾರಿಗಳು ತಮ್ಮ ತಮ್ಮ ಇಲಾಖಾ ವ್ಯಾಪ್ತಿಯಲ್ಲಿ ಆಗಬೇಕಿರುವ ಕಾರ್ಯಗಳ ಬಗ್ಗೆ ಅಗತ್ಯ ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಸೂಚಿಸಿದರು.

## ಸ್ಥಳೀಯ ಸಂಸ್ಥೆ ಚುನಾವಣೆಗೆ ಸಜ್ಜಾಗಿ: ಸಚಿವ

### ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಕಾರ್ಯಕರ್ತರು ಮುಂದಾಗಲಿ

• **ಉದಯವಾಹಿನಿ, ಮಳವಳ್ಳಿ**

ಜೆಡಿಎಸ್, ಬಿಜೆಪಿ ಮೈತ್ರಿಯಿಂದ ಕಳೆದ ಲೋಕಸಭಾ ಚುನಾವಣೆಯಲ್ಲಿ ನಾವು ಸೋಲು ಕಂಡಿದ್ದೇವೆ. ಹೀಗಾಗಿ ಮುಂಬರುವ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಕಾರ್ಯಕರ್ತರು ಮುಂದಾಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಕರೆ ನೀಡಿದರು. ಪಟ್ಟಣದ ಸುಲ್ತಾನ್ ರಸ್ತೆಯ ಕಾಂಗ್ರೆಸ್ ನಿವೇಶನದಲ್ಲಿ ಶನಿವಾರ ಆಯೋಜಿ ಸಿದ್ಧ 'ಸರ್ಕಾರದ ನಡೆ ಕಾರ್ಯಕರ್ತರ ಕಡೆ, ಯುವ ಕಾಂಗ್ರೆಸ್ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯ ಜನರು 2018ರಲ್ಲಿ ಏಳು ಕ್ಷೇತ್ರಗಳಲ್ಲಿ ಜೆಡಿಎಸ್ ಶಾಸಕರನ್ನು ಆಯ್ಕೆ ಮಾಡಿದ್ದರು. ನಮ್ಮ ಪಕ್ಷದ ಬೆಂಬಲದಿಂದ ಎಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿ ಜಿಲ್ಲೆಯನ್ನು ಏಕೆ ಅಭಿವೃದ್ಧಿ ಮಾಡಲು ಮುಂದಾಗಲಿಲ್ಲ, ಕೃಷಿ ಪ್ರಧಾನವಾಗಿರುವ ಮಂಡ್ಯ ಜಿಲ್ಲೆಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಕೊಡುಗೆಯಾಗಿ ನೀಡಿರುವ ವಿ.ಸಿ.ಫಾರಂನಲ್ಲಿ ಕೃಷಿ ವಿ.ವಿ ತೆರೆಯಲು ಇವರ ಅಣ್ಣ ಎಚ್.ಡಿ.ರೇವಣ್ಣ ವಿರೋಧಿಸುತ್ತಾರೆ. ಆದರೆ ಇವರು ಮಾತ್ರ ಸ್ವಾಗತ ಎನ್ನುತ್ತಾರೆ ಇದು ಯಾವ ನ್ಯಾಯ ಎಂದು ಪ್ರಶ್ನಿಸಿದರು.ಕಾಂಗ್ರೆಸ್ಸಿಗರಿಗೆ ಅನುಕಂಪ ಸೃಷ್ಟಿಸಿ ಮತ ಗಿಟ್ಟಿಸಿಕೊಳ್ಳುವುದು ಬರುವುದಿಲ್ಲ, ಜೆಡಿಎಸ್ ಹಾಗೂ ಬಿಜೆಪಿ ಮೈತ್ರಿಯಿಂದ ಕಳೆದ ಲೋಕಸಭಾ ಚುನಾವಣೆಯಲ್ಲಿ ಸೋಲು ಕಂಡಿದ್ದೇವೆ. ಎಚ್.ಡಿ. ಕುಮಾರಸ್ವಾಮಿ ಅವರಂತೆ ಬುದ್ಧಿವಂತ ರಾಜಕಾರಣ ಮಾಡುವುದು ನಮಗೆ ಸಾಧ್ಯವಿಲ್ಲ, ಜಿಲ್ಲೆಯಲ್ಲಿನ ಬಿಜೆಪಿ ಶಕ್ತಿ ಬಳಸಿಕೊಂಡು ಗೆದ್ದರು ಎಂದು ಹೇಳಿದರು.

ಮಳವಳ್ಳಿಯ ಏಳು ಜಿಲ್ಲಾ ಪಂಚಾಯಿತಿ, ಶೇ 80ರಷ್ಟು ತಾಲ್ಲೂಕು ಪಂಚಾಯಿತಿ ಚುನಾವಣೆಯಲ್ಲಿ ನಮ್ಮ ಅಭ್ಯರ್ಥಿಗಳು ಗೆಲುವು ಕಾಣಬೇಕು. ಅದಕ್ಕಾಗಿ ಎಲ್ಲರೂ ಇಂದಿನಿಂದಲೇ ಸಿದ್ಧರಾಗಬೇಕು ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಪಿ.ಎಂ.ನರೇಂದ್ರಸ್ವಾಮಿ ಮಾತನಾಡಿ, ವಿವೇಚನೆ ಹಾಗೂ ತಿಳಿವಳಿಕೆ ಇಲ್ಲದ, ಅಧಿಕಾರವಿದ್ದಾಗ ಏನೂ ಅಭಿವೃದ್ಧಿ ಮಾಡದ ಅಸಮರ್ಥ ಮಾಜಿ ಶಾಸಕ ನನ್ನ ಯೋಜನೆಗಳ ಬಗ್ಗೆ ಜನರಿಗೆ ತಪ್ಪು ಮಾಹಿತಿ ನೀಡುತ್ತಾರೆ ಎಂದು ಮಾಜಿ ಶಾಸಕ ಕೆ.ಅನ್ನದಾನಿ ಹೆಸರೇಳದೆ ವಾಗ್ದಾಳಿ ನಡೆಸಿದರು.

ಶಾಸಕರಾದ ರಮೇಶ್ ಬಾಬು ಬಂಡಿಸಿದ್ದೇಗೌಡ, ದಿನೇಶ್ ಗೂಳಿಗೌಡ, ಮೈಷುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಮಾಜಿ ಉಪ ಸಭಾಪತಿ ಮರಿತಿಬ್ಬೇಗೌಡ, ಮಾಜಿ ಶಾಸಕ ಬಿ.ಸಿ. ಚಂದ್ರಶೇಖರ್, ಡಿಸಿಸಿ ಬ್ಯಾಂಕ್ ಅಧ್ಯಕ್ಷ ಕೆ.ಸಿ. ಜೋಗಿಗೌಡ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷ ಚಿಕ್ಕಲಿಂಗಯ್ಯ, ಮನ್‌ಮುಲ್ ನಿರ್ದೇಶಕರಾದ ಅಪ್ಪಾಜಿಗೌಡ, ಡಿ.ಕೃಷ್ಣಗೌಡ, ಆರ್.ಎನ್.ವಿಶ್ವಾಸ್ ಪಾಲ್ಗೊಂಡಿದ್ದರು.


ಉದಯವಾಹಿನಿ ಚಿತ್ರ

**ನಮ್ಮ ಅಭ್ಯರ್ಥಿಗಳು ಗೆಲುವು ಕಾಣಬೇಕು**

**ಮೈತ್ರಿ ಪಕ್ಷಗಳನ್ನು ಸೋಲಿಸಲು ಸಂಘಟಿತರಾಗಿ**

**'ಪಕ್ಷ ಮತ್ತು ಕಾರ್ಯಕರ್ತರಿಂದಲೇ ಸಚಿವ ಎಂಎಲ್‌ಎ ಆಗಲು ಸಾಧ್ಯ. ಕಾರ್ಯಕರ್ಯರು ಮಾತನಾಡಬೇಕು. ಅವರಿಗೆ ಸ್ಪಂದಿಸುವ ಕೆಲಸವನ್ನು ಜನಪ್ರತಿನಿಧಿಗಳು ಮಾಡಬೇಕು ಎನ್ನುವುದು ಸರ್ಕಾರದ ಆಶಯವಾಗಿದೆ. ಮಂಡ್ಯ ಅಭಿವೃದ್ಧಿಯತ್ತ ಸಾಗುತ್ತಿದೆ ಎನ್ನುವುದು ರಾಜ್ಯಕ್ಕೆ ತಿಳಿಯಬೇಕಿದೆ. ಜಾತ್ಯತೀತ ಪಕ್ಷ ಎಂದುಕೊಂಡಿದ್ದ ಪಕ್ಷ ಕೋಮುವಾದಿ ಪಕ್ಷಕ್ಕೆ ಸೇರ್ಪಡೆಯಾಗಿರುವುದರಿಂದ ಮೈತ್ರಿ ಪಕ್ಷವನ್ನು ಸೋಲಿಸಲು ಒಗ್ಗಟ್ಟಿನಿಂದ ಪಕ್ಷ ಸಂಘಟನೆ ಮಾಡಬೇಕು' ಎಂದು ರಾಜ್ಯಸಭಾ ಸದಸ್ಯ ಜಿ.ಸಿ.ಚಂದ್ರಶೇಖರ್ ಕರೆ ನೀಡಿದರು.**

## ಮಿನಿ ನ್ಯೂಸ್

### ಕಳ್ಳನ ಬಂಧನ

• **ಉದಯವಾಹಿನಿ, ಮುಳಬಾಗಿಲು**

ಸುಮಾರು ನಾಲ್ಕೂವರೆ ತಿಂಗಳ ಹಿಂದೆ ಕಳ್ಳತನ ಮಾಡಿದ್ದ ಆರೋಪಿಯನ್ನು ವಶಕ್ಕೆ ಪಡೆದು ಆತನಿಂದ ಚಿನ್ನಾಭರಣ, ನಗದನ್ನು ವಶಪಡಿಸಿಕೊಂಡಿರುವ ಘಟನೆ ಶನಿವಾರ ನಡೆದಿದೆ. ಬಂಗಾರಪೇಟೆ ತಾಲ್ಲೂಕಿನ ಕಣಬೆಳ್ಳಿ ಗ್ರಾಮದ ವೆಂಕಟೇಶ್ (47) ಆರೋಪಿ. ಡಿಸೆಂಬರ್ 25, 2024ರಂದು ಆತ ಮುಳಬಾಗಿಲು ತಾಲ್ಲೂಕಿನ ಉತ್ತನೂರು ಗ್ರಾಮದ ಜಯಮ್ಮ ಎಂಬು ವವರ ಮನೆಗೆ ನುಗ್ಗಿ, ಬೀರುವಿನಲ್ಲಿದ್ದ 50 ಸಾವಿರ ಹಣ, 25 ಗ್ರಾಂ ಬಂಗಾರದ ಕಿವಿ ಓಲೆ, ಚಿನ್ನದ ಸರವನ್ನು ದೋಚಿ ಪರಾರಿಯಾಗಿದ್ದ. ಈ ಸಂಬಂಧ ಮುಳಬಾಗಿಲು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್ ಬಿ., ಹೆಚ್ಚುವರಿ ವರಿಷ್ಠಾಧಿಕಾರಿಗಳಾದ ರವಿಶಂಕರ್, ಜಗದೀಶ್ ಮಾರ್ಗ ದರ್ಶನದಲ್ಲಿ ಡಿವೈಎಸ್‌ಪಿ ಡಿ.ಸಿ.ನಂದಕುಮಾರ್, ಸರ್ಕಲ್ ಇನ್‌ಸ್ಪೆಕ್ಟರ್ ಕೆ.ಜಿ.ಸತೀಶ್ ಕುಮಾರ್ ಸೂಚನೆಯಂತೆ ಸಬ್ ಇನ್‌ಸ್ಪೆಕ್ಟರ್ ಅರುಣ್ ಗೌಡ ಪಾಟೀಲ್, ಎಲ್. ಮಮತಾ, ಸತೀಶ್, ಲಕ್ಷ್ಮಿನಾರಾಯಣ, ನಾಗಾರ್ಜುನ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಶನಿವಾರ ಬಂಧಿಸಿದ್ದಾರೆ. ಬಂಧಿತನನ್ನು ವಿಚಾರಣೆ ನಡೆಸಿದಾಗ ಒಟ್ಟು ಮೂರು ಕಡೆ ಕಳ್ಳತನ ಮಾಡಿರುವುದಾಗಿ ಹೇಳಿಕೊಂಡಿದ್ದಾನೆ. ಬಂಧಿತನಿಂದ 60 ಗ್ರಾಂ ಬಂಗಾರದ ಆಭರಣಗಳು, 20 ಸಾವಿರ ನಗದು ವಶಪಡಿಸಿಕೊಳ್ಳಲಾಗಿದ್ದು, ಕಳ್ಳತನ ಮಾಡಿದ ಒಟ್ಟು ಆಭರಣಗಳ ಮೌಲ್ಯ 6 ಲಕ್ಷ ಎಂದು ಎಂದು ಪೊಲೀಸರು ಅಂದಾಜಿಸಿದ್ದಾರೆ. ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

### ಯುವಕನ ಮೇಲೆ ಮಾರಕಾಸ್ತ್ರದಿಂದ ಹಲ್ಲೆ

• **ಉದಯವಾಹಿನಿ, ಮಂಡ್ಯ**

ಹಳೇ ದ್ವೇಷದ ಹಿನ್ನೆಲೆಯಲ್ಲಿ ಐದು ಯುವಕರ ಗುಂಪು ವ್ಯಕ್ತಿ ಮೇಲೆ ಮಾರಕಾಸ್ತ್ರಗಳಿಂದ ಮಾರ ಣಾಂತಿಕವಾಗಿ ಹಲ್ಲೆ ನಡೆಸಿರುವ ಘಟನೆ ನಗರದ ಉದಯಗಿರಿ ಬಡಾವಣೆಯಲ್ಲಿ ನಡೆದಿದೆ. ಉದಯಗಿರಿ ಬಡಾವಣೆಯ ಕಿರಣ್ ಅಲಿಯಾಸ್ ಮರಿಕೆರೆ (26) ಎಂಬಾತ ತೀವ್ರವಾಗಿ ಹಲ್ಲೆಗೊಳಗಾಗಿ ಆಸ್ಪತ್ರೆಯಲ್ಲಿ ಸಾವು ಬದುಕಿನೊಂದಿಗೆ ಹೋರಾಟ ನಡೆಸುತ್ತಿದ್ದಾನೆ. ಈತನ ಮೇಲೆ ನಗರದ ವರ್ಧನ್, ವರುಣ್, ಮನು, ಗೋವಿಂದರಾಜು, ಮದನ್ ಹಲ್ಲೆ ಮಾಡಿದ ಆರೋಪಿಗಳಾಗಿದ್ದಾರೆ. ಕಿರಣ್ ಮತ್ತು ವರ್ಧನ್ ಇಬ್ಬರೂ ನಗರದಲ್ಲಿ ತಳ್ಳುವ ಗಾಡಿಯಲ್ಲಿ ಹಣ್ಣಿನ ವ್ಯಾಪಾರ ಮಾಡಿಕೊಂಡಿದ್ದರು. ಆಗಾಗ್ಗೆ ಸಣ್ಣ ಪುಟ್ಟ ವಿಚಾರಕ್ಕೆ ಇಬ್ಬರ ನಡುವೆ ಜಗಳ ಆಗಿತ್ತು. ಕಿರಣ್ ಇತ್ತೀಚೆಗೆ ಹಲ್ಲೆ ಪ್ರಕರಣದಲ್ಲಿ ಭಾಗಿಯಾಗಿ ಜೈಲಿಗೆ ಹೋಗಿದ್ದ. ಕಳೆದ ಎರಡು ಮೂರು ದಿನಗಳ ಹಿಂದೆ ಜೈಲಿನಿಂದ ಬಿಡುಗಡೆಯಾಗಿದ್ದ.

ಮತ್ತೆ ಗಲಾಟೆ ಮಾಡಿಕೊಂಡಿದ್ದ ಕಿರಣನನ್ನು ಹತ್ಯೆ ಮಾಡಲು ವರ್ಧನ್ ಯೋಜನೆ ರೂಪಿಸಿದ್ದ. ಅದರಂತೆ ಗೋದಾಮಿನಲ್ಲಿ ಮಲಗಿದ್ದ ಕಿರಣ್ ಮೇಲೆ ವರ್ಧನ್, ಇತರರು ಮಚ್ಚು, ಲಾಂಗುಗಳಿಂದ ಹಲ್ಲೆ ನಡೆಸಿ ಪರಾರಿಯಾಗಿದ್ದರು. ಕಿರಣನಿಗೆ ಊಟ ಕೊಡಲು ಬಂದವರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಬಂದ ಪೊಲೀಸರು ಗಾಯಾಳುವನ್ನು ತಕ್ಷಣ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿದ್ದಾರೆ. ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ಕಳುಹಿಸಿಕೊಡಲಾಗಿದೆ. ಸ್ಥಳಕ್ಕೆ ಹೆಚ್ಚುವರಿ ಎಸ್ಪಿ ತಿಮ್ಮಯ್ಯ ಸೇರಿದಂತೆ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂಬಂಧ ಪೂರ್ವ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

### ಕೊಲೆ ಪ್ರಕರಣದ ಆರೋಪಿಗಳ ಬಂಧನ

• **ಉದಯವಾಹಿನಿ, ಹಾರೋಹಳ್ಳಿ**

ಹಳೆ ದ್ವೇಷದ ಹಿನ್ನೆಲೆಯಲ್ಲಿ ವ್ಯಕ್ತಿಯೊಬ್ಬರನ್ನು ಹಾಡಹಗಲೇ ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿದ್ದ ಐವರು ಆರೋಪಿಗಳನ್ನು ಬಂಧಿಸುವಲ್ಲಿ ಹಾರೋಹಳ್ಳಿ ಪೊಲೀಸರು ಯಶಸ್ವಿಯಾಗಿದ್ದಾರೆ. ಹಾರೋಹಳ್ಳಿ ಕೆಎಸ್‌ಆರ್‌ಟಿಸಿ ಬಸ್ ಡಿಪೊ ಬಳಿ ಮಾರಕಾಸ್ತ್ರಗಳಿಂದ ಸಿದ್ದಾಪುರ ಸಂತೋಷ್ ಎಂಬುವರನ್ನು ಕೊಲೆ ಮಾಡಲಾಗಿತ್ತು.

ಆರೋಪಿಗಳನ್ನು ಹುಕುಂದ ಗ್ರಾಮದ ವರುಣ್ (30), ದೊಡ್ಡ ಕಲ್ಲಸಂದ್ರದ ರಜಿತ್ (28), ಹರೀಶ ಅಲಿಯಾಸ್ ಲೊಡ್ಡೆ(29), ಮದ್ದೂರು ಮೂಲದ ದರ್ಶನ್ ಅಲಿಯಾಸ್ ಆಟೊ ಧನು (25), ಚಿರಣಕುಪ್ಪೆ ಯಶ್ವಂತ್ ಅಲಿಯಾಸ್ ರಿಚ್ ಕಿಡ್ (22) ಎಂದು ಗುರುತಿಸಲಾಗಿದೆ. ತನಿಖೆಯಲ್ಲಿ ಎಸ್ಪಿ ಶ್ರೀನಿವಾಸ್ ಗೌಡ, ಡಿವೈಎಸ್ಪಿ ಶ್ರೀನಿವಾಸ್ ಮಾರ್ಗದರ್ಶನದಲ್ಲಿ ಇನ್‌ಸ್ಪೆಕ್ಟರ್ ಅರ್ಜುನ್ ನೇತೃತ್ವದಲ್ಲಿ ಪಿಎಸ್‌ಐ ನಟರಾಜು, ಅಯೂಬ್ ಪಾಷಾ, ಅನಂತ್ ಕುಮಾರ್, ಶಿವರಾಜು, ಶ್ರೀನಿವಾಸ್, ವಿರೂಪಾಕ್ಷ, ಯೋಗೀಶ್ ಭಾಗವಹಿಸಿದ್ದರು.

### ಹಿರಿಯ ವಿದ್ಯಾರ್ಥಿಗಳ ಸಂಘದ ಸದಸ್ಯತ್ವ ಅಭಿಯಾನ

• **ಉದಯವಾಹಿನಿ, ಕನಕಪುರ**

ಇಲ್ಲಿನ ರೂರಲ್ ಎಜುಕೇಷನ್ ಸೊಸೈಟಿ ಹಿರಿಯ ವಿದ್ಯಾರ್ಥಿಗಳ ಸಂಘದ ಸದಸ್ಯತ್ವ ಅಭಿಯಾನ ಶುಕ್ರವಾರ ಸೊಸೈಟಿ ಕಚೇರಿಯಲ್ಲಿ ನಡೆಯಿತು. ಡಿಸಿಎಂ ಡಿ.ಕೆ.ಶಿವಕುಮಾರ್ ಕಚೇರಿ ಸಾರ್ವಜನಿಕ ಸಂಪರ್ಕ ಅಧಿಕಾರಿ ಕೆ.ಹರೀಶ್ ಗೌಡ, ನೂರು ಮಂದಿ ಹಿರಿಯ ವಿದ್ಯಾರ್ಥಿಗಳನ್ನು ನೋಂದಾಯಿಸಿ ಸದಸ್ಯತ್ವ ಶುಲ್ಕ 95 ಸಾವಿರವನ್ನು ಅಧ್ಯಕ್ಷ ಎಚ್.ಕೆ. ಶ್ರೀಕಂಠ ಅವರಿಗೆ ನೀಡಿದರು. ಸದಸ್ಯತ್ವ ಶುಲ್ಕವನ್ನು ಸ್ವೀಕರಿಸಿದ ಅಧ್ಯಕ್ಷ ಎಚ್.ಕೆ. ಶ್ರೀಕಂಠ ಮಾತನಾಡಿ, ಈ ಸಂಸ್ಥೆಯಲ್ಲಿ ಓದಿದ ಎಲ್ಲಾ ಹಿರಿಯ ವಿದ್ಯಾರ್ಥಿಗಳು ಸಂಘದಲ್ಲಿ ನೋಂದಾಯಿಸಿಕೊಂಡು ಸಂಸ್ಥೆ ಅಭಿವೃದ್ಧಿಗೆ ಸಹಕರಿಸಬೇಕು ಮತ್ತು ಕೈಜೋಡಿಸಬೇಕೆಂದು ಮನವಿ ಮಾಡಿದರು.

### ಗಾಂಜಾ ಮಾರಾಟ ಆರೋಪಿ ಬಂಧನ

• **ಉದಯವಾಹಿನಿ, ಬಾಗೇಪಲ್ಲಿ**

ತಾಲ್ಲೂಕಿನಲ್ಲಿ ಗಾಂಜಾ ಮಾರಾಟಕ್ಕೆ ಯತ್ನಿಸಿದ್ದ ಆರೋಪಿಯನ್ನು ಬಂಧಿಸಿ, ಆತನಿಂದ 4 ಲಕ್ಷ ಮೌಲ್ಯದ ಒಂಭತ್ತು ಕೆ.ಜಿ ಗಾಂಜಾವನ್ನು ವಶಪಡಿಸಿಕೊಳ್ಳಲಾಗಿದೆ. ಆಂಧ್ರಪ್ರದೇಶದ ಅರುಣ್‌ಕುಮಾರ್ ಬಂಧಿತ ಆರೋಪಿ. ತಾಲ್ಲೂಕಿನ ಗೂಳೂರು ನಿಡುಮಾಮಿಡಿ ಮಠದ ಮುಂದೆ ಪೊಲೀಸರ ತಂಡ ಗಸ್ತಿನಲ್ಲಿ ಇರುವಾಗ ಅನುಮಾನಾಸ್ಪದವಾಗಿ ಓಡಾಡುತ್ತಿದ್ದ ವ್ಯಕ್ತಿಯನ್ನು ಹಿಡಿದು ಬ್ಯಾಗ್ ಪರಿಶೀಲಿಸಿದಾಗ ಪರವಾನಗಿ ಇಲ್ಲದೆ 9 ಕೆ. ಜಿ ಗಾಂಜಾ ಇದ್ದುದ್ದನ್ನು ಗಮನಿಸಿ ಪೊಲೀಸರು ಆತನನ್ನು ವಶಕ್ಕೆ ಪಡೆದಿದ್ದಾರೆ.

ವಿಶಾಖಪಟ್ಟಣ ಬಳಿಯ ಅರುಕುವ್ಯಾಲಿ ಎಂಬ ಊರಿನಿಂದ ಗಾಂಜಾ ತಂದು ಬಾಗೇಪಲ್ಲಿ, ಚೇಳೂರು ತಾಲ್ಲೂಕುಗಳಲ್ಲಿ ಸಾರ್ವಜನಿಕರಿಗೆ ಗಾಂಜಾ ಮಾರಾಟ ಮಾಡುತ್ತಿರುವುದಾಗಿ ವಿಚಾರಣೆಯಲ್ಲಿ ಆರೋಪಿ ತಪ್ಪೊಪ್ಪಿಕೊಂಡಿದ್ದಾರೆ. ಈ ಸಂಬಂಧ ಬಾಗೇಪಲ್ಲಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಅಂತರಾಳದಿಂದ..
EDITORIAL

# ಭಾರತ- ಬ್ರಿಟನ್ ವ್ಯಾಪಾರ

## ಒಪ್ಪಂದ-ಆರ್ಥಿಕತೆಗೆ ದೊರೆಯಲಿದೆ ಪುಷ್ಟಿ



ಭಾರತ ಬ್ರಿಟನ್ ನಡುವಣ ಮುಕ್ತ ವ್ಯಾಪಾರ ಒಪ್ಪಂದ ಅಂತಿಮಗೊಂಡಿದ್ದು ಸಹಿ ಹಾಕುವುದಷ್ಟೇ ಬಾಕಿ ಇದೆ. ಎರಡೂ ದೇಶಗಳ ಅರ್ಥವ್ಯವಸ್ಥೆಗೆ ಅನುಕೂಲಕರವಾದ ಈ ಒಪ್ಪಂದಕ್ಕೆ ಮುಂಚೆ ಸುದೀರ್ಘ ಮಾತುಕತೆ, ಕಠಿಣ ಚೌಕಾಸಿ ನಡೆದಿದೆ. ಭಾರತದ ಆರ್ಥಿಕತೆಯು ಬ್ರಿಟನ್‌ಗಿಂತ ದೊಡ್ಡದು. ಭಾರತ ಜಗತ್ತಿನಲ್ಲಿ ನಾಲ್ಕನೇ ಅತಿ ದೊಡ್ಡ ಅರ್ಥವ್ಯ ವಸ್ಥೆಯಾಗಿದ್ದರೆ, ಬ್ರಿಟನ್‌ಗೆ ಆರನೇ ಸ್ಥಾನ ಇದೆ. ಆದರೆ ಬ್ರಿಟನ್‌ನ ಅರ್ಥವ್ಯವಸ್ಥೆಯು ಹೆಚ್ಚು ಅಭಿವೃದ್ಧಿ ಹೊಂದಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಆರಂಭಿಸಿರುವ ಸುಂಕ ಸಮರದ ಕಾರಣಕ್ಕೆ ಈ ವ್ಯಾಪಾರ ಒಪ್ಪಂದ ಹೆಚ್ಚು ಮಹತ್ವ ಪಡೆದುಕೊಂಡಿದೆ. ವಿಶ್ವ ವ್ಯಾಪಾರ ಸಂಘಟನೆಯು (ಡಬ್ಲ್ಯುಟಿಒ) ನಿಷ್ಕ್ರಿಯವಾದ ಬಳಿಕ ಇಂತಹ ಒಪ್ಪಂದಗಳು ಮುಖ್ಯವಾಗಿವೆ. ಭಾರತ–ಬ್ರಿಟನ್ ಮುಕ್ತ ವ್ಯಾಪಾರ ಒಪ್ಪಂದವು ಈವರೆಗೆ ಪ್ರಮುಖ ದೇಶಗಳೊಂದಿಗೆ ಮಾಡಿಕೊಂಡ ಒಪ್ಪಂದಗಳಿಗಿಂತ ಹೆಚ್ಚು ಸಮಗ್ರವಾಗಿದೆ. ಆಸ್ಟ್ರೇಲಿಯಾ ಮತ್ತು ಅರಬ್ ಸಂಯುಕ್ತ ಸಂಸ್ಥಾನ (ಯುಎಇ) ಜೊತೆಗೆ ಭಾರತವು ಪ್ರಮುಖ ಒಪ್ಪಂದಗಳನ್ನು ಮಾಡಿಕೊಂಡಿದೆ. ಅಮೆರಿಕ, ಐರೋಪ್ಯ ಒಕ್ಕೂಟ ಮತ್ತು ಇತರ ದೇಶಗಳೊಂದಿಗೆ ಮಾತುಕತೆ ನಡೆಯುತ್ತಿದೆ. ಜಾಗತಿಕ ವ್ಯಾಪಾರ ವಲಯದಲ್ಲಿ ಭಾರತದ ವರ್ಚಸ್ಸು ಹೆಚ್ಚಲು ಈ ಒಪ್ಪಂದಗಳು ನೆರವಾಗಲಿವೆ. ಭಾರತ–ಬ್ರಿಟನ್ ಒಪ್ಪಂದವು ಅಂತಿಮಗೊಳ್ಳಲು ಮೂರು ವರ್ಷಗಳು ಬೇಕಾದವು. ಇದೊಂದು ಚಾರಿತ್ರಿಕ ಮೈಲಿಗಲ್ಲು' ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಒಪ್ಪಂದವನ್ನು ಬಣ್ಣಿಸಿದ್ದಾರೆ. ಭಾರತ ಬ್ರಿಟನ್ ನಡುವಣ ದ್ವಿಪಕ್ಷೀಯ ವ್ಯಾಪಾರದ ಮೊತ್ತವು ಸುಮಾರು ಆರು ಸಾವಿರ ಕೋಟಿ ಡಾಲರ್ (ಸುಮಾರು ರೂ.5.12 ಲಕ್ಷ ಕೋಟಿ) ಇದ್ದು, 2030ರ ಹೊತ್ತಿಗೆ ಇದು ದುಪ್ಪಟ್ಟಾಗಬಹುದು ಎಂದು ಅಂದಾಜಿಸಲಾಗಿದೆ. ಭಾರತದ ಕಂಪನಿಗಳಿಗೆ ಬ್ರಿಟನ್‌ನ ಮಾರುಕಟ್ಟೆಯಲ್ಲಿ ಮುಕ್ತ ಅವಕಾಶ ದೊರಕಲಿದ್ದು, ಇದು ಬಹುತೇಕ ಸುಂಕಮುಕ್ತವಾಗಿರಲಿದೆ. ಹಾಗೆಯೇ ಬ್ರಿಟನ್‌ನಿಂದ ಭಾರತಕ್ಕೆ ಬರುವ ಸರಕುಗಳೂ ಕ್ರಮೇಣ ಸುಂಕಮುಕ್ತವಾಗಲಿವೆ. ಇದರ ಪ್ರಯೋಜನ ಗ್ರಾಹಕರಿಗೆ ದೊರೆಯಲಿದೆ. ಬ್ರಿಟನ್‌ನಿಂದ ಆಮದು ಮಾಡಿಕೊಳ್ಳಲಾಗುವ ಶೇ 99ರಷ್ಟು ಸರಕುಗಳ ಮೇಲಿನ ಸುಂಕ ರದ್ದಾಗಲಿದೆ. ಜವಳಿ, ಪಾದರಕ್ಷೆ, ಯಂತ್ರೋಪಕರಣದಂತಹ ಸರಕುಗಳು ಇದರಲ್ಲಿ ಸೇರಿವೆ. ಸೇವಾ ವಲಯದಲ್ಲಿ ಭಾರತಕ್ಕೆ ಹೆಚ್ಚಿನ ಅನುಕೂಲಗಳು ದೊರೆಯಬಹುದು. ಹಲವು ಕ್ಷೇತ್ರಗಳನ್ನು ಸೇವಾ ವಲಯಕ್ಕೆ ಬ್ರಿಟನ್ ತೆರೆದಿಡ ಬಹುದು. ವೃತ್ತಿಪರರು ಅಲ್ಲಿಗೆ ಹೋಗಿ ಬರುವುದು ಸುಗಮವಾಗಬಹುದು. ಆದರೆ, ಈ ವಿಚಾರದಲ್ಲಿ ಭಾರತದ ನಿರೀಕ್ಷೆಯಷ್ಟು ಪ್ರಗತಿ ಸಾಧ್ಯವಾಗಿಲ್ಲ. ದೇಶದಲ್ಲಿ ಪ್ರಸಕ್ತ ಇರುವ ಜನಾಭಿಪ್ರಾಯ ದಿಂದಾಗಿ ಹೆಚ್ಚಿನ ರಿಯಾಯಿತಿಗಳನ್ನು ನೀಡಲು ಬ್ರಿಟನ್ ಸರ್ಕಾರಕ್ಕೆ ಸಾಧ್ಯವಾಗಿಲ್ಲ. ಬ್ರಿಟನ್‌ನಲ್ಲಿರುವ ಭಾರತದ ವೃತ್ತಿಪರರು ಮತ್ತು ಅವರ ಉದ್ಯೋಗದಾತರಿಗೆ ಸಾಮಾಜಿಕ ಸುರಕ್ಷತೆ ದೇಣಿಗೆ ಪಾವತಿಸುವುದರಿಂದ ಮೂರು ವರ್ಷ ವಿನಾಯಿತಿ ನೀಡಲಾಗಿದೆ.

> **ಬ್ರಿಟನ್‌ನ ಪ್ರಸ್ತಾವಿತ ಇಂಗಾಲ ತೆರಿಗೆಗೆ ಪ್ರತಿತೆರಿಗೆ ಹೇರುವುದಕ್ಕೆ ಒಪ್ಪಂದದಲ್ಲಿ ಅವಕಾಶ ಇಲ್ಲ. ಆದರೆ, ಈ ತೆರಿಗೆಯಿಂದಾಗಿ ದೇಶಿ ರಫ್ತಿನ ಮೇಲೆ ಪರಿಣಾಮವಾದರೆ ಅದನ್ನು ಸರಿದೂಗಿಸಲು ರಿಯಾಯಿತಿಗಳನ್ನು ಪರಿಷ್ಕರಿಸುವ ಅವಕಾಶವನ್ನು ಭಾರತವು ಉಳಿಸಿಕೊಂಡಿದೆ. ದ್ವಿಪಕ್ಷೀಯ ಹೂಡಿಕೆ ಒಪ್ಪಂದ ಕುರಿತು ಮಾತುಕತೆ ನಡೆಯುತ್ತಿದೆ.**

ಭಾರತವು ಬ್ರಿಟನ್ನ ವಿಸ್ಕಿ ಮತ್ತು ಜಿನ್ ಮೇಲಿನ ಸುಂಕವನ್ನು ಶೇ 75ರಷ್ಟಕ್ಕೆ ಇಳಿಸಿದೆ. ಮುಂದಿನ 10 ವರ್ಷಗಳಲ್ಲಿ ಶೇ 40ಕ್ಕೆ ಇಳಿಸುವ ಭರವಸೆ ಕೊಟ್ಟಿದೆ. ವಾಹನಗಳ ಮೇಲಿನ ಸುಂಕವನ್ನು ಕೂಡ ಕಡಿತಗೊಳಿಸಲಾಗಿದೆ. ಸೌಂದರ್ಯವರ್ಧಕಗಳು, ವೈಮಾನಿಕ ಉಪಕರಣಗಳು, ವೈದ್ಯಕೀಯ ಉಪಕರಣಗಳು ಇತ್ಯಾದಿ ಮೇಲಿನ ಸುಂಕವೂ ಕಡಿಮೆಯಾಗಿದೆ. ಈ ಒಪ್ಪಂದದಿಂದಾಗಿ ಬ್ರಿಟನ್ ಅರ್ಥವ್ಯವಸ್ಥೆಯು ಮುಂದಿನ ವರ್ಷಗಳಲ್ಲಿ ಶೇ 0.1ರಷ್ಟು ಹೆಚ್ಚಿನ ಪ್ರಗತಿ ಕಾಣಬಹುದು ಎಂಬ ನಿರೀಕ್ಷೆ ಇದೆ. ಮುಕ್ತ ವ್ಯಾಪಾರ ಒಪ್ಪಂದದ ಜೊತೆಗೆ ಈ ಒಪ್ಪಂದಕ್ಕೂ ಸಹಿ ಬೀಳುವ ಸಾಧ್ಯತೆ ಇದೆ. ಕೆಲವು ವಿಚಾರಗಳಲ್ಲಿ ಅಭಿಪ್ರಾಯಭೇದವಿದ್ದು ಅವುಗಳನ್ನು ಪರಿಹರಿಸಿಕೊಳ್ಳಬೇಕಿದೆ. ಈ ಒಪ್ಪಂದ ಅಂತಿಮಗೊಂಡರೆ ಎರಡೂ ದೇಶಗಳಲ್ಲಿ ಪರಸ್ಪರರ ಹೂಡಿಕೆ ಹೆಚ್ಚಳವಾಗಿ ಆರ್ಥಿಕತೆಗೆ ಪುಷ್ಟಿ ದೊರೆಯಲಿದೆ. ಈ ಒಪ್ಪಂದವು ಮುಕ್ತ ವ್ಯಾಪಾರ ಒಪ್ಪಂದಕ್ಕೆ ಪೂರಕವಾಗಿ ಇರಲಿದೆ.



# ರಾಮಾಯಣ

ಶ್ರೀ ರಾಮನ ವನವಾಸ ಪ್ರಾರಂಭ

• ಹಿಂದಿನ ಸಂಚಿಕೆಯಿಂದ **78ನೆಯ ಅಧ್ಯಾಯ**

ಈ ಗಂಗಾಯಮುನಾ ಸಂಗಮದಲ್ಲಿ ನನ ಆಶ್ರಮವು ಮನೋಹರವಾಗಿ ಏಕಾಂತ ಸ್ಥಳವಾಗಿದೆ. ಇಲ್ಲಿ ನೀನು ಸುಖವಾಗಿರು ಎಂದು ನುಡಿದನು. ಶ್ರೀರಾಮನು ಆತನನ್ನು ಕುರಿತು ಸಮಸ್ತ ಪ್ರಾಣಿಗಳ ಉತ್ಪತ್ತಿ ಲಯಗಳನ್ನೂ ಭೂತಭವಿಷ್ಯದ್ವರ್ತಮಾನಗಳನ್ನೂ ಸಮಸ್ತ ತತ್ವಾರ್ಥಗಳನ್ನೂ ಬಲ್ಲ ಭರದ್ವಾಜಮುನೀಶ್ವರರೆ, ನಿಮ್ಮ ಸಮೀಪದಲ್ಲಿರುವ ಆಶ್ರಮದ ಸುತ್ತಲೂ ಅನೇಕ ಗ್ರಾಮಗಳಿವೆ. ನಾನು ಇಲ್ಲಿದ್ದರೆ ನಾನು ಸೀತಾಲಕ್ಷ್ಮಣಸಮೇತನಾಗಿ ಬಂದ ವೃತ್ತಾಂತವನ್ನು ಕೇಳಿ ನಮ್ಮನ್ನು ನೋಡುವುದಕ್ಕಾಗಿ ಅನೇಕ ಜನರು ಬಂದು ಸಂಮರ್ದವನ್ನು ಮಾಡುವರು. ಆದ್ದರಿಂದ ನನಗೆ ಇಲ್ಲಿರುವುದಕ್ಕೆ ಮನಸ್ಸಿಲ್ಲ. ನಾನು ಸೀತಾಲಕ್ಷ್ಮಣಸಮೇತನಾಗಿರುವುದಕ್ಕೆ ಏಕಾಂತಸ್ಥಳವಾದ ಆಶ್ರಮವನ್ನು ತೋರಿಸಬೇಕು ಎಂದು ಹೇಳಿದನು. ಭರದ್ವಾಜಮುನೀಶ್ವರನು ಶ್ರೀರಾಮ. ಇಲ್ಲಿಗೆ ಎರಡುಗಾವುದ ದೂರದಲ್ಲಿ ಗಂಧಮಾದನ ಪರ್ವತಕ್ಕೆ ಸಮಾನವಾದ ಚಿತ್ರಕೂಟವೆಂಬ ಗಿರಿಯಿದೆ. ಆ ಪರ್ವತವು ಪವಿತ್ರವಾದದ್ದು. ಅಲ್ಲಿ ಆನೇಕ ಋಷಿಗಳಿದ್ದಾರೆ. ಆ ಪರ್ವತದಲ್ಲಿರುವ ಪವಿತ್ರವಾದ ಶಿಖರಗಳನ್ನು ದರ್ಶನಮಾಡಿದ ಪುಣ್ಯಾತ್ಮರಿಗೆ ಯಾವಾಗಲೂ ಪಾಪಬುದ್ಧಿ ಹುಟ್ಟದು. ಚಿತ್ರಕೂಟಪರ್ವತದಲ್ಲಿ ಬಹುಮಂದಿ ಋಷಿಗಳು ತಪಸ್ಸು ಮಾಡಿ ಪುಣ್ಯಲೋಕವನ್ನೈದಿದರು. ಅದು ಏಕಾಂತಸ್ಥಳ, ಅಲ್ಲಾದರೂ ವಾಸಮಾಡು, ಅಲ್ಲದಿದ್ದರೆ ಈ ಗಂಗಾಯಮುನಾ ಸಂಗಮದಲ್ಲಿ ನನ್ನ ಜೊತೆಯಲ್ಲಾದರೂ ವಾಸಮಾಡಿಕೊಂಡಿರು ಎಂದು ಅನೇಕ ಪ್ರಿಯೋಕ್ತಿಗಳನ್ನು ನುಡಿದು ಸೀತಾಲಕ್ಷ್ಮಣರನ್ನೂ ಬಹುಪ್ರಕಾರವಾಗಿ ಸತ್ಕರಿಸಿದನು. ಆತನ ಸತ್ಕಾರದಿಂದ ಸಂತುಷ್ಟನಾಗಿ ಶ್ರೀರಾಮನು ಅತ್ಯಂತ ಪ್ರಸನ್ನ ಚಿತ್ರನಾಗಿದ್ದು ಸಾಯಂಕಾಲವಾಗಲು ಆ ಆಶ್ರಮದಲ್ಲಿ ರಾತ್ರಿಯನ್ನು ಕಳೆದು ಮಾರನೆಯದಿನ ಪ್ರಾತಃಕಾಲ ತಪೋಜ್ವಾಲೆಯಿಂದ ಬೆಳಗುತ್ತಿದ್ದ ಭರದ್ವಾಜಮುನೀಶ್ವರನ ಸಮೀಪಕ್ಕೆ ಹೋಗಿ ಕೈ ಮುಗಿದುಕೊಂಡು ಮುನೀಶ್ವರರೆ, ನಿಮ್ಮ ಆಶ್ರಮದಲ್ಲಿ ಒಂದು ರಾತ್ರಿಯನ್ನು ಸುಖವಾಗಿ ಕಳೆದೆವು. ಇನ್ನು ಇಲ್ಲಿಂದ ಮುಂದಕ್ಕೆ ಹೊರಡುತ್ತೇವೆ ಎಂದು ನುಡಿದನು. ಭರದ್ವಾಜನು ಅನೇಕ ಕಂದ ಮೂಲ ಫಲಾಹಾರಗಳನ್ನು ತರಿಸಿ ಶ್ರೀರಾಮನಿಗೆ ಸಮರ್ಪಿಸಿ ಆತನನ್ನು ಕುರಿತು ಶ್ರೀರಾಮ, ಚಿತ್ರಕೂಟಪರ್ವತವು ನಾನಾವಿಧವಾದ ಮೃಗಪಕ್ಷಿಗಳಿಂದಲೂ, ನವಿಲುಗಳ ಧ್ವನಿಯಿಂದಲ್ಲೂ, ಪವಿತ್ರವಾದ ಪ್ರಣ್ಯನದಿಗಳಿಂದಲೂ ಸ್ವಾದೋದಕವಿರುವ ಕೊಳಗಳಿಂದಲೂ ಬಹಳ ಮನೋಹರವಾಗಿದೆ. ಅಲ್ಲಿ ಆಶ್ರಮವನ್ನು ರಚಿಸಿಕೊಂಡು ಸುಖವಾಗಿ ವಾಸಮಾಡು ಎಂದು ನುಡಿದನು.

### ಚಿತ್ರಕೂಟಕ್ಕೆ ಶ್ರೀರಾಮನ ಪ್ರಯಾಣ

ಆ ಬಳಿಕ ಶ್ರೀರಾಮನು ಭರದ್ವಾಜಮುನಿಗೆ ವಂದನೆಯನ್ನು ಮಾಡಿ ಆತನಿಂದ ಬೀಳ್ಕೊಂಡು ಚಿತ್ರಕೂಟಪರ್ವತಕ್ಕೆ ಹೊರಟನು. ಆಗ ಆ ಮುನೀಶ್ವರನು ರಾಮಲಕ್ಷ್ಮಣಸೀತಾದೇವಿಯರಿಗೆ ಅನೇಕ ಆಶೀರ್ವಾದಗಳನ್ನು ಮಾಡಿ ತಂದೆಯು ಮಕ್ಕಳನ್ನು ಬಳಿಗಳುಹಿಸುವಂತೆ ಅವರನ್ನು ಹಿಂಬಾಲಿಸಿ ಹೋಗುತ್ತ ಶ್ರೀರಾಮನನ್ನು ಕುರಿತು ಹೀಗೆಂದನು: ಶ್ರೀರಾಮ, ಗಂಗಾಯಮುನಾ ಸಂಗಮದಿಂದ ಹೊರಟು ಕಾಳಿಂದೀನದಿಯ ತೀರದಲ್ಲಿ ಪಡುವಣದಿಕ್ಕಿಗೆ ನಡೆದು ಆ ನದಿಯನ್ನು ತೆಪ್ಪದಿಂದ ದಾಟಬೇಕು.

ಮುಂದುವರಿಯುವುದು...

# ರಕ್ತನಾಳಗಳಲ್ಲಿ ಸೇರಿಕೊಂಡಿರುವ ಕೊಲೆಸ್ಟ್ರಾಲ್ ಕರಗಿಸಿ

ಕೆಟ್ಟ ಕೊಲೆಸ್ಟ್ರಾಲ್ ಯಾವತ್ತಿಗೂ ಕೂಡ ಹೃದಯಕ್ಕೆ ಸಹಕಾರಿಯಲ್ಲ ಈ ಕೆಟ್ಟ ಕೊಲೆಸ್ಟ್ರಾಲ್ ನಿಂದ ದೇಹದಲ್ಲಿ ರಕ್ತ ಸಂಚಾರ ಸರಿಯಾಗಿ ನಡೆಯದೇ ಹೃದಯ ಬಡಿತವೇ ನಿಂತು ಹೋಗಬಹುದು. ಹೀಗಾಗಿ ಈಗಾಗಲೇ ಕೊಲೆಸ್ಟ್ರಾಲ್ ಇರುವವರು ಹಾಗೂ ಈ ಸಮಸ್ಯೆಯಿಂದ ದೂರ ಇರಬೇಕು ಅಂದುಕೊಳ್ಳುವವರು, ಆರೋಗ್ಯಕಾರಿ ಜೀವನಶೈಲಿಯ ಜೊತೆಗೆ ಆಹಾರಪದ್ಧತಿಯಲ್ಲೂ ಕೂಡ ಬದಲಾವಣೆ ತಂದುಕೊಳ್ಳಬೇಕು. ದೇಹದಲ್ಲಿ ಇದ್ದಕ್ಕಿದ್ದಂತೆ ಹೆಚ್ಚಾಗುವ ಕೆಟ್ಟ ಕೊಲೆಸ್ಟ್ರಾಲ್ ಯಾವತ್ತಿಗೂ ಕೂಡ ಅಪಾಯಕಾರಿ. ಪ್ರಮುಖವಾಗಿ ದೇಹದ ರಕ್ತನಾಳಗಳಲ್ಲಿ ಸೇರಿಕೊಳ್ಳುವ ಈ ಬೇಡದ ಕೊಲೆಸ್ಟ್ರಾಲ್ ದೇಹದಲ್ಲಿ ಹೆಚ್ಚಾಗುತ್ತಾ ಹೋದರೆ, ಮುಂದಿನ ದಿನಗಳಲ್ಲಿ ಸಾಕಷ್ಟು ಬಗೆಯ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳಲು ಶುರುವಾಗಿ ಬಿಡುತ್ತವೆ. ಆರಂಭದಲ್ಲಿ ಇದು ಯಾವುದೇ ತರಹದ ರೋಗಲಕ್ಷಣಗಳನ್ನು ತೋರಿಸದಿದ್ದರೂ ಆನಂತರದಲ್ಲಿ ತುಂಬಾ ಗಂಭೀರವಾದ ರೋಗಲಕ್ಷಣಗಳು ಕಾಣಿಸಿಕೊಳ್ಳಲು ಶುರುವಾಗುತ್ತವೆ ಇದೇ ಕಾರಣಕ್ಕೆ ವೈದ್ಯರು ಇದನ್ನು ಸೈಲೆಂಟ್ ಕಿಲ್ಲರ್ ಕಾಯಿಲೆ ಎಂದು ಕರೆಯುವುದು ಇನ್ನು ಈ ಕಾಯಿಲೆಯ ಬಗ್ಗೆ ವೈದ್ಯರು ಹೇಳುವ ಪ್ರಕಾರ, ಯಾರಿಗೆ ದೇಹದ ರಕ್ತನಾಳಗಳಲ್ಲಿ ಕೊಲೆಸ್ಟ್ರಾಲ್ ಪ್ರಮಾಣ ಹೆಚ್ಚಾಗುತ್ತದೆಯೋ, ಅವರಿಗೆ ಬಹಳ ಬೇಗನೇ ಹೃದಯಘಾತ ಮತ್ತು ಪಾರ್ಶ್ವವಾಯು ಕಾಣಿಸಿಕೊಳ್ಳುತ್ತದೆಯಂತೆ! ಇದಕ್ಕೆ ಪ್ರಮುಖ ಕಾರಣ ರಕ್ತನಾಳಗಳಲ್ಲಿ ಸೇರಿಕೊಂಡಿರುವ ಜಿಡ್ಡಿನ ಅಂಶಗಳು ಈ ರೀತಿಯ ತೊಂದರೆಗೆ ಕಾರಣವಾಗುತ್ತವೆ. ಹಾಗಾದ್ರೆ ಈ ಸಮಸ್ಯೆಗೆ ಕಾರಣಗಳು ಏನು ಎನ್ನುವುದರ ಬಗ್ಗೆ ನೋಡುವುದಾರೆ, ನಾವು ಅನುಸರಿಸುತ್ತಿರುವ ಜೀವನ ಶೈಲಿಯ ಕೆಲವೊಂದು ಅಭ್ಯಾಸಗಳು ಹಾಗೂ ಅನಾರೋಗ್ಯಕಾರಿ ಆಹಾರ ಪದಾರ್ಥಗಳು ಇದಕ್ಕೆ ಪ್ರಮುಖ ಕಾರಣ. ಕೊಬ್ಬಿನ ಅಂಶ ಇರುವ ಆಹಾರಗಳನ್ನು ಹೆಚ್ಚಾಗಿ ಸೇವಿಸುವುದರಿಂದ ರಕ್ತನಾಳಗಳಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಶೇಖರಣೆಯಾ ಗುತ್ತದೆಯಂತೆ ಬೆಳಗ್ಗೆ ಎದ್ದ ಕೂಡಲೇ ಯೋಗ ಮಾಡುವ ಅಭ್ಯಾಸ ಇಟ್ಟುಕೊಳ್ಳಿ ಬೆಳಗ್ಗೆ ಎದ್ದ ಕೂಡಲೇ ಯೋಗ ಮಾಡುವ ಅಭ್ಯಾಸ ಇಟ್ಟುಕೊಳ್ಳಿ

ಯೋಗ ಮಾಡುವುದರಿಂದ ನಮಗೆ ಹಲವಾರು ರೀತಿಯಲ್ಲಿ ಆರೋಗ್ಯ ಪ್ರಯೋಜನಗಳು ಸಿಗುತ್ತವೆ. ಇದು ನಮ್ಮ ದೇಹಕ್ಕೆ ಅದರಲ್ಲೂ ವಿಶೇಷವಾಗಿ ನಮ್ಮ ಹೃದಯಕ್ಕೆ ಬಹಳಷ್ಟು ಪ್ರಯೋಜ ನಗಳನ್ನು



ಕೊಡುತ್ತದೆ. ಅದರಲ್ಲೂ ಪ್ರಮುಖವಾಗಿ ಪ್ರತಿದಿನ ಯೋಗಾಭ್ಯಾಸ ಮಾಡುವು ದರಿಂದ, ಮಾನಸಿಕ ಒತ್ತಡ ನಿಯಂತ್ರಣಕ್ಕೆ ಬರುವುದು ಮಾತ್ರ ವಲ್ಲದೆ ರಕ್ತದೊತ್ತಡದ ಸಮಸ್ಯೆಯೂ ಕಡಿಮೆಯಾಗುತ್ತದೆ. ಹೀಗಾಗಿ ಬೆಳಗ್ಗೆ ಎದ್ದ ಕೂಡಲೇ ಕೆಲವೊಂಸದು ಯೋಗಭ್ಯಾಸ ಮಾಡು ವುದರ ಅಭ್ಯಾಸ ಮಾಡಿಕೊಂಡರೆ, ನಮ್ಮ ರಕ್ತದಲ್ಲಿನ ಕೆಟ್ಟ ಕೊಲೆಸ್ಟ್ರಾಲ್ ಪ್ರಮಾಣವನ್ನು ಕಂಟ್ರೋಲ್ ಮಾಡಲು ಸಹಾಯ ಮಾಡುತ್ತದೆ ಜೊತೆಗೆ ಉರಿಯುತವನ್ನು ನಿಯಂತ್ರಣ ಮಾಡುತ್ತದೆ.

**ಟಿಪ್ಸ್ ಫಾಲೋ ಮಾಡಿ**

**ಒಣಫಲಗಳನ್ನು ನೆನೆಸಿಟ್ಟು ಸೇವನೆ ಮಾಡಿ**

ಆರೋಗ್ಯ ಚೆನ್ನಾಗಿರಬೇಕು ಎಂದರೆ ಕೇವಲ ಸೊಪ್ಪು ತರಕಾರಿಗಳು ಹಣ್ಣು-ಹಂಪಲು ಸೇವನೆ ಮಾಡಿದರೆ ಮಾತ್ರ ಸಾಲದು ಇವುಗಳ ಜೊತೆಗೆ ದಿನಾ ಸ್ವಲ್ಪ ನೆನೆಸಿಟ್ಟ ಡ್ರೈ ಫ್ರೂಟ್ಸ್‌ಗಳಾದ, ಬಾದಾಮಿ, ಒಣ ದ್ರಾಕ್ಷಿ ಒಣ ಖರ್ಜೂರ, ಒಣಏಪ್ರಿಕಾಟ್, ಅಕ್ರೋಟು ಅಥವಾ ವಾಲ್ನಟ್ಸ್ ಗೋಡಂಬಿ ಇವುಗಳನ್ನು ಕೂಡ ಸೇವನೆ ಮಾಡಬೇಕು ಎಂದು ಸಲಹೆ ನೀಡುತ್ತಾರೆ.


ಪ್ರಮುಖವಾಗಿ ಇಂತಹ ಡ್ರೈ ಫ್ರೂಟ್ಸ್ ಗಳನ್ನು ದಿನಾ ನೆನೆಸಿಟ್ಟು ಸೇವನೆ ಮಾಡುವುದರಿಂದ, ರಕ್ತನಾಳಗಳಲ್ಲಿ ಸೇರಿಕೊಂಡಿರುವ ಕೆಟ್ಟ ಕೊಲೆಸ್ಟ್ರಾಲ್ ಅಂಶಗಳು ನಿವಾರಣೆಯಾಗಿ, ಹೃದಯದ ಆರೋಗ್ಯವು ಕೂಡ ಚೆನ್ನಾಗಿರುತ್ತದೆ.

**ವಾಕಿಂಗ್ ಮಾಡುವುದು :** ಸಹಜವಾಗಿ ನಡೆಯುವ (ಬೆಳಗಿನ ಹಾಗೂ ಸಂಜೆಯ ಸಮಯದಲ್ಲಿ ನಡಿಗೆ) ಮತ್ತು ವೇಗವಾಗಿ ನಡೆಯುವ ಮಧ್ಯದಲ್ಲಿ ಇಂಟರ್ವಲ್ ವಾಕಿಂಗ್ ಬರುತ್ತದೆ. ತಮ್ಮ ದೈಹಿಕ ಫಿಟ್ನೆಸ್ ಕಾಯ್ದುಕೊಳ್ಳಬೇಕು ಎನ್ನುವ ಬಹುತೇಕ ಜನರಿಗೆ ಇದು ಅನುಕೂಲಕರ. ಪ್ರಮುಖವಾಗಿ ಹೃದಯ ರಕ್ತನಾಳದ ಸಮಸ್ಯೆಗೆ ಸಂಬಂಧಪಟ್ಟ ಆರೋಗ್ಯ ಸಮಸ್ಯೆಗಳಿಂದ ದೂರವಿರಲು ಸಹಕಾರಿ.

ದೇಹದ ಕ್ಯಾಲೋರಿಗಳನ್ನು ಕಡಿಮೆ ಮಾಡಿಕೊಳ್ಳಬಹುದು ಮತ್ತು ದೇಹದಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಪ್ರಮಾಣವನ್ನು ತಗ್ಗಿಸಬಹುದು. ಇದರಿಂದ ದೇಹದ ತೂಕ ಕಡಿಮೆ ಆಗುವುದರ ಜೊತೆಗೆ ಹೃದಯದ ಆರೋಗ್ಯಕ್ಕೆ ಸಾಕಷ್ಟು ಅನುಕೂಲವಿದೆ.

**ಅಡುಗೆಯಲ್ಲಿ ಆಲಿವ್ ಎಣ್ಣೆಯನ್ನು ಬಳಸಿ:** ಆಲಿವ್ ಎಣ್ಣೆ ದೇಹದಲ್ಲಿ ಒಳ್ಳೆಯ ಕೊಲೆಸ್ಟ್ರಾಲ್ ಅನ್ನು ನಿರ್ವಹಿಸುತ್ತದೆ ಮತ್ತು ಕೆಟ್ಟ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡುತ್ತದೆ. ನೀವು ಇದನ್ನು ತರಕಾರಿಗಳನ್ನು ಹುರಿಯಲು ಅಥವಾ ಸಲಾಡ್‌ಗಳಲ್ಲಿ ಸಿಂಪಡಿಸಲು ಅಥವಾ ಧಾನ್ಯದ ಬ್ರೆಡ್‌ಗೆ ಡಿಪ್ ಆಗಿ ಬಳಸಬಹುದು.

**ಗ್ರೀನ್ ಟೀ ಕುಡಿಯುವ ಅಭ್ಯಾಸ ಮಾಡಿಕೊಳ್ಳಿ**




ಟೀ-ಕಾಫಿ ಕುಡಿಯುವ ಬದಲು, ದಿನಾ ಗ್ರೀನ್ ಟೀ ಕುಡಿಯುವ ಅಭ್ಯಾಸ ಮಾಡಿಕೊಂಡರೆ ಬಹಳ ಒಳ್ಳೆಯದು. ಯಾಕೆಂದ್ರೆ ಗ್ರೀನ್ ಟೀ ಕೆಟ್ಟ ಕೊಲೆಸ್ಟ್ರಾಲ್ ಮತ್ತು ಇನ್ನಿತರ ವಿಷಕಾರಿ ಅಂಶಗಳನ್ನು ನಮ್ಮ ದೇಹದಿಂದ ಹೊರ ತೆಗೆಯುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಅದರಲ್ಲೂ ಗ್ರೀನ್ ಟೀಗೆ ಒಂದು ಚಮಚ ನಿಂಬೆ ರಸ ಬೆರೆಸಿ ಕುಡಿದರೆ, ಇನ್ನಷ್ಟು ಲಾಭಗಳನ್ನು ಪಡೆದುಕೊಳ್ಳಬಹುದು. ಅಮೆರಿಕನ್ ಜರ್ನಲ್ ಆಫ್ ಕ್ಲಿನಿಕಲ್ ನ್ಯೂಟ್ರಿಷನ್ ಸಂಸ್ಥೆ ವರದಿ ಮಾಡಿರುವ ಪ್ರಕಾರ ಇವೆರಡನ್ನು ಒಟ್ಟಿಗೆ ಸೇವಿಸುವುದರಿಂದ ಆರೋಗ್ಯದ ಲಾಭಗಳನ್ನು ವೃದ್ಧಿಸಿಕೊಳ್ಳಬಹುದು.? ಇನ್ನು ಗ್ರೀನ್ ಟೀಯಲ್ಲಿ ಕಂಡುಬರುವ ಕ್ಯಾಟೆಚಿನ್‌ಗಳು ಶಕ್ತಿಶಾಲಿ ಉತ್ಕರ್ಷಣ ನಿರೋಧಕಗಳಾಗಿವೆ, ಇದು ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡುತ್ತದೆ ಮತ್ತು ಅದರ ಆಕ್ಸಿಡೀಕರಣವನ್ನು ತಡೆಯುತ್ತದೆ, ಇದು ಅಪಧಮನಿ ಹಾನಿಗೆ ಸಂಬಂಧಿಸಿದ ಪ್ರಕ್ರಿಯೆಯಾಗಿದೆ.

# ಅವ್ವ



ಗಿರಿಜಾ.ಎಸ್. ದೇಶಪಾಂಡೆ
• ಉದಯವಾಹಿನಿ, ವಿಶೇಷ

ನನಗೆ ಜನ್ಮ ನೀಡಿದವಳು
ಕರುಣೆಯಸಹನೆಯ
ಮೂರುತಿಯವಳು
ಭೂಮಿಗಿರುವಷ್ಟು ಸಹನೆಯ
ಗುಣವಿಹುದು
ಶಾಂತಿಯ ಮೂರುತಿ
ನನ್ನ ಹೆತ್ತವ್ವ
ಅನ್ನಪೂರ್ಣೇಶ್ವರಿಯ ಅವತಾರಿ
ಅವಳು ಬಡವರಿಗೆ ಬಂಧು ಅವಳು
ಕಾಯಿಲೆಯವರಿಗೆ ಸಹಾಯ ಹಸ್ತ
ನೀಡುವವಳು ಸಹನೆಗೆ ಹೆಸರಾದವಳು ನನ್ನ ಹೆತ್ತವ್ವ
ಒಂಬತ್ತು ಮಕ್ಕಳಿಗೆ ಜನ್ಮ ನೀಡಿದ
ತಾಯಿಯವಳು ಒಂದುದಿನವೂ
ಕೋಪಿಸಿಕೊಳ್ಳದವಳು ಜೋರಾಗಿ
ಗದರಿದವಳಲ್ಲ ಆದರ್ಶದ ಮೂರುತಿ ನನ್ನ ಹೆತ್ತವ್ವ
ತುತ್ತು ನೀಡಿ ಊಟನೀಡಿದವಳವಳು
ಭಗವಂತ ಸೃಷ್ಟಿಸಿದ ಶಾಂತ
ಸ್ವಭಾವದ ಮೂರುತಿಯವಳು
ಸೌಮ್ಯ ಸ್ವಭಾವದವಳು ಮಕ್ಕಳ
ಬಂಧುಬಳಗದ ಅಕ್ಕರೆಯ
ಅವ್ವನವಳು ನನ್ನ ಹೆತ್ತವ್ವ.




# ನೀವೂ ಈ ಗಿಡವನ್ನು ಅಜ್ವಾಯಿನ್ ಅಥವಾ ಓಂಕಾಳಿನ ಗಿಡವೆಂದು ತಪ್ಪಾಗಿ ಅರ್ಥೈಸಿದ್ದೀರಾ?

ಬಹುತೇಕರು ಅಜ್ವಾಯಿನ್ ಸಸ್ಯವೆಂದು ಪರಿಗಣಿಸುತ್ತಿರುವುದು ವಾಸ್ತವದಲ್ಲಿ ಅದು ನಿಜವಾದ ಅಜ್ವಾಯಿನ್ ಗಿಡವಲ್ಲ. ಹಾಗಾದರೆ ನಿಜವಾದ ಸೆಲರಿ ಗಿಡ ಹೇಗಿರುತ್ತದೆ ಎಂಬುದನ್ನು ಕಂಡುಕೊಳ್ಳಿ. ಸಾಮಾನ್ಯವಾಗಿ ಈ ದೊಡ್ಡಪತ್ರೆಯ ಎಲೆಯ ಗಿಡವನ್ನು ಮಕ್ಕಳಿರುವ ಮನೆಯಲ್ಲಿ ನೆಟ್ಟಿರುತ್ತಾರೆ. ಇದು ಮಕ್ಕಳಿಗೆ ಶೀತ, ಕೆಮ್ಮು ನಿವಾರಿಸಲು ಉತ್ತಮ ಮನೆಮದ್ದಾಗಿದೆ.

ಬಹುತೇಕರು ಇದನ್ನು ಅಜ್ವಾಯಿನ್ ಗಿಡವೆಂದು ಹೇಳುತ್ತಾರೆ. ಆದರೆ ಇದರ ಪರಿಮಳ ಅಜ್ವಾಯಿನ್ ಅಥವಾ ಓಂ ಕಾಳಿನಂತೆ ಇದೆಯೇ ಹೊರತು, ಇದು ಓಂ ಕಾಳಿನ ಗಿಡವಲ್ಲ. ಅಸಲಿಗೆ ಅಜ್ವಾಯಿನ್ ಗಿಡ ಬೇರೆಯೇ ರೀತಿ ಇರುತ್ತದೆ.

**ನಿಮ್ಮ ಮನೆಯಲ್ಲಿ ಯಾವ ಗಿಡ ನೆಟ್ಟಿದ್ದೀರಿ** ತೋಟಗಾರಿಕೆ ಸಲಹೆಗಳನ್ನು ನೀಡುವ ಸಾಮಾಜಿಕ ಮಾಧ್ಯಮ ಖಾತೆಯಾದ ಯುನಿಕ್ ಫಾರ್ಮಿಂಗ್, ನಿಜವಾದ ಮತ್ತು ನಕಲಿ ಸೆಲರಿ ಸಸ್ಯಗಳ ಬಗ್ಗೆ ಮಾಹಿತಿಯನ್ನು ನೀಡಿದೆ. ಅದರ ಪ್ರಕಾರ, ನೀವು ನೆಡುತ್ತಿರುವ ದಪ್ಪ ಎಲೆಗಳ ಸಸ್ಯವು ಸೆಲರಿ ಅಲ್ಲ, ಬದಲಾಗಿ



ಮೆಕ್ಸಿಕನ್ ಪುದೀನ. ಈ ಸಸ್ಯದ ಎಲೆಗಳು ಮಾತ್ರ ಸೆಲರಿಯಂತಹ ಪರಿಮಳವನ್ನು ಹೊಂದಿರುತ್ತವೆ. ಇದರಿಂದಾಗಿ ತಜ್ಞರು ಸಹ ಅರ್ಥಮಾಡಿಕೊಳ್ಳುವಲ್ಲಿ ತಪ್ಪುಗಳನ್ನು ಮಾಡುತ್ತಾರೆ ಎಂದಿದೆ.

**ಮೆಕ್ಸಿಕನ್ ಪುದೀನ ಎಂದರೇನು?:** ವಾಸ್ತವವಾಗಿ ಮೆಕ್ಸಿಕನ್ ಪುದೀನ ಮೆಕ್ಸಿಕೋದಲ್ಲಿ ಕಂಡುಬರುತ್ತದೆ. ಇದು ಹೆಚ್ಚಾಗಿ ಮರುಭೂಮಿ ಪ್ರದೇಶಗಳಲ್ಲಿ ಕಂಡುಬರುತ್ತದೆ. ಇದು ಪುದೀನ ಜಾತಿಯದ್ದಾಗಿದ್ದರೂ, ಭಾರತೀಯ ಪುದೀನಕ್ಕಿಂತ ಬಹಳ ಭಿನ್ನವಾಗಿದೆ. ನಿಮ್ಮ ಮನೆಯಲ್ಲಿ ಈ ಗಿಡವಿದ್ದರೆ ಅದ ರಿಂದ ಹೆಚ್ಚಿನ ಹಾನಿ ಇಲ್ಲ. ಆದರೆ ಅದನ್ನು ಓಂ ಕಾಳಿನ ಗಿಡ ಎಂದು ಭಾವಿಸಿ ಬಳಸಬೇಡಿ.

**ನಿಜವಾದ ಅಜ್ವಾಯಿನ್ ಅಥವಾ ಓಂಕಾಳಿನ ಗಿಡ ಹೇಗಿರುತ್ತದೆ?:** ಈಗ ನಿಜವಾದ ಸೆಲರಿ ಗಿಡ ಹೇಗಿರುತ್ತದೆ ಎಂಬ ಪ್ರಶ್ನೆ ಉದ್ಭವಿಸುತ್ತದೆ, ಹಾಗಾದರೆ ಅದರ ಎಲೆಗಳು ಚಿಕ್ಕದಾಗಿರುತ್ತವೆ ಮತ್ತು ಹಸಿರು ಕೊತ್ತಂಬರಿ ಸೊಪ್ಪಿನಂತಿರುತ್ತವೆ. ಈ ಸಸ್ಯವು ಬೆಳೆದಾಗ, ಅದು ಬಿಳಿ ಹೂವುಗಳನ್ನು ಹೊಂದಿರುತ್ತದೆ. ಇವುಗಳಲ್ಲಿ ಸೆಲರಿಯೂ ಸೇರಿದೆ. ಸೆಲರಿ ಒಣಗಿದ ನಂತರವೇ ತಿನ್ನಲು ಸಿದ್ಧವಾಗುತ್ತದೆ.

**ನಿಜವಾದ ಸೆಲರಿ ಗಿಡವನ್ನು ಹೇಗೆ ಬೆಳೆಸುವುದು?:** ನೀವು ಒಂದು ಕುಂಡದಲ್ಲಿ ನಿಜವಾದ ಸೆಲರಿ ಗಿಡವನ್ನು ಬೆಳೆಸಲು ಬಯಸಿದರೆ, ನೀವು ಮನೆಯಲ್ಲಿ ಇಟ್ಟಿರುವ ಸೆಲರಿ ಬೀಜಗಳನ್ನು ಬಳಸಬಹುದು.

ಬೀಜಗಳನ್ನು ರಾತ್ರಿಯಿಡೀ ನೀರಿನಲ್ಲಿ ನೆನೆಸಿದ ನಂತರ ಆ ಬೀಜಗಳನ್ನು ಕುಂಡದಲ್ಲಿ ನೆಡಬೇಕು. ಬೀಜಗಳು 2 ವಾರಗಳಲ್ಲಿ ಮೊಳಕೆಯೊಡೆಯುತ್ತವೆ ಮಳೆಗಾಲ ಮತ್ತು ಚಳಿಗಾಲದಲ್ಲಿ ವೇಗವಾಗಿ ಬೆಳೆಯುತ್ತವೆ.

# ಬಾಡಿ ಹೀಟ್ ಕಡಿಮೆ ಆಗುತ್ತೆ ನೋಡಿ...

ಬೇಸಿಗೆಯಲ್ಲಿ ಒಣದ್ರಾಕ್ಷಿ ಹಸಿಯಾಗಿ ತಿನ್ನಬಾರದು ಇದರ ಬದಲು ರಾತ್ರಿ ಮಲಗುವ ಮುನ್ನ ಐದಾರು ಒಣದ್ರಾಕ್ಷಿಗಳನ್ನು ತೆಗೆದುಕೊಂಡು ಅದನ್ನು ನೀರಿನಲ್ಲಿ ಚೆನ್ನಾಗಿ ತೊಳೆಯಿರಿ. ನಂತರ ಲೋಟ ನೀರಿನಲ್ಲಿ ಹಾಕಿ ರಾತ್ರಿಯಿಡಿ ಇಡಿ. ಬೆಳಿಗ್ಗೆ ಎದ್ದು ಖಾಲಿ ಹೊಟ್ಟೆಯಲ್ಲಿ ಈ ನೀರನ್ನು ಕುಡಿಯಿರಿ ಮತ್ತು ಒಣದ್ರಾಕ್ಷಿ ತಿನ್ನಿರಿ.ಇದು ದೇಹವನ್ನು ತಂಪಾಗಿಡಲು ಮತ್ತು ಜೀರ್ಣಕ್ರಿಯೆಯನ್ನು ಸುಧಾರಿಸಲು ಸಹಾಯ ಮಾಡುವು

ನೆಂಟರು ಬಂದಾಗ ಅಥವಾ ಹಬ್ಬದ ಸಂದರ್ಭದಲ್ಲಿ ಮನೆಯಲ್ಲಿ ಮಾಡುವ ಪಾಯಸ, ಬೂಂದಿ ಲಾಡು ಇತ್ಯಾದಿ ಸಿಹಿ ಪದಾರ್ಥಗಳಿಗೆ ಒಣಗಿರುವ ದ್ರಾಕ್ಷಿ ಹಣ್ಣುಗಳನ್ನು ಬಳಕೆ ಮಾಡುತ್ತೇವೆ. ಕೆಲವು ಬಗೆಯ ಬಿರಿಯಾನಿ ಅಥವಾ ಲಾವ್ ಗಳಲ್ಲಿಯೂ ದ್ರಾಕ್ಷಿ ಗೋಡಂಬಿಗಳನ್ನು ಸೇರಿಸಲಾಗುತ್ತದೆ.

ಕೆಲವರು ಕೇವಲ ಅಲಂಕಾರಕ್ಕಾಗಿ ಅವುಗಳನ್ನು ಬಳಸಿದರೆ ಇನ್ನು ಕೆಲವರು ತಯಾರು ಮಾಡುವ ಆಹಾರದ ರುಚಿಯ ಕಾರಣಕ್ಕಾಗಿ ಬಳಕೆ ಮಾಡುತ್ತಾರೆ. ಒಟ್ಟಿನಲ್ಲಿ ಎರಡರಿಂದಲೂ ಸಹ ಆರೋಗ್ಯಕ್ಕೆ ಒಳ್ಳೆಯ ಪ್ರಯೋಜನಗಳು ಸಿಗುವುದು ಗ್ಯಾರಂಟಿ ಸಾಮಾನ್ಯವಾಗಿ ನಮಗೆ ಮಾರುಕಟ್ಟೆಯಲ್ಲಿ ಕಂದುಬಣ್ಣದ ಒಣಗಿದ ದ್ರಾಕ್ಷಿ ಹಣ್ಣುಗಳು ಬಳಸಲು ಹೆಚ್ಚು ಸಿಗುತ್ತವೆ. ಆದರೆ ಈ ಒಣಫಲವನ್ನು ಹಾಗೆಯೇ ತಿನ್ನುವ ಬದಲು,



ರಾತ್ರಿ ಮಲಗುವ ಮುನ್ನ ಸ್ವಲ್ಪ ಒಣದ್ರಾಕ್ಷಿಯನ್ನು ನೆನೆಸಿಟ್ಟು ಬೆಳಗ್ಗಿನ ಜಾವ ಖಾಲಿ ಹೊಟ್ಟೆಗೆ ಸೇವನೆ ಮಾಡಿದರೆ ಬಹಳ ಒಳ್ಳೆಯದು ಎನ್ನುತ್ತಾರೆ ತಜ್ಞರು

**ನೆನೆಸಿಟ್ಟ ಒಣದ್ರಾಕ್ಷಿ:** ರಾತ್ರಿ ನೆನೆಸಿಟ್ಟ ಒಣ ದ್ರಾಕ್ಷಿಯನ್ನು ಸೇವಿಸುವ ಅಭ್ಯಾಸ ಮಾಡಿ ಕೊಂಡರೆ, ದೇಹದ ರೋಗ ನಿರೋಧಕ ಶಕ್ತಿ ವೃದ್ಧಿಯಾ ಗುತ್ತದೆ ಎನ್ನುತ್ತಾರೆ ಆರೋಗ್ಯ ತಜ್ಞರು. ಯಾಕೆಂದ್ರೆ ಈ ಒಣಫ ಲದಲ್ಲಿರುವ ನೈಸರ್ಗಿಕ ಸಕ್ಕರೆಯಾಂಶವು ದೇಹವನ್ನು ಸಕ್ರಿಯವಾಗಿರಲು ಶಕ್ತಿಯನ್ನು ಹೆಚ್ಚಿಸಲು ಸಹಾಯ ಮಾಡುತ್ತವೆ.

ಇನ್ನು ಪುಟ್ಟ ಒಣದ್ರಾಕ್ಷಿಯಲ್ಲಿ ಕರಗುವ ನಾರು ಉತ್ತಮ ಪ್ರಮಾಣ ದಲ್ಲಿದೆ ಹಾಗೂ ಅಧಿಕ ರಕ್ತದೊತ್ತಡವನ್ನು ಕಡಿಮೆ ಮಾಡಿ ಹೃದಯದ ಆರೋಗ್ಯ ಕಾಪಾಡುವ ಪೊಟ್ಯಾಸಿಯಮ್ ಅಂಶ ಒಣ ದ್ರಾಕ್ಷಿಯಲ್ಲಿ ಯಥೇಚ್ಛವಾಗಿ ಕಂಡು ಬರುತ್ತದೆ. ಇನ್ನು ಇವೆಲ್ಲಾದರ ಜೊತೆಗೆ ಇದರಲ್ಲಿ ಮೂಳೆಗಳಿಗೆ ಬೇಕಾಗುವ ಕ್ಯಾಲ್ಸಿಯಂ ಮೊದಲಾದ ಪೋಷಕಾಂಶಗಳು ಹೇರಳವಾಗಿವೆ.

# ಬಾಳು ಒಂದು ಹೋರಾಟ

ಸಾಮಾಜಿಕ ಕಳಕಳಿ



ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ
ಚಿಂತಕಿ.ಹಾಸನ


ಪ್ರತಿ ಕಣ್ಣೀರಿಗೂ ಕಥೆ ಇದೆ ಎನ್ನುತ
ಅಲ್ಲಿ ಹೆಣ್ಣಿನ ಭಾವವಿದೆ, ಅರಿಯುತ
ವ್ಯಥೆಯೇ ಬಹಳವಾಗಿದೆ ತಿಳಿಯುತ
ಕನಸು ಕಾಣದಂತಾಗಿದೆ ಬದುಕುತ.....
ಬಾಳು ಒಂದು ಕಷ್ಟ-ಸುಖದ ಹೋರಾಟ
ಸೋಲು ಗೆಲುವಿನ ಬದುಕುವ ಜಂಜಾಟ
ಕದನದಲಿ ಹೆಣ್ಣು ತ್ಯಾಗಿಯಾಗಿ ಗೆಲ್ಲಬೇಕು
ನೋವ ನಾವು ಊಣದೆ ಮರೆಯ ಬೇಕು.....
ಅಂತೆಯೇ ಸುಖವ ಕಾಣಬೇಕು
ಅಂಕು-ಡೊಂಕಿನ ರಸ್ತೆಯಲ್ಲಿ ಸಾಗಬೇಕು
ಬದುಕಲಿ ಸಾರ್ಥಕವ ನಾವು ಕಾಣಬೇಕು
ಜೀವನವೇ ಹೋರಾಟ ನಗುತಿರಬೇಕು....
ಬಾಳಿನ ಹಲವು ಅರ್ಥವ ತಿಳಿಯಬೇಕು
ಕೈಯಲ್ಲಾದ ಸಹಾಯವ ಜನರಿಗೆ ಮಾಡಬೇಕು
ನೊಂದವರ ದನಿಯಾಗಿ ನಾಯಕನಂತೆ ನಿಲ್ಲಬೇಕು
ಕಷ್ಟ ಸುಖವ ಕಂಡು ಮನ ಮರುಗಬೇಕು....



# ದೇವರು



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ



ಭಗವಂತನ ಮತ್ತು ಭಕ್ತರ ನಡುವಿನ ಆತ್ಮಾನುಸಂಧಾನವೇ ಆಧ್ಯಾತ್ಮ.. ಜಗವೇ ದೈವಾಧೀನ. ದೇವರು ಸರ್ವವ್ಯಾಪಿ, ಸರ್ವ ಶಕ್ತ. ಅವನೇ ಜಗನ್ನಿಯಾಮಕ, ದೇವರನ್ನು ಹಲವಾರು ರೀತಿಗಳಲ್ಲಿ ಆಯಾಕಾಲಮಾನ, ಹವಾಗುಣ, ಪರಿಸರ, ಸಂಸ್ಕೃತಿ, ಭೌಗೋಳಿಕ ಸ್ಥಿತಿಗತಿಗಳಿಗನುಗುಣವಾಗಿ ಅನೇಕ ರೀತಿಗಳಲ್ಲಿ ಪೂಜಿಸುತ್ತಾರೆ, ಆರಾಧಿಸುತ್ತಾರೆ ಸನಾತನ ಕಾಲಘಟ್ಟದಲ್ಲಿ ನಮ್ಮ ಋಷಿಮುನಿಗಳು ಸಾಧುಸಂತರು ಕಾಮ, ಕ್ರೋಧ, ಲೋಭ,ಮೋಹ,ಮದ, ಮಾತ್ಸರ್ಯವೆಂಬ ಅರಿಷಡ್ವರ್ಗಗಳನ್ನು ನಿಗ್ರಹಿಸಿಕೊಂಡು ಲೋಕೋದ್ಧಾರಕರಾಗಿ ಭಗತವಂತನನ್ನು ಕರಿತು ಕಠೋರ ತಪಸ್ಸನ್ನು ಆಚರಿಸಿ ಅವನ್ನು ಸಾಕ್ಷಾತ್ಕರಿಸಿಕೊಂಡು ಅನೇಕ ವರಗಳನ್ನು, ಅತೀಂದ್ರಿಯ ಅತೀತ ಶಕ್ತಿ ಗಳನ್ನು ಪಡೆದುಕೊಳ್ಳುತ್ತಿದ್ದರು. ಹೀಗೆ ಪಡೆದ ಅತೀತ ಶಕ್ತಿಗಳಿಂದ, ಅಂತ: ಚಕ್ಷುಗಳಿಂದ ನಮ್ಮ ಋಷಿ ಮುನಿಗಳು ಸೌರಮಂಡಲದ ಗ್ರಹಗಳ ನಿರ್ದಿಷ್ಟ ಚಲನೆ ಅವುಗಳೊಂದಿಗಿನ ನಕ್ಷತ್ರಗಳ ಒಟನಾಟ ಮೊದಲಾದವುಗಳನ್ನು ನಿಖರವಾಗಿ ದಾಖಲಿಸಿ ರುತ್ತಾರೆ.

ನಾವಾದರೋ ಹುಲುಮಾನವರು ಭೌತಿಕ ಆಮಿಷಗಳಿಗೆ ಒಳಪಟ್ಟು ಅರಿಷಡ್ವರ್ಗಗಳಿಗೆ ದಾಸರಾಗಿ ಸೀಮಿತ ಸಮಯದಲ್ಲಿ ಪರಿಮಿತ ಚೌಕಟ್ಟಿನಲ್ಲಿ ಭಗವಂತನನ್ನು ಪ್ರಾರ್ಥಿಸುತ್ತೇವೆ. ಯಾರಿಗೆ ಯಾವ ಸಮಯದಲ್ಲಿ ಏನನ್ನು ಎಷ್ಟು ಪ್ರಮಾಣದಲ್ಲಿ ಹೇಗೆ ದಯಪಾಲಿಸಬೇಕೆಂಬುದು ದೇವರ ಇಚ್ಛೆ. ಆದರೆ ನಾವು ಯ:ಕಶ್ಚಿತ್ ಮಾನವರು ಅದನ್ನು ಮನಗಾಣದೇ ನಮ್ಮದೇ ರೀತಿಯಲ್ಲಿ ದೇವರನ್ನು ನಮಗೆ ಬೇಕಾದಾಗ ನಮಗೆ ಬೇಕಾಗುವಷ್ಟನ್ನು ನಮ್ಮದೇ ಹಕ್ಕು ಅನ್ನುವ ರೀತಿಯಲ್ಲಿ ನಮ್ಮ ನಮ್ಮ ಯೋಗ್ಯತೆಗಳನ್ನು ಮೀರಿ ಪರಿಪರಿಯಾಗಿ ಅವನನ್ನು ಕಾಡಿ ಬೇಡುತ್ತಿರುತ್ತೇವೆ. ವಿಪರ್ಯಾಸವೆಂದರೆ ನಮಗೆ ಎಷ್ಟು ಸಲ್ಲಬೇಕೋ ಅಷ್ಟನ್ನು ಅವನು ಆ ಸನ್ನಿವೇಶಕ್ಕೆ ತಕ್ಕಂತೆ ಯಾವುದೋ ರೀತಿಯಲ್ಲಿ ದಯಾಪಾಲಿಸಿರುತ್ತಾನೆ. ನಾವುಗಳೋ ಅತ್ಯಂತ ದುರಾಸೆಯಿಂದ ಅಷ್ಟಕ್ಕೆ ತೃಪ್ತರಾಗದೆ ಇನ್ನಷ್ಟು ಮತ್ತುಷ್ಟು ಬೇಡಿಕೆಗಳನ್ನು ಸಲ್ಲಿಸುತ್ತಿರುತ್ತೇವೆ. ದೇವರು ಎಂಬ ಪದವೇ ಮನಸ್ಸಿಗೆ ತುಂಬಾ ನೆಮ್ಮದಿ, ಧೈರ್ಯ ಸ್ಥೈರ್ಯವನ್ನು ಕೊಡುವಂತಹುದು. ದೇವರು ಅಗೋಚರವಾದರೂ ಕೆಲವೊಮ್ಮೆ ನಾವು ಯಾವುದೋ ಸಂಕಷ್ಟದ ಕ್ಲಿಷ್ಟಕರ ಸನ್ನಿವೇಶದಲ್ಲಿ ದಿಕ್ಕೆಟ್ಟು ದಾರಿಕಾಣದೆ ತೊಳಲಾಡುತ್ತಿದ್ದ ಸಮಯದಲ್ಲಿ ಆ ಸಮಸ್ಯೆಯಿಂದ ಪಾರುಮಾಡುವಂತೆ ಭಗವಂತನ ಕೃಪೆಗಾಗಿ ನಿರ್ಮಲ ಚಿತ್ತದಿಂದ ಏಕಾಗ್ರಚಿತ್ತದಿಂದ ಪ್ರಾರ್ಥಿಸಿದರೆ ಆ ಸಂಕಷ್ಟವನ್ನು ಎದುರಿಸಲು/ ಪರಿಹರಿಸಲು ಅತ್ಯಗತ್ಯವಾಗಿ ಬೇಕಾದ ಮಾನಸಿಕ ಧೈರ್ಯ, ಸ್ಥೈರ್ಯ ಮತ್ತು ಸಮುಚಿತ ಮಾರ್ಗವನ್ನು ಅಚ್ಚರಿ ಪಡುವ ರೀತಿಯಲ್ಲಿ ನಮಗೆ ಅಗತ್ಯವಿರುವ ನೆರವನ್ನು ಯಾವುದೋ ಒಂದು ರೂಪದಲ್ಲಿ/ ರೀತಿಯಲ್ಲಿ ದಯಪಾಲಿಸಿ ನಮ್ಮನ್ನು ಅ ಸಮಸ್ಯೆಯಿಂದ ನಿರಾಯಾಸವಾಗಿ ಪಾರುಮಾಡುತ್ತಾನೆ. ಇಂತಹ ಅನೇಕ ಘಟನೆಗಳು ಪ್ರತಿಯೊಬ್ಬರ ಜೀವನದಲ್ಲಿಯೂ ಒಂದಲ್ಲಾ ಒಂದು ಸಲ ನಡೆದೇ ಇರುತ್ತದೆ. ಬೇರೆ ದಾರಿಯೇ ಇಲ್ಲವೆಂದು ಯಾವುದೋ ಒಂದ ಮಾರ್ಗ ಗೋಚರಿಸುತ್ತದೆ. ಎಂತಹುದೇ ಸಂಕಷ್ಟದ ಸಂದರ್ಭಗಳಲ್ಲಿ ನಾವು ನಿಸ್ಸಹಾಯಕರಾಗಿ ನಿರಾಸೆಯಿಂದ ಇದ್ದಾಗ ನಮ್ಮನ್ನು ಆ ಸಂಕಷ್ಟದ ಪರಿಸ್ಥಿತಿಯಿಂದ ಪವಾಡ ರೀತಿಯಲ್ಲಿ ರಕ್ಷಿಸುತ್ತಾನೆ ಎಂದು ಪ್ರತಿಯೊಬ್ಬ ನಾಸ್ತಿಕರೂ ದೇವರನ್ನು ಪ್ರಾರ್ಥಿಸುತ್ತಾರೆ. ಪ್ರತ್ಯಕ್ಷವಾಗಿಯೋ ಪರೋಕ್ಷವಾಗಿಯೋ ಎಷ್ಟೋ ಸಲ ನಮಗೆ ದೇವರ ಅಸ್ತಿತ್ವದ ಅಗೋಚರ ಶಕ್ತಿಯ ಅರಿವಾಗಿರುತ್ತದೆ.

ಮೂಕಂ ಕರೋತಿ ವಾಚಾಲಂ ಪಂಗು ಲಂಘಯತೇ **ಗಿರಿಂ:** ಯತ್ಕೃಪಾ ತಮಹಂ ವಂದೇ ಪರಮಾನಂದ **ಮಾಧವಂ:** ಯಾವ ದೇವರ ಕೃಪೆಯಿಂದ ಮೂಕನಾದವನು ವಾಚಾಳಿಯಂತೆ ಮಾತನಾಡಬಲ್ಲನೋ ಕುಂಟನಾದವನು ಪರ್ವತವನ್ನು ನಿರಾಯಾಸವಾಗಿ ಏರಬಲ್ಲನೋ ಅಂತಹ ಪರಮಾತ್ಮನ್ನು ವಂದಿಸುತ್ತೇನೆ ಎಂಬುದೇ ಮೇಲಿನ ಸುಭಾಷಿತದ ತಾತ್ಪರ್ಯ. ದೇವರ ಕೃಪಾಶೀರ್ವಾದ ಎಲ್ಲರ ಮೇಲಿರಲಿ .

ಉದಯ ವಾಹಿನಿ
ಪ್ರಾದೇಶಿಕ
ಭಾನುವಾರ 11 ಮೇ 2025
05

# ಸನ್ಯಾಸಿ ಸೋಗಿನಲ್ಲಿ ಅಂಗಡಿ ಮಾಲಿಕನಿಗೆ ವಂಚನೆ

• ಉದಯವಾಹಿನಿ ಕಾರ್ಕಳ

ತಾಲ್ಲೂಕಿನ ಅಜೆಕಾರಿನ ಅಂಗಡಿಯೊಂದಕ್ಕೆ ಕಾವಿ ಧರಿಸಿದ ಇಬ್ಬರು ಸನ್ಯಾಸಿಗಳು ಅಂಗಡಿಗೆ ಬಂದು ಹಿಂದಿ ಭಾಷೆಯಲ್ಲಿ 'ನಿಮಗೆ ಒಳ್ಳೆಯದಾಗುವಂತೆ ಆರ್ಶಿವಾದ ಮಾಡುತ್ತೇವೆ' ಎಂದು ಹೇಳಿ ಮಾಲೀಕನ ಉಂಗುರ, ನಗದು ಅಪಹರಿಸಿ ಪರಾರಿಯಾಗಿದ್ದಾರೆ. ಅಜೆಕಾರಿನ ಸುಧಣ್ಣ ರೆಸಿಡೆನ್ಸಿ ಸಮೀಪದ ಶ್ರೀದುರ್ಗಾ ಎಂಟರ್ ಪ್ರೈಸಸ್ ಎಲೆಕ್ಟ್ರಾನಿಕ್ಸ್ ಅಂಗಡಿ ಒಳಗೆ ಬಂದ ಸನ್ಯಾಸಿಗಳಲ್ಲಿ ಒಬ್ಬ ಮಾಲೀಕನ ತಲೆ ಮೇಲೆ ಕೈ ಇಟ್ಟು ಅವರ ಗಮನ ಬೇರೆಡೆ ಸೆಳೆದಿದ್ದು, ಇನ್ನೊಬ್ಬ ಮಾಲೀಕನ ಬಲಕ್ಕೆ ಹಿಡಿದು ಗಮನಕ್ಕೆ ಬಾರದಂತೆ ಬೆರಳಿನಲ್ಲಿದ್ದ 2 ಪವನ್ ತೂಕದ ಚಿನ್ನದ ಉಂಗುರ, ಕಿಸೆಯಲ್ಲಿದ್ದ 2 ಸಾವಿರ ಕಳವು ಮಾಡಿ ಅಂಗಡಿಯಿಂದ ಹೊರಟು ಹೋಗಿದ್ದಾರೆ.

ಮಾಲೀಕರಿಗೆ ಸ್ವಲ್ಪ ಸಮಯ ಮಂಕು ಬಡಿದಂತಾಗಿದ್ದು, 3– 4 ನಿಮಿಷಗಳ ಬಳಿಕ ಎಚ್ಚರಗೊಂಡಾಗ ಸನ್ಯಾಸಿಗಳು ಹೊರಟು ಹೋಗಿರುವುದು ಗಮನಕ್ಕೆ ಬಂದಿದೆ. ಅಕ್ಕಪಕ್ಕದ ಅಂಗಡಿಯವರಲ್ಲಿ ವಿಚಾರಿಸಿದಾಗ ಆ ಇಬ್ಬರು ಎಲ್ಲಿ ಹೋದರು ಎಂದು ತಿಳಿಯಲಿಲ್ಲ. ಈ ಬಗ್ಗೆ ಮಾಲೀಕ ಕಾಪುವಿನ ರಂಜಿತ್ ಅಜೆಕಾರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

# ಹೇಮರೆಡ್ಡಿ ಮಲ್ಲಮ್ಮಳ ಆದರ್ಶ ತತ್ವಗಳನ್ನು ಅಳವಡಿಸಿಕೊಳ್ಳಿ: ರಾಘವೇಂದ್ರ ಈಳಿಗೇರ

• ಉದಯವಾಹಿನಿ ಕಾರಟಗಿ

ಪಟ್ಟಣದ ನವಲಿ ರಸ್ತೆಯಲ್ಲಿರುವ ಅಗ್ನಿಶಾಮಕ ಠಾಣೆಯಲ್ಲಿ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮಳ ಜಯಂತಿಯನ್ನು ಪ್ರಭಾರ ಅಗ್ನಿಶಾಮಕ ಠಾಣಾಧಿಕಾರಿ ಶ್ರೀ ರಾಘವೇಂದ್ರ ಇಳಿಗೇರ ನೇತೃತ್ವದಲ್ಲಿ ಸಿಬ್ಬಂದಿಯವರೊಂದಿಗೆ ಶನಿವಾರ ಇಲಾಖೆ ಆವರಣದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಬಳಿಕ ರಾಘವೇಂದ್ರ ಇಳಿಗೇರ ಮಾತನಾಡಿ ಹೇಮರೆಡ್ಡಿ ಮಲ್ಲಮ್ಮ ನಮ್ಮ ನಾಡಿನ ಪ್ರಾತಸ್ಮರಣೆಯ ಶಿವಶರಣೆ. ಮಹಾ ಸಾಧ್ವಿ. ಸುಮಾರು 500 ವರ್ಷಗಳ ಹಿಂದೆ ಜನಿಸಿ ಶ್ರೀಶೈಲ ಮಲ್ಲಿಕಾರ್ಜುನ ಸ್ವಾಮಿಯ ಆರಾಧನೆಗೆ ಜೀವನ ಮುಡಿಪಿಟ್ಟು ಈ ಭೂಮಿಯನ್ನು ಪವಿತ್ರ ಗೊಳಿಸಿದ ಅಧ್ಯಾತ್ಮ . ದಾಸೋಹ ಮತ್ತು ಕಾಯಕದ ಮಹತ್ವ ಎತ್ತಿ ಹಿಡಿದ ಶಿವಶರಣೆ. ಇಂತಹ ಮಹಾ ಸಾಧ್ವಿ ಹೇಮರೆಡ್ಡಿ ಮಲ್ಲಮ್ಮಳ ಆದರ್ಶ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು. ಈ ಸಂದರ್ಭದಲ್ಲಿ ಅಗ್ನಿಶಾಮಕ ಇಲಾಖೆ ಅಧಿಕಾರಿಗಳು ಸಿಬ್ಬಂದಿ ವರ್ಗ ಇದ್ದರು.



ಉದಯವಾಹಿನಿ ಚಿತ್ರ

## ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಮಾಡಲು ಆಡಳಿತ ನಿರ್ಲಕ್ಷ್ಯ: ಗ್ರಾಮಸ್ಥರ ಆಕ್ರೋಶ

# ವಿದ್ಯುತ್ ಕೈಕೊಟ್ಟರೆ ನೀರಿಗಾಗಿ ಗ್ರಾಮೀಣ ಜನರ ಪರದಾಟ

• ಉದಯವಾಹಿನಿ ಚಿತ್ತಾಪುರ

ತಾಲ್ಲೂಕಿನ ಡೋಣಗಾಂವ ಗ್ರಾಮ ಪಂಚಾಯಿತಿ ವ್ಯಾಪ್ತಿಯ ರಾಜೋಳಾ ಗ್ರಾಮದಲ್ಲಿ ಪ್ರತಿ ವರ್ಷದಂತೆ ಈ ಸಲವೂ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದೆ. ಮೂರು ದಿನಕ್ಕೊಮ್ಮೆ ನೀರು ಪೂರೈಕೆ ಮಾಡಲಾಗುತ್ತಿದೆ. ಜನರು ಸಮಸ್ಯೆಯೊಂದಿಗೆ ಹೊಂದಿಕೊಂಡು ಜೀವನ ಸಾಗಿಸುವ ಪರಿಸ್ಥಿತಿಯಿದೆ. ಗ್ರಾಮಕ್ಕೆ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಮಾಡಲು ಆಡಳಿತ ನಿರ್ಲಕ್ಷಿಸುತ್ತಿದೆ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಗ್ರಾಮದ ಹೊರವಲಯದ ಮುಖ್ಯ ರಸ್ತೆಯ ಪಕ್ಕದಲ್ಲಿರುವ ಪುರಾತನ ದೊಡ್ಡ ಬಾವಿಯಲ್ಲಿ ಬೇಸಿಗೆಯ ಬಿಸಿಲಿನ ಪ್ರಖರತೆಗೆ ಮತ್ತು ಅಂತರ್ಜಲ ಮಟ್ಟವು ತೀವ್ರ ಕುಸಿತದಿಂದ ನೀರು ಪಾತಾಳಕ್ಕೆ ಸೇರಿದೆ. ಎರಡು ಕೊಳವೆ ಬಾವಿಗಳಿದ್ದು ಅಲ್ಪಮಟ್ಟಿಗೆ ಸಹಾಯಕವಾಗಿವೆ. ಒಂದು ಕೊಳವೆ ಬಾವಿಯಿಂದ ನೀರನ್ನು ತೆರೆದ ಬಾವಿಗೆ ಬಿಡಲಾಗುತ್ತಿದೆ. ವಿದ್ಯುತ್ ಕೈಕೊಟ್ಟರೆ ಜನರು ನೀರಿಗಾಗಿ ಪರದಾಡುವ ಪರಿಸ್ಥಿತಿಯಿದೆ ಎನ್ನುತ್ತಾರೆ ಗ್ರಾಮದ ಮುಖಂಡ ಭೀಮಾಶಂಕರ.

ಎರಡು ಕೊಳವೆ ಬಾವಿಗಳ ನೀರು ಒಂದು ರೀತಿಯ ಕೆಟ್ಟ ವಾಸನೆ ಬರುತ್ತಿದೆ. ಜನರು ಅದೇ ನೀರು ಕುಡಿಯಬೇಕಿದೆ. ತೆರೆದ ಬಾವಿಯಲ್ಲಿನ ನೀರು ಕಡಿಮೆಯಾಗಿದೆ. ದಿನಾಲೂ ಜನರು ನೀರಿನ ವಾಸನೆ ಕುರಿತು ತಕರಾರು ಮಾಡುತ್ತಿದ್ದಾರೆ.



ಉದಯವಾಹಿನಿ ಚಿತ್ರ

### ನೀರಿನ ಸಮಸ್ಯೆಯಾಗದಂತೆ ಎಚ್ಚರಿಕೆ

**ತಾಲ್ಲೂಕು ವ್ಯಾಪ್ತಿಯಲ್ಲಿ ಜನರಿಗೆ ನೀರಿನ ಸಮಸ್ಯೆಯಾಗದಂತೆ ಅಗತ್ಯ ಎಚ್ಚರಿಕೆ ವಹಿಸಲಾಗಿದೆ. ಹಲಕರ್ಟಿ ಗ್ರಾಮದಲ್ಲಿ ಉದ್ಭವಿಸಿದ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲಾಗಿದೆ' ಎಂದು ಚಿತ್ತಾಪುರ ತಹಶೀಲ್ದಾರ್ ನಾಗಯ್ಯ ಹಿರೇಮಠ ತಿಳಿಸಿದರು. 'ಇವಣಿ ಗ್ರಾಮದಲ್ಲಿ ಕೊಳವೆ ಬಾವಿಯಿಂದ ಮೇಲ್ಮಟ್ಟದ ಜಲಸಂಗ್ರಹಗಾರಕ್ಕೆ ಪೈಪುಗಳ ಅಳವಡಿಕೆ ನಡೆಯುತ್ತಿದೆ. ಜನರಿಗೆ ನೀರಿನ ಸಮಸ್ಯೆಯಾಗದಂತೆ ತುರ್ತು ಕ್ರಮ ಕೈಗೊಳ್ಳಲಾಗಿದೆ. ವಿವಿಧ ಗ್ರಾಮಗಳಲ್ಲಿ ಸಣ್ಣಪುಟ್ಟ ಸಮಸ್ಯೆ ಹೊರತುಪಡಿಸಿದರೆ ಹೆಚ್ಚಿನ ಸಮಸ್ಯೆಯಾಗಿಲ್ಲ' ಎಂದು ತಿಳಿಸಿದರು.**

**ಮೂರು ದಿನಕ್ಕೊಮ್ಮೆ ನೀರು**

ಗ್ರಾಮದ ಸಮೀಪವೇ ಶ್ರೀ ಸಿಮೆಂಟ್ ಕಂಪನಿ ಕಲ್ಲಿನ ಗಣಿಗಾರಿಕೆಯಿಂದ ಕೊಳವೆ ಬಾವಿ ಮತ್ತು ತೆರೆದ ಬಾವಿಗೆ ಗಣಿಯಲ್ಲಿನ ಮದ್ದು ಮಿಶ್ರಿತ ನೀರು ಕೊಳವೆ ಬಾವಿಗೆ ಬಂದು ನೀರು ಕಲುಷಿತಗೊಳ್ಳುತ್ತಿದೆ. ನೀರಿನಲ್ಲಿ ಮದ್ದಿನ ವಾಸನೆ ಬರುತ್ತಿದೆ. ನೀರು ಪರೀಕ್ಷಿಸಿದರೆ ಕುಡಿಯಲು ಯೋಗ್ಯವಿಲ್ಲ ಎನ್ನುವ ವರದಿ ಬಂದಿದೆ ಎಂದು ಗ್ರಾಮದ ಮಲ್ಲಿಕಾರ್ಜುನ ತಳವಾರ ಹೇಳುತ್ತಾರೆ. ತಾಲ್ಲೂಕಿನ ಅಲ್ಲೂರ್ (ಬಿ) ಗ್ರಾಮದಲ್ಲಿರುವ ಮೇಲ್ಮಟ್ಟದ ಜಲಸಂಗ್ರಹಗಾರ ಹಳೆಯದಾಗಿದ್ದರಿಂದ ಪಕ್ಕದ ಮನೆಗಳ ಜನರಿಗೆ ಆತಂಕ ಉಂಟಾಗಿ ನೀರು ತುಂಬಬೇಡಿ ಎಂದು ಹೇಳಿದ್ದರಿಂದ ಗ್ರಾಮದ ಜನರಿಗೆ ಕುಡಿಯುವ ನೀರಿನ ಸಮಸ್ಯೆಯಾಗಿದೆ. ಕೊಳವೆ ಬಾವಿಗಳಿದ್ದು ನೀರು ಪೂರೈಕೆಗೆ ನೆರವಾಗಿವೆ.

ಗ್ರಾಮದ ಕೆಲವು ಕಡೆಗೆ ಸಮರ್ಪಕವಾಗಿ ಪೈಪುಗಳನ್ನು ಅಳವಡಿಸಿಲ್ಲ. ಹೀಗಾಗಿ ನೀರು ಪೂರೈಕೆಗೆ ಸಮಸ್ಯೆಯಾಗಿ ಜನರು ಕೊಡ ಹಿಡಿದುಕೊಂಡು ಬೇರೆಡೆ ನೀರಿಗಾಗಿ ಅಲೆದಾಡುವ ಸ್ಥಿತಿಯಿದೆ ಎಂದು ಗ್ರಾಮಸ್ಥರು ಹೇಳಿದ್ದಾರೆ.

ಇಟಗಾ ಗ್ರಾಮದಲ್ಲಿ ಐದು ತೆರೆದ ಬಾವಿಗಳಿವೆ. ಎರಡು ಕೊಳವೆ ಬಾವಿಗಳಿವೆ. ಗ್ರಾಮದ ಪಕ್ಕದಲ್ಲಿಯೇ ಓರಿಯೆಂಟ್ ಸಿಮೆಂಟ್ ಕಂಪನಿಯ ಕಲ್ಲು ತೆಗೆಯುವ ಗಣಿಗಾರಿಕೆಯಿಂದಾಗಿ ತೆರೆದ ಬಾವಿಗಳು ನೀರಿಲ್ಲದಂತೆ ಬತ್ತಿವೆ. ಕೊಳವೆ ಬಾವಿಗಳಿಂದ ಮಾತ್ರ ಗ್ರಾಮಕ್ಕೆ ನೀರು ಪೂರೈಸುವ ವ್ಯವಸ್ಥೆಯಿದೆ. ವಿದ್ಯುತ್ ಸಮಸ್ಯೆಯಾದರೆ ಜನರು ನೀರಿಗಾಗಿ ಪರದಾಡುವ ಪರಿಸ್ಥಿತಿಯಿದೆ ಎನ್ನುತ್ತಾರೆ ಗ್ರಾಮದ ರವಿ ಮುಡಬೂಳಕರ್.

ಗ್ರಾಮೀಣ ಕುಡಿಯುವ ನೀರು ಮತ್ತು ತಾಲ್ಲೂಕು ಟಾಸ್ಕ್ ಫೋರ್ಸ್ ಸಮಿತಿಯು ಮೇ ತಿಂಗಳ ಅಂತ್ಯದವರೆಗೆ ಒಟ್ಟು 10 ಗ್ರಾಮಗಳಲ್ಲಿ ನೀರಿನ ಸಮಸ್ಯೆಯಾಗಬಹುದೆಂದು ಗುರುತಿಸಿದೆ. ತಾಲ್ಲೂಕಿನಲ್ಲಿ ಒಟ್ಟು 61 ಕೊಳವೆ ಬಾವಿಗಳಿದ್ದು, 36 ಕೊಳವೆ ಬಾವಿಗಳು ಮಾತ್ರ ಸುಸ್ಥಿತಿಯಲ್ಲಿದ್ದು, ಜನರಿಗೆ ಕುಡಿಯುವ ನೀರಿನ ಆಸರೆಯಾಗಿವೆ. 21 ಕೊಳವೆ ಬಾವಿಗಳು ನಿರುಪಯುಕ್ತವಾಗಿವೆ. ನೀರಿನ ಸಮಸ್ಯೆಯಾದ ನೀರಿನ ವ್ಯವಸ್ಥೆ ಮಾಡಲು 32 ಕೊಳವೆ ಬಾವಿಗಳನ್ನು ಆಡಳಿತವು ಗುರುತಿಸಿದೆ ಎಂದು ಮೂಲಗಳು ತಿಳಿಸಿವೆ.

# ಹೆಚ್ಚಿದ ಯುವತಿಯರ ಓಡಿ ಹೋಗುವಿಕೆ ಪ್ರಕರಣ

## ಸೂಕ್ತ ತನಿಖಾ ನಿಯಮಾವಳಿ ರೂಪಿಸಲು ಮನವಿ

• ಉದಯವಾಹಿನಿ, ವಿಜಯಪುರ

ಯುವತಿಯರ ಓಡಿ ಹೋಗುವಿಕೆ ಸಂಬಂಧಿಸಿದಂತೆ ಕುಟುಂಬ ಮತ್ತು ಸಮಾಜದ ಮೇಲಿನ ಪರಿಣಾಮಗಳನ್ನು ಪರಿಗಣಿಸಿ ಸೂಕ್ತ ತನಿಖಾ ನಿಯಮಾವಳಿ ರೂಪಿಸಬೇಕೆಂದು ಒತ್ತಾಯಿಸಿ ಶ್ರೀ ರಾಷ್ಟ್ರೀಯ ಮೂಕನಾಯಕ ಸೇವಾ ಸಂಸ್ಥೆ, ವಿಜಯಪುರ ವತಿಯಿಂದ ಜಿಲ್ಲಾಧಿಕಾರಿ ಟಿ. ಭೂಬಾಲನ್ ಅವರಿಗೆ ಮನವಿ ಸಲ್ಲಿಸಿತು.

ಸಸಂಸ್ಥೆಯ ಪ್ರಕಾಶ ಎಸ್.ಕೆ ಅವರು, ಯುವತಿ, ಯುವಕನ ಸ್ವಇಚ್ಛೆ ಎಂಬ ನೆಪದಲ್ಲಿ ಓಡಿ ಹೋಗುವ ಎಲ್ಲಾ ಪ್ರಕರಣಗಳಿಗೂ ವಿಶೇಷ ತನಿಖಾ ಪ್ರಕ್ರಿಯೆ ಕಡ್ಡಾಯವಾಗಬೇಕು. ಇದರಲ್ಲಿ ವೈದ್ಯಕೀಯ, ಮಾನಸಿಕ ಆರೋಗ್ಯ ಮತ್ತು ಸಾಮಾಜಿಕ ಪಾರದರ್ಶಕ ವರದಿ ಸೇರಿರಬೇಕು.



ಉದಯವಾಹಿನಿ ಚಿತ್ರ

ಪೋಷಕರು ಅಥವಾ ಸಾರ್ವಜನಿಕರು ದೂರು ನೀಡಿದರೆ, ಪೊಲೀಸರು ವಿಳಂಬ ಮಾಡದೆ, ಪೊಲೀಸರು ಅಥವಾ ಜಿಲ್ಲಾ ಆಡಳಿತ ಅಧಿಕಾರಿಗಳು ಅಂತಿಮ ತನಿಖೆಗೂ ಮುನ್ನ ಹುಡುಗಿ, ಹುಡುಗನ ಪೋಷಕರಿಗೆ ಮಾಹಿತಿ ನೀಡುವುದು ಕಾನೂನುಬದ್ಧವಾಗಬೇಕು. ಹುಡುಗ, ಹುಡುಗಿ ಜೊತೆ ಓಡಿ ಹೋಗಿದ್ದವರು 21 ವರ್ಷಕ್ಕಿಂತ ಮೇಲ್ಪಟ್ಟವರಾಗಿದ್ದರೆ, ಈ ಸಂಬಂಧ ಪ್ರಭಾವ, ಹಣದ ಲಾಲನೆ ಅಥವಾ ಚಿತ್ರತಡೆ ಇರುವುದಿಲ್ಲವೇ ಎಂದು ಪರಿಶೀಲಿಸಲು ವಿಶೇಷ ತನಿಖೆ ನಡೆಯಬೇಕು ಎಂದು ಅವರು ಮನವಿಯಲ್ಲಿ ತಿಳಿಸಿದ್ದಾರೆ.

**ಸಾಮಾಜಿಕ ಪಾರದರ್ಶಕ ವರದಿ ಸೇರಿರಬೇಕು**

ಹುಡುಗಿಯ ವಯಸ್ಸು 18 ವರ್ಷ ಮೇಲ್ಪಟ್ಟರೂ ಕೂಡ, ಹುಡುಗನನ್ನು ಬದಲಾಯಿಸಿ ಬೇರೆಬೇರೆಯವರನ್ನು ಪ್ರೀತಿಸಿ ಹಲವರ ಜೀವನ ಹಾಳುಮಾಡಿದ ದೃಷ್ಟಾಂತಗಳು ಇರುತ್ತವೆ.

ಇದ್ದರೆ, ಹುಡುಗಿಯ ಮೇಲೆಯೂ ಕಾನೂನು ಕ್ರಮ ಜರುಗಿಸಬೇಕೆಂಬ ವ್ಯವಸ್ಥೆ ತರಬೇಕು. ಈ ಎಲ್ಲ ಸಂಬಂಧಿತ ಪ್ರಕರಣಗಳಲ್ಲಿ ಕಾರ್ ಚಾಲಕರು ಅಥವಾ ಸಹಾಯ ಮಾಡಿದ ವ್ಯಕ್ತಿಗಳು ಕೂಡಾ ತನಿಖೆಗೆ ಒಳಪಡಬೇಕೆಂದು ನಿಯಮ ಮಾಡಬೇಕಾಗಿದೆ.

ಈ ಶಿಫಾರಸು ಪತ್ರವನ್ನು ಜಿಲ್ಲಾ ಮಟ್ಟದ ಉನ್ನತಾಧಿಕಾರಿಗಳಾದ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಮಾರ್ಗದ ಮೂಲಕ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಕರ್ನಾಟಕ ರಾಜ್ಯ ಮಾನವ ಹಕ್ಕು ಆಯೋಗ ಹಾಗೂ ಕ್ಷೇತ್ರದ ಶಾಸಕರಿಗೆ ಕಳುಹಿಸಲು ವಿನಂತಿಸಿಕೊಳ್ಳುತ್ತದೆ.

## ಮಿನಿ ನ್ಯೂಸ್

### ಒಂಟಿಸಲಗ ಅನುಮಾನಸ್ಪದ ಸಾವು

• ಉದಯವಾಹಿನಿ ಹಾಸನ

ಅನುಮಾನಸ್ಪದವಾಗಿ ದೈತ್ಯಾಕಾರದ ಕಾಡಾನೆಯೊಂದು ಸಾವನ್ನಪ್ಪಿರುವ ಘಟನೆ ಸಕಲೇಶಪುರ ತಾಲ್ಲೂಕಿನ ಸುಳ್ಳಕ್ಕಿ–ಶಾಂತಿಪುರ ಬಳಿ ನಡೆದಿದೆ. ರಸ್ತೆಯ ಪಕ್ಕದಲ್ಲಿ ರಕ್ತದ ಮಡುವಿನಲ್ಲಿ ಸಲಗದ ಮೃತದೇಹ ಪತ್ತೆಯಾಗಿದೆ. ವಿದ್ಯುತ್ ಕಂಬದಿಂದ 2 ಅಡಿ ಅಂತರದಲ್ಲಿ ಸಲಗ ಸಾವನ್ನಪ್ಪಿದ್ದು, ವಿದ್ಯುತ್ ಶಾಕ್, ಗುಂಡೇಟು ಅಥವಾ ವಾಹನ ಡಿಕ್ಕಿಯಿಂದ ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ. ಅಂದಾಜು 20 ರಿಂದ 25 ವರ್ಷದೊಳಗಿನ ಒಂಟಿಸಲಗ ಇದಾಗಿದ್ದು, ಅನುಮಾನಸ್ಪದವಾಗಿ ಸಾವನ್ನಪ್ಪಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ.

ರಸ್ತೆಬದಿಯಲ್ಲಿ ಬಿದ್ದಿದ್ದ ಆನೆಯ ಮೃತದೇಹ ಕಂಡ ಗ್ರಾಮಸ್ಥರು ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕಾಗಮಿಸಿದ ಸಕಲೇಶಪುರ ಗ್ರಾಮಾಂತರ ಠಾಣಾ ಪೊಲೀಸರು, ಅರಣ್ಯ ಇಲಾಖೆ ಸಿಬ್ಬಂದಿಗಳು ಪರಿಶೀಲನೆ ನಡೆಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ.

### ಪಾಕ್ ಸ್ಲಿಪರ್‌ಸೆಲ್‌ಗಳ ಮೇಲೆ ನಿಗಾ ವಹಿಸಿ: ಅರಗ ಜ್ಞಾನೇಂದ್ರ

• ಉದಯವಾಹಿನಿ ಶಿರಸಿ

ಇಸ್ಲಾಂ ಉಳಿವಿಗಾಗಿ ಪಾಕಿಸ್ತಾನಕ್ಕೆ ಎಲ್ಲೆಡೆ ಮುಸ್ಲಿಮರು ಬೆಂಬಲಿಸುವಂತೆ ಅಲ್ ಖೈದಾ ಮುಖಂಡರ ಕರೆ ಹಿನ್ನಲೆಯಲ್ಲಿ ರಾಜ್ಯದಲ್ಲಿ ಇರುವ ಪಾಕ್ ಮನಸ್ಥಿತಿಯವರ ಮೇಲೆ ವಿಶೇಷ ನಿಗಾ ಇರಿಸಬೇಕು. ಸೂಕ್ತ ಕ್ರಮವೂ ತೆಗೆದುಕೊಳ್ಳಬೇಕು' ಎಂದು ಶಾಸಕ ಅರಗ ಜ್ಞಾನೇಂದ್ರ ಹೇಳಿದರು. ರಾಜ್ಯದಲ್ಲಿನ ಪಾಕ್‌ನ ಸ್ಲೀಪರ್ ಸೆಲ್‌ಗಳ ಮೇಲೆ ನಿಗಾವಹಿಸಬೇಕಿದೆ.

ದೇಶದ ಗಡಿಯಲ್ಲಿ ಸೈನಿಕರು ಹೋರಾಡಿದರೆ, ಆಂತರಿಕವಾಗಿ ಪೊಲೀಸ್ ವ್ಯವಸ್ಥೆ ಗಮನ ಹರಿಸಬೇಕು. ಸಾರ್ವಜನಿಕರು ಮೈ ಎಲ್ಲವನ್ನೂ ಕಣ್ಣಾಗಿಸಿಕೊಳ್ಳಬೇಕು ಎಂದು ಸುದ್ದಿಗಾರರಿಗೆ ತಿಳಿಸಿದರು.

### ಆಸ್ಪತ್ರೆ ಎದುರು ಶವಾಗಾರ: ವಿರೋಧ

• ಉದಯವಾಹಿನಿ ಬಾಳೆಹೊನ್ನೂರು

ಪಟ್ಟಣದಲ್ಲಿ ನಿರ್ಮಾಣಗೊಳ್ಳುತ್ತಿರುವ ಸಮುದಾಯ ಆಸ್ಪತ್ರೆಯ ಮುಂಭಾಗದಲ್ಲಿ ಶವಾಗಾರ ಕಟ್ಟಡ ಕಾಮಗಾರಿ ನಡೆಸಬಾರದು ಎಂದು ಹೋಬಳಿ ಸಮುದಾಯ ಆಸ್ಪತ್ರೆ ಹೋರಾಟ ಸಮಿತಿಯ ಕೌಳಿ ರಾಮು, ಇಸ್ಮಾಯಿಲ್ ಆಗ್ರಹಿಸಿದ್ದಾರೆ.

ಹೋಬಳಿ ಕೇಂದ್ರವಾದ ಜಯಪುರದಲ್ಲಿ 14 ಕೋಟಿ ವೆಚ್ಚದಲ್ಲಿ ಸುಸಜ್ಜಿತ ಸಮುದಾಯ ಆಸ್ಪತ್ರೆ ನಿರ್ಮಾಣವಾಗುತ್ತಿದೆ. ಆಸ್ಪತ್ರೆಯ ಮುಖ್ಯ ದ್ವಾರದ ಎದುರಲ್ಲೇ ಶವಾಗಾರ ಕಟ್ಟಡ ನಿರ್ಮಾಣ ಕಾಮಗಾರಿ ನಡೆಯುತ್ತಿದೆ. ಇದರ ಪಕ್ಕದಲ್ಲೇ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ವೈದ್ಯರ, ಶುಶ್ರೂಷಕಿಯರ ವಸತಿಗೃಹಗಳಿವೆ. ಈಗಾಗಲೇ ಹಿಂದಿನ ಆಸ್ಪತ್ರೆ ಕಟ್ಟಡ ಇರುವ ಜಾಗದ ಪಕ್ಕದಲ್ಲೇ ಶವಾಗಾರವಿದ್ದು, ಅದನ್ನು ದುರಸ್ತಿಪಡಿಸಬಹುದು. ಅದು ಬಿಟ್ಟು ನೂತನ ಆಸ್ಪತ್ರೆಯ ಮುಂಭಾಗದಲ್ಲೇ ನಿರ್ಮಾಣಕ್ಕೆ ಮುಂದಾದರೆ ತಾಲ್ಲೂಕು ಆಡಳಿತದ ಎದುರು ಪ್ರತಿಭಟನೆ ನಡೆಸುವುದು ಅನಿವಾರ್ಯವಾಗಲಿದೆ ಎಂದು ಅವರು ಎಚ್ಚರಿಸಿದ್ದಾರೆ.

### ಉದ್ಯೋಗ ಮೇಳದಿಂದ 375 ಮಂದಿಗೆ ಕೆಲಸ

• ಉದಯವಾಹಿನಿ ಹಾವೇರಿ

ಇಲ್ಲಿಯ ಮುನ್ಸಿಪಲ್ ಹೈಸ್ಕೂಲ್ ಮೈದಾನದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಉದ್ಯೋಗ ಮೇಳದಲ್ಲಿ 375 ಅಭ್ಯರ್ಥಿಗಳಿಗೆ ಕೆಲಸ ಸಿಕ್ಕಿದ್ದು, ಅವರೆಲ್ಲರಿಗೂ ಸ್ಥಳದಲ್ಲಿಯೇ ನೇಮಕಾತಿ ಆದೇಶ ಪತ್ರ ವಿತರಿಸಿರುವುದಾಗಿ ಆಯೋಜಕರು ತಿಳಿಸಿದ್ದಾರೆ.

ರಾಜ್ಯ ಪದವೀಧರರ ಹಿತರಕ್ಷಣಾ ವೇದಿಕೆ ಹಾಗೂ ಉತ್ತರ ಕನ್ನಡ ಜಿಲ್ಲಾ ಶಿಕ್ಷಕ ಶಿಕ್ಷಕಿಯರ ನಿರಂತರ ಸಹಾಯವಾಣಿ ಸಹಯೋಗದಲ್ಲಿ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿತ್ತು. ಟಾಟಾ ಎಐಜಿ, ಟೊಯೊಟಾ, ಟಾಟಾ ಸ್ಟೀಲ್ ಹಾಗೂ ಶಿಕ್ಷಣ ಸಂಸ್ಥೆಗಳು ಸೇರಿದಂತೆ 60ಕ್ಕೂ ಹೆಚ್ಚು ಕಂಪನಿಗಳು ಮೇಳದಲ್ಲಿ ಭಾಗವಹಿಸಿದ್ದರು.

ಅಭ್ಯರ್ಥಿಗಳನ್ನು ಪರೀಕ್ಷೆ ಹಾಗೂ ಸಂದರ್ಶನ ಮೂಲಕ ಆಯ್ಕೆ ಮಾಡಿಕೊಂಡ ಕಂಪನಿ ಪ್ರತಿನಿಧಿಗಳು, ಹಲವರಿಗೆ ಸ್ಥಳದಲ್ಲಿಯೇ ಉದ್ಯೋಗ ಹಾಜರಾತಿ ಪತ್ರಗಳನ್ನು ವಿತರಿಸಿದರು. ಹಾವೇರಿ ಹಾಗೂ ಸುತ್ತಮುತ್ತಲಿನ ಅಭ್ಯರ್ಥಿಗಳಿಗೆ ಅನುಕೂಲವಾಗಲೆಂದು ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿತ್ತು. 35 ಅಂಗವಿಕರು ಸೇರಿದಂತೆ 375 ಮಂದಿಗೆ ಉದ್ಯೋಗ ಸಿಕ್ಕಿದೆ' ಎಂದು ರಾಜ್ಯ ಪದವೀಧರರ ಹಿತರಕ್ಷಣಾ ವೇದಿಕೆ ಅಧ್ಯಕ್ಷ ರಾಘವೇಂದ್ರ ಬಾಸೂರು ತಿಳಿಸಿದರು.

'ಸಪ್ರತಿಷ್ಠಿತ ಕಂಪನಿಗಳ ಜೊತೆಯಲ್ಲಿಯೇ ಗಾರ್ಮೆಂಟ್ಸ್ ಕಾರ್ಖಾನೆಗಳು, ಶಾಲಾ–ಕಾಲೇಜು ನಡೆಸುವ ಶಿಕ್ಷಣ ಸಂಸ್ಥೆಯವರು ಮೇಳದಲ್ಲಿ ಭಾಗವಹಿಸಿದ್ದರು. ಶಿಕ್ಷಣ ಸಂಸ್ಥೆಗಳಿಗೆ ಸುಮಾರು 60 ಮಂದಿ ನೇಮಕಗೊಂಡಿದ್ದಾರೆ. ಅವರಿಗೂ ಸ್ಥಳದಲ್ಲಿಯೇ ಆದೇಶದ ಪತ್ರ ನೀಡಲಾಗಿದೆ' ಎಂದು ಹೇಳಿದರು. ಸರ್ಕಾರಿ ಉದ್ಯೋಗಕ್ಕಾಗಿ

**ಕಾಲಹರಣ ಬೇಡ:** ಉದ್ಯೋಗ ಮೇಳ ಉದ್ಘಾಟಿಸಿ ಮಾತನಾಡಿದ ನಗರಸಭೆ ಸದಸ್ಯ ಸಂಜೀವಕುಮಾರ ನೀರಲಗಿ, ಸರ್ಕಾರಿ ನೌಕರಿಯೇ ಬೇಕೆಂದು ಅಭ್ಯರ್ಥಿಗಳು ಕಾಲಹರಣ ಮಾಡಬಾರದು. ಸಿಕ್ಕ ಉದ್ಯೋಗವನ್ನು ಶ್ರದ್ಧೆ ಹಾಗೂ ಪ್ರಾಮಾಣಿಕತೆಯಿಂದ ಮಾಡಿ ಸುಂದರವಾದ ಜೀವನ ನಡೆಸಬೇಕು' ಎಂದರು.

# ಯುದ್ಧ ಪರಿಸ್ಥಿತಿ ನಿರ್ವಹಣೆಗೆ ಸನ್ನದ್ಧರಾಗಲು ಕರೆ

• ಉದಯವಾಹಿನಿ, ಗದಗ

ದೇಶದಲ್ಲಿ ಯುದ್ಧದ ಸನ್ನಿವೇಶ ಇರುವುದರಿಂದ ಅಧಿಕಾರಿಗಳು ಯುದ್ಧ ಪರಿಸ್ಥಿತಿ ಸಮರ್ಪಕ ನಿರ್ವಹಣೆಗೆ ಸರ್ವ ಸನ್ನದ್ಧರಾಗಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಕರೆ ನೀಡಿದರು. ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ದೇಶದಲ್ಲಿ ಯುದ್ಧ ಸನ್ನಿವೇಶದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಕೈಗೊಳ್ಳಬೇಕಾದ ತುರ್ತು ಮುಂಜಾಗ್ರತಾ ಕ್ರಮಗಳ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಅಧಿಕಾರಿ ಹಾಗೂ ಸಿಬ್ಬಂದಿಗಳು ಕೇಂದ್ರಸ್ಥಾನದಲ್ಲಿದ್ದು ಪರಿಸ್ಥಿತಿಗನುಗುಣವಾಗಿ ಜವಾಬ್ದಾರಿಯುತವಾಗಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.

ಜಿಲ್ಲೆಯಲ್ಲಿ ಪ್ರಮುಖ ಸ್ಥಳಗಳು, ದೇವಾಲಯ, ಮಸೀದಿ, ಚರ್ಚ, ಜನಸಂದಣಿ ಇರುವ ಪ್ರದೇಶಗಳಲ್ಲಿ ಒಂದು ವೇಳೆ ಅಹಿತಕರ ಘಟನೆ ನಡೆದರೆ ಪೂರ್ವ ತಯಾರಿಯಾಗಿ ಸಾರ್ವಜನಿಕರ ರಕ್ಷಣಾ ಕಾರ್ಯದ ಕಡೆ ನಿಗಾವಹಿಸಬೇಕು. ತಾಲ್ಲೂಕು ಮಟ್ಟದಲ್ಲಿಯೂ ಸಹ ತಹಶೀಲ್ದಾರರು,

**ಜಿಲ್ಲಾಡಳಿತದೊಂದಿಗೆ ತುರ್ತು ಪರಿಸ್ಥಿತಿಯಲ್ಲಿ ವಿವಿಧ ಇಲಾಖೆಗಳಿಗೆ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಹಂಚಿಕೆಯನ್ನು ಮಾಡಲಾಗಿದೆ. ಮಾಜಿ ಸೈನಿಕರು ಎನ್‌ಸಿಸಿ, ಎನ್‌ಎಸ್ ಎಸ್ , ಪೊಲೀಸ ಇಲಾಖೆಯವರು ಸಾರ್ವಜನಿಕರಿಗೆ ಈ ಕುರಿತು ಜಾಗೃತಿ ಮೂಡಿಸಬೇಕು. ಅಧಿಕಾರಿಗಳು ಯಾವುದೇ ಕಾರಣಕ್ಕೂ ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರಬಾರದು**
**-ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ**

ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಪೊಲೀಸ ಇಲಾಖೆಯ ಸಮನ್ವಯತೆಯಲ್ಲಿ ಮುಂಜಾಗ್ರತಾ ಕ್ರಮಗಳ ಕುರಿತು ಸಭೆ ಜರುಗಿಸಬೇಕು ಎಂದು ಸೂಚಿಸಿದರು.

ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಬಿ.



ಉದಯವಾಹಿನಿ ಚಿತ್ರ

ಎಸ್.ನೇಮಗೌಡ ಅವರು ಮಾತನಾಡಿ ಯುದ್ಧ ಸನ್ನಿವೇಶದಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಮಾರ್ಗಸೂಚಿಗಳ ಪಾಲನೆ ಅವಶ್ಯವಾಗಿದೆ.

ಆರೋಗ್ಯ ಇಲಾಖೆಯವರು ತುರ್ತು ಪರಿಸ್ಥಿತಿಯಲ್ಲಿ ಸಾರ್ವಜನಿಕರಿಗೆ ಚಿಕಿತ್ಸೆ ನೀಡಲು ಆಸ್ಪತ್ರೆಗಳಲ್ಲಿ ಔಷಧಿಗಳ ಸರಬರಾಜು, ವೈದ್ಯಕೀಯ ಸೇವೆ, ಆಕ್ಸಿಜನ್, ಆಂಬ್ಯುಲನ್ಸ್‌ಗಳ ಸಿದ್ಧತೆ ಮಾಡಿಟ್ಟುಕೊಳ್ಳಬೇಕು. ಅಗತ್ಯಕನುಗುಣವಾಗಿ ಸಾರ್ವಜನಿಕರ ರಕ್ಷಣೆಗಾಗಿ ಅಗ್ನಿ ಶಾಮಕ, ಕಂದಾಯ, ಯುವಜನ ಸೇವೆ, ಲೋಕೋಪಯೋಗಿ, ಅಹಾರ , ಶಿಕ್ಷಣ , ಸಾರಿಗೆ , ಹೆಸ್ಕಾಂ, ಪೊಲೀಸ ಇಲಾಖೆಯವರು ಕಾರ್ಯನಿರ್ವಹಣೆಗೆ ಪೂರ್ವ ತಯಾರಿ ಮಾಡಿಟ್ಟುಕೊಳ್ಳಬೇಕು ಎಂದರು.

# ಬಡಮಕ್ಕಳ ಶಿಕ್ಷಣಕ್ಕೆ ನೆರವಾಗಿ: ರವಿ ಎಲ್.ಗುಂಜೀಕರ

• ಉದಯವಾಹಿನಿ, ಗದಗ

ಸಮಾಜ ಕಲ್ಯಾಣ ಇಲಾಖೆಯಲ್ಲಿ ಸೇವೆ ಸಲ್ಲಿಸಲು ಅವಕಾಶ ಸಿಕ್ಕ ನಂತರ ಸಾವಿರಾರು ವಿದ್ಯಾರ್ಥಿಗಳ ಶಿಕ್ಷಣಕ್ಕೆ ನೆರವಾದ ಸಂತೃಪ್ತಿ ಇದೆ ಎಂದು ನಿವೃತ್ತ ಅಧಿಕಾರಿ ರವಿ ಎಲ್.ಗುಂಜೀಕರ ಹೇಳಿದರು.

ನಗರದ ಜಗದಂಭಾ ದೇವಸ್ಥಾನದಲ್ಲಿ ಶ್ರೀರಾಮ ಸೇನೆ, ಶಿವ ರಾಮಕೃಷ್ಣ ಸೇವಾ ಟ್ರಸ್ಟ್, ಹಿಂದೂ ವೀರಶೈವ ಲಿಂಗಾಯತ ಯುವ ವೇದಿಕೆ, ಆಟೋಸೇನಾ, ದಲಿತ ಮಿತ್ರ ಮೇಳ, ನಾಗೇಶ್ವರ ಮಿತ್ರ ಮಂಡಳಿ, ಅರಿವು ಫೌಂಡೇಷನ್, ಗದಗ ಬ್ಲಡ್ ಡೋನರ್ ಸೊಸೈಟಿ ಹಾಗೂ ಆಂಜನೇಯ ದೇವಸ್ಥಾನ ಟ್ರಸ್ಟ್ ಸಹಯೋಗದಲ್ಲಿ ನಡೆದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದರು. ಪ್ರತಿಯೊಬ್ಬರೂ ಬಡ ಮಕ್ಕಳ ವಿದ್ಯಾಭ್ಯಾಸಕ್ಕೆ ಹೆಚ್ಚಿನ ನೆರವು ನೀಡಬೇಕು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಕ್ಕರೆ ಕುಟುಂಬ, ದೇಶ ಸದೃಢವಾಗಿ ಬೆಳೆಯಲು ಸಾಧ್ಯ ಎಂದು ಹೇಳಿದರು.

ಸರ್ಕಾರಿ ನೌಕರರ ಸಂಘಟನೆಯಲ್ಲಿ 25 ವರ್ಷಗಳಿಂದ ತೊಡಗಿಸಿಕೊಂಡು ಬಂದಿದ್ದೇನೆ. ಸಂಘಟನೆಯಲ್ಲಿ



ಉದಯವಾಹಿನಿ ಚಿತ್ರ

ಸಾಮಾನ್ಯ ನಿರ್ದೇಶಕನಾಗಿ ಪಾಲ್ಗೊಂಡು ನಂತರ ಸತತ ಮೂರು ಬಾರಿ ಜಿಲ್ಲಾ ಘಟಕದ ಅಧ್ಯಕ್ಷನಾಗಿ, ರಾಜ್ಯ ಹಿರಿಯ ಉಪಾಧ್ಯಕ್ಷನಾಗಿ ಸೇವೆ ಸಲ್ಲಿಸುವ ಪ್ರಾಮಾಣಿಕ ಪ್ರಯತ್ನ ಮಾಡಿದ್ದೇನೆ' ಎಂದರು. ಪ್ರಸ್ತುತ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷರಾಗಿರುವ ಬಸವರಾಜ ವಿ. ಬಳ್ಳಾರಿ ಕ್ರಿಯಾಶೀಲ ವ್ಯಕ್ತಿಯಾಗಿದ್ದಾರೆ. ಅವರಲ್ಲಿನ ಹೋರಾಟ ಮನೋಭಾವ ಹಾಗೂ ಇನ್ನೊಬ್ಬರ ಕಷ್ಟಕ್ಕೆ ನೆರವಾಗುವ ಗುಣ ಇದೆ. ಇದನ್ನು ಗುರುತಿಸಿ ಅವರನ್ನು ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರನ್ನಾಗಿ ಮಾಡಲು ಸಹಕರಿಸಿದ್ದೇನೆ. ಮುಂದಿನ ದಿನಗಳಲ್ಲಿ ಅವರು ಹೋರಾಟದ ಮೂಲಕ ಸರ್ಕಾರಿ ನೌಕರರ ಮೆಚ್ಚುಗೆಗೆ ಪಾತ್ರರಾಗಬೇಕು' ಎಂದು ಆಶಿಸಿದರು.

# ಶರಾವತಿ ಕಣಿವೆಯಲ್ಲಿ ಕಟ್ಟೆಚ್ಚರ: ಬಿಗಿ ಭದ್ರತೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಕಾರ್ಗಲ್

ಭಾರತ– ಪಾಕ್ ನಡುವೆ ಸಂಘರ್ಷ ಏರ್ಪಟ್ಟ ಹಿನ್ನೆಲೆಯಲ್ಲಿ ಶರಾವತಿ ಕಣಿವೆಯಲ್ಲಿರುವ ಲಿಂಗನಮಕ್ಕಿ, ತಳಕಳಲೆ ಮತ್ತು ಟೇಲ್ ರೇಸ್ ಗೇರುಸೊಪ್ಪ ಅಣೆಕಟ್ಟು, ಶರಾವತಿ, ಮಹಾತ್ಮಗಾಂಧಿ, ಅಂಬುತೀರ್ಥ, ಲಿಂಗನಮಕ್ಕಿ, ಶರಾವತಿ ಟೇಲ್ ರೇಸ್ ಜಲವಿದ್ಯುದಾಗರಗಳಿಗೆ ಗರಿಷ್ಠ ಪ್ರಮಾಣದ ಭದ್ರತೆ ನೀಡಿ, ಖಾಸಗಿ ವಾಹನಗಳಿಗೆ ಮತ್ತು ಸಾರ್ವಜನಿಕರಿಗೆ ಮೇ 10ರಿಂದ ಪ್ರವೇಶವನ್ನು ನಿರ್ಬಂಧಿಸಲಾಗಿದೆ ಎಂದು ಕೆಪಿಸಿ ಮುಖ್ಯ ಎಂಜಿನಿಯರ್ ಆರ್. ರಮೇಶ್ ತಿಳಿಸಿದ್ದಾರೆ.

ಸಮೀಪದ ಜೋಗದ ಎಸ್.ವಿ.ಪಿ ಕಾಲೊನಿಯಲ್ಲಿರುವ ಮುಖ್ಯ ಎಂಜಿನಿಯರ್ ಕಚೇರಿ ಸಭಾಂಗಣದಲ್ಲಿ ನಡೆದ ವಿಶೇಷ ಭದ್ರತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶರಾವತಿ ಕಣಿವೆಯಲ್ಲಿರುವ ಪ್ರಮುಖ 4 ಜಲ ವಿದ್ಯುದಾಗರಗಳಲ್ಲಿ 26 ಜಲವಿದ್ಯುತ್ ಘಟಕಗಳು ವಿದ್ಯುತ್ ಉತ್ಪಾದನೆ ಮಾಡುತ್ತ ರಾಜ್ಯಕ್ಕೆ ಬೆಳಕು ನೀಡುವಲ್ಲಿ ಪ್ರಮುಖ ಪಾತ್ರ ವಹಿಸಿವೆ. ಕೆಪಿಸಿ ನಿಗಮದ ಹಲವು ಸ್ಥಾವರಗಳ ಭದ್ರತೆಯ ಜವಾಬ್ದಾರಿಯನ್ನು ಹೊತ್ತಿರುವ ಕರ್ನಾಟಕ ಕೈಗಾರಿಕಾ ಭದ್ರತಾ ಪೊಲೀಸ್ ಪಡೆ, ಭದ್ರತಾ ಪಡೆ, ಹೊರಗುತ್ತಿಗೆ ಭದ್ರತಾ ಪಡೆ ಮತ್ತು ಸ್ಥಳೀಯ ಸಿವಿಲ್ ಪೊಲೀಸ್ ವಿಭಾಗದವರ ನಡುವೆ ಸಮನ್ವಯವನ್ನು ಕಾಯ್ದುಕೊಂಡು ಭದ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ' ಎಂದು ತಿಳಿಸಿದರು.

ನಾಗರಿಕ ಸೇವಾ ಪೊಲೀಸ್ ವಿಭಾಗದ ಸಬ್ ಇನ್‌ಸ್ಪೆಕ್ಟರ್ ಹೊಳೆಬಸಪ್ಪ ಹೋಳಿ ಮಾತನಾಡಿ, 'ಪೊಲೀಸ್ ಇಲಾಖೆಯ 112 ವಾಹನ ಮತ್ತು ತುರ್ತು ಕಾರ್ಯಾಚರಣೆಯ ಒಂದು ವಾಹನ ನಿರಂತರವಾಗಿ ಶರಾವತಿ ಕಣಿವೆಯಾದ್ಯಂತ ಗಸ್ತು ತಿರುಗಲಿದೆ. ಕೆಪಿಸಿ ನಿಗಮದ ಆಸ್ಪತ್ರೆಗಳಲ್ಲಿ ಹೆಚ್ಚು ಬಳಕೆಯಾಗುವ ಔಷಧಗಳನ್ನು ಸಂಗ್ರಹಿಸಿ ಇಡಬೇಕು. ಆಸ್ಪತ್ರೆಯನ್ನು ತುರ್ತು ಕಾರ್ಯಾಚರಣೆಗೆ ಸದಾ ಸನ್ನದ್ಧವಾಗಿಡಬೇಕು ಎಂದು ಹೇಳಿದರು.

# ಉಳ್ಳಾಲ ದರ್ಗಾಕ್ಕೆ 50 ಕುರಿಗಳ ಹರಕೆ ಸಮರ್ಪಿಸುವೆ: ಡಿಕೆಶಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಉಳ್ಳಾಲ

ಇಲ್ಲಿನ ಉಳ್ಳಾಲ ಸೈಯ್ಯದ್ ಮದನಿ ದರ್ಗಾದ ಉರುಸ್ ಕಾರ್ಯಕ್ರಮದಲ್ಲಿ ಶನಿವಾರ ಪಾಲ್ಗೊಂಡಿದ್ದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, 50 ಕುರಿಗಳ ಹರಕೆ ಸಮರ್ಪಿಸುವುದಾಗಿ ತಿಳಿಸಿದರು.ದರ್ಗಾದಲ್ಲಿ ಝಿಯಾರತ್ ನಡೆಸಿದ ನಂತರ ಮಾತನಾಡಿದ ಅವರು, ದೇಶದ ಏಕತೆಯ ಸಂಕೇತವಾಗಿ ಉಳ್ಳಾಲ ದರ್ಗಾದ ಉರುಸ್‌ನಲ್ಲಿ ಹಲವರು ಭಾಗಿಯಾಗುತ್ತಾರೆ. ಉಳ್ಳಾಲ ದರ್ಗಾ ಸಮಿತಿ ಹೇಳಿಕೆಯಂತೆ ಇದು ದೇಶದಲ್ಲಿಯೇ ಎರಡನೇ ಪವಿತ್ರ ಕ್ಷೇತ್ರವೆಂಬ ಮಾನ್ಯತೆ ಪಡೆದಿದೆ' ಎಂದರು. ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಅವರ ಬೇಡಿಕೆಯನ್ನು ಪುರಸ್ಕರಿಸಿ ರಾಜ್ಯ ಸರ್ಕಾರ 3 ಕೋಟಿ ಅನುದಾನ ಮಂಜೂರು ಮಾಡಿದೆ' ಎಂದು ತಿಳಿಸಿದರು.

# 6 ತಿಂಗಳಿಂದ ಉಪ ತಹಶೀಲ್ದಾರ್ ಸ್ಥಾನ ಖಾಲಿ

• ಉದಯವಾಹಿನಿ, ಹನುಮಸಾಗರ

ಕೊಪ್ಪಳ ಜಿಲ್ಲೆಯ ಅತಿ ದೊಡ್ಡ ಹೋಬಳಿ ಎನ್ನಿಸಿಕೊಂಡ ಹನುಮಸಾಗರ ಹೋಬಳಿ ನಾಡಕಚೇರಿಯಲ್ಲಿ ಉಪ ತಹಶೀಲ್ದಾರ್ ಹುದ್ದೆ ಖಾಲಿ ಇರುವುದರಿಂದ, ಜನಸಾಮಾನ್ಯರು ನಿತ್ಯದ ಕೆಲಸಗಳಿಗೆ ಪರದಾಡುವಂತಾಗಿದೆ.

7 ಗ್ರಾಮ ಪಂಚಾಯಿತಿಗಳು ಮತ್ತು 49 ಹಳ್ಳಿಗಳನ್ನೊಳಗೊಂಡ ಹೋಬಳಿಯ ಜನತೆ ತಮ್ಮ ಹಕ್ಕುಗಳಿಗಾಗಿ ಪರಿತಪಿಸುತ್ತಿದ್ದಾರೆ. ಉಪ ತಹಶೀಲ್ದಾರ್ ಇಲ್ಲದೆ ನಾಡಕಚೇರಿಯಲ್ಲಿ ಕಾರ್ಯಚಟುವಟಿಕೆ ಕಳೆಗುಂದಿದೆ.

ಹನುಮಸಾಗರ ನಾಡಕಚೇರಿಯಲ್ಲಿ ಈಗ ಕಂದಾಯ ನಿರೀಕ್ಷಕ ಶರಣಯ್ಯ ನಿಡಗುಂದಿ ಮಠ ಅವರೇ ತಾತ್ಕಾಲಿಕವಾಗಿ ಎರಡು ಹುದ್ದೆಗಳ ಹೊರೆ ಹೊತ್ತಿದ್ದಾರೆ. ಪ್ರಮಾಣಪತ್ರಗಳ ನೀಡಿಕೆ, ಜಮೀನು ದಾಖಲೆಗಳ ತಿದ್ದುಪಡಿ, ಪಿಂಚಣಿ ಅರ್ಜಿ, ವಿದ್ಯಾರ್ಥಿಗಳ ಜಾತಿ, ಆದಾಯ ಪ್ರಮಾಣಪತ್ರ ನೀಡಿಕೆ ಮೊದಲಾದ ಪ್ರಮುಖ ಕಾರ್ಯಗಳು ವಿಳಂಬವಾಗುತ್ತಿವೆ



ಉದಯವಾಹಿನಿ ಚಿತ್ರ

ಎನ್ನುವುದು ಜನರ ದೂರು.

**ಆಧಾರ್ ಕೇಂದ್ರದ ತಾತ್ಕಾಲಿಕ ಸ್ಥಿತಿ:** ಹನುಮಸಾಗರ ಹೋಬಳಿಯ ಜನತೆಗೆ ಮತ್ತೊಂದು ದೊಡ್ಡ ಸಮಸ್ಯೆ ಎಂದರೆ

ಆಧಾರ್ ಕಾರ್ಡ್ ಸೇವೆ. ಒಂದೂವರೆ ವರ್ಷದಿಂದ ಇಲ್ಲಿನ ನಿವಾಸಿಗಳು ತಮ್ಮ ಆಧಾರ್ ತಿದ್ದುಪಡಿ, ನೂತನ ನೋಂದಣಿ ಸೇವೆಗಾಗಿ ತಾಲ್ಲೂಕು ಕಚೇರಿಗೆ ಅಲೆದಾಡಬೇಕಾಗಿದೆ.

ಹೋಬಳಿ ಮಟ್ಟದಲ್ಲೇ ಆಧಾರ್ ಕಾರ್ಡ್ ತಿದ್ದುಪಡಿ ಕೇಂದ್ರ ಸ್ಥಾಪಿಸಬೇಕಾಗಿದೆ ಎಂದು ಯಮನಪ್ಪ ಮಡಿವಾಳರ ಒತ್ತಾಯಿಸಿದ್ದಾರೆ.

ಕೆಲ ದಿನಗಳಲ್ಲಿಯೇ ಮಳೆಗಾಲ ಆರಂಭವಾಗಲಿದ್ದು, ಬಿರುಗಾಳಿ, ಗುಡುಗು–ಸಿಡಿಲು ಸಾಮಾನ್ಯವಾಗುತ್ತದೆ.

# ಆಸ್ಪತ್ರೆ, ಪಡಿತರ ಅಂಗಡಿ, ಆಹಾರ ಉಗ್ರಾಣಗಳಿಗೆ ಅಧಿಕಾರಿಗಳು ನಿರಂತರ ಭೇಟಿ ನೀಡಿ

## • ಉತ್ತಮ ಗುಣಮಟ್ಟ, ಸ್ವಚ್ಛತೆ ಹೊಂದಿರುವದನ್ನು ಪರಿಶೀಲಿಸಬೇಕು: ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ. ಎಚ್.ಕೃಷ್ಣ

• ಉದಯವಾಹಿನಿ ಧಾರವಾಡ

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿಗಳು ನಿರಂತರವಾಗಿ ಆಸ್ಪತ್ರೆ, ಅಂಗಡಿ, ಆಹಾರ ಉಗ್ರಾಣಗಳಿಗೆ ಭೇಟಿ ನೀಡಿ, ಉತ್ತಮ ಗುಣಮಟ್ಟ, ಸ್ವಚ್ಛತೆ ಹೊಂದಿರುವದನ್ನು ಪರಿಶೀಲಿಸಬೇಕೆಂದು ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ. ಎಚ್.ಕೃಷ್ಣ ಅವರು ಹೇಳಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಗಂಣದಲ್ಲಿ ಮೇ 6 ರಿಂದ 9 ರವರೆಗೆ ಜಿಲ್ಲೆಯಲ್ಲಿ ಆಹಾರ ಆಯೋಗ ಕೈಗೊಂಡ ಪ್ರವಾಸದ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ಮಾಹಿತಿ ನೀಡಿ ಮಾತನಾಡಿದರು.

ಜಿಲ್ಲೆಯಲ್ಲಿರುವ ಕರ್ನಾಟಕ ಆಹಾರ ನಿಗಮದ ಉಗ್ರಾಣಗಳು ಸುರಕ್ಷಿತವಾಗಿಲ್ಲ. ಸ್ವಚ್ಛತೆ, ತಾಂತ್ರಿಕತೆ ಕೊರತೆ ಇದೆ. ಅಧಿಕಾರಿಗಳು ಈ ಕುರಿತು ಗಮನ ಹರಿಸಬೇಕೆಂದು ಹೇಳಿದರು.

ಧಾರವಾಡ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿದಾಗ, ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರ ನಿರ್ದೇಶನದ ಮೇರೆಗೆ ಮಾಡಿರುವ ಸೌಲಭ್ಯಗಳ ದಾಸ್ತಾನು ವಹಿ, ಫಲಾನುಭವಿಗಳಿಗೆ ಸೌಲಭ್ಯ ವಿತರಿಸಿದ ವಹಿ, ರೈತರ ಬೇಡಿಕೆ ವಹಿ, ಗಮನಿಸಿ, ಪರಿಶೀಲಿಸಿದಾಗ ಉತ್ತಮ ಮಾಹಿತಿ ಸಂಗ್ರವಿದೆ. ಇದೆ. ಇದೇ ರೀತಿ ಎಲ್ಲ ರೈತ ಸಂಪರ್ಕ

**ಪ್ರತಿಯೊಂದು ನ್ಯಾಯ ಬೆಲೆ ಅಂಗಡಿಗಳಲ್ಲಿ ಸಂಬಂಧಪಟ್ಟ ಅಧಿಕಾರಿಗಳ, ಜಾಗೃತ ಸಮಿತಿಯ ಸದಸ್ಯರ, ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರ ಹೆಸರು ಮತ್ತು ದೂರವಾಣಿ ಸಂಖ್ಯೆಗಳ ಫಲಕಗಳನ್ನು ಹಾಕಬೇಕು. ಜನರಿಗೆ ಯಾವುದೇ ನ್ಯಾಯ ಬೆಲೆ ಅಂಗಡಿಗಳಲ್ಲಿ ಏನೇ ತೊಂದರೆಯಾದರೆ ಸಂಬಂಧ ಪಟ್ಟ ಅಧಿಕಾರಿಗಳಿಗೆ ತಿಳಿಸಿ, ಅವರು ನಿರ್ಲಕ್ಷ ತೋರಿದರೆ ತಮ್ಮನ್ನು ಸಂಪರ್ಕಿಸಬಹುದು -ಡಾ. ಎಚ್.ಕೃಷ್ಣ**

ಕೇಂದ್ರಗಳಲ್ಲಿ ದಾಖಲಾತಿ ನಿರ್ವಹಿಸಬೇಕೆಂದು ಆಹಾರ ಆಯೋಗದ ಅಧ್ಯಕ್ಷರು ಪ್ರಶಂಸೆ ವ್ಯಕ್ತಪಡಿಸಿದರು.

ಪೆಟ್ರೋಲ್ ಬಂಕ್‌ಗಳಲ್ಲಿ ಡೆನಿಸಿಟಿ ಚೆಕ್ ಮಾಡ ಬೇಕು. ಏರು, ನೀರು, ಶೌಚಾಲಯ ವ್ಯವಸ್ಥೆ ಕಲ್ಪಿಸಿರಬೇಕು. ಮುಖ್ಯವಾಗಿ ಸ್ವಚ್ಛತೆ ಕಾಪಾಡಿರಬೇಕು. ಆಹಾರ ಇಲಾಖೆ ಅಧಿ



ಉದಯವಾಹಿನಿ ಚಿತ್ರ

ಕಾರಿಗಳು ಇದನ್ನು ಕಾಲಕಾಲಕ್ಕೆ ಭೇಟಿ ನೀಡಿ, ಖಾತರಿ ಪಡಿಸಿಕೊಳ್ಳಬೇಕು. ಆದರೆ ಇದರಲ್ಲಿ ನ್ಯೂನ್ಯತೆ ಕಾಣುತ್ತಿದ್ದು, ಸಂಬಂಧಿಸಿದವರಿಗೆ ಎಚ್ಚರಿಕೆ ನೀಡಲಾಗಿದೆ ಎಂದು ಅವರು ತಿಳಿಸಿದರು.

ಸರ್ಕಾರದ ಕಾರ್ಯಕ್ರಮಗಳು, ಯೋಜನೆಗಳು ಜನರಿಗೆ ತಲುಪಬೇಕಾದರೆ ಅಧಿಕಾರಿ ವರ್ಗದವರು ಸಮರ್ಪಕವಾಗಿ ಕೆಲಸವನ್ನು ನಿರ್ವಹಿಸಬೇಕು. ಅದರ ಬಗ್ಗೆ ಭೇಟಿ ಸಂದರ್ಭದಲ್ಲಿ ನಿರ್ದೇಶನಗಳನ್ನು ನೀಡಿದ್ದೇನೆ. ಅದರ ಜೊತೆಗೆ ಕಂಡುಬಂದ ನ್ಯೂನತೆಗಳನ್ನು ತಕ್ಷಣ ಸ್ಥಳದಲ್ಲಿಯೇ ಸರಿಪಡಿಸಿ, ಮಾರ್ಗದರ್ಶನವನ್ನು ನೀಡಿದ್ದೇವೆ ಎಂದು ಅವರು ಹೇಳಿದರು.

**ಸ್ವಚ್ಛತೆ, ತಾಂತ್ರಿಕತೆ ಕೊರತೆ**

ಅಧಿಕಾರಿಗಳು ಆಹಾರ ಉಗ್ರಾಣಗಳಿಗೆ ದಾಸ್ತಾನು ಎಷ್ಟು ಬಂದಿದೆ, ಯಾರಿಗೆ ಎಷ್ಟು ಕೊಟ್ಟರು ಮತ್ತು ಉಳಿಕೆ ಪ್ರಮಾಣ ಅದರಲ್ಲಿಯೂ ಸಹ ಗಣನೀಯವಾಗಿ ವ್ಯತ್ಯಾಸಗಳು ಕೆಲವು ಕಡೆ ಕಂಡು ಬಂದಿದೆ. ಉಗ್ರಾಣಕ್ಕೆ ಬಂದಿರುವ ಆಹಾರವನ್ನು ನೆಟ್‌ವೇಟ್‌ನ್ನು ನೀವು ಸಹ ಕ್ರಾಸ್ ವೆರಿಫಿಕೇಶನ್ ಮಾಡಿಕೊಳ್ಳಬೇಕು. ಸ್ವಚ್ಛತೆಗೂ ಅಷ್ಟೇ ಆದ್ಯತೆಯನ್ನು ನೀಡಬೇಕು ಎಂದು ತಿಳಿಸಿದರು.

ಆಹಾರ ಇಲಾಖೆಗೆ ಸಂಬಂಧಿಸಿದಂತೆ ಪಡಿತರ ಅಂಗಡಿ, ಹೋಟೆಲ್, ರಸ್ತೆ ಬದಿ ಇರುವ ಆಹಾರ ಮಳಿಗೆ, ಅಂಗಡಿ, ಪೆಟ್ರೋಲ್ ಬಂಕ್, ಆಸ್ಪತ್ರೆಗಳಲ್ಲಿನ ಹೋಟೆಲ್ ಇತ್ಯಾದಿಗಳಿಗೆ ಸಂಬಂಧಿಸಿದ ದೂರುಗಳಿದ್ದಲ್ಲಿ ಸಾರ್ವಜನಿಕರು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು, ದೂರು ಸಲ್ಲಿಸಬಹುದು. ಅಧಿಕಾರಿಗಳು ಸಕಾರಾತ್ಮಕವಾಗಿ ಸ್ಪಂದಿಸದೆ ಇದ್ದಲ್ಲಿ ಸಾರ್ವಜನಿಕರು ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ. ಎಚ್. ಕೃಷ್ಣ (ಮೊ.ಸಂ:944466099), ಸದಸ್ಯರುಗಳಾದ ಲಿಂಗರಾಜ ಕೋಟೆ (ಮೊ.ಸಂ:8105612230), ಸುಮಂತ ರಾವ್ (ಮೊ.ಸಂ:9845875109), ಮಾರುತಿ ಎಂ.ದೊಡ್ಡಲಿಂಗಣ್ಣವರ (ಮೊ.ಸಂ:9945037681), ರೋಹಿಣಿ ಪ್ರಿಯ (ಮೊ.ಸಂ:9845342323), ಕೆ.ಎಸ್. ವಿಜಯಲಕ್ಷ್ಮಿ (ಮೊ.ಸಂ:9663961037), ಸುಜಾತಾ ಡಿ. ಹೊಸಮನಿ (ಮೊ.ಸಂ:9448992005) ಇವರಿಗೆ ಸಂಪರ್ಕಿಸಬಹುದು ಎಂದು ಅವರು ತಿಳಿಸಿದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಸ್ವಾಗತಿಸಿದರು. ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಎಂ. ಬ್ಯಾಕೋಡ, ಕರ್ನಾಟಕ ರಾಜ್ಯ ಆಹಾರ ಆಯೋಗದ ಸದಸ್ಯರುಗಳಾದ ಲಿಂಗರಾಜ ಕೋಟೆ, ಸುಮಂತ ರಾವ್, ಮಾರುತಿ ಎಂ. ದೊಡ್ಡಲಿಂಗಣ್ಣವರ ವೇದಿಕೆಯಲ್ಲಿದ್ದರು.

### ಸರಕಾರಕ್ಕೆ ವರದಿ

**ಸರಕಾರಿ ಆಸ್ಪತ್ರೆಗಳಿಗೆ ಭೇಟಿ ನೀಡಿದಾಗ, ಸ್ವಚ್ಛತೆ, ಉತ್ತಮವಾದ ಊಟ, ರೋಗಿ ಮತ್ತು ರೋಗಿಗಳ ಸಂಬಂಧಿಕರಿಗೆ ಉತ್ತಮ ಸೌಲಭ್ಯಗಳಾಗಬೇಕು. ಜಿಲ್ಲಾ ಆಸ್ಪತ್ರೆಯಲ್ಲಿ ಇನ್ನೊಂದು ಎಕ್ಸರೆ ಯಂತ್ರ ಹಾಗೂ ಉಳಿದ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ನೇಮಕಾತಿ ಆಗಬೇಕು. ಈ ಕುರಿತು ಜಿಲ್ಲಾ ಉಸ್ತುವಾರಿ ಸಚಿವರಿಗೆ ಹಾಗೂ ಸರಕಾರಕ್ಕೆ ವರದಿ ಸಲ್ಲಿಸುವದಾಗಿ ಅವರು ತಿಳಿಸಿದರು.**

# ಶಾಂತಿ ಮಂತ್ರಕ್ಕೆ ಮುಂದಾದ ಅಮೆರಿಕಾ



**ವಾಷಿಂಗ್ಟನ್:** ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆಯನ್ನು ಕಮ್ಮಿ ಮಾಡಲು ಅಮೆರಿಕ ಅಖಾಡಕ್ಕೆ ಇಳಿದಿದೆ. ಅಮೆರಿಕಾದ ಕಾರ್ಯದರ್ಶಿ ಮಾರ್ಕೊ ರೂಬಿಯೊ, ಎರಡು ದೇಶಗಳ ಪ್ರಮುಖರ ನಡುವೆ ಮಾತುಕತೆಯನ್ನು ನಡೆಸುತ್ತಿದ್ದಾರೆ. ಮಧ್ಯಸ್ಥಿಕೆ ವಹಿಸಲು ಸಿದ್ಧ ಎನ್ನುವ ಮಾತನ್ನು ಅಮೆರಿಕಾ ಆಡುತ್ತಿದೆ.

ಪಾಕಿಸ್ತಾನದ ಸೇನಾ ಮುಖ್ಯಸ್ಥ ಜನರಲ್ ಆಸಿಮ್ ಮುನೀರ್ ಮತ್ತು ಭಾರತದ ವಿದೇಶಾಂಗ ಇಲಾಖೆಯ ಸಚಿವ ಸುಬ್ರಮಣ್ಯಂ ಜೈಶಂಕರ್ ಅವರೊಂದಿಗೆ ರೂಬಿಯೊ ಮಾತುಕತೆಯನ್ನು ನಡೆಸಿದ್ದಾರೆ. ಉಭಯ ದೇಶಗಳ ನಡುವೆ ಸಂಘರ್ಷ ಹೆಚ್ಚಾಗುತ್ತಿರುವ ಬೆನ್ನಲ್ಲೇ, ಅಮೆರಿಕಾ ಈ ಹೆಜ್ಜೆಯನ್ನು ಇಟ್ಟಿದೆ. ಕಳೆದ ಮೂರು ದಶಕಗಳಲ್ಲಿ ಉಭಯ ದೇಶಗಳ ನಡುವೆ ತೀವ್ರ ಸಂಘರ್ಷ ಉಂಟಾಗಿತ್ತು. ಭವಿಷ್ಯದಲ್ಲಿ ಇದು ಎರಡೂ ದೇಶಗಳ ಬೆಳವಣಿಗೆಗೆ ಉತ್ತಮ ಲಕ್ಷಣವಲ್ಲ. ಮುಂದಿನ ದಿನಗಳಲ್ಲಿ ರಚನಾತ್ಮಕ ಮಾತುಕತೆ ನಡೆಸಲು ಅಮೆರಿಕಾ ಸಹಾಯ ಮಾಡುತ್ತದೆ ಎಂದು ಮಾರ್ಕೊ ರೂಬಿಯೊ ಹೇಳಿದ್ದಾರೆ. ಪಾಕಿಸ್ತಾನದ ವಿರುದ್ಧ ಭಾರತ ತನ್ನ ವೈಮಾನಿಕ ದಾಳಿಯನ್ನು ತೀವ್ರಗೊಳಿಸಿದ ಬೆನ್ನಲ್ಲೇ, ಅಮೆರಿಕಾ ಮಧ್ಯಸ್ಥಿಕೆಯ ಕೆಲಸವನ್ನು ಆರಂಭಿಸಿತು. ಉಭಯ ದೇಶಗಳ ಮುಖಂಡರು, ಮಿಲಿಟರಿ ಅಧಿಕಾರಿಗಳು, ನಾಗರೀಕರು ಸಂಯಮದಿಂದ ವರ್ತಿಸುವಂತೆ ಮಾರ್ಕೊ ರೂಬಿಯೊ ಮನವಿ ಮಾಡಿದ್ದಾರೆ. ಯುದ್ಧ, ಒಬ್ಬರ ಮೇಲೊಬ್ಬರು ದಾಳಿ ನಡೆಸುವುದು ಯಾವುದಕ್ಕೂ ಪರಿಹಾರವಲ್ಲ. ಉಭಯ ದೇಶಗಳು ಉದ್ವಿಗ್ನತೆಯನ್ನು ಕಮ್ಮಿ ಮಾಡಿಕೊಳ್ಳಲು ದಾರಿಯನ್ನು ಕಂಡುಕೊಳ್ಳಬೇಕು. ಭವಿಷ್ಯದ ಸಂಘರ್ಷಗಳನ್ನು ತಡೆಯಲು ಅಮೆರಿಕಾ ತನ್ನ ಕೈಯಲ್ಲಾದ ಸಹಾಯವನ್ನು ಮಾಡುತ್ತದೆ ಎಂದು ಮಾರ್ಕೊ ರೂಬಿಯೊ ಹೇಳಿದ್ದಾರೆ.

## ‘ಆಪರೇಷನ್ ಸಿಂಧೂರ್’ ದಾಳಿಯಲ್ಲಿ ಐವರು ಮೋಸ್ಟ ವಾಂಟೆಡ್ ಉಗ್ರರು ಫಿನಿಷ್




**ನವದೆಹಲಿ:** ಭಾರತ ನಡೆಸಿದ ಆಪರೇಷನ್ ಸಿಂಧೂರ್ ದಾಳಿಯಲ್ಲಿ ನಿಷೇಧಿತ ಭಯೋತ್ಪಾದಕ ಸಂಘಟನೆಗಳಾದ ಲಷ್ಕರ್-ಎ-ತೈಬಾ ಮತ್ತು ಜೈಶ್-ಎ-ಮೊಹಮ್ಮದ್ ಸೇರಿದ ಕುಖ್ಯಾತ ಐದು ಮಂದಿ ಬಯೋತ್ಪಾದಕರು ಸಾನನ್ನಪ್ಪಿದ್ದಾರೆ ಎಂದು ಮೂಲಗಳು ತಿಳಿಸಿವೆ. ಅವರಲ್ಲಿ ಒಬ್ಬರು ಎಲ್‌ಇಟಿ ಮುದಾಸರ್ ಖಾದಿಯಾನ್ ಖಾಸ್ ಅಲಿಯಾಸ್ ಮುದಾಸರ್ ಅಲಿಯಾಸ್ ಅಬು ಜುಂದಾಲ್ ಎಂದು ತಿಳಿದುಬಂದಿದೆ. ಈತ ಮುರಿಡ್ಕೆಯಲ್ಲಿರುವ ಮರ್ಕಜ್ ತೈಬಾದ ಉಸ್ತುವಾರಿ ವಹಿಸಿದ್ದ ಎಂದು ತಿಳಿಸಲಾಗಿದೆ. ಪಾಕಿಸ್ತಾನ ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಮತ್ತು ಪಂಜಾಬ್ ಮುಖ್ಯಮಂತ್ರಿ ಮರ್ಯಮ್ ನವಾಜ್ ಪರವಾಗಿ ಅವರ ಅಂತ್ಯಕ್ರಿಯೆಯ ಪ್ರಾರ್ಥನೆಯನ್ನು ಸರ್ಕಾರಿ ಶಾಲೆಯಲ್ಲಿ ನಡೆಸಲಾಗಿದೆ. ಪಾಕ್ ಸೇನೆಯ ಲೆಫ್ಟಿನೆಂಟ್ ಜನರಲ್ ಮತ್ತು ಪಂಜಾಬ್ ಪೊಲೀಸ್ ಐಜಿ ಪ್ರಾರ್ಥನಾ ಸಮಾರಂಭದಲ್ಲಿ ಭಾಗವಹಿಸಿದ್ದರು. ಜೆಇಎಂ ಸಂಸ್ಥಾಪಕ ಮೌಲಾನಾ ಮಸೂದ್ ಅಜರ್ ಅವರ ಹಿರಿಯ ಸಹೋದರ ಹಫೀಜ್ ಮುಹಮ್ಮದ್ ಜಮೀಲ್ ಕೂಡ ಬಲಿಯಾಗಿದ್ದು ಈತ ದಾಳಿಯಲ್ಲಿ ಗಾಯಗೊಂಡ ಬಹವಲ್ಪುರದ ಮರ್ಕಜ್ ಸುಭಾನ್ ಅಲ್ಲಾಹ್ಯನ ಉಸ್ತುವಾರಿ ವಹಿಸಿದ್ದರು. ಯುವಕರಿಗೆ ಗ್ರವಾದಕ್ಕೆ ಪ್ರಚೋದನೆ ಮತ್ತು ಜೆಇಎಂಗೆ ನಿಧಿಸಂಗ್ರಹಣೆಯಲ್ಲಿ ಅವರು ಸಕ್ರಿಯವಾಗಿ ತೊಡಗಿಸಿಕೊಂಡಿದ್ದರು ಎಂದು ಮೂಲಗಳು ತಿಳಿಸಿವೆ. ಉಸ್ತಾದ್ ಜಿ, ಮೊಹಮ್ಮದ್ ಸಲೀಮ್ ಮತ್ತು ಘೋಸಿ ಸಹಾಬ್ ಎಂಬ ಅಡ್ಡ ಹೆಸರುಗಳನ್ನು ಹೊಂದಿದ್ದ ಮತ್ತು ಜೆಇಎಂ ಜೊತೆ ಸಂಬಂಧ ಹೊಂದಿದ್ದ ಮೊಹಮ್ಮದ್ ಯೂಸುಫ್ ಅಜರ್ ನನ್ನು ಕೂಡ ಸದೆಬಡಿಯಲಾಗಿದೆ.

### ಭಾರತ ನಮ್ಮ ಮೇಲೆ ಕ್ಷಿಪಣಿ ದಾಳಿ ಮಾಡಿಲ್ಲ; ಪಾಕಿಸ್ತಾನದ ಆರೋಪ ತಳ್ಳಿ ಹಾಕಿದ ಅಫ್ಘಾನಿಸ್ತಾನ

## ಭಿನ್ನಾಭಿಪ್ರಾಯ ಬಿತ್ತಲು ಪಾಕಿಸ್ತಾನ ಪ್ರಯತ್ನ



ಹೇಳಿಕೆಗಳಲ್ಲಿ ಯಾವುದೇ ಸತ್ಯವಿಲ್ಲ

**ಅಫ್ಘಾನಿಸ್ತಾನ:** ಅಫ್ಘಾನಿಸ್ತಾನದ ಭೂಪ್ರದೇಶದ ಮೇಲೆ ಭಾರತ ಕ್ಷಿಪಣಿ ದಾಳಿ ನಡೆಸಿದೆ ಎಂಬ ಪಾಕಿಸ್ತಾನದ ಹೇಳಿಕೆಯನ್ನು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಹಾಸ್ಯಾಸ್ಪದ ಎಂದು ಕರೆದ ಬೆನ್ನಲ್ಲೇ, ಅಫ್ಘಾನ್ ರಕ್ಷಣಾ ಸಚಿವಾಲಯದ ವಕ್ತಾರ ಇನಾಯತುಲ್ಲಾ ಖವಾರಿಜ್ಮಿ ಹುರಿಯತ್ ರೇಡಿಯೊಗೆ ಮಾತನಾಡಿ ಪಾಕ್ ಆರೋಪವನ್ನು ತಳ್ಳಿ ಹಾಕಿದ್ದಾರೆ. ಅಫ್ಘಾನಿಸ್ತಾನದ ಭೂಪ್ರದೇಶದ ಮೇಲೆ ಭಾರತ ಕ್ಷಿಪಣಿ ದಾಳಿ ನಡೆಸಿದೆ ಎಂಬ ಪಾಕಿಸ್ತಾನದ ಆರೋಪಗಳನ್ನು ಅಫ್ಘಾನಿಸ್ತಾನ ಬಲವಾಗಿ ತಿರಸ್ಕರಿಸಿದೆ. ಅಫ್ಘಾನ್ ರಕ್ಷಣಾ ಸಚಿವಾಲಯದ ವಕ್ತಾರ ಇನಾಯತುಲ್ಲಾ ಖವಾರಿಜ್ಮಿ ಹುರಿಯತ್ ರೇಡಿಯೋ ಚಾನೆಲ್‌ಗೆ ನೀಡಿದ ಸಂದರ್ಶನದಲ್ಲಿ ಅಂತಹ ಹೇಳಿಕೆಗಳಲ್ಲಿ ಯಾವುದೇ ಸತ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಭಾರತ ಪಾಕಿಸ್ತಾನದ ಮೇಲೆ ನಡೆಸಿದ ಕ್ಷಿಪಣಿ ದಾಳಿಯಲ್ಲಿ ಅಫ್ಘಾನ್ ಪ್ರದೇಶವೂ ಗುರಿಯಾಗಿತ್ತು ಎಂದು ಪಾಕಿಸ್ತಾನದ ಐಎಸ್‌ಪಿಆರ್ ಡಿಜಿ ಅಹ್ಮದ್ ಷರೀಫ್ ಚೌಧರಿ ಆರೋಪಿಸಿದ್ದರು.

**ವಾಯುದಾಳಿಗೂ ಮುನ್ನ ಡ್ರೋನ್ ರವಾನಿಸಿ ಪರಿಸ್ಥಿತಿ ಅವಲೋಕನ:** ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದ ಉಗ್ರ ನೆಲೆಗಳ ಮೇಲೆ ವಾಯುದಾಳಿ ನಡೆಸುವುದಕ್ಕೂ ಮುನ್ನ ಭಾರತವು ಪಾಕಿಸ್ತಾನ ವಾಯುಪ್ರದೇಶಕ್ಕೆ ಡ್ರೋನ್‌ಗಳನ್ನು ರವಾನಿಸಿ ಪರಿಸ್ಥಿತಿ ಅವಲೋಕನ ನಡೆಸಿತ್ತು. ವಾಯುದಾಳಿಗೂ 20 ನಿಮಿಷ ಮೊದಲು ಅಂದರೆ ಮಂಗಳವಾರ ರಾತ್ರಿ 12.45ಕ್ಕೆ ಭಾರತೀಯ ರಕ್ಷಣಾ ಪಡೆ ಪಾಕಿಸ್ತಾನ ವಾಯುಪ್ರದೇಶಕ್ಕೆ ನಾಲ್ಕು ಡ್ರೋನ್ ರವಾನಿಸಿತ್ತು. ಸರಿಯಾಗಿ 12.45ಕ್ಕೆ ಕೋಟ್ಲಿ ನೆಲೆ ಮೇಲೆ ಮೊದಲ ಡ್ರೋನ್ ಅಪ್ಪಳಿಸಿತು.

ಹಿಂದೆಯೇ ಆಗಮಿಸಿದ ಮೂರು ಡ್ರೋನ್‌ಗಳು ಮಸೀದಿಗಳ ಮೇಲೆ ದಾಳಿ ನಡೆಸಿದವು. ಪಾಕಿಸ್ತಾನ ಎಚ್ಚೆತ್ತುಕೊಳ್ಳುವಷ್ಟರಲ್ಲಿಯೇ ಯುದ್ಧ ವಿಮಾನಗಳು ದಾಳಿ ನಡೆಸಿದವು. ನಿದ್ದೆಗಣ್ಣಿನಲ್ಲಿದ್ದ ನಾವು ಏನಾಗುತ್ತಿದೆ ಎಂದು ತಿಳಿಯುವಷ್ಟರಲ್ಲಿಎಲ್ಲವೂ ಸರ್ವನಾಶವಾಗಿತ್ತು, ಎಂದು ಸ್ಥಳೀಯರು ಹೇಳಿದ್ದಾರೆ.

**ಕ್ಷಿಪಣಿ ದಾಳಿಯಿಂದ ಪಾರಾದ ಏರ್ ಇಂಡಿಯಾ ವಿಮಾನ**

ಇಸ್ರೇಲ್‌ಗೆ ತೆರಳುತ್ತಿದ್ದ ಭಾರತದ ಏರ್ ಇಂಡಿಯಾ ವಿಮಾನ ಯೆಮೆನ್‌ನ ಹೌತಿ ಬಂಡುಕೋರರು ನಡೆಸಿದ ಕ್ಷಿಪಣಿ ದಾಳಿಯಿಂದ ಸ್ವಲ್ಪದರಲ್ಲೇ ಪಾರಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಟೆಲ್ ಅವೀವ್ ನಿಲ್ದಾಣದಲ್ಲಿ ವಿಮಾನಗಳ ಸಂಚಾರ ರದ್ದುಗೊಳಿಸಲಾಗಿದೆ. ಮಾರ್ಚ್ 4 ರಂದು ಹೊಸ ದಿಲ್ಲಿಯಿಂದ ಟೆಲ್ ಅವೀವ್‌ಗೆ ಪ್ರಯಾಣ ಬೆಳೆಸಿದ್ದ ಏರ್ ಇಂಡಿಯಾದ ಎಐ139 ಬೋಯಿಂಗ್-ಧಿ787 ವಿಮಾನ ‘ಬೆನ್ ಗುರಿಯನ್’ ವಿಮಾನ ನಿಲ್ದಾಣ ತಲುಪುವ ಮೊದಲು ಕ್ಷಿಪಣಿ ದಾಳಿ ನಡೆದಿದೆ. ಹೌತಿ ಬಂಡುಕೋರರು ಹಾರಿಸಿದ ಕ್ಷಿಪಣಿ ವಿಮಾನ ನಿಲ್ದಾಣದ ಸಮೀಪವೇ ಅಪ್ಪಳಿಸಿದೆ.

ಕೂಡಲೇ ಏರ್ ಇಂಡಿಯಾ ವಿಮಾನದ ಪೈಲಟ್‌ಗಳಿಗೆ ಮಾಹಿತಿ ನೀಡುವ ಮೂಲಕ ವಿಮಾನವನ್ನು ಯುನೈಟೆಡ್ ಅರಬ್ ಎಮಿರೇಟ್ಸ್‌ನ ಅಬುಧಾಬಿಗೆ ಮಾರ್ಗ ಬದಲಿಸಲಾಯಿತು. ಆತಂಕದ ನಡುವೆ ಅಬುಧಾಬಿಯಲ್ಲಿ ವಿಮಾನ ಸುರಕ್ಷಿತವಾಗಿ ಲ್ಯಾಂಡ್ ಆಗಿದೆ.

**ಪಾಕ್ ಆರೋಪ ತಿರಸ್ಕರಿಸಿದ ಭಾರತ**

**ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪಾಕಿಸ್ತಾನ ಆರೋಪವನ್ನು ಕ್ಷುಲ್ಲಕ ಎಂದು ಕರೆದರು. ಕಳೆದ ಒಂದೂವರೆ ವರ್ಷಗಳಲ್ಲಿ ಅಫ್ಘಾನಿಸ್ತಾನದಲ್ಲಿ ಜನರು ಮತ್ತು ನಾಗರಿಕ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ಹಲವು ಬಾರಿ ದಾಳಿ ನಡೆಸಿರುವ ದೇಶ ಯಾವುದು ಎಂಬುದನ್ನು ಅಫ್ಘಾನ್ ಜನರಿಗೆ ನೆನಪಿಸುವ ಅಗತ್ಯವಿಲ್ಲ. ಕಾಬೂಲ್‌ನಿಂದ ಯಾವುದೇ ದೃಢೀಕರಣ ಅಥವಾ ದೂರು ಬಂದಿಲ್ಲದಿದ್ದರೂ, ಭಾರತ, ಅಫ್ಘಾನಿಸ್ತಾನದ ನಡುವೆ ಭಿನ್ನಾಭಿಪ್ರಾಯ ಬಿತ್ತಲು ಪಾಕಿಸ್ತಾನ ಪ್ರಯತ್ನಿಸುತ್ತಿದೆ ಎಂದು ಹೇಳಿದರು.**

# ಮಿನಿ ನ್ಯೂಸ್

## ಭಾರತದ ನಗರಗಳನ್ನು ಟಾರ್ಗೆಟ್ ಮಾಡಿದ ಪಾಕ್

**ನವದೆಹಲಿ:** ಮೂರು ದಿನಗಳ ಡೋನ್ ದಾಳಿ ಮತ್ತು ಕದನ ವಿರಾಮ ಉಲ್ಲಂಘನೆಯ ನಂತರ ಪಾಕಿಸ್ತಾನ ಶನಿವಾರ ಭಾರತದ ವಿರುದ್ಧ ಅಪರೇಷನ್ ಬನ್ ಉಲ್ ಮರ್ಸೂಸ್ ಅನ್ನು ಪ್ರಾರಂಭಿಸಿದ ನಂತರ ಭಾರತೀಯ ನಗರಗಳಲ್ಲಿ ಕಟ್ಟೆಚ್ಚರ ವಹಿಸಲಾಗಿದೆ. ಪಾಕಿಸ್ತಾನವು ಫತಾಹ್ 11 ದೀರ್ಘ-ಶ್ರೇಣಿಯ ಕ್ಷಿಪಣಿಯನ್ನು ಹಾರಿಸಿತ್ತು. ಆದರೆ ಅದನ್ನು ಹರಿಯಾಣದ ಸಿರ್ಸಾದಲ್ಲಿ ತಡೆಹಿಡಿಯಲಾಗಿದೆ. ಅದು ಭಾರತದ ಕಾರ್ಯತಂತ್ರದ ಪಶ್ಚಿಮ ವಲಯವನ್ನು ಗುರಿಯಾಗಿರಿಸಿಕೊಂಡಿತ್ತು ಎನ್ನಲಾಗಿದೆ. ಸಿರ್ಸಾದ ಮೇಲೆ ಪಾಕಿಸ್ತಾನದ ಫತಾಹ್ -ಐಐ ಕ್ಷಿಪಣಿಯನ್ನು ಭಾರತೀಯ ಪಡೆಗಳು ತಡೆಹಿಡಿದು, ಜಮ್ಮು ವಾಯುನೆಲೆಯ ಮೇಲಿನ ದಾಳಿಯನ್ನು ವಿಫಲಗೊಳಿಸಿವೆ. ಸುಮಾರು 400 ಕಿ.ಮೀ. ದಾಳಿ ವ್ಯಾಪ್ತಿಯನ್ನು ಹೊಂದಿರುವ ದೀರ್ಘ ವ್ಯಾಪ್ತಿಯ ಮೇಲೆಯಿಂದ ಮೇಲ್ಮಗೆ ಚಿಮ್ಮುವ ಕ್ಷಿಪಣಿಯನ್ನು ಪಾಕಿಸ್ತಾನ ಹಾರಿಸಿತು. ಆದರೆ ಅದನ್ನು ಹರಿಯಾಣದಲ್ಲಿ ಆಕಾಶದಲ್ಲಿಯೇ ಭಾರತ ಹೊಡೆದುರುಳಿಸಿದೆ.

ಪಾಕಿಸ್ತಾನಿ ಅಧಿಕಾರಿಗಳ ಪ್ರಕಾರ, ಫತಾಹ್ -11 ಕ್ಷಿಪಣಿಯು ಏವಿಯಾನಿಕ್ಸ್ ಉಪಗ್ರಹ ಸಂಚರಣೆ ವ್ಯವಸ್ಥೆಗಳನ್ನು ಹೊಂದಿರುವ ಆಧುನಿಕ ಶಸ್ತ್ರಾಸ್ತ್ರ ವ್ಯವಸ್ಥೆ ಎನ್ನಲಾಗಿದೆ. 10 ಮೀಟರ್‌ಗಳಿಗಿಂತ ಕಡಿಮೆ ವೃತ್ತಾಕಾರದ ಸಂಭವನೀಯತೆ ಯೊಂದಿಗೆ ನಿಖರವಾದ ಗುರಿಯನ್ನು ಸಕ್ರಿಯಗೊಳಿಸುತ್ತದೆ ಎನ್ನಲಾಗಿದೆ. ದೆಹಲಿಯನ್ನು ಗುರಿಯಾಗಿಸಿ ಪಾಕಿಸ್ತಾನ ಫತಾಹ್-ಐಐ ಉಡಾವಣೆ ಮಾಡಿತ್ತು. ಆದರೆ ಭಾರತ ಈ ಕ್ಷಿಪಣಿಯನ್ನು ಆಕಾಶದಲ್ಲೇ ಛಿದ್ರಗೊಳಿಸಿದೆ. ಪಾಕಿಸ್ತಾನದ ಫತಾಹ್-11 ಅಲ್ಪ-ಶ್ರೇಣಿಯ ಬ್ಯಾಲಿಸ್ಟಿಕ್ ಕ್ಷಿಪಣಿಯಾಗಿದ್ದು ಅಂದಾಜು 400 ಕಿಲೋ ಮೀಟರ್ ದೂರವನ್ನು ಕ್ರಮಿಸುವ ಜೊತೆಗೆ 365-ಕಿಲೋಗ್ರಾಂಗಳಷ್ಟು ಸಿಡಿತಲೆಯನ್ನು ಹೊತ್ತುಕೊಂಡು ಹೋಗುವ ಸಾಮರ್ಥ್ಯ ಹೊಂದಿದೆ.

## ಗಡಿಯಲ್ಲಿ ಪಾಕ್‌ನ ಭಯೋತ್ಪಾದಕ ಲಾಂಚ್ ಪ್ಯಾಡ್ ಧ್ವಂಸಗೊಳಿಸಿದ ಬಿಎಸ್‌ಎಫ್

**ನವದೆಹಲಿ:** ಅಂತರರಾಷ್ಟ್ರೀಯ ಗಡಿಯಲ್ಲಿ ಪಾಕಿಸ್ತಾನದಿಂದ ಅಪ್ರಚೋದಿತ ಗುಂಡಿನ ದಾಳಿಗೆ ಪ್ರತಿಕ್ರಿಯೆಯಾಗಿ ಜಮ್ಮುವಿನ ಅಣ್ಣೂರ್ ಎದುರಿನ ಭಯೋತ್ಪಾದಕ ಲಾಂಚ್ ಪ್ಯಾಡ್ ಅನ್ನು ಸಂಪೂರ್ಣವಾಗಿ ನಾಶಪಡಿಸಲಾಗಿದೆ ಎಂದು ಗಡಿ ಭದ್ರತಾ ಪಡೆ ಶನಿವಾರ ತಿಳಿಸಿದೆ. ಪಾಕಿಸ್ತಾನದ ಸಿಯಾಲ್‌ಕೋಟ್ ಜಿಲ್ಲೆಯ ಲೂನಿಯಲ್ಲಿ ಈ ನೆಲೆ ಇತ್ತು ಎಂದು ಬಿಎಸ್ ಎಫ್ ವಕ್ತಾರರು ತಿಳಿಸಿದ್ದಾರೆ. ಜಮ್ಮು ವಲಯದಲ್ಲಿರುವ ಬಿಎಸ್ ಎಫ್ ನೆಲೆಗಳ ಮೇಲೆ ಪಾಕಿಸ್ತಾನ ಅಪ್ರಚೋದಿತ ಗುಂಡಿನ ದಾಳಿ ನಡೆಸಿದ ಪರಿಣಾಮ ಬಿಎಸ್‌ಎಫ್ ಅದಕ್ಕೆ ತಕ್ಕ ರೀತಿಯಲ್ಲಿ ಪ್ರತಿಕ್ರಿಯೆ ನೀಡಿದೆ. ಇದರಿಂದ ಅಂತರರಾಷ್ಟ್ರೀಯ ಗಡಿಯಲ್ಲಿ ಪಾಕಿಸ್ತಾನ ರೇಂಜರ್‌ಗಳ ಪೋಸ್ಟ್‌ಗಳು ಮತ್ತು ಮೂಲಸೌಕರ್ಯಕ್ಕೆ ಹಾನಿಯಾಗಿದೆ ಎಂದು ವಕ್ತಾರರು ತಿಳಿಸಿದ್ದಾರೆ. ಭಾರತದ ಸಾರ್ವಭೌಮತ್ವವನ್ನು ರಕ್ಷಿಸುವ ನಮ್ಮ ಸಂಕಲ್ಪ ಅಚಲವಾಗಿದೆ ಎಂದು ವಕ್ತಾರರು ಹೇಳಿದರು.

## ಪಾಕ್ ಶೆಲ್ ದಾಳಿಯಿಂದ ಹಾನಿಗೊಳಗಾದ ಪ್ರದೇಶಗಳಿಗೆ ಸಿಎಂ ಅಬ್ದುಲ್ಲಾ ಭೇಟಿ

**ಜಮ್ಮು:** ಪಾಕ್‌ನಿಂದ ಶಲ್, ದ್ರೋನ್ ದಾಳಿಯಲ್ಲಿ ಹಾನಿಗೊಂಡಿರುವ ಜಮ್ಮುವಿನ ವಸತಿ ಪ್ರದೇಶಕ್ಕೆ ಜಮ್ಮು ಮತ್ತು ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಶನಿವಾರ ಭೇಟಿ ನೀಡಿದರು. ಸ್ಫೋಟದಿಂದ ಮನೆ, ಹಲವಾರು ವಾಹನಗಳು ಹಾನಿಗೊಳಗಾಗಿವೆ. ರೆಹಾರಿಯಲ್ಲಿ ಸ್ಫೋಟ ಸಂಭವಿಸಿದ ಸ್ಥಳಕ್ಕೆ ಅಬ್ದುಲ್ಲಾ ಭೇಟಿ ನೀಡಿ ಸಂತ್ರಸ್ತ ಕುಟುಂಬದೊಂದಿಗೆ ಸಂವಾದ ನಡೆಸಿದ್ದಾರೆ. ಪಾಕಿಸ್ತಾನದಿಂದ ಡೋನ್ ದಾಳಿಯ ನಡುವೆ ನಗರದಲ್ಲಿ ಬೆಳಿಗ್ಗೆ ಸೈರನ್ಗಳು ಮೊಳಗುತ್ತಿದ್ದಂತೆ ಸ್ಫೋಟದ ಭಾರಿ ಶಬ್ದ ಕೇಳಿಸಿದೆ. ಬೆಳಗ್ಗೆ 5 ಗಂಟೆ ಸುಮಾರಿಗೆ ಜಮ್ಮುವಿನಲ್ಲಿ ಸ್ಫೋಟಗಳ ಶಬ್ದಗಳು ಪ್ರಾರಂಭವಾದವು. ಗಡಿಯಾಚೆಯಿಂದ ಹೊಸ ಟ್ರೋನ್ ದಾಳಿಯ ಅಲೆಯನ್ನು ಅಧಿಕಾರಿಗಳು ದೃಢಪಡಿಸಿದರು. ನಗರದ ರೂಪ್ ನಗರ ಪ್ರದೇಶದಲ್ಲಿ ವಸತಿ ಕಟ್ಟಡಕ್ಕೂ ಹಾನಿಯಾಗಿದೆ. ಪಾಕಿಸ್ತಾನವು ಕಳೆದ ರಾತ್ರಿ ಭಾರತದ 26 ಸ್ಥಳಗಳನ್ನು ಗುರಿಯಾಗಿಸಿಕೊಂಡು ಡೋನ್ ದಾಳಿಯ ನಡೆಸಿದ್ದು ಮತ್ತೆ ಬೆಳಿಗ್ಗೆ ಹೊಸ ದಾಳಿಗಳು ನಡೆದವು.

## ಟ್ರಕ್‌ಗೆ ಡಿಕ್ಕಿ ಹೊಡೆದು ಕಂದಕಕ್ಕೆ ಬಿದ್ದ ಖಾಸಗಿ ಬಸ್, ಮೂವರ ಸಾವು

**ಶಾಜಾಪುರ:** ಬೆಳಗಿನ ಜಾವ ಖಾಸಗಿ ಖಾಸಗಿ ಬಸ್ ವೊಂದು ಡಂಪರ್ ಟ್ರಕ್‌ಗೆ ಡಿಕ್ಕಿ ಹೊಡೆದು ಕಂದಕಕ್ಕೆ ಉರುಳಿ ಬಿದ್ದ ಪರಿಣಾಮ ಮೂವರು ಸಾವನ್ನಪ್ಪಿ, 18 ಜನರು ಗಾಯಗೊಂಡಿರುವ ಘಟನೆ ಜಿಲ್ಲೆಯಲ್ಲಿ ನಡೆದಿದೆ. ಜಿಲ್ಲಾ ಕೇಂದ್ರದಿಂದ ಸುಮಾರು 30 ಕಿ.ಮೀ ದೂರದಲ್ಲಿರುವ ಮಕ್ಸಿಬೈಪಾಸ್ ರಸ್ತೆಯಲ್ಲಿ ಬೆಳಗಿನ ಜಾವ 2.30 ರ ಸುಮಾರಿಗೆ ಈ ಅಪಘಾತ ಸಂಭವಿಸಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಮಧ್ಯ ಪ್ರದೇಶದ ಇಂದೋರ್‌ನಿಂದ ಗುನಾ ಕಡೆಗೆ ಹೋಗುತ್ತಿದ್ದ ಬಸ್ ಮುಂದೆ ಹೋಗುತ್ತಿದ್ದ ಟ್ರಕ್‌ಗೆ ಡಿಕ್ಕಿ ಹೊಡೆದಿದೆ ನಂತರ ನಿಯಂತ್ರಣ ತಪ್ಪಿ ರಸ್ತೆಯ ಪಕ್ಕದ ಕಂದಕಕ್ಕೆ ಉರುಳಿ ಬಿದ್ದಿದೆ ಎಂದು ಮಕ್ಸಿ ಪೊಲೀಸ್ ಠಾಣೆಯ ಅಧಿಕಾರಿ ಭೀಮ್ ಸಿಂಗ್ ಪಟೇಲ್ ತಿಳಿಸಿದ್ದಾರೆ.

ಸ್ಥಳಕ್ಕೆ ದಾವಿಸಿದ ಪೊಲೀಸರು, ಕ್ರೇನ್ ಬಳಸಿ ಬಸ್ ಅನ್ನು ಕಂದಕದಿಂದ ಹೊರತೆಗೆದು ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ. ಮೃತರಲ್ಲಿ ಬಸ್ ಚಾಲಕ ಗುಲಾಬ್ ಸೇನ್, ಟ್ರಕ್ ಸಹಾಯಕ ಭವಾರ್ ಸಿಂಗ್ ಮತ್ತು ಪ್ರಯಾಣಿಕ ಅಮನ್ ಚೌರಾಸಿಯಾ ಸೇರಿದ್ದಾರೆ ಎಂದು ಪಟೇಲ್ ಹೇಳಿದ್ದಾರೆ. ಘಟನೆ ಕುರಿತು ಪ್ರಕರಣ ದಾಖಲಿಸಲಾಗಿದ್ದು, ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಅವರು ಹೇಳಿದರು.

## ಭಾರೀ ಶೆಲ್ ದಾಳಿಯಲ್ಲಿ ಭಾರತದ ನಾಲ್ವರು ನಾಗರಿಕರು ಸಾವು

**ಜಮ್ಮು:** ಮುಂಜಾನೆ ರಾಚೌಲ, ಪೂಂಚ್, ಜಮ್ಮು ಜಿಲ್ಲೆಗಳಲ್ಲಿ ಪಾಕಿಸ್ತಾನ ನಡೆಸಿದ ಭಾರೀ ಶೆಲ್ ದಾಳಿಯಲ್ಲಿ ನಾಲ್ವರು ನಾಗರಿಕರು ಸಾವನ್ನಪ್ಪಿದ್ದಾರೆ, ಹಲವಾರು ಜನರು ಗಾಯಗೊಂಡಿದ್ದಾರೆ ರಾಚೌರಿ ಪಟ್ಟಣದ ಕೈಗಾರಿಕಾ ಪ್ರದೇಶದ ಬಳಿ ಪಾಕಿಸ್ತಾನಿ ಶೆಲ್ ದಾಳಿಯಲ್ಲಿ ಎರಡು ವರ್ಷದ ಆಯಿಷಾ ನೂರ್, ಮೊಹಮ್ಮದ್ ಶೋಹಿಬ್ (35) ಎಂಬ ಇಬ್ಬರು ಸಾವನ್ನಪ್ಪಿದ್ದಾರೆ, ಇತರ ಮೂವರು ಗಾಯಗೊಂಡಿದ್ದಾರೆ. ಇದಲ್ಲದೆ ಪೂಂಚ್ ಜಿಲ್ಲೆಯ ಮೆಂಧರ್ ಸೆಕ್ಟರ್‌ನ ಕಾಂಘ್ರಾ-ಗಲ್ಲುಟ್ಟಾ ಗ್ರಾಮದಲ್ಲಿ ರಶೀದಾ ಬಿ ಎಂಬ 55 ವರ್ಷದ ಮಹಿಳೆಯ ಮನೆಗೆ ಮಾರ್ಟರ್ ಶೆಲ್ ಬಡಿದು ಪ್ರಾಣ ಕಳೆದುಕೊಂಡಿದ್ದಾರೆ. ಬಿದಿಪುರ ಜಟ್ಟಾ ಗ್ರಾಮದ ನಿವಾಸಿ ಅಶೋಕ್ ಕುಮಾರ್ ಅಲಿಯಾಸ್ ಶೋಕಿ, ಜಮ್ಮು ಜಿಲ್ಲೆಯ ಆರ್ ಎಸ್ ಪುರ ಸೆಕ್ಟರ್ನ ಅಂತರರಾಷ್ಟ್ರೀಯ ಗಡಿಯಲ್ಲಿ ಗಡಿಯಾಚೆಗಿನ ಗುಂಡಿನ ದಾಳಿಯಲ್ಲಿ ಸಾವನ್ನಪ್ಪಿದ್ದಾರೆ ಎಂದು ಅವರು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಪೂಂಚ್‌ನಲ್ಲಿ ನಡೆದ ತೀವ್ರ ಶೆಲ್ ದಾಳಿಯಲ್ಲಿ ಇನ್ನೂ ಮೂವರು ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ ಎಂದು ಅವರು ಹೇಳಿದರು.

## ಭಾರತವು ಹಿಂದೆ ಸರಿಯಲು ಸಿದ್ಧವಿದ್ದರೆ ನಾವೂ ಸಿದ್ಧ



**ಇಸ್ಲಾಮಾಬಾದ್:** ಭಾರತ ಸರ್ಕಾರ ತನ್ನ ಮಿಲಿಟರಿ ಕಾರ್ಯಾಚರಣೆಯನ್ನು ಇಲ್ಲಿಗೇ ನಿಲ್ಲಿಸಿದರೆ, ತಾವು ಸಹ ಇಲ್ಲಿಗೆ ನಿಲ್ಲಿಸುವ ಬಗ್ಗೆ ಗಂಭೀರ ಚಿಂತನೆ ನಡೆಸುವುದಾಗಿ ಪಾಕಿಸ್ತಾನದ ವಿದೇಶಾಂಗ ವ್ಯವಹಾರ ಖಾತೆಯ ಸಚಿವ ಇಶಾಕ್ ದರ್ ಹೇಳಿಕೆಯನ್ನು ನೀಡಿದ್ದಾರೆ. ಪಾಕಿಸ್ತಾನದ ವಾಯುನೆಲೆಗಳ ಮೇಲೆ ಭಾರತದ ದಾಳಿ ತೀವ್ರವಾಗುತ್ತಿರುವ ಹೊತ್ತಿನಲ್ಲಿ, ಪಾಕಿಸ್ತಾನ ಸರ್ಕಾರದಿಂದ ಈ ಹೇಳಿಕೆ ಬಂದಿದೆ.

ಉಭಯ ದೇಶಗಳ ನಡುವೆ ಉದ್ವಿಗ್ನತೆಯನ್ನು ಕಮ್ಮಿ ಮಾಡಲು ಜಾಗತಿಕ ಮಟ್ಟದಲ್ಲಿ ರಾಜತಾಂತ್ರಿಕ ಪ್ರಯತ್ನಗಳು ನಡೆಯುತ್ತಿವೆ. ಇದಾದ ನಂತರ ನಾವೂ ದೆಹಲಿ ಮಟ್ಟದಲ್ಲಿ ಮಾತುಕತೆ ನಡೆಸಲು ಆಶಿಸುತ್ತಿದ್ದೇವೆ ಎಂದು ಇಶಾಕ್ ದರ್ ಹೇಳಿಕೆ ನೀಡಿದ್ದಾರೆಂದು ವರದಿಯಾಗಿದೆ.

ಪಾಕಿಸ್ತಾನದ ಆರ್ಥಿಕ ಪರಿಸ್ಥಿತಿ ತೀರಾ ಹದಗೆಟ್ಟಿದೆ, ಹಾಗಾಗಿ ಪರಿಸ್ಥಿತಿಯನ್ನು ತಿಳಿಗೊಳಿಸಲು ನಾವು ಬಯಸುತ್ತಿದ್ದೇವೆ, ದೆಹಲಿ ಜೊತೆ ಸಂಪರ್ಕದ ಪ್ರಯತ್ನವನ್ನೂ ಮಾಡುತ್ತಿದ್ದೇವೆ. ಭಾರತವು ತಮ್ಮ ಕಾರ್ಯಾಚರಣೆಯನ್ನು ನಿಲ್ಲಿಸಿದರೆ, ಪಾಕಿಸ್ತಾನವೂ ನಿಲ್ಲಿಸಲು ಸಿದ್ಧ ಎಂದು ಒಂದು ದಿನದ ಹಿಂದೆ ಪಾಕಿಸ್ತಾನದ ರಕ್ಷಣಾ ಸಚಿವ ಖ್ವಾಜಾ ಆಸಿಫ್ ಹೇಳಿದ್ದರು. ಎರಡು ದೇಶಗಳ ನಡುವಿನ ರಾಷ್ಟ್ರೀಯ ಭದ್ರತಾ ಸಲಹೆಗಾರರು ಮಾತು ಕತೆಯನ್ನು ಆರಂಭಿಸಿದ್ದಾರೆಂದು ಕಳೆದ ಬುಧವಾರ (ಮೇ. 7) ವರದಿಯಾಗಿತ್ತು. ಆದರೆ, ಶುಕ್ರವಾರ ರಾತ್ರಿಯೂ ಪಾಕಿಸ್ತಾನವು ನಾಗರೀಕರನ್ನು ಟಾರ್ಗೆಟ್ ಮಾಡಿ ದಾಳಿ ಮಾಡಲು ಆರಂಭಿಸಿತು. ಆದರೆ, ಯಾವಾಗ, ಭಾರತದ ಸೇನೆ, ತನ್ನ ವಾಯುನೆಲೆಯ ಮೇಲೆ ದಾಳಿಯನ್ನು ಮಾಡಿತೋ, ಪಾಕಿಸ್ತಾನ ಉದ್ವಿಗ್ನತೆ ಕಮ್ಮಿ ಮಾಡಿಕೊಳ್ಳುವ ಮಾತನ್ನು ಆಡುತ್ತಿದೆ.

**ಭಾರತದ ವೈಮಾನಿಕ ದಾಳಿ ಅತ್ಯಂತ ನಿಖರವಾಗಿತ್ತು. ಪಾಕಿಸ್ತಾನದ ವಾಯು ನೆಲೆಗಳಾದ ರಫಿಕಿ, ಮುರಿದ್, ಚಕ್ಲಾ, ರಹೀಂ ಯಾರ್ ಖಾನ್ ಮೇಲೆ ಭಾರತದ ಏರ್ಫೋರ್ಸ್ ದಾಳಿಯನ್ನು ನಡೆಸಿತು. ಸಿಯಾಲ್ಕೋಟ್ ವಾಯುನೆಲೆಯನ್ನೂ ಗುರಿಯಾಗಿಸಿತ್ತು. ದಾಳಿಯ ವೇಳೆ, ಭಾರತಕ್ಕೆ ಕಡಿಮೆ ಹಾನಿಯಾಗುವಂತೆ ನೋಡಿಕೊಳ್ಳಲಾಯಿತು.**

ಪಾಕಿಸ್ತಾನದ ಆಪರೇಷನ್ ಬುನ್ಯಾನ್ - ಉನ್- ಮರ್ಸೂಸ್ ಅನ್ನು ಧ್ವಂಸಗೊಳಿಸಿದ ನಂತರ, ಪಾಕಿಸ್ತಾನದಿಂದ ಕಾರ್ಯಾಚರಣೆ ನಿಲ್ಲಿಸುವ ಮಾತುಗಳು ಹೊರ ಬರುತ್ತಿವೆ. ಶನಿ ವಾರ ನಸುಕಿನಲ್ಲಿ ಪಾಕಿಸ್ತಾನದ ಟರ್ಕಿ ನಿರ್ಮಿತ ಡ್ರೋನ್, ಲಾಯ್ಟರಿಂಗ್ ಮದ್ದುಗುಂಡುಗಳು, ಫೈಟರ್ ಜೆಟ್, ಕ್ಷಿಪಣಿಯನ್ನು ಬಳಸಿತ್ತು.

ದೆಹಲಿಯನ್ನು ಟಾರ್ಗೆಟ್ ಮಾಡಿ ಕ್ಷಿಪಣಿಯನ್ನು ಹಾರಿಸಿತಾದರೂ, ಹರ್ಯಾಣದ ಹಿಸಾರ್‌ನಲ್ಲಿ ಅದನ್ನು ಹೊಡೆದು ಹಾಕಲಾಯಿತು. ಪಾಕಿಸ್ತಾನವು ಭಾರತದ ಮಿಲಿಟರಿ ನೆಲೆಗಳು, ನಾಗರೀಕ ಪ್ರದೇಶಗಳನ್ನು ಗುರಿಯಾಗಿಸಿ ದಾಳಿ ನಡೆಸುತ್ತಿದೆ. ಆದರೆ, ಭಾರತ ಉಗ್ರರ ವಿರುದ್ಧ ಮಾತ್ರ ಕಾರ್ಯಾಚರಣೆ ನಡೆಸುತ್ತಿದೆ.

ಭಾರತದಿಂದ ಮುಖಭಂಗ ಅನುಭವಿಸಿದ ನಂತರ ಹಿಂದಕ್ಕೆ ಸರಿಯುವ ಪಾಕಿಸ್ತಾನದ ಜಾಯಮಾನ ಇದೇ ಮೊದಲೇನಲ್ಲ. ಪಾಕಿಸ್ತಾನವು ಈಗ ಶಾಂತಿಗಾಗಿ ಬೇಡಿಕೆ ಇಡುವಂತೆ ಮಾಡಿದ್ದು, ಭಾರತದ ವೈಮಾನಿಕ ದಾಳಿ ತೀವ್ರಗೊಳ್ಳುತ್ತಿರುವುದರಿಂದ. ಭಾರತವು ಹಿಂದಕ್ಕೆ ಸರಿದರೆ, ನಾವು ಖಂಡಿತವಾಗಿಯೂ ಹಿಂದಕ್ಕೆ ಸರಿಯುತ್ತೇವೆ ಎಂದು ವಿದೇಶಾಂಗ ಸಚಿವರು ಹೇಳಿದ್ದಾರೆ. ಪಾಕಿಸ್ತಾನದ ಸಚಿವರುಗಳು ಕೂಡಾ, ದೋಸೆ ಮಗುಚಿ ಹಾಕಿದಂತೆ, ತಮ್ಮ ಹೇಳಿಕೆಗಳನ್ನು ಬದಲಾಯಿಸುತ್ತಲೇ ಇರುತ್ತಾರೆ.

## ಕೇದಾರನಾಥ, ಬದರಿನಾಥ ದೇವಾಲಯ ಪ್ರವೇಶ ನಿರ್ಬಂಧ



**ಕೇದಾರನಾಥ:** ಜನಸಾಮಾನ್ಯರ ಹಾಗೂ ಭಕ್ತರ ಹಿತದೃಷ್ಟಿಯಿಂದ ಹಿಂದೂಗಳ ಪವಿತ್ರಾ ಧಾರ್ಮಿಕ ಶ್ರದ್ಧಾ ಕೇಂದ್ರವಾದ ಕೇದಾರನಾಥ ಮತ್ತು ಬದರಿನಾಥ ದೇವಾಲಯ ಪ್ರವೇಶಕ್ಕೆ ನಿರ್ಬಂಧ ಹೇರಲಾಗಿದೆ. ಕೇದಾರನಾಥ ದೇವಾಲಯವು ದೇಶದ 12 ಜ್ಯೋತಿರ್ಲಿಂಗಗಳಲ್ಲಿ ಒಂದಾಗಿದೆ. ಈ ದೇವಾಲಯವು ಮಂದಾಕಿನಿ ನದಿ ಮಟ್ಟದಿಂದ 3, 583 ಅಡಿ ಎತ್ತರದಲ್ಲಿದೆ. ಗಾಂಧಿ ಸರೋವರ, ಸನ್ ಪ್ರಯಾಗ, ಗೌರಿಕುಂಡ್ ದೇವಸ್ಥಾನ, ವಾಸುಕಿ ತಾಲ್, ಶಂಕರಾಚಾರ್ಯ ಸಮಾಧಿ, ಭೈರವನಾಥ ದೇವಸ್ಥಾನ, ರುದ್ರ ಗುಹೆ ತಾಣಗಳನ್ನು ವೀಕ್ಷಿಸಬಹುದು.

ಚಾರ್ ಧಾಮ ಯಾತ್ರೆಯ ಕೊನೆಯ ದೇವಾಲಯವಾದ ಬದರಿನಾಥ ದೇವಾಲಯವು ಅಲಕನಂದಾ ನದಿ ಮಟ್ಟದಿಂದ 3,133 ಅಡಿ ಎತ್ತರದಲ್ಲಿದೆ. ಇಲ್ಲಿನ ಬದರಿ ಮರದ ಕೆಳಗೆ ವಿಷ್ಣು ಧ್ಯಾನ ಮಾಡಿದ್ದನೆಂದು ಭಕ್ತರು ನಂಬುತ್ತಾರೆ. ಯಾತ್ರೆ ವೇಳೆಯಲ್ಲಿ ಭಕ್ತರು ವಸುಧಾರಾ ಜಲಪಾತ, ನಾರದ ಕುಂಡ, ಸತೋಪಂತ್ ಟ್ರೆಕ್, ಹೇಮಕುಂಡ ಸಾಹಿಬ್, ಫ್ಲವರ್ಸ್ ವ್ಯಾಲಿ ಪ್ರದೇಶಗಳಿಗೆ ಭೇಟಿ ನೀಡುತ್ತಾರೆ. ಉತ್ತರಾಖಂಡದ ಯಮುನೋತ್ರಿ, ಗಂಗೋತ್ರಿ, ಕೇದಾರನಾಥ ಹಾಗೂ ಬದರಿನಾಥಗಳನ್ನು ಒಟ್ಟಾಗಿ ಚಾರ್ ಧಾಮ್ ಯಾತ್ರೆ ಎಂದು ಹೇಳುತ್ತಾರೆ. ಈ ತೀರ್ಥಯಾತ್ರೆಯ ಭಾಗವಾಗಿ ಭಕ್ತರು ಈ ನಾಲ್ಕು ಪವಿತ್ರ ಸ್ಥಳಗಳಿಗೆ ಭೇಟಿ ಕೊಡುತ್ತಾರೆ. ದೇಶಾದ್ಯಂತದ ಕೋಟ್ಯಂತರ ಭಕ್ತರು ಈ ಯಾತ್ರೆಯಲ್ಲಿ ಭಾಗವಹಿಸಿ ಆಧ್ಯಾತಿಕ ಜಗತ್ತಿನಲ್ಲಿ ತಮನ್ನು ತಾವು ತೊಡಗಿಸಿಕೊಳ್ಳುತ್ತಾರೆ. ಚಾರ್ ಧಾಮ ಯಾತ್ರೆಯ ಸಮಯದಲ್ಲಿ ಭೇಟಿ ನೀಡುವ ಮೊದಲ ಯಾತ್ರಾ ಸ್ಥಳ ಯಮುನೋತ್ರಿ. ಇದು ಯಮುನಾ ನದಿ ಮಟ್ಟದಿಂದ 3,293 ಅಡಿ ಎತ್ತರದಲ್ಲಿದೆ.

ರೈಥಾಲ್, ಬಸುರ್, ಉತ್ತರಕಾಶಿ, ಹನುಮಾನ್ ಚಟ್ಟಿ, ಜಾನಕಿ ಚಟ್ಟಿ, ಖರ್ಸಾಲಿ, ಬಾರ್ಕೋಟ್, ದಿಯಾರಾ ಬುಗ್ಯಾಲ್ ತಾಣಗಳಿಗೆ ಭೇಟಿ ನೀಡಲಾಗುತ್ತದೆ. ಚಾರ್ ಧಾಮ ಯಾತ್ರೆಯಲ್ಲಿ ಗಂಗೋತ್ರಿ ಧಾಮವು ಎರಡನೇ ತೀರ್ಥಯಾತ್ರೆಯ ತಾಣವಾಗಿದೆ. ಇದು ಗಂಗಾ ನದಿ ಮಟ್ಟದಿಂದ 3,100 ಅಡಿ ಎತ್ತರದಲ್ಲಿದೆ. ಭಾಗೀರಥಿ ಬೆಟ್ಟ, ದೋಡಿ ತಾಲ್, ಕೇದಾರ ತಾಲ್, ಗಂಗೋತ್ರಿ ದೇವಾಲಯ, ಗಂಗೋತ್ರಿ ರಾಷ್ಟ್ರೀಯ ಉದ್ಯಾನವನ, ಗೋಮುಖ ತಪೋವನ ಚಾರಣ, ಕೇದಾರ ತಾಲ್ ಚಾರಣಕ್ಕೆ ಭೇಟಿ ಕೊಡಬಹುದು.

## ಇಸ್ಲಾಮಾಬಾದ್‌ನಲ್ಲಿ 48 ಗಂಟೆ ಪೆಟ್ರೋಲ್ ಬಂಕ್ ಬಂದ್



**ನವದೆಹಲಿ:** ಆಪರೇಶನ್ ಸಿಂಧೂರದ ಹೊಡೆತ ತಿನ್ನುತ್ತಿರುವ ನಡುವೆಯೇ ಪಾಕಿಸ್ತಾನ ರಾಜಧಾನಿ ಪ್ರದೇಶ ಇಸ್ಲಾಮಾಬಾದ್ ಆಡಳಿತವು ಮುಂದಿನ 48 ಗಂಟೆಗಳ ಕಾಲ ರಾಜಧಾನಿ ನಗರದೊಳಗಿನ ಎಲ್ಲಾ ಪೆಟ್ರೋಲ್, ಡೀಸೆಲ್ ಕೇಂದ್ರಗಳನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲು ತಕ್ಷಣದ ಆದೇಶ ಹೊರಡಿಸಿದೆ. ಇಸ್ಲಾಮಾಬಾದ್ ಆಡಳಿತ ಹೊರಡಿಸಿದ ಅಧಿಕೃತ ಸೂಚನೆಯಲ್ಲಿ ನಿಖರ ಕಾರಣ ಉಲ್ಲೇಖಿಸದೇ, ಎಲ್ಲಾ ಪೆಟ್ರೋಲ್ ಪಂಪ್‌ಗಳನ್ನು ಕೂಡಲೇ ಮುಚ್ಚಬೇಕೆಂದು ಕಟ್ಟಾಜ್ಞೆ ಮಾಡಿದೆ.

ಈ ಆದೇಶ ಶನಿವಾರ ಮುಂಜಾನೆ ಹೊರಡಿಸಿದ್ದು ತಡವಾಗಿ ಬೆಳಕಿಗೆ ಬಂದಿದೆ ಎಂದು ಪಾಕ್ ಮಾಧ್ಯಮಗಳು ವರದಿ ಮಾಡಿವೆ. ಇದರಿಂದ 48 ಗಂಟೆ ವರೆಗೆ ಇಸ್ಲಾಮಾಬಾದ್‌ನಲ್ಲಿ ಖಾಸಗಿ ವಾಹನಗಳು, ಸಾರ್ವಜನಿಕ ಸಾರಿಗೆ ಹಾಗೂ ವಾಣಿಜ್ಯ ವಾಹನಗಳಿಗೆ ಇಂಧನ ಲಭ್ಯವಾಗದೇ ಎಲ್ಲಾ ಆರ್ಥಿಕ ಚಟುವಟಿಕೆಗಳು ಸ್ಥಗಿತಗೊಂಡಿದೆ. ಜೊತೆಗೆ ಈ ಬೆಳವಣಿಗೆ ಪಾಕ್ ಸರ್ಕಾರಕ್ಕೆ ಭಾರೀ ನಷ್ಟ ತಂದೊಡ್ಡುತ್ತಿದೆ ಎಂದು ವರದಿಗಳು ಉಲ್ಲೇಖಿಸಿವೆ. ಅಧಿಕೃತ ಅಧಿ ಸೂಚನೆಯಲ್ಲಿ ಈ ಕಠಿಣ ಕ್ರಮಕ್ಕೆ ಯಾವುದೇ ಕಾರಣವನ್ನು ತಿಳಿಸಲಾಗಿಲ್ಲ ಮತ್ತು ಅಧಿಕಾರಿಗಳು ತಕ್ಷಣವೇ ಯಾವುದೇ ಹೆಚ್ಚಿನ ವಿವರಗಳನ್ನು ನೀಡಿಲ್ಲ, ಒಂದು ಸಂಭಾವ್ಯ ಕಾರಣವೆಂದರೆ ಇಂಧನ ಪೂರೈಕೆಯ ಬಗ್ಗೆ ಇರುವ ಕಳವಳವಾಗಿರಬಹುದು ಎಂದು ಮೂಲಗಳು ತಿಳಿಸಿವೆ. ಈ ಸಂಪೂರ್ಣ ಬಂದ್ ಆದೇಶ ತಕ್ಷಣದಿಂದ ಜಾರಿಗೆ ಬಂದಿದೆ. ಈ ಆದೇಶದ ಅವಧಿಯವರೆಗೆ ಇಸ್ಲಾಮಾಬಾದ್‌ನೊಳಗಿನ ಯಾವುದೇ ಖಾಸಗಿ ವಾಹನ, ಸಾರ್ವಜನಿಕ ಸಾರಿಗೆ ಅಥವಾ ವಾಣಿಜ್ಯ ಕಾರ್ಯಾಚರಣೆಗಳಿಗೆ ಯಾವುದೇ ಇಂಧನ ಲಭ್ಯವಿರುವುದಿಲ್ಲ. ಇದರಿಂದ ಜನರಲ್ಲಿ ಹಾಹಾಕಾರವೇ ಏಳುವ ನಿರೀಕ್ಷೆ ಇದೆ. ವಿದೇಶಿ ಮೀಸಲು ವಿನಿಮಯ ಸಂಗ್ರಹದಲ್ಲಿ ತೀವ್ರ ಕೊರತೆ ಹೊಂದಿರುವ ಪಾಕಿಸ್ತಾನದ ಬಳಿ ಗಲ್ಫ್ ರಾಷ್ಟ್ರಗಳಿಂದ ಇಂಧನ ಖರೀದಿಸಲೂ ಹಣವಿಲ್ಲದಾಗಿದೆ. ಹೀಗಾಗಿ ಆಪತ್ಕಾಲಕ್ಕೆ ಸರಕಾರ ಸಂಗ್ರಹ ಮಾಡಿ ಇಡುತ್ತಿರಬಹುದು ಎಂದು ಶಂಕಿಸಲಾಗಿದೆ. ಇಂಧನದ ಹಠಾತ್ ಅಲಭ್ಯತೆಯಿಂದ ಇಸ್ಲಾಮಾಬಾದ್‌ನಲ್ಲಿ ಸಾರಿಗೆ, ಉದ್ಯಮಗಳು, ಒಟ್ಟಾರೆ ಸಂಪರ್ಕದ ಮೇಲೆಯೇ ಹೊಡೆತ ಬೀಳುತ್ತದೆ ಎಂದು ನಿರೀಕ್ಷಿಸಲಾಗಿದೆ. ಈಗ ಇರುವ ಮೀಸಲು ಇಂಧನ ಲಭ್ಯತೆಯನ್ನು ರಕ್ಷಿಸಲಾಗಿದೆ.

ಯುದ್ಧದ ಆತಂಕಭರಿತ ಖರೀದಿ, ಸಂಗ್ರಹಣೆಯನ್ನು ತಡೆಯಲು ಪೆಟ್ರೋಲ್ ಪಂಪ್‌ಗಳನ್ನು ನಿರ್ದಿಷ್ಟ ಕಾಲ ಸ್ಥಗಿತಗೊಳಿಸಲು ಆದೇಶಿಸಿರಬಹುದು. ಸರಬರಾಜು ಆದ ಬಳಿಕ ನಿಯಂತ್ರಿತ ವಿತರಣೆ ಆರಂಭಿಸಬಹುದು ಎನ್ನಲಾಗಿದೆ. ದೇಶಾದ್ಯಂತ ಅನೇಕ ವಾಯುನೆಲೆಗಳಲ್ಲಿ ಸ್ಫೋಟಗಳು, ಪಾಕಿಸ್ತಾನದ ವಾಯುಪ್ರದೇಶವನ್ನು ಮುಚ್ಚಿದ ವರದಿಗಳ ನಂತರ ಪೆಟ್ರೋಲ್ ಪಂಪ್‌ಗಳನ್ನು ಸ್ಥಗಿತಗೊಳಿಸಲಾಗಿದೆ.

## ಭೂಗತ ಪಾತಕಿ ದಾವೂದ್ ಇಬ್ರಾಹಿಂ ಸುರಕ್ಷಿತ ಸ್ಥಳಕ್ಕೆ ಪರಾರಿ



**ಕರಾಚಿ:** ಪಹಾಲ್ಗಾಮ್ ನರಮೇಧಕ್ಕೆ ಪ್ರತೀಕಾರವಾಗಿ ಪಾಕಿಸ್ತಾನದ ವಿರುದ್ಧ ಭಾರತ ಹಿಂದೆಂದೂ ಕಾಣದ ರೀತಿಯಲ್ಲಿ ಪೆಟ್ಟಿನ ಮೇಲೆ ಪೆಟ್ಟು ಕೊಡುತ್ತಿರುವ ಬೆನ್ನಲ್ಲೇ, ಮೋಸ್ಟ್ ವಾಂಟೆಂಡ್ ಪಾತಾಕಿ ದಾವೂದ್ ಇಬ್ರಾಹಿಂ ತನ್ನ ಸ್ವಸ್ಥಾನದಿಂದ ಸುರಕ್ಷಿತ ಸ್ಥಳಕ್ಕೆ ಕಾಲ್ಕಿತ್ತಿದ್ದಾನೆ.

ಭಾರತದ ಭಯದಿಂದ ಈ ಮೂವರು ಭೂಗತ ಪಾತಕಿಗಳು ಪಾಕಿಸ್ತಾನದಿಂದ ಬೇರೆ ದೇಶಕ್ಕೆ ಪರಾರಿಯಾಗಿರಬಹುದು ಎಂದು ಶಂಕಿಸಲಾಗಿದೆ. ಭಾರತದ ವಾಣಿಜ್ಯ ರಾಜಧಾನಿ ಮುಂಬೈನಲ್ಲಿ ನಡೆದಿದ್ದ ಸರಣಿ ಬಾಂಬ್ ಸ್ಫೋಟದ ಪ್ರಮುಖ ರೂವಾರಿ ಎಂದೇ ಹೇಳಲಾಗಿರುವ ಭಾರತದ ಮೋಸ್ಟ್ ವಾಂಟೆಂಡ್ ಉಗ್ರ, ದಾವೂದ್ ಇಬ್ರಾಹಿಂ ಸದ್ಯ ಕರಾಚಿ ಹಾಗೂ ದುಬೈನಲ್ಲಿ ವಾಸವಾಗಿದ್ದಾನೆ ಎನ್ನಲಾಗಿದೆ.

ಭಾರತದ ರಕ್ಷಣಾ ಪಡೆಗಳ ಕಣ್ತಪ್ಪಿಸಿ, ಹಾಗಾಗ್ಗೆ ತನ್ನ ಆವಾಸಸ್ಥಾನದ ನೆಲೆಯನ್ನು ಬದಲಾಯಿಸುವ ಈ ಮಹಾಪಾತಕಿಗೆ ಪಾಕಿಸ್ತಾನದ ಗುಪ್ತಚರ ಸಂಸ್ಥೆ ಐಎಸ್‌ಐ ಈತನಿಗೆ ರಕ್ಷಣೆಯನ್ನು ಒದಗಿಸುತ್ತದೆ. ಇದೀಗ ಜಮ್ಮು, ಕಾಶೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕರ ಭೀಕರ ದಾಳಿಗೆ ಪ್ರತೀಕಾರವಾಗಿ ಭಾರತ ನಡೆಸಿದ ಆಪರೇಷನ್ ಸಿಂಧೂರ್‌ದಿಂದ ಕಂಗೆಟ್ಟು ಹತಾಶವಾಗಿ ಪ್ರತಿದಾಳಿ ನಡೆಸುತ್ತಿರುವ ಪಾಕಿಸ್ತಾನ ಎರಡು ದಿನಗಳಿಂದ ಭಾರತದ ಮೇಲೆ ಡ್ರೋನ್ ದಾಳಿ ಮುಂದುವರಿಸಿದೆ. ಆದರೆ ಪಾಕ್‌ನ ಎಲ್ಲಾ ದಾಳಿಗಳನ್ನು ಭಾರತ ವಿಫಲಗೊಳಿಸಿದೆ. ಸದ್ಯ ಭಾರತ ಮತ್ತು ಪಾಕಿಸ್ತಾನ ನಡುವೆ ಯುದ್ಧದ ಭೀತಿ ಉಂಟಾಗಿದ್ದು, ಭಾರತದ ಮೋಸ್ಟ್ ವಾಂಟೆಡ್ ಭೂಗತ ಪಾತಕಿ ದಾವೂದ್ ಇಬ್ರಾಹಿಂ ಪಾಕಿಸ್ತಾನದಿಂದ ಪಲಾಯನ ಮಾಡಿದ್ದಾನೆ. ಅನೇಕ ವರ್ಷಗಳಿಂದ ಪಾಕಿಸ್ತಾನದ ಕರಾಚಿ ನಗರದಲ್ಲಿ ದಾವೂದ್ ಇಬ್ರಾಹಿಂ, ಅವನ ವಿಶೇಷ ಸಹಾಯಕರಾದ ಚೋಟಾ ಶಕೀಲ್ ಮತ್ತು ಮುನ್ನಾ ಜಿಂಗ್ರಾರನ್ನು ಪಾಕ್ ಅಡಗಿಸಿಟ್ಟಿದೆ.

ಆದರೆ ಕರಾಚಿ ಮೇಲೆಯೇ ಭಾರತ ಕ್ಷಿಪಣಿ, ಡ್ರೋನ್ ದಾಳಿ ಮಾಡಿದ ಕಾರಣ, ಮೂಲಗಳು ಹೇಳುವಂತೆ ಮೂವರೂ ಪ್ರಸ್ತುತ ಪಾಕಿಸ್ತಾನವನ್ನು ತೊರೆದು ಬೇರೆ ದೇಶಕ್ಕೆ ಪಲಾಯನ ಮಾಡಿದ್ದಾರೆ. ಆದಾಗ್ಯೂ ಏಜೆನ್ಸಿ ಮೂಲಗಳು ಈ ಮಾಹಿತಿಯ ಮೇಲೆ ನಿಗಾ ಇಡುತ್ತಿವೆ, ದಾವೂದ್, ಅವನ ಬೆಂಬಲಿಗರು ಪಾಕಿಸ್ತಾನ ದಲ್ಲೇ ಬೇರೆಡೆ ಇರಬಹುದು ಎಂದು ಊಹಿಸುತ್ತಿದ್ದಾರೆ ಮತ್ತು ದಾರಿ ತಪ್ಪಿಸಲು ಇಂತಹ ಮಾಹಿತಿಗಳನ್ನು ಹರಡಲಾಗುತ್ತಿದೆ ಎಂದು ಹೇಳಿವೆ.

**ಶೆಹಬಾಜ್ ಬಂಕರ್‌ಗೆ ಶಿಫ್ಟ**


**ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ಅವರ ಅಧಿಕೃತ ನಿವಾಸದಿಂದ 20 ಕಿ.ಮೀ. ದೂರದಲ್ಲಿ ಸ್ಫೋಟ ಸಂಭವಿಸಿದೆ. ಅಲ್ಲದೆ, ಭಾರತವು ಇಸ್ಲಾಮಾಬಾದ್ ಮೇಲೆ ವಾಯುದಾಳಿ ನಡೆಸಿದೆ. ಹೀಗಾಗಿ ಷರೀಫ್ ಅವರನ್ನು ಸುರಕ್ಷಿತವಾಗಿ ಬಂಕರ್‌ಗೆ ಸ್ಥಳಾಂತರಿಸಲಾಗಿದೆ ಎಂದು ವರದಿಗಳು ಹೇಳಿವೆ.**

ಇಸ್ಲಾಮಾಬಾದ್‌ನ ಹೈ-ಸೆಕ್ಯೂರಿಟಿ ವಲಯಗಳ ಬಳಿ ಸ್ಫೋಟಗಳು ವರದಿಯಾದ ನಂತರ ಪ್ರಧಾನಿ ಷರೀಫ್, ಸೇನಾ ಮುಖ್ಯಸ್ಥ ಅಸೀಂ ಮುನೀರ್, ಸಚಿವರು ಹಾಗೂ ಪ್ರಮುಖ ಸೇನಾಧಿಕಾರಿಗಳು ಸೇರಿದಂತೆ ಪ್ರಮುಖ ಸರ್ಕಾರಿ ವ್ಯಕ್ತಿಗಳ ಸುತ್ತ ಭದ್ರತಾ ಕ್ರಮಗಳನ್ನು ತೀವ್ರಗೊಳಿಸಲಾಗಿದೆ.

ಭಾರತೀಯ ಸೇನೆಯು ಲಾಹೋರ್‌ನಲ್ಲಿವಾಯು ರಕ್ಷಣಾ ವ್ಯವಸ್ಥೆಯನ್ನು ಸಹ ನಾಶಪಡಿಸಿತು. ಇಸ್ಲಮಾಬಾದ್ ಮತ್ತು ಕರಾಚಿಯಲ್ಲೂ ಭಾರತ ದಾಳಿ ನಡೆಸಿದೆ. ಹೀಗಾಗಿ, ಭಯಗೊಂಡಿರುವ ದಾವೂದ್ ಇಬ್ರಾಹಿಂ ಕರಾಚಿ ಬಿಟ್ಟು ಬೇರೆ ಜಾಗಕ್ಕೆ ಪಲಾಯನ ಮಾಡಿದ್ದಾನೆ ಎನ್ನಲಾಗಿದೆ.

# ಭಯೋತ್ಪಾದನೆ ವಿರುದ್ಧದ ನಿಲುವಿನಲ್ಲಿ ವ್ಯತ್ಯಾಸವಿಲ್ಲ: ಜೈಶಂಕರ್

## ಭಾರತ - ಪಾಕಿಸ್ತಾನ ನಡುವಿನ ಯುದ್ಧ ಅಂತ್ಯ! ಕದನ ವಿರಾಮ ಘೋಷಿಸಿದ ಟ್ರಂಪ್



**ಹೊಸದಿಲ್ಲಿ:** ಭಾರತ ಮತ್ತು ಪಾಕಿಸ್ತಾನ ಗುಂಡಿನ ಚಕಮಕಿ, ಮಿಲಿಟರಿ ಕ್ರಮಗಳನ್ನು ನಿಲ್ಲಿಸಲು ಒಪ್ಪಿಕೊಂಡಿವೆ. ಆದರೆ ಭಾರತವು ಭಯೋತ್ಪಾದನೆಯ ವಿರುದ್ಧ ಕಠಿಣ ನಿಲುವು ಹೊಂದಿದೆ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ. ಭಾರತ ಮತ್ತು ಪಾಕಿಸ್ತಾನದ ನಡುವೆ ಗುಂಡಿನ ದಾಳಿ ನಿಲ್ಲಿಸುವ ಒಪ್ಪಂದವಾಗಿದೆ. ಭಯೋತ್ಪಾದನೆ ವಿರುದ್ಧ ಭಾರತದ ನಿಲುವು ಬದಲಾಗುವುದಿಲ್ಲ. ಭಾರತವು ಭಯೋತ್ಪಾದನೆಯ ವಿರುದ್ಧ ಯಾವಾಗಲೂ ಕಠಿಣವಾಗಿದೆ. ಮುಂದೆಯೂ ಹೀಗೆ ಇರುತ್ತದೆ. ಇದರರ್ಥ ಭಾರತವು ಭಯೋತ್ಪಾದನೆಯನ್ನು ಎಂದಿಗೂ ಸಹಿಸುವುದಿಲ್ಲ ಎಂದು ಜೈಶಂಕರ್ ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿದ್ದಾರೆ.

ಕದನ ವಿರಾಮ ಘೋಷಣೆಗೆ ಸಂಬಂಧಿಸಿ ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಎಕ್ಸ್‌ನಲ್ಲಿ ಪೋಸ್ಟ್ ಮಾಡಿ, ಕಳೆದ 48 ಗಂಟೆಗಳಲ್ಲಿ ಅಮೆರಿಕದ ಉಪಾಧ್ಯಕ್ಷ ವ್ಯಾನ್ಸ್ ಮತ್ತು ನಾನು ಭಾರತದ ಪ್ರಧಾನಿ ನರೇಂದ್ರ ಮೋದಿ, ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್, ಭಾರತದ ವಿದೇಶಾಂಗ ಸಚಿವ ಎಸ್.ಜೈಶಂಕರ್, ಪಾಕಿಸ್ತಾನದ ಸೇನಾ ಮುಖ್ಯಸ್ಥ ಅಸಿಮ್ ಮುನೀರ್, ಭಾರತದ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಸೇರಿದಂತೆ ಹಿರಿಯ ಭಾರತೀಯ ಮತ್ತು ಪಾಕಿಸ್ತಾನಿ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿದ್ದೇವೆ.


ಭಾರತ ಮತ್ತು ಪಾಕಿಸ್ತಾನ ಸರ್ಕಾರಗಳು ತಕ್ಷಣದ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ. ತಟಸ್ಥ ಸ್ಥಳದಲ್ಲಿ ಕದನ ವಿರಾಮಕ್ಕೆ ಸಂಬಂಧಿಸು ಮಾತುಕತೆಗಳನ್ನು ಪ್ರಾರಂಭಿಸಲು ಒಪ್ಪಿಕೊಂಡಿವೆ ಎಂದು ಘೋಷಿಸಲು ನನಗೆ ಸಂತೋಷ ವಾಗಿದೆ. ಶಾಂತಿಯ ಮಾರ್ಗವನ್ನು ಆಯ್ಕೆ ಮಾಡುವಲ್ಲಿ ಪ್ರಧಾನಿ ಮೋದಿ ಮತ್ತು ಷರೀಫ್ ಅವರ ಬುದ್ಧಿವಂತಿಕೆ, ವಿವೇಕ ಮತ್ತು ರಾಜತಾಂತ್ರಿಕತೆಯನ್ನು ನಾವು ಶ್ಲಾಘಿಸುತ್ತೇವೆ ಎಂದು ಹೇಳಿದ್ದಾರೆ.

**ಭಾರತ - ಪಾಕ್ ನಡುವೆ ಮಾತುಕತೆ**

**ಭಾರತ ಪಾಕಿಸ್ತಾನ ನಡುವೆ ಕಳೆದ 4 ದಿನಗಳಿಂದ ನಡೆಯುತ್ತಿದ್ದ ಅಘೋಷಿತ ಯುದ್ಧ ದಾಳಿಗೆ ಕದನ ವಿರಾಮ ನೀಡಲಾಗಿದ್ದು, ಮೇ 12ಕ್ಕೆ ಎರಡು ದೇಶಗಳು ಮಹತ್ವದ ಮಾತುಕತೆ ನಡೆಸಲಿವೆ. ಭಾರತ ಮತ್ತು ಪಾಕಿಸ್ತಾನ ಪರಸ್ಪರ ಒಪ್ಪಿಗೆ ಮೇರೆಗೆ ಶನಿವಾರ ಮಧ್ಯಾಹ್ನ 5 ರಿಂದ ಎಲ್ಲಾ ರೀತಿಯ ದಾಳಿಗಳನ್ನು ಸ್ಥಗಿತಗೊಳಿಸುತ್ತಿದ್ದೇವೆ ಎಂದು ಭಾರತೀಯ ವಿದೇಶಾಂಗ ಇಲಾಖೆ ಕಾರ್ಯದರ್ಶಿ ವಿಕ್ರಮ ಮಿಸ್ರಿ ತಿಳಿಸಿದ್ದಾರೆ.**

**ಅಮೆರಿಕ ಅಧ್ಯಕ್ಷ ಟ್ರಂಪ್ ಕದನ ವಿರಾಮ ಘೋಷಣೆ**

**ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾರತ, ಪಾಕಿಸ್ತಾನ ಪೂರ್ಣ ಮತ್ತು ತಕ್ಷಣದ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ’ ಎಂದು ಹೇಳಿದ್ದಾರೆ. ಡೊನಾಲ್ಡ್ ಟ್ರಂಪ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿ, ಭಾರತ ಮತ್ತು ಪಾಕಿಸ್ತಾನದ ನಡುವಿನ ಬಿಕ್ಕಟ್ಟನ್ನು ಬಗೆಹರಿಸಲು ಅಮೆರಿಕ ಮಧ್ಯಸ್ಥಿಕೆ ವಹಿಸಿದೆ. ದೀರ್ಘ ರಾತ್ರಿಯ ಮಾತುಕತೆಯ ನಂತರ ಭಾರತ ಮತ್ತು ಪಾಕಿಸ್ತಾನ ಪೂರ್ಣ ಮತ್ತು ತಕ್ಷಣದ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಎಂದಿದ್ದಾರೆ. ಈ ಹಿಂದೆ ಭಾರತ ಮತ್ತು ಪಾಕಿಸ್ತಾನದ ಯುದ್ಧದ ಸಾಧ್ಯತೆ ಬಗ್ಗೆ ಕೇಳಿದ್ದ ಪ್ರಶ್ನೆಗೆ ಅಮೆರಿಕ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಉತ್ತರಿಸಿ, ಅದು ನಮಗೆ ಸಂಬಂಧವಿಲ್ಲದ ವಿಷಯ. ಆ ಯುದ್ಧದಲ್ಲಿ ಅಮೆರಿಕ ಭಾಗಿಯಾಗುವುದಿಲ್ಲ ಎಂದು ಹೇಳಿದ್ದರು.**



## ಪಾಕಿಗಳು ರಕ್ತಸಿಕ್ತ ಜಿರಳೆಗಳು

### ಭೂಪಟದಿಂದಲೇ ಇಲ್ಲದಂತೆ ಮಾಡಬೇಕು

ಕಂಗನಾ ರಣಾವತ್ ಅವರು ಇತ್ತೀಚಿನ ಭಾರತ-ಪಾಕಿಸ್ತಾನ ಉದ್ವಿಗ್ನತೆಯ ಬಗ್ಗೆ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ. ಪಾಕಿಸ್ತಾನವನ್ನು ಭಯೋತ್ಪಾದಕರ ಊರು ಎಂದು ಕರೆದ ಅವರು, ಅದನ್ನು ವಿಶ್ವ ನಕ್ಷೆಯಿಂದ ಅಳಿಸಿಹಾಕಬೇಕೆಂದು ಆಗ್ರಹಿಸಿದ್ದಾರೆ. ಭಾರತದ S-400 ಮಿಸೈಲ್ ರಕ್ಷಣಾ ವ್ಯವಸ್ಥೆಯನ್ನು ಶ್ಲಾಘಿಸಿ, ಪಾಕಿಸ್ತಾನದ ಡ್ರೋನ್ ದಾಳಿಗಳನ್ನು ಹತ್ತಿಕ್ಕಿದ್ದಕ್ಕೆ ಅಭಿನಂದಿಸಿದ್ದಾರೆ. ನಟಿ ಕಂಗನಾ ರಣಾವತ್ ಅವರು ಭರ್ಜರಿ ಸುದ್ದಿಯಲ್ಲಿದ್ದಾರೆ. ಅವರು ಆಗಾಗ ಹೇಳಿಕೆ ನೀಡಿ ಸುದ್ದಿ ಆಗುತ್ತಾರೆ. ಈಗ ಅವರು ಕೇವಲ ನಟಿ ಅಲ್ಲ, ರಾಜಕಾರಣಿ ಕೂಡ ಹೌದು. ಹಿಮಾಚಲ ಪ್ರದೇಶದ ಮಂಡಿ ಕ್ಷೇತ್ರದಿಂದ ಬಿಜೆಪಿ ಪರ ಸ್ಪರ್ಧಿಸಿ, ಸಂಸದೆ ಆಗಿದ್ದಾರೆ. ಇತ್ತೀಚೆಗೆ ಆರಂಭ ಆದ ಭಾರತ ಮತ್ತು ಪಾಕ್ ನಡುವಿನ ಯುದ್ಧ ಭೀತಿ ಬಗ್ಗೆ ಕಂಗನಾ ರಣಾವತ್ ಮಾತನಾಡಿದ್ದಾರೆ. ಪಾಕಿಸ್ತಾನವನ್ನು 'ಭಯೋತ್ಪಾದಕರ ನಾಡು' ಎಂದು ಕರೆದಿರುವ ಅವರು, 'ವಿಶ್ವದ ಮ್ಯಾಪ್ ನಿಂದಲೇ ಅವರನ್ನು ತೆಗೆದು ಹಾಕಬೇಕು' ಎಂದು ಅಭಿಪ್ರಾಯಪಟ್ಟಿದ್ದಾರೆ.

## ತುಪ್ಪದ ಬೆಡಗಿಗೆ ಬೇಡಿಕೆ 7 ಸಿನಿಮಾಗಳಲ್ಲಿ ಬ್ಯುಸಿ



### ಒಂದೊಳ್ಳೆಯ ಕಾಲ ಶುರು

ಡ್ರಗ್ಸ್ ಕೇಸ್‌ನಲ್ಲಿ ಸಿಲುಕಿ ಸಂಕಷ್ಟ ಅನುಭವಿಸಿದ್ದ ರಾಗಿಣಿ ದ್ವಿವೇದಿಗೆ ಮತ್ತೆ ಅದೃಷ್ಟ ಖುಲಾಯಿಸಿದೆ. ಸಾಲು ಸಾಲು ಸಿನಿಮಾಗಳಲ್ಲಿ ನಟಿ ಬ್ಯುಸಿಯಾಗಿದ್ದಾರೆ. ಈ ಮೂಲಕ ಅಭಿಮಾನಿಗಳಿಗೆ ಅವರು ಗುಡ್ ನ್ಯೂಸ್ ಕೊಟ್ಟಿದ್ದಾರೆ. ಚಿತ್ರರಂಗದಲ್ಲಿ ರಾಗಿಣಿಗೆ ಬೇಡಿಕೆ ಹೆಚ್ಚಾಗಿದೆ. ಬಹುಭಾಷೆಗಳಲ್ಲಿ ನಟಿಸುತ್ತಾ ನಟಿ ಆಕ್ಟೀವ್ ಆಗಿದ್ದಾರೆ. ಧರ್ಮ ಕೀರ್ತಿರಾಜ್ ಜೊತೆ ಸಿಂಧೂರಿ ಚಿತ್ರ, ಸರ್ಕಾರಿ ನ್ಯಾಯ ಬೆಲೆ ಅಂಗಡಿ, ರಾಜವರ್ಧನ್ ಜೊತೆ 'ಜಾವಾ' ಚಿತ್ರದಲ್ಲಿ ನಟಿಸುತ್ತಿದ್ದು, ಇದಕ್ಕೆ ಚಕ್ರವರ್ತಿ ಚಂದ್ರಚೂಡ್ ನಿರ್ದೇಶನ ಮಾಡಲಿದ್ದಾರೆ.

ಮೋಹನ್ ಲಾಲ್ ಜೊತೆ 'ವೃಷಭ' ಸಿನಿಮಾ ಮಾಡ್ತಿದ್ದಾರೆ ರಾಗಿಣಿ. ಈ ಚಿತ್ರಕ್ಕೆ ಕನ್ನಡದ ನಿರ್ದೇಶಕ ನಂದ ಕಿಶೋರ್ ನಿರ್ದೇಶನ ಮಾಡಿದ್ದಾರೆ. ಇದರೊಂದಿಗೆ ಬಾಲಿವುಡ್ ಚಿತ್ರ ಮತ್ತು ತಮಿಳಿನಲ್ಲೊಂದು ಸಿನಿಮಾ ಮುಗಿಸಿ ಕೊಟ್ಟಿದ್ದಾರೆ. 'ಶ್ಲೋಕ್' ಎಂಬ ಸಂಸ್ಕೃತ ಚಿತ್ರದಲ್ಲಿಯೂ ನಟಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಮುಕ್ತಿಯನ್ನು ಹೊಂದುವ ಸನ್ಯಾಸಿನಿಯ ಪಾತ್ರದಲ್ಲಿ ಅವರು ನಟಿಸಿದ್ದಾರೆ. ಇದನ್ನು ಸ್ಮಶಾನದಲ್ಲಿ ಚಿತ್ರೀಕರಿಸಲಾಗಿದೆ. ಒಟ್ನಲ್ಲಿ ರಾಗಿಣಿ ಕಹಿ ಘಟನೆಯಿಂದ ಹೊರಬಂದು ಸಿನಿಮಾ ಮಾಡ್ತಿದ್ದಾರೆ. ಚಿತ್ರರಂಗದಲ್ಲಿ ಅವರಿಗೆ ಒಂದೊಳ್ಳೆಯ ಕಾಲ ಶುರುವಾಗಿದೆ.

## ಅತಿಥಿ ಪಾತ್ರಕ್ಕೆ 50 ಕೋಟಿ ರೂ. ಕೇಳಿದ ಬಾಲಯ್ಯ



'ಜೈಲರ್ 2' ಸಿನಿಮಾದಲ್ಲಿ ಬಾಲಕೃಷ್ಣ ಅವರು ಅತಿಥಿ ಪಾತ್ರದಲ್ಲಿ ಕಾಣಿಸಿಕೊಳ್ಳುವ ಸಾಧ್ಯತೆ ಇದೆ. ಇದಕ್ಕಾಗಿ ಅವರಿಗೆ 50 ಕೋಟಿ ರೂಪಾಯಿ ಸಂಭಾವನೆ ನೀಡಲಾಗುತ್ತಿದೆ ಎಂಬ ವರದಿಗಳು ಹೊರಬಿದ್ದಿವೆ. ಚಿತ್ರದ ಶೂಟಿಂಗ್ ಕೇರಳದಲ್ಲಿ ನಡೆಯಲಿದೆ ಮತ್ತು ರಜನಿಕಾಂತ್ ಮುಖ್ಯ ಪಾತ್ರದಲ್ಲಿದ್ದಾರೆ.

ಜೈಲರ್ ಚಿತ್ರದ ಯಶಸ್ಸಿನ ನಂತರ, ನಿರ್ದೇಶಕರು ಅತಿಥಿ ಪಾತ್ರಗಳನ್ನು ಬಳಸಿಕೊಂಡು ಚಿತ್ರದ ತೂಕ ಹೆಚ್ಚಿಸೋ ಆಲೋಚನೆಯಲ್ಲಿದ್ದಾರೆ. 'ಜೈಲರ್ 2' ಸಿನಿಮಾಗೆ ಈಗ ಪಾತ್ರವರ್ಗದ ಆಯ್ಕೆ ನಡೆಯುತ್ತಿದೆ. ರಜನಿಕಾಂತ್ ಅವರು ಈ ಚಿತ್ರದಲ್ಲಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ.

ಚಿತ್ರದ ಶೂಟ್ ಕೇರಳದಲ್ಲಿ ನಡೆಯಲಿದೆ. ಬಾಲಯ್ಯ ಅವರು ಈ ಸಿನಿಮಾದಲ್ಲಿ ಅತಿಥಿ ಪಾತ್ರ ಮಾಡುತ್ತಿದ್ದಾರೆ ಎಂದು ಹೇಳಲಾಗುತ್ತಿದೆ. ಇದಕ್ಕಾಗಿ ಅವರು ಬರೋಬ್ಬರಿ 50 ಕೋಟಿ ರೂಪಾಯಿ ಸಂಭಾವನೆ ಪಡೆಯಲಿದ್ದಾರೆ ಎಂದು ವರದಿ ಆಗಿದೆ. ಈ ವಿಚಾರ ಕೇಳಿ ಅವರ ಅಭಿಮಾನಿಗಳಿಗೆ ಶಾಕ್ ಹಾಗೂ ಅಚ್ಚರಿ ಎರಡೂ ಆಗಿದೆ. 'ಜೈಲರ್' ಸಿನಿಮಾದಲ್ಲಿ ನಿರ್ದೇಶಕರು ಒಂದು ತಂತ್ರವನ್ನು ಉಪಯೋಗಿಸಿದ್ದರು. ಅದುವೇ ಅತಿಥಿ ಪಾತ್ರ. ಶಿವರಾಜ್‌ಕುಮಾರ್, ಮೋಹನ್‌ಲಾಲ್, ಜಾಕಿ ಶ್ರಾಫ್ ಅವರನ್ನು ಅತಿಥಿ ಪಾತ್ರದಲ್ಲಿ ಕರೆತಂದು ಎಲ್ಲರ ಗಮನ ಸೆಳೆದರು. ಅದರಲ್ಲೂ ಶಿವರಾಜ್‌ಕುಮಾರ್ ತೋರಿದ ಮಾಸ್ ಅವತಾರಕ್ಕೆ ಫ್ಯಾನ್ಸ್ ಫ್ಲ್ಯಾಟ್ ಆಗಿಬಿಟ್ಟರು. ತಮಿಳು, ತೆಲುಗು ಮಂದಿ ಕೂಡ ಶಿವಣ್ಣನ ಅವತಾರಕ್ಕೆ ಸಿಳ್ಳೆ ಹೊಡೆದರು. ಈಗ ಇದೇ ತಂತ್ರವನ್ನು ಎರಡನೇ ಪಾರ್ಟ್‌ನಲ್ಲೂ ಮುಂದುವರಿಸಿಕೊಂಡು ಹೊಗುವ ಆಲೋಚನೆಯಲ್ಲಿ ಅವರಿದ್ದಾರೆ.

## ವಿಜ್ಜು ಎಂದು ರಶ್ಮಿಕಾ ಬರ್ತ್‌ಡೇ ವಿಶ್



ರಶ್ಮಿಕಾ ಮಂದಣ್ಣ ಅವರು ವಿಜಯ್ ದೇವರಕೊಂಡ ಅವರ 36 ನೇ ಹುಟ್ಟುಹಬ್ಬಕ್ಕೆ ಪ್ರೀತಿಯಿಂದ ವಿಜ್ಜು ಎಂದು ಕರೆದು ಶುಭಾಶಯತಿಳಿಸಿದ್ದಾರೆ. ಈ ವಿಶ್ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ರಶ್ಮಿಕಾ ಹಾಗೂ ವಿಜಯ್ ದೇವರಕೊಂಡ ನಡುವಿನ ಸಂಬಂಧ ಮತ್ತಷ್ಟು ಬಲಗೊಳ್ಳುತ್ತಿದೆ ಎಂದು ಈ ಘಟನೆಯಿಂದ ತಿಳಿಯಬಹುದು. ವಿಜಯ್ ದೇವರಕೊಂಡ ಅವರು ಮೇ 9ರಂದು 36ನೇ ವರ್ಷದ ಬರ್ತ್‌ಡೇ ಆಚರಿಸಿಕೊಂಡರು.

ಈ ವೇಳೆ ರಶ್ಮಿಕಾ ಮಂದಣ್ಣ ಅವರು ಸೋಶಿಯಲ್ ಮೀಡಿಯಾದಲ್ಲಿ ವಿಜಯ್‌ಗೆ ಬರ್ತ್‌ಡೇ ವಿಶ್ ತಿಳಿಸಿದ್ದಾರೆ. ಇಬ್ಬರೂ ಹಲವು ವರ್ಷಗಳಿಂದ ಡೇಟಿಂಗ್ ಮಾಡುತ್ತಿದ್ದಾರೆ ಎನ್ನಲಾಗಿದೆ. ಇತ್ತೀಚೆಗೆ ಅದು ಮತ್ತಷ್ಟು ಸ್ಪಷ್ಟ ಆಗುತ್ತಿದೆ. ಈಗ ವಿಜಯ್‌ಗೆ ಪ್ರೀತಿಯಿಂದ 'ವಿಜ್ಜು' ಎಂದು ಕರೆದಿದ್ದಾರೆ ರಶ್ಮಿಕಾ. ಅಲ್ಲದೆ ಪ್ರೀತಿಯಿಂದ ಶುಭಾಶಯ ತಿಳಿಸಿದ್ದಾರೆ.

'ನಾನು ಮತ್ತೆ ತಡವಾಗಿ ವಿಶ್ ಮಾಡಿದ್ದೇನೆ. ಆದರೆ, ಹುಟ್ಟುಹಬ್ಬದ ಶುಭಾಶಯಗಳು ವಿಜ್ಜು. ನಿಮ್ಮ ಮುಂದಿನ ದಿನಗಳಲ್ಲಿ ಪ್ರೀತಿ, ಸಂತೋಷ, ಆರೋಗ್ಯ, ಸಂಪತ್ತು, ಶಾಂತಿಯಿಂದ ಕೂಡಿರಲಿ ಎಂದು ನಾನು ಆಶಿಸುತ್ತೇನೆ' ಎಂದು ರಶ್ಮಿಕಾ ಮಂದಣ್ಣ ಅವರು ಹೇಳಿದ್ದಾರೆ.

ಅವರ ಬರ್ತ್‌ಡೇ ವಿಶ್ ವೈರಲ್ ಆಗಿದೆ. ಇದಕ್ಕೆ ವಿಜಯ್ ಪ್ರತಿಕ್ರಿಯಿಸಿದ್ದು, 'ನಿಮ್ಮ ಹಾರೈಕೆ ಈಡೇರಲಿ' ಎಂದಿದ್ದಾರೆ. ರಶ್ಮಿಕಾ ಮಂದಣ್ಣ ಅವರು ಏಪ್ರಿಲ್‌ನಲ್ಲಿ ಬರ್ತ್‌ಡೇ ಆಚರಿಸಿಕೊಂಡರು. ಇದಕ್ಕಾಗಿ ಅವರು ಓಮನ್‌ಗೆ ತೆರಳಿದ್ದರು. ಅಲ್ಲಿ ಅದ್ದೂರಿ ಬರ್ತ್‌ಡೇ ಸೆಲೆಬ್ರೇಷನ್ ಮಾಡಿಕೊಂಡರು. ಈ ವೇಳೆ ಅವರ ಜೊತೆಗೆ ವಿಜಯ್ ದೇವರಕೊಂಡ ಅವರು ಕೂಡ ಇದ್ದರು ಎನ್ನಲಾಗಿದೆ. ಇಬ್ಬರೂ ಹಂಚಿಕೊಂಡಿರೋ ಫೋಟೋಗಳ ಬ್ಯಾಕ್‌ಗ್ರೌಂಡ್ ಒಂದೇ ರೀತಿಯಲ್ಲಿ ಇದೆ. ಸದ್ಯ ವಿಜಯ್ ಬರ್ತ್‌ಡೇನ ಇವರು ಮನೆಯಲ್ಲೇ ಆಚರಿಸಿಕೊಂಡರೇ ಎನ್ನುವ ಪ್ರಶ್ನೆ ಮೂಡಿದೆ. ವಿಜಯ್ ದೇವರಕೊಂಡ ಅವರು 'ಕಿಂಗ್‌ಡಮ್' ಹೆಸರಿನ ಸಿನಿಮಾದಲ್ಲಿ ನಟಿಸಿದ್ದಾರೆ. ಮೇ 30ರಂದು ಸಿನಿಮಾ ರಿಲೀಸ್ ಆಗಲಿದೆ. ಈ ಚಿತ್ರದ ಬಗ್ಗೆ ಅವರು ನಿರೀಕ್ಷೆ ಇಟ್ಟುಕೊಂಡಿದ್ದಾರೆ.


## ಸೊಂಟ ಬಳುಕಿಸಿದ ತನಿಷಾ



### ಬೆಂಕಿ ಡ್ಯಾನ್ಸ್ ಎಂದ ಫ್ಯಾನ್ಸ್

'ಬಿಗ್ ಬಾಸ್ ಕನ್ನಡ 11'ರ ಖ್ಯಾತಿಯ ತನಿಷಾ ಕುಪ್ಪಂಡ ಅವರು ತಮಿಳು ಸಿನಿಮಾವೊಂದರಲ್ಲಿ ಸೊಂಟ ಬಳುಕಿಸಿದ್ದಾರೆ. ಮಾದಕವಾಗಿ ನಟಿ ಹೆಜ್ಜೆ ಹಾಕಿದ್ದಾರೆ. ಈ ಬಗ್ಗೆ ನಟಿ ಸಾಮಾಜಿಕ ಜಾಲತಾಣದಲ್ಲಿ ಅಪ್‌ಡೇಟ್ ಹಂಚಿಕೊಂಡಿದ್ದಾರೆ. ಸಿನಿಮಾಗಳಲ್ಲಿ ತನಿಷಾ ಬ್ಯುಸಿಯಾಗಿದ್ದಾರೆ. ಇದರ ನಡುವೆ ತಮಿಳಿನಲ್ಲಿಯೂ ಕೆಲಸ ಮಾಡಿದ್ದಾರೆ. 'ಎನ್ ಕಾಧಲೇ' ಚಿತ್ರದ ರಾಸಾನಾ ಓತಾ ರೋಸಾ ಹಾಡಿನ ಮೇಕಿಂಗ್ ವಿಡಿಯೋವನ್ನು ನಟಿ ಶೇರ್ ಮಾಡಿದ್ದಾರೆ. ಈ ಹಾಡು ಈಗಾಗಲೇ ರಿಲೀಸ್ ಆಗಿ ಸದ್ದು ಮಾಡುತ್ತಿದೆ. ಆದರೆ ಈ ಡ್ಯಾನ್ಸ್ ಮಾಡಲು ತೆರೆಹಿಂದಿನ ತಯಾರಿ ಹೇಗಿತ್ತು ಎಂಬುದರ ಝಲಕ್ ಅನ್ನು ನಟಿ ಹಂಚಿಕೊಂಡಿದ್ದಾರೆ. ಮಾದಕವಾಗಿ ಹೆಜ್ಜೆ ಹಾಕಿರೋ ತನಿಷಾರನ್ನು ನೋಡಿ ಬೆಂಕಿ ಡ್ಯಾನ್ಸ್ ಎಂದು ಫ್ಯಾನ್ಸ್ ಕೊಂಡಾಡಿದ್ದಾರೆ. ಅಂದಹಾಗೆ, ಕನ್ನಡದ 'ಪೆನ್‌ಡ್ರೈವ್' ಸಿನಿಮಾದಲ್ಲಿ ಮಾಲಾಶ್ರೀ ಜೊತೆ ತನಿಷಾ ನಟಿಸಿದ್ದಾರೆ. ಪೊಲೀಸ್ ಅಧಿಕಾರಿ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ. ಅವರೊಂದಿಗೆ ಕಿಶನ್ ಬಿಳಗಲಿ ಕೂಡ ನಟಿಸಿದ್ದಾರೆ. ಸಾಕಷ್ಟು ಸೀರಿಯಲ್ ಮತ್ತು ಸಿನಿಮಾಗಳಲ್ಲಿ ತನಿಷಾ ನಟಿಸಿದ್ದರೂ ಕೂಡ ಅವರಿಗೆ ಹೇಳಿಕೊಳ್ಳುವಂತಹ ಬ್ರೇಕ್ ಸಿಕ್ಕಿರಲಿಲ್ಲ. ಕಳೆದ ಸೀಸನ್ ಬಿಗ್ ಬಾಸ್ ಕನ್ನಡ 10ರಲ್ಲಿ ಸ್ಪರ್ಧಿಯಾಗಿ ಕಾಣಿಸಿಕೊಂಡ್ಮೇಲೆ ಅವರಿಗೆ ಜನಪ್ರಿಯತೆ ಹೆಚ್ಚಾಯಿತು.

## ನಾಯಕತ್ವಕ್ಕಾಗಿ ನಿವೃತ್ತಿಯ ಅಸ್ತ್ರ ಪ್ರಯೋಗ



### ರೋಹಿತ್ ಟೆಸ್ಟ್ ಕ್ರಿಕೆಟ್‌ಗೆ ವಿದಾಯ

ಜನವರಿ 3, 2025 ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯ ಅಂತಿಮ ಪಂದ್ಯ. ಸಿಡ್ನಿ ಕ್ರಿಕೆಟ್ ಗ್ರೌಂಡ್‌ನಲ್ಲಿ ನಡೆದ ಈ ಪಂದ್ಯದಿಂದ ಟೀಮ್ ಇಂಡಿಯಾ ನಾಯಕ ರೋಹಿತ್ ಶರ್ಮಾ ಹೊರಗುಳಿದಿದ್ದರು. ಹಿಟ್‌ಮ್ಯಾನ್ ಅನುಪಸ್ಥಿತಿಯಲ್ಲಿ ಭಾರತ ತಂಡವನ್ನು ಉಪನಾಯಕ ಜಸ್‌ಪ್ರೀತ್ ಬುಮ್ರಾ ಮುನ್ನಡೆಸಿದರು. ರೋಹಿತ್ ಶರ್ಮಾ ಅವರ ಈ ಹೊರಗುಳಿಯುವಿಕೆಯ ಬೆನ್ನಲ್ಲೇ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯ ಬಳಿಕ ಹಿಟ್ ಮ್ಯಾನ್ ಟೆಸ್ಟ್ ಕೆರಿಯರ್ ಕೊನೆಗೊಳ್ಳುವುದು ಸಹ ಕನ್ಫರ್ಮ್ ಆಗಿತ್ತು. ಇದರ ನಡುವೆ ಟೀಮ್ ಇಂಡಿಯಾ ಡ್ರೆಸ್ಸಿಂಗ್ ರೂಮ್‌ನಿಂದ ಹೊರಬಿದ್ದ ಸುದ್ದಿ ಎಂದರೆ ನಾಯಕತ್ವಕ್ಕಾಗಿ ತೆರೆಮರೆಯ ಪ್ರಯತ್ನ.

ಹೀಗೆ ತೆರೆಮರೆಯ ಪ್ರಯತ್ನ ನಡೆಸಿದವರು ಯಾರೆಂಬುದು ಬಹಿರಂಗವಾಗದಿದ್ದರೂ, ಮಿಸ್ಟರ್ ಫಿಕ್ಸ್-ಇಟ್ ಹೆಸರಿನಲ್ಲಿ ಆಟಗಾರನ ಹೆಸರೊಂದು ಚಾಲ್ತಿಯಲ್ಲಿತ್ತು. ಹೀಗೆ ಚಾಲ್ತಿಯಲ್ಲಿದ್ದ ಹೆಸರೇ ವಿರಾಟ್ ಕೊಹ್ಲಿ..! ತಮ್ಮನ್ನು 'ಮಿಸ್ಟರ್ ಫಿಕ್ಸ್-ಇಟ್' ಎಂದು ಬಿಂಬಿಸಿಕೊಳ್ಳುತ್ತಿರುವ ಹಿರಿಯ ಆಟಗಾರ, ಭಾರತ ತಂಡದಲ್ಲಿನ ಯುವ ಆಟಗಾರರು ಇನ್ನೂ ನಾಯಕತ್ವದ ಪಾತ್ರವನ್ನು ವಹಿಸಿಕೊಳ್ಳಲು ಸಿದ್ಧರಾಗಿಲ್ಲ ಎಂದು ಮನವರಿಕೆ ಮಾಡಿದ್ದಾರೆ. ಅಲ್ಲದೆ ಮಧ್ಯಂತರ ಆಯ್ಕೆಯಾಗಿ ನಾನು ಭಾರತ ತಂಡವನ್ನು ಮುನ್ನಡೆಸಲು ಸಿದ್ಧವಿದ್ದೇನೆ ತಿಳಿಸಿದ್ದಾರೆ ಎಂದು ವರದಿಯಾಗಿತ್ತು.

ಇದರ ಬೆನ್ನಲ್ಲೇ ಆ ಮಿಸ್ಟರ್ ಫಿಕ್ಸ್- ಇಟ್ ಯಾರೆಂಬ ಚರ್ಚೆಗಳು ಶುರುವಾಗಿ ದ್ದವು. ಈ ಚರ್ಚೆಯ ನಡುವೆ ಕೇಳಿ ಬಂದ ಹೆಸರು ವಿರಾಟ್ ಕೊಹ್ಲಿ ಅವರದ್ದು. ಈ ಹಿಂದೆ ಅನಿರೀಕ್ಷಿತವಾಗಿ ಕ್ಯಾಪ್ಟನ್ ಸ್ಥಾನದಿಂದ ಕೆಳಗಿಳಿದಿದ್ದ ಕಿಂಗ್ ಕೊಹ್ಲಿ ಮತ್ತೆ ಟೆಸ್ಟ್ ತಂಡದ ನಾಯಕತ್ವ ವಹಿಸಿಕೊಳ್ಳಲು ಆಸಕ್ತಿ ತೋರಿದ್ದಾರೆ ಎಂಬ ಮಾತುಗಳು ಕೇಳಿ ಬಂದಿದ್ದವು. ಇದಾದ ಬಳಿಕ ಈ ಬಗ್ಗೆ ಯಾವುದೇ ಅಪ್‌ಡೇಟ್ ಹೊರಬಿದ್ದಿರಲಿಲ್ಲ. ಆದರೆ ಇಂಗ್ಲೆಂಡ್ ವಿರುದ್ಧದ ಸರಣಿಗೂ ಮುನ್ನ ಭಾರತ ಟೆಸ್ಟ್ ತಂಡದ ನಾಯಕತ್ವಕ್ಕಾಗಿ ಹಿರಿಯ ಆಟಗಾರರೊಬ್ಬರು ತೆರೆಮರೆಯ ಪ್ರಯತ್ನದಲ್ಲಿದ್ದಾರೆ ಎಂಬ ಸುದ್ದಿಯೊಂದು ಕೆಲ ದಿನಗಳ ಹಿಂದೆ ವೈರಲ್ ಆಗಿತ್ತು. ಈ ಸುದ್ದಿ ವೈರಲ್ ಆದ ಬೆನ್ನಲ್ಲೇ ರೋಹಿತ್ ಶರ್ಮಾ ಟೆಸ್ಟ್ ಕ್ರಿಕೆಟ್‌ಗೆ ವಿದಾಯ ಹೇಳಿದ್ದರು. ಅಂದರೆ ರೋಹಿತ್ ಶರ್ಮಾ ಬಳಿಕ ಭಾರತ ಟೆಸ್ಟ್ ತಂಡವನ್ನು ಮುನ್ನಡೆಸಲು ಹಿರಿಯ ಆಟಗಾರರೊಬ್ಬರು ಆಸಕ್ತಿ ತೋರಿದ್ದಾರೆ. ಇದಾಗ್ಯೂ ಭವಿಷ್ಯದ ದೃಷ್ಟಿಯಿಂದ ಹಿರಿಯ ಆಟಗಾರನ ಕೋರಿಕೆಯನ್ನು ಬಿಸಿಸಿಐ ತಿರಸ್ಕರಿಸಿದೆ ಎಂದು ವರದಿಯಾಗಿತ್ತು. ಈ ತಿರಸ್ಕಾರದ ಬಳಿಕ ಅಪ್ಪಳಿಸಿದ ಸುದ್ದಿಯೇ ವಿರಾಟ್ ಕೊಹ್ಲಿಯ ಟೆಸ್ಟ್ ನಿವೃತ್ತಿ. ಹೌದು, ವಿರಾಟ್ ಕೊಹ್ಲಿ ಟೆಸ್ಟ್ ಕ್ರಿಕೆಟ್‌ಗೆ ವಿದಾಯ ಹೇಳಲು ನಿರ್ಧರಿಸಿದ್ದು, ಈಗಾಗಲೇ ಬಿಸಿಸಿಐಗೆ ಈ ವಿಚಾರವನ್ನು ತಿಳಿಸಿದ್ದಾರೆ ಎಂದು ವರದಿಯಾಗಿದೆ. ಇದನ್ನು ಪುಷ್ಟೀಕರಿಸುವಂತೆ ಕೊಹ್ಲಿಯ ನಿರ್ಧಾರವನ್ನು ಮರುಪರಿಶೀಲಿಸಲು ತಿಳಿಸಿದ್ದೇವೆ ಎಂದು ಬಿಸಿಸಿಐ ಅಧಿಕಾರಿಯೊಬ್ಬರು ಹೇಳಿದ್ದಾರೆ. ಅಂದರೆ ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಗೂ ಮುನ್ನ ವಿರಾಟ್ ಕೊಹ್ಲಿ ನಿವೃತ್ತಿ ಘೋಷಿಸಲು ಮುಂದಾಗಿರುವುದಂತು ಸತ್ಯ. ಇದರ ಬೆನ್ನಲ್ಲೇ ಕೊಹ್ಲಿಯ ಈ ದಿಢೀರ್ ನಿರ್ಧಾರಕ್ಕೆ ಕಾರಣವೇನು ಎಂಬ ಪ್ರಶ್ನೆಯೊಂದು ಹುಟ್ಟಿಕೊಂಡಿದೆ. ಸದ್ಯ ಸಿಗುತ್ತಿರುವ ಉತ್ತರ ಅದೇ ಮಿಸ್ಟರ್ ಫಿಕ್ಸ್-ಇಟ್. ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿ ವೇಳೆ ನಾಯಕತ್ವಕ್ಕಾಗಿ ಡಿಮ್ಯಾಂಡ್ ಮಾಡಿದ್ದ ಮಿಸ್ಟರ್ ಫಿಕ್ಸ್-ಇಟ್‌ಗೆ ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಕ್ಯಾಪ್ಟನ್ಸಿ ಸಿಗುವುದಿಲ್ಲ ಎಂದು ಖಚಿತವಾಗಿದೆ. ಹೀಗಾಗಿಯೇ ಮಿಸ್ಟರ್ ಫಿಕ್ಸ್ ಇಟ್ ಹೆಸರಿನಿಂದ ಗುರುತಿಸಿಕೊಳ್ಳುತ್ತಿರುವ ವಿರಾಟ್ ಕೊಹ್ಲಿ ನಾಯಕತ್ವಕ್ಕಾಗಿ ನಿವೃತ್ತಿಯ ಅಸ್ತ್ರ ಪ್ರಯೋಗಿಸಿದ್ರಾ ಎಂಬ ಪ್ರಶ್ನೆಯೊಂದು ಹುಟ್ಟಿಕೊಂಡಿದೆ.

## ಎಲ್ಲಾ ಹಣ ವಾಪಸ್ ಅಭಿಮಾನಿಗಳಿಗೆ ಸಿಹಿ ಸುದ್ದಿ

ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆಯಿಂದಾಗಿ ಐಪಿಎಲ್ 2025 ಅನ್ನು ಒಂದು ವಾರ ಮುಂದೂಡಲಾಗಿದೆ. ಇದರಿಂದಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತನ್ನ ಮುಂದಿನ ಎರಡು ಪಂದ್ಯಗಳ ಟಿಕೆಟ್‌ಗಳ ಹಣವನ್ನು ಮರುಪಾವತಿಸುವುದಾಗಿ ಘೋಷಿಸಿದೆ. ಸನ್‌ರೈಸರ್ಸ್ ಹೈದರಾಬಾದ್ ಮತ್ತು ಲಕ್ನೋ ಸೂಪರ್ ಜೈಂಟ್ಸ್ ಕೂಡ ಟಿಕೆಟ್‌ಗಳ ಹಣವನ್ನು ಮರುಪಾವತಿಸುತ್ತಿವೆ. ಟಿಕೆಟ್ ಮರುಪಾವತಿ ಕುರಿತು ಹೆಚ್ಚಿನ ಮಾಹಿತಿಯನ್ನು ಆರ್‌ಸಿಬಿ ತನ್ನ ಸೋಶಿಯಲ್ ಮೀಡಿಯಾ ಖಾತೆಯಲ್ಲಿ ಹಂಚಿಕೊಂಡಿದೆ.

ಭಾರತ ಮತ್ತು ಪಾಕಿಸ್ತಾನ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯನ್ನು ಗಮನದಲ್ಲಿಟ್ಟುಕೊಂಡು ಬಿಸಿಸಿಐ, ಐಪಿಎಲ್ 2025 ಅನ್ನು ಒಂದು ವಾರದವರೆಗೆ ಸ್ಥಗಿತಗೊಳಿಸಿದೆ. ಆದ್ದರಿಂದ ಈ ವಾರ ನಿಗದಿಯಾಗಿದ್ದ ಎಲ್ಲಾ ಪಂದ್ಯಗಳನ್ನು ಮುಂದೂಡಲಾಗಿದೆ. ಮಂಡಳಿಯ ಈ ನಿರ್ಧಾರದ ನಂತರ, ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ದೊಡ್ಡ ನಿರ್ಧಾರವನ್ನು ತೆಗೆದುಕೊಂಡಿದ್ದು, ಪ್ರೇಕ್ಷಕರ ಹಣವನ್ನು ಮರುಪಾವತಿಸುವುದಾಗಿ ಘೋಷಿಸಿದೆ. ವಾಸ್ತವವಾಗಿ ಆರ್‌ಸಿಬಿ, ಮೇ 13 ರಂದು ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಮತ್ತು ಮೇ 17 ರಂದು ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಎಂ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಪಂದ್ಯವನ್ನು ಆಡಬೇಕಿತ್ತು. ಆದರೆ ಈಗ ಪಂದ್ಯಾವಳಿಯನ್ನು ಸ್ಥಗಿತಗೊಳಿಸಲಾಗಿರುವುದರಿಂದ ಈ ಪಂದ್ಯಗಳನ್ನು ಆಡಲಾಗುವುದಿಲ್ಲ. ಆದ್ದರಿಂದ, ಫ್ರಾಂಚೈಸಿ ಈ ಎರಡು ಪಂದ್ಯಗಳ ಟಿಕೆಟ್‌ಗಳ ಸಂಪೂರ್ಣ ಮೊತ್ತವನ್ನು ಮರುಪಾವತಿಸುವ ನಿರ್ಧಾರಕ್ಕೆ ಬಂದಿದೆ.



## ಭಾರತದಲ್ಲಿ ಡಬ್ಲ್ಯೂಟಿಸಿ ಫೈನಲ್ ಪಂದ್ಯ



2027ರ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್ ಪಂದ್ಯಕ್ಕೆ ಆತಿಥ್ಯವಹಿಸಲು ಬಿಸಿಸಿಐ ಪ್ಲ್ಯಾನ್ ರೂಪಿಸಿದೆ. ಇದಕ್ಕಾಗಿ ಈಗಾಗಲೇ ಐಸಿಸಿಗೆ ವಿಶೇಷ ಮನವಿಯನ್ನು ಸಹ ಸಲ್ಲಿಸಲಾಗಿದೆ. 2021 ಮತ್ತು 2023 ರಲ್ಲಿ ನಡೆದ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್ ಪಂದ್ಯಕ್ಕೆ ಇಂಗ್ಲೆಂಡ್ ಆತಿಥ್ಯವಹಿಸಿತ್ತು. ಅಲ್ಲದೆ ಈ ಬಾರಿಯ ಫೈನಲ್ ಮ್ಯಾಚ್ ಕೂಡ ಲಂಡನ್‌ನ ಲಾರ್ಡ್ಸ್ ಮೈದಾನದಲ್ಲಿ ಜರುಗಲಿದೆ.

ಈ ಪಂದ್ಯದ ಬೆನ್ನಲ್ಲೇ 2027ರ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಸರಣಿ ಶುರುವಾಗಲಿದೆ. ಅದಕ್ಕೂ ಮುನ್ನ ಭಾರತೀಯ ಕ್ರಿಕೆಟ್ ಮಂಡಳಿ ಮುಂಬರುವ ಡಬ್ಲ್ಯೂಟಿಸಿ ಫೈನಲ್ ಪಂದ್ಯದ ಆಯೋಜನೆಗೆ ಬಿಡ್ ಸಲ್ಲಿಸಿದೆ.

ಇತ್ತ ಬಿಸಿಸಿಐ ಬಿಡ್ ಸಲ್ಲಿಸಿರುವ ಕಾರಣ ಉಳಿದ ಕ್ರಿಕೆಟ್ ಬೋರ್ಡ್‌ಗಳಿಂದ ಪೈಪೋಟಿ ಎದುರಾಗುವ ಸಾಧ್ಯತೆಯಿಲ್ಲ. ಅತ್ತ ಆದಾಯದ ದೃಷ್ಟಿಯಿಂದ ಐಸಿಸಿಗೂ ಕ್ರಿಕೆಟ್ ಕ್ರೇಝ್ ಇರುವ ದೇಶದಲ್ಲಿ ಅಂತಿಮ ಪಂದ್ಯ ನಡೆಯುವುದು ಅನಿವಾರ್ಯ. ಹೀಗಾಗಿ 2027 ರ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್ ಪಂದ್ಯ ಭಾರತದಲ್ಲಿ ನಡೆಯುವುದು ಬಹುತೇಕ ಖಚಿತ ಎಂದೇ ಹೇಳಬಹುದು. 2025ರ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್‌ಗೆ ಅರ್ಹತೆ ಪಡೆಯುವಲ್ಲಿ ಭಾರತ ವಿಫಲವಾಗಿದೆ. ಇದರಿಂದಾಗಿ ಟಿಕೆಟ್ ಮಾರಾಟದಲ್ಲಿ ಹಾಗೂ ಪ್ರಾಯೋಜಕತ್ವದ ಕೊರತೆಯಿಂದ ಐಸಿಸಿಗೆ ಸುಮಾರು 4 ಮಿಲಿಯನ್ ಪೌಂಡ್‌ಗಳ ಆದಾಯ ನಷ್ಟವಾಗುವ ಸಾಧ್ಯತೆಯಿದೆ ಎಂದು ವರದಿಗಳು ತಿಳಿಸಿವೆ.

ಇತ್ತ ಭಾರತದಲ್ಲಿ 2027ರ ಫೈನಲ್ ಪಂದ್ಯ ಆಯೋಜನೆಗೊಂಡರೆ, ಜಾಹೀರಾತು ಹಾಗೂ ಟಿಕೆಟ್ ಮಾರಾಟದಿಂದ ಉತ್ತಮ ಆದಾಯಗಳಿಸಬಹುದು ಎಂಬ ಸ್ಪಷ್ಟತೆ ಐಸಿಸಿಗೆ ಇದೆ. ಇದೇ ಕಾರಣದಿಂದಾಗಿ ಮುಂಬರುವ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನ ಫೈನಲ್ ಪಂದ್ಯದ ಆತಿಥ್ಯದ ಹಕ್ಕನ್ನು ಐಸಿಸಿ, ಬಿಸಿಸಿಐಗೆ ವಹಿಸುವ ಸಾಧ್ಯತೆ ಹೆಚ್ಚಿದೆ.

**2025 ಫೈನಲ್ ಯಾವಾಗ:** ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ 2025ರ ಫೈನಲ್ ಪಂದ್ಯಕ್ಕೆ ದಿನಾಂಕ ನಿಗದಿಯಾಗಿದೆ. ಜೂನ್ 11 ರಿಂದ ಶುರುವಾಗಲಿರುವ ಡಬ್ಲ್ಯೂಟಿಸಿ ಫೈನಲ್ ಪಂದ್ಯದಲ್ಲಿ ಈ ಬಾರಿ ಸೌತ್ ಆಫ್ರಿಕಾ ಮತ್ತು ಆಸ್ಟ್ರೇಲಿಯಾ ತಂಡಗಳು ಮುಖಾಮುಖಿಯಾಗಲಿದೆ. ಇನ್ನು ಈ ಪಂದ್ಯಕ್ಕೆ ಇಂಗ್ಲೆಂಡ್‌ನ ಲಾರ್ಡ್ಸ್ ಮೈದಾನ ಆತಿಥ್ಯವಹಿಸುತ್ತಿರುವುದು ವಿಶೇಷ. ಇದಕ್ಕೂ ಮುನ್ನ ನಡೆದ 2021ರ ಮತ್ತು 2023ರ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್ ಪಂದ್ಯಗಳಿಗೆ ಇಂಗ್ಲೆಂಡ್‌ನ ಓವಲ್ ಮೈದಾನ ಆತಿಥ್ಯವಹಿಸಿತ್ತು. ಈ ಬಾರಿ ಕ್ರಿಕೆಟ್ ಕಾಶಿ ಲಾರ್ಡ್ಸ್ ಮೈದಾನದಲ್ಲಿ ಅಂತಿಮ ಹಣಾಹಣಿಯನ್ನು ಆಯೋಜಿಸಲು ಐಸಿಸಿ ನಿರ್ಧರಿಸಿದೆ. ಅದರಂತೆ ಜೂನ್ 11 ರಿಂದ 15 ರವರೆಗೆ ಫೈನಲ್ ಪಂದ್ಯ ಜರುಗಲಿದೆ.

## ಪಂಜಾಬ್ ಕಿಂಗ್ಸ್ ಡೆಲ್ಲಿ ಕ್ಯಾಪಿಟಲ್ಸ್ ನಡುವೆ ಮರು ಪಂದ್ಯ

ಇಂಡಿಯನ್ ಪ್ರೀಮಿಯರ್ ಲೀಗ್ ಮುಂದಿನ ವಾರ ಮರು ನಿಗದಿಯಾಗುವ ಸಾಧ್ಯತೆಯಿದೆ. ಅದು ಕೂಡ ಪಂಜಾಬ್ ಕಿಂಗ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ನಡುವಣ ಪಂದ್ಯದೊಂದಿಗೆ ಎಂದು ವರದಿಯಾಗಿದೆ. ಅಂದರೆ ಧರ್ಮಶಾಲಾದಲ್ಲಿ ನಡೆದ ಪಂಜಾಬ್ ಕಿಂಗ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ನಡುವಣ ಪಂದ್ಯವನ್ನು ಅರ್ಧದಲ್ಲೇ ಸ್ಥಗಿತಗೊಳಿಸಲಾಗಿತ್ತು.


ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ್ದ ಪಂಜಾಬ್ ಕಿಂಗ್ಸ್ ತಂಡವು 10.1 ಓವರ್‌ಗಳಲ್ಲಿ 122 ರನ್ ಗಳಿಸಿದ್ದ ವೇಳೆ ಪಂದ್ಯವನ್ನು ಸ್ಥಗಿತಗೊಳಿಸಲಾಯಿತು. ಇದೀಗ ಟೂರ್ನಿಯನ್ನು ಮುಂದಿನ ವಾರ ಪ್ರಾರಂಭಿಸಲು ಯೋಜನೆಗಳನ್ನು ರೂಪಿಸಲಾಗುತ್ತಿದೆ. ಇತ್ತ ಭೀತಿಯ ಕಾರಣ ಪಂಜಾಬ್ ಕಿಂಗ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ಪಂದ್ಯವನ್ನು ಸ್ಥಗಿತಗೊಳಿಸಿರುವ ಕಾರಣ ಈ ಮ್ಯಾಚ್ ಅನ್ನು ಪುನಃ ಆಯೋಜಿಸಲು ಚಿಂತಿಸಲಾಗಿದೆ ಎಂದು ವರದಿಯಾಗಿದೆ.

ಅದರಂತೆ ಪಂಜಾಬ್ ಕಿಂಗ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ನಡುವಣ ಪಂದ್ಯವು ಮರು ನಿಗದಿಯಾಗುವ ಸಾಧ್ಯತೆ ಹೆಚ್ಚಿದೆ. ಅಲ್ಲದೆ ಈ ಪಂದ್ಯದೊಂದಿಗೆ ಐಪಿಎಲ್‌ಗೆ ಮತ್ತೆ ಚಾಲನೆ ದೊರೆಯಲಿದೆ. ಈ ಮೂಲಕ ಲೀಗ್ ಹಂತದಲ್ಲಿ 13 ಪಂದ್ಯಗಳನ್ನು ಆಯೋಜಿಸಲು ಚಿಂತಿಸಲಾಗಿದೆ. ಇನ್ನುಳಿದ 4 ಪ್ಲೇಆಫ್ ಪಂದ್ಯಗಳ ವೇಳಾಪಟ್ಟಿ ಕೂಡ ಬದಲಾಗಲಿದೆ.



## ಐಪಿಎಲ್‌ಗೆ ವಿದೇಶಿ ಆಟಗಾರರು ಬರದಿದ್ದರೆ...

ಬಿಸಿಸಿಐ ಒಂದು ವಾರದ ನಂತರ ಲೀಗ್ ಅನ್ನುಪುನರಾರಂಭಿಸಿದರೆ, ವಿದೇಶಿ ಆಟಗಾರರು ಬರುತ್ತಾರೋ ಇಲ್ಲವೋ ಎಂಬುದು ಸ್ಪಷ್ಟವಾಗಿಲ್ಲ. ಮತ್ತೊಂದೆಡೆ, ವಿದೇಶಿ ಆಟಗಾರರಿಲ್ಲದೆ ಈ ಸೀಸನ್ ಪೂರ್ಣಗೊಳಿಸುವುದು ಅಸಾಧ್ಯದ ಮಾತು. ವಿದೇಶಿ ಆಟಗಾರರು ಇಲ್ಲದಿದ್ದರೆ, ಎಲ್ಲಾ ತಂಡಗಳ ಪ್ಲೇಯಿಂಗ್ 11 ಕಟ್ಟುವುದೇ ಕಷ್ಟವಾಗಲಿದೆ. ಇದರರ್ಥ ವಿದೇಶಿ ಆಟಗಾರರು ಮತ್ತು ದೇಶದ ಪರಿಸ್ಥಿತಿಯನ್ನು ಪರಿಗಣಿಸಿ, ಬಿಸಿಸಿಐ ಮತ್ತೊಮ್ಮೆ ಲೀಗ್ ಅನ್ನು ಮುಂದೂಡಬಹುದು. ವಾಸ್ತವವಾಗಿ, ಈ ಬಾರಿಯ ಏಷ್ಯಾ ಕಪ್ ಸೆಪ್ಟೆಂಬರ್‌ನಲ್ಲಿ ನಡೆಯಲಿದೆ. ಆದರೆ ಭಾರತ ಮತ್ತು ಪಾಕಿಸ್ತಾನ ನಡುವಿನ ಉದ್ವಿಗ್ನತೆಯನ್ನು ಪರಿಗಣಿಸಿ, ಈ ಪಂದ್ಯಾವಳಿಯನ್ನು ರದ್ದುಗೊಳಿಸಬಹುದು. ಇದರರ್ಥ ಬಿಸಿಸಿಐ ಐಪಿಎಲ್ ಪೂರ್ಣಗೊಳಿಸಲು ಈ ಸಮಯವನ್ನು ಬಳಸಿಕೊಳ್ಳಬಹುದು.



**ವಿದೇಶಿ ಆಟಗಾರರು ದ್ವಿತೀಯಾರ್ಧಕ್ಕೆ ಬರದಿದ್ದರೆ:** ಪ್ರಸ್ತುತ ಉಂಟಾಗಿರುವ ಯುದ್ಧಾತಂಕದ ಪರಿಸ್ಥಿತಿ ಬೇಗನೇ ತಿಳಿಗೊಂಡರೆ, ಲೀಗ್‌ನ ಉಳಿದ ಪಂದ್ಯಗಳನ್ನು ದೇಶದಲ್ಲಿಯೇ ಆಡಲಾಗುತ್ತದೆ. ಅಂತಹ ಪರಿಸ್ಥಿತಿಯಲ್ಲಿ, ವಿದೇಶಿ ಆಟಗಾರರು ಭಾರತಕ್ಕೆ ಬರಲು ನಿರಾಕರಿಸಿದರೆ, ಭವಿಷ್ಯದಲ್ಲಿ ಅವರು ಐಪಿಎಲ್‌ನಲ್ಲಿ ಭಾಗವಹಿಸಲು ಸಮಸ್ಯೆಗಳು ಹೆಚ್ಚಾಗಬಹುದು. ಏಕೆಂದರೆ ಐಪಿಎಲ್‌ನ ಹೊಸ ನಿಯಮಗಳ ಪ್ರಕಾರ, ತಂಡಕ್ಕೆ ಆಯ್ಕೆಯಾದ ನಂತರ ಆಟಗಾರರು ತಮ್ಮ ಹೆಸರನ್ನು ಹಿಂತೆಗೆದುಕೊಂಡರೆ, ಅಂತಹ ಆಟಗಾರರನ್ನು ಎರಡು ಸೀಸನ್‌ವರೆಗೆ ಲೀಗ್‌ನಿಂದ ನಿಷೇಧಿಸಲಾಗುತ್ತದೆ. ಇದರರ್ಥ ಭಾರತಕ್ಕೆ ಬಾರದಿರುವುದು ವಿದೇಶಿ ಆಟಗಾರರಿಗೆ ದುಬಾರಿಯಾಗಿ ಪರಿಣಮಿಸಬಹುದು.


**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**